**ಸಂಪುಟ: 05 ಸಂಚಿಕೆ: 104 ಪುಟಗಳು: 08 ಶುಕ್ರವಾರ 27 ಜೂನ್ 2025**
www.udayavahini.in  epaper.udayavahini.in  Udaya vahini news  Udaya vahini news  Udayavahini news youtube  udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ  RNI No. KARKAN/2021/80833  9448225696  +91 8035841833  ₹5

# ಉದಯ ವಾಹಿನಿ

UV  ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಶಿಕ್ಷಣದ ಉದ್ದೇಶವು ವ್ಯಕ್ತಿಯ ಪರಿಪೂರ್ಣತೆಯಾಗಿದೆ ಹೊರತು ಜೀವನಕ್ಕಾಗಿ ಉದ್ಯೋಗವನ್ನು ಪಡೆಯುವುದಲ್ಲ.

## ನಾನು ಎಲ್ಲರ ಕೈಗೆ ಸಿಗುತ್ತೇನೆ ಗೃಹಸಚಿವ ಪರಂ ಹೇಳಿಕೆ

• **ಉದಯವಾಹಿನಿ, ಬೆಂಗಳೂರು**

'ನಾನು ಎಲ್ಲಾ ಶಾಸಕರ ಕೈಗೆ ಸಿಗುತ್ತೇನೆ. ಬೇರೆ ಸಚಿವರು ಸಿಗದೇ ಹೋದರೆ, ಅದಕ್ಕೆ ನಾನು ಪ್ರತಿಕ್ರಿಯೆ ಕೊಡುವುದಿಲ್ಲ' ಎಂದು ಗೃಹ ಸಚಿವ ಜಿ. ಪರಮೇಶ್ವರ ಹೇಳಿದರು.

'ಸರ್ಕಾರದಲ್ಲಿ ಯಾವುದೇ ಗೊಂದಲ ಇಲ್ಲ. ಶಾಸಕರು ಮತ್ತು ಮುಖ್ಯಮಂತ್ರಿ ನಡುವೆ ಕೂಡಾ ಗೊಂದಲ ಇಲ್ಲ' ಎಂದರು. 'ಕೆಲವು ಶಾಸಕರು ತಮ್ಮ ಕ್ಷೇತ್ರದ ಬಗ್ಗೆ ಮಾತನಾಡಿದ್ದಾರೆ ಅಷ್ಟೇ. ಮುಖ್ಯಮಂತ್ರಿಯವರು ಇದೆಲ್ಲವನ್ನೂ ಗಮನಿಸುತ್ತಾರೆ. ಇದಕ್ಕೆ ಇಡೀ ಸರ್ಕಾರವೇ ಗೊಂದಲದಲ್ಲಿದೆ ಎಂದು ಹೇಳುವುದು ಸರಿಯಲ್ಲ' ಎಂದರು. 'ಪಕ್ಷದ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ರಾಜ್ಯಕ್ಕೆ ಯಾಕೆ ಬರುತ್ತಿದ್ದಾರೆ ಎನ್ನುವುದು ಗೊತ್ತಿಲ್ಲ. ಅವರು ಶಾಸಕರ ಜೊತೆ ಮಾತನಾಡಬಹುದು' ಎಂದರು. ಸುರ್ಜೇವಾಲಾ ಅವರನ್ನು ಉಸ್ತುವಾರಿ ಸ್ಥಾನದಿಂದ ಬದಲಿಸುವಂತೆ ಕೆಲವರು ಒತ್ತಾಯಿಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಪರಮೇಶ್ವರ, 'ಇದು ಹೈಕಮಾಂಡ್‌ಗೆ ಸಂಬಂಧಿಸಿದ ವಿಷಯ. ಎಐಸಿಸಿಗೆ ಸಂಬಂಧಿಸಿದ ವಿಷಯ ನಾನು ಹೇಗೆ ಮಾತನಾಡಲಿ? ಎಐಸಿಸಿ ಅಧ್ಯಕ್ಷರು, ರಾಹುಲ್ ಗಾಂಧಿ ಈ ಬಗ್ಗೆ ತೀರ್ಮಾನಿಸುತ್ತಾರೆ' ಎಂದರು.

## ಮಲೆ ಮಹದೇಶ್ವರ ಅರಣ್ಯದಲ್ಲಿ 5 ಹುಲಿಗಳ ಅಸಹಜ ಸಾವು

• **ಉದಯವಾಹಿನಿ, ಬೆಂಗಳೂರು**

ಮಲೆ ಮಹದೇಶ್ವರ ಬೆಟ್ಟದ ಅರಣ್ಯ ಪ್ರದೇಶದಲ್ಲಿ ಒಂದು ಹುಲಿ ಮತ್ತು ನಾಲ್ಕು ಮರಿಗಳು ಅಸಜ ಸಾವಿಗೀಡಾಗಿರುವ ಬಗ್ಗೆ ದುಃಖ ವ್ಯಕ್ತಪಡಿಸಿರುವ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ, ಪಿಸಿಸಿಎಫ್ ನೇತೃತ್ವದ ತಂಡದ ತನಿಖೆಗೆ ಆದೇಶ ನೀಡಿದ್ದಾರೆ. ಈ ಸಂಬಂಧ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಲಿಖಿತ ಸೂಚನೆ ನೀಡಿರುವ ಸಚಿವರು, ಕಾನನದಲ್ಲಿ 5 ಹುಲಿಗಳು ಸಾವಿಗೀಡಾಗಿರುವುದನ್ನು ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಸೂಚಿಸಿದ್ದಾರೆ. ಅಳಿವಿನಂಚಿನಲ್ಲಿರುವ ಹುಲಿಗಳ ಸಂರಕ್ಷಣೆಗೆ ದಿವಂಗತ ಪ್ರಧಾನಿ ಇಂದಿರಾಗಾಂಧೀ ಅವರು ಹುಲಿ ಯೋಜನೆ (ಪ್ರಾಜೆಕ್ಟ್ ಟೈಗರ್) ಆರಂಭಿಸಿದ ತರುವಾಯ ರಾಜ್ಯದಲ್ಲಿಯೂ ಹುಲಿಗಳ ಸಂರಕ್ಷಣೆಗೆ ಕ್ರಮ ವಹಿಸಲಾಗಿದ್ದು, 563 ಹುಲಿಗಳೊಂದಿಗೆ ಕರ್ನಾಟಕ ದೇಶದಲ್ಲೇ 2ನೇ ಸ್ಥಾನದಲ್ಲಿದೆ. ಹುಲಿ ಸಂರಕ್ಷಣೆಗೆ ಹೆಸರಾಗಿರುವ ರಾಜ್ಯದಲ್ಲಿ, ಒಂದೇ ದಿನ 4 ಹುಲಿಗಳು ಅಸಹಜ ಸಾವಿಗೀಡಾಗಿರುವುದು ಅತ್ಯಂತ ನೋವು ತಂದಿದೆ ಎಂದು ತಿಳಿಸಿದ್ದಾರೆ.

## ರಾಜ್ಯ ರಾಜಕೀಯದಲ್ಲಿ ಸೆಪ್ಟೆಂಬರ್ ನಂತರ ಕ್ರಾಂತಿ

• **ಉದಯವಾಹಿನಿ, ಬೆಂಗಳೂರು**

'ರಾಜ್ಯ ರಾಜಕೀಯದಲ್ಲಿ ಸೆಪ್ಟೆಂಬರ್ ನಂತರ ಕ್ರಾಂತಿ ಆಗಲಿದೆ. ಅದು ಪಕ್ಷದ ವಿಚಾರದಲ್ಲಿಯೊ, ಸರ್ಕಾರದ ವಿಚಾರದಲ್ಲಿಯೊ ಎಂಬುದನ್ನು ಕಾದು ನೋಡಿ' ಎಂಬ ಸಹಕಾರ ಸಚಿವ ಕೆ.ಎನ್. ರಾಜಣ್ಣ ಹೇಳಿಕೆ ಕಾಂಗ್ರೆಸ್ ವಲಯದಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿದೆ.
'ಮೇ ಕ್ರಾಂತಿ, ಆಗಸ್ಟ್ ಕ್ರಾಂತಿ ಎಂದೆಲ್ಲ ಕೇಳಿಲ್ಲವೇ? ಅದೇ ರೀತಿ ಇದು ಸೆಪ್ಟೆಂಬರ್ ಕ್ರಾಂತಿ. ಏನಾಗಲಿದೆ ಎಂಬುದನ್ನು ಈಗಲೇ ಹೇಳಿದರೆ ಆಸಕ್ತಿ ಹೋಗಿಬಿಡುತ್ತದೆ. ಏನು ಬೇಕಿದ್ದರೂ ಊಹೆ ಮಾಡಿಕೊಳ್ಳಿ' ಎಂದರು. 'ರಾಜಕಾರಣ ಎಂದೂ ನಿಂತ ನೀರಲ್ಲ. ಹರಿಯುವ ನೀರು. ಅದು ಎತ್ತರಕ್ಕೆ ಏರಲ್ಲ. ಹಳ್ಳ ಇದ್ದ ಕಡೆಗೆ ಹರಿಯುತ್ತದೆ. ಯಾವ್ಯಾವ ಘಟನಾವಳಿಗಳು ಯಾವ್ಯಾವ ಸಂದರ್ಭದಲ್ಲಿ ಆಗುತ್ತವೆಯೋ ಅದನ್ನು ಆಧರಿಸಿ ಮುಂದಿನ ಕಾರ್ಯಚಟುವಟಿಕೆಗಳು ರಾಜಕಾರಣದಲ್ಲಿ ನಡೆಯುತ್ತವೆ' ಎಂದರು.

## ಕೆಲಸ ಮಾಡದಿದ್ದರೆ ಬದಲಿಸುವುದು ಅನಿವಾರ್ಯ

• **ಉದಯವಾಹಿನಿ, ಬೆಂಗಳೂರು**

'ನಿಮ್ಮ ಕರ್ತವ್ಯವನ್ನು ಪರಿಣಾಮಕಾರಿಯಾಗಿ ನಿರ್ವಹಿಸಿ. ತಪ್ಪಿದಲ್ಲಿ ನಿಮ್ಮನ್ನು ಬದಲಾಯಿಸುವುದು ಅನಿವಾರ್ಯ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೆಚ್ಚುವರಿ ಅಡ್ವಕೇಟ್ ಜನರಲ್‌ಗಳಿಗೆ ಎಚ್ಚರಿಕೆ ನೀಡಿದರು.


ವಿಧಾನಸೌಧದಲ್ಲಿ ನಡೆದ ಹೆಚ್ಚುವರಿ ಅಡ್ವಕೇಟ್ ಜನರಲ್‌ಗಳ ಕಾರ್ಯನಿರ್ವಹಣೆ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿ, ಸರ್ಕಾರದ ಪರ ಸಮರ್ಪಕವಾಗಿ ವಾದ ಮಾಡಲು ಹೆಚ್ಚುವರಿ ಅಡ್ವಕೇಟ್ ಜನರಲ್‌ಗಳ ಸಂಖ್ಯೆ ಹೆಚ್ಚಿಸಲಾಗಿದೆ ಎಂದರು. ''ನೀವೆಲ್ಲರೂ ಹಿರಿಯ ಅಡ್ವಕೇಟ್‌ಗಳು, ಸರ್ಕಾರದ ಆದ್ಯತೆಗಳನ್ನು ಕಾಪಾಡುವುದು ನಿಮ್ಮ ಜವಾಬ್ದಾರಿ. ನ್ಯಾಯಾಲಯಗಳಲ್ಲಿ ಪರಿಣಾಮಕಾರಿಯಾಗಿ ವಾದ ಮಂಡಿಸದ ಕಾರಣಕ್ಕೆ ಸರ್ಕಾರ ಹಲವು ಪ್ರಕರಣಗಳಲ್ಲಿ ಹಿನ್ನಡೆ ಅನುಭವಿಸುವಂತಾಗಿದೆ. ಸರ್ಕಾರಕ್ಕೆ ಅನುಕೂಲಕರವಾಗಿರುವ ಪ್ರಕರಣಗಳಲ್ಲೂ ಸರ್ಕಾರದ ಪರವಾಗಿ ಆದೇಶಗಳು ಬರುತ್ತಿಲ್ಲ. ಇದಕ್ಕೆ ಕಾರಣವೇನು'' ಎಂದು ಅವರು ಪ್ರಶ್ನಿಸಿದರು.

# ರಾಜ್ಯ ಘಟಕದ ಅಧ್ಯಕ್ಷ ಸ್ಥಾನದ ಆಯ್ಕೆಯಲ್ಲಿ ಯಾವುದೇ ಗೊಂದಲವಿಲ್ಲ

• **ಉದಯವಾಹಿನಿ, ಬೆಂಗಳೂರು**

'ರಾಜ್ಯ ಘಟಕದ ಅಧ್ಯಕ್ಷ ಸ್ಥಾನದ ಆಯ್ಕೆಯಲ್ಲಿ ಯಾವುದೇ ಗೊಂದಲಗಳಿಲ್ಲ. ಬಿಜೆಪಿ ಪರಿಸ್ಥಿತಿ ಬೂದಿ ಮುಚ್ಚಿದ ಕೆಂಡದಂತಿದೆ ಎಂಬುದನ್ನೂ ಒಪ್ಪುವುದಿಲ್ಲ. ಶೀಘ್ರವೇ ಕರ್ನಾಟಕವೂ ಸೇರಿ ಹಲವು ರಾಜ್ಯಗಳ ಅಧ್ಯಕ್ಷ ಸ್ಥಾನಗಳಿಗೆ ಹೆಸರುಗಳು ಘೋಷಣೆ ಆಗಲಿದೆ' ಎಂದು ಬಿಜೆಪಿ ರಾಜ್ಯ ಘಟಕ ಅಧ್ಯಕ್ಷ ಬಿ.ವೈ.ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದರು.

ಪಕ್ಷದ ಕಚೇರಿಯಲ್ಲಿ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, 'ಅಧ್ಯಕ್ಷ ಸ್ಥಾನದ ಆಯ್ಕೆ ಸಂಬಂಧಿಸಿದಂತೆ ವರಿಷ್ಠರು ಎಲ್ಲರ ಅಭಿಪ್ರಾಯ ಪಡೆದಿದ್ದಾರೆ.



ಒಂದೂವರೆ ವರ್ಷಗಳಿಂದ ಸಂಘಟನಾ ಕಾರ್ಯ ಮಾಡಿದ್ದೇನೆ, ಹೀಗಾಗಿ ನನಗೆ ಒಳ್ಳೆಯದಾಗಲಿದೆ ಎಂಬ ವಿಶ್ವಾಸವಿದೆ' ಎಂದು ಹೇಳಿದರು. 'ಅಧ್ಯಕ್ಷರ ಆಯ್ಕೆಯಲ್ಲಿ ಗೊಂದಲಗಳಿವೆ. ಆದ್ದರಿಂದ ಆಯ್ಕೆ ಪ್ರಕ್ರಿಯೆ ಮುಂದೂಡುತ್ತಿದ್ದಾರೆ ಎಂಬುದು ಸತ್ಯವಲ್ಲ. 14 ರಾಜ್ಯಗಳಲ್ಲಿ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಮುಗಿಸಿ, ಘೋಷಣೆಯೂ ಆಗಿದೆ. ಅತಿ ಶೀಘ್ರದಲ್ಲೇ ಇನ್ನು ಆರೇಳು ರಾಜ್ಯ ಘಟಕಗಳ ಅಧ್ಯಕ್ಷರ ಘೋಷಣೆಯೂ ಆಗಲಿದೆ ಎಂಬ ಮಾಹಿತಿ ಇದೆ. ಆ ಬಳಿಕವೇ ರಾಷ್ಟ್ರೀಯ ಅಧ್ಯಕ್ಷರ ನೇಮಕಾತಿಯೂ ಆಗಲಿದೆ' ಎಂದರು.

**ಚರ್ಚೆಯಲ್ಲಿ ಯಾವುದೇ ಹುರುಳಿಲ್ಲ**

'ಬಿಜೆಪಿ ಪರಿಸ್ಥಿತಿ ಬೂದಿ ಮುಚ್ಚಿದ ಕೆಂಡದಂತಿದೆ' ಎಂಬ ಡಿ.ವಿ.ಸದಾನಂದ ಗೌಡ ಅವರ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿದ ವಿಜಯೇಂದ್ರ, 'ಸದಾನಂದಗೌಡರು ಹಿರಿಯರು. ಪಕ್ಷದ ಸ್ಥಿತಿ ಬೂದಿ ಮುಚ್ಚಿದ ಕೆಂಡದಂತಿದೆ ಎಂದು ಹೇಳಿರುವುದನ್ನು ಒಪ್ಪಲು ಸಾಧ್ಯವಿಲ್ಲ. ಸಣ್ಣ-ಪುಟ್ಟ ಅಭಿಪ್ರಾಯ ವ್ಯತ್ಯಾಸಗಳಿರುವುದು ಸಹಜ. ಅವರ ಜತೆ ಚರ್ಚೆ ಮಾಡುತ್ತೇನೆ' ಎಂದು ವಿಜಯೇಂದ್ರ ಹೇಳಿದರು.

'ನಾನು ದೆಹಲಿಗೆ ಹೋಗಿದ್ದೆ ಇನ್ನೂ ಕೆಲವು ಹಿರಿಯ ನಾಯಕರೂ ದೆಹಲಿಗೆ ಹೋಗಿದ್ದರು. ಇಷ್ಟಕ್ಕೆ ಬಹಳ ಬೆಳವಣಿಗೆ ಆಗುತ್ತಿದೆ ಎಂದು ವ್ಯಾಖ್ಯಾನಿಸುವುದು ಕೇವಲ ಕಲ್ಪನೆ ಅಷ್ಟೆ. ನಾನು ವೈಯಕ್ತಿಕ ಕಾರಣಕ್ಕೆ ದೆಹಲಿಗೆ ಹೋಗಿದ್ದೆ. ಅಲ್ಲಿ



ಪಕ್ಷದ ವರಿಷ್ಠರನ್ನಾಗಲಿ, ಯಾರನ್ನೂ ಭೇಟಿ ಮಾಡಿಲ್ಲ. ವಿರೋಧ ಪಕ್ಷದ ನಾಯಕ ಆರ್. ಅಶೋಕ ಅವರು ದೆಹಲಿಗೆ ಹೋಗಬಾರದು, ಮುಖಂಡರನ್ನು ಭೇಟಿ ಮಾಡಬಾರದು ಅಂತ ಏನಾದರೂ ಇದೆಯೇ' ಎಂದು ಪ್ರಶ್ನಿಸಿದರು.

'ವಿರೋಧಪಕ್ಷದ ನಾಯಕರಾಗಿ ಆರ್. ಅಶೋಕ ಅವರು ವಿಧಾನಸಭೆಯಲ್ಲಿ ಸಮರ್ಥವಾಗಿ ಕೆಲಸ ಮಾಡುತ್ತಿದ್ದಾರೆ. ಆ ಬಗ್ಗೆ ಶಾಸಕರಿಗೂ ತೃಪ್ತಿ ಇದೆ. ವಿರೋಧಪಕ್ಷದ ನಾಯಕರ ಬದಲಾವಣೆ ಬಗ್ಗೆ ಮಾಧ್ಯಮಗಳಲ್ಲಿ ಚರ್ಚೆ ಆಗುತ್ತಿರುವುದು ಖಂಡಿತಾ ಸರಿಯಲ್ಲ. ಆ ಚರ್ಚೆಯಲ್ಲಿ ಯಾವುದೇ ಹುರುಳಿಲ್ಲ' ಎಂದು ವಿಜಯೇಂದ್ರ ಹೇಳಿದರು.


**ಜೂ. 1 ರಿಂದ 24 ರವರೆಗೆ ರಾಜ್ಯದಲ್ಲಿ 434.3 ಮಿ.ಮೀ. ಮಳೆಯಾಗಿದ್ದು , ಇದು ವಾಡಿಕೆಗಿಂತ ಶೇ.64ರಷ್ಟು ಹೆಚ್ಚಾಗಿದೆ.**

# ವರ್ಷಾರ್ಭಟಕ್ಕೆ ಕರುನಾಡು ತತ್ತರ

**ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡಕ್ಕೆ ಬೆಳ್ಳಂಬೆಳಗ್ಗೆ ನೌಕಾಸ್ಟ್ ಅಲರ್ಟ್ ಕೊಟ್ಟ ಹವಾಮಾನ ಇಲಾಖೆ**

**ಕೊಡಗು ಜಿಲ್ಲೆಗೆ ರೆಡ್ ಅಲರ್ಟ್ ಮತ್ತು ಹಾಸನ, ಬೆಳಗಾವಿ, ಚಿಕ್ಕಮಗಳೂರು, ಶಿವಮೊಗ್ಗ, ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡಕ್ಕೆ ಆರೆಂಜ್ ಅಲರ್ಟ್**

**ಅಪ್ಪಳಿಸಲಿದೆ ಭಾರಿ ಮಳೆ**



### 14 ಜಿಲ್ಲೆಗಳಿಗೆ ಮಳೆ ಇಲ್ಲ

ರಾಜ್ಯದ ಮುಂಗಾರು ಹಂಚಿಕೆಯಲ್ಲಿ ಭಾರಿ ವ್ಯತ್ಯಯವಾಗಿದ್ದು, ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳನ್ನು ಹೊರತುಪಡಿಸಿ ಉಳಿದೆಡೆ ವಾಡಿಕೆಯಷ್ಟು ಮಳೆಯಾಗಿಲ್ಲ. ಜೂ.1 ರಿಂದ 24ರವರೆಗೆ ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ನೈಋ?ತ್ಯ ಮಾನ್ಸೂನ್ ವಾಡಿಕೆಗಿಂತ ಶೇ.8ರಷ್ಟು ಅಧಿಕವಾಗಿದ್ದು, ದಕ್ಷಿಣ ಒಳನಾಡಿನಲ್ಲಿ ಶೇ.24 ಹಾಗೂ ಉತ್ತರ ಒಳನಾಡಿನಲ್ಲಿ ಶೇ.3ರಷ್ಟು ವಾಡಿಕೆಗಿಂತ ಕಡಿಮೆ ಮಳೆಯಾಗಿದೆ. ಒಂದು ಜಿಲ್ಲೆಯಲ್ಲಿಅತ್ಯಧಿಕ, 3 ಜಿಲ್ಲೆಯಲ್ಲಿಅಧಿಕ, 14 ಜಿಲ್ಲೆಗಳಲ್ಲಿವಾಡಿಕೆಯಷ್ಟು ಮಳೆಯಾಗಿದ್ದು, 13 ಜಿಲ್ಲೆಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದೆ. ರಾಜ್ಯದಲ್ಲಿ ಪ್ರಸಕ್ತ ವರ್ಷ 434.3 ಮಿ.ಮೀ. ಮಳೆಯಾಗಿದ್ದು, ವಾಡಿಕೆಗಿಂತ ಶೇ.64ರಷ್ಟು ಮಳೆ ಸುರಿದಿದೆ. ನೈಋತ್ಯ ಮುಂಗಾರು ಅವಧಿಯಲ್ಲಿ(ಜೂ.1 ರಿಂದ 24)ವಾಡಿಕೆಯ ಪ್ರಕಾರ 144.7 ಮಿ.ಮೀ. ಮಳೆಯಾಗಬೇಕಿತ್ತು. ಸದ್ಯ 146 ಮಿ.ಮೀ. ಮಳೆಯಾಗಿದೆ.

### ಇನ್ನೂ ಮೂರು ದಿನ ಮಳೆ

ಧಾರವಾಡ ಜಿಲ್ಲೆಯಲ್ಲಿ ಇನ್ನೂ ಮೂರು ನಾಲ್ಕು ದಿನ ಮಳೆ ಮುಂದುವರಿಯಲಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಈಗಾಗಲೇ ಬುಧವಾರ ಮಧ್ಯಾಹ್ನದಿಂದ ಜಿಲ್ಲೆಯಾದ್ಯಂತ ಭಾರಿ ಪ್ರಮಾಣದಲ್ಲಿ ಮಳೆಯಾಗುತ್ತಿದ್ದು, ಧಾರವಾಡ ಜಿಲ್ಲೆಗೆ ಹವಾಮಾನ ಇಲಾಖೆ ಯಲ್ಲೋ ಅಲರ್ಟ್ ನೀಡಿದೆ.ಜೂ.26,27,28,29 ರಂದು ಯಲ್ಲೋ ಅಲರ್ಟ್ ಎಚ್ಚರಿಕೆ ನೀಡಿದ್ದು, ಪ್ರವಾಹ ಭೀತಿ ಇರುವ ಸ್ಥಳಗಳಲ್ಲಿಎಚ್ಚರಿಕೆ ವಹಿಸಲು ಸೂಚನೆ ನೀಡಿದೆ. ಬುಧವಾರ ಸುರಿದ ಮಳೆಯಿಂದ ಕಲಘಟಗಿ ತಾಲ್ಲೂಕಿನಲ್ಲಿ 1 ಮನೆಗೆ ಹಾಗೂ ಕುಂದಗೋಳ ತಾಲ್ಲೂಕಿನಲ್ಲಿ 2 ಮನೆಗಳು ಹಾನಿಯಾಗಿವೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

• **ಉದಯವಾಹಿನಿ, ಬೆಂಗಳೂರು**

ಕರಾವಳಿ ಹಾಗೂ ಮಲೆನಾಡು ಜಿಲ್ಲೆಗಳಲ್ಲಿ ಮುಂಗಾರು ಆರ್ಭಟ ಹೆಚ್ಚಾಗಿದೆ. ರಾತ್ರಿಯಿಡೀ ಕರಾವಳಿ ಜಿಲ್ಲೆಗಳಲ್ಲಿ ಮಳೆಯಾಗಿದ್ದು, ಮುಂಜಾನೆ 4 ಗಂಟೆಗೆ ಹವಾಮಾನ ಇಲಾಖೆ ಕೊಟ್ಟ ಅಲರ್ಟ್ ಪ್ರಕಾರ ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡಕ್ಕೆ ಭಾರಿ ಮಳೆ ಅಪ್ಪಳಿಸಲಿದೆ ಎಂದಿದೆ.
ಅತ್ಯಂತ ಭಾರೀ ಮಳೆ ಆಗುವ ಹಿನ್ನಲೆ ಕೊಡಗು ಜಿಲ್ಲೆಗೆ ರೆಡ್ ಅಲರ್ಟ್ ಕೊಡಲಾಗಿದೆ. ಹಾಸನ ಹಾಗೂ ಬೆಳಗಾವಿ, ಚಿಕ್ಕಮಗಳೂರು, ಶಿವಮೊಗ್ಗ ದಕ್ಷಿಣ ಕನ್ನಡ, ಉಡುಪಿ ಉತ್ತರ ಕನ್ನಡಕ್ಕೆ ಆರೆಂಜ್ ಅಲರ್ಟ್ ಘೋಷಣೆ ನೀಡಲಾಗಿದೆ. ಧಾರವಾಡ, ಮಂಡ್ಯ, ಮೈಸೂರು ಜಿಲ್ಲೆಗಳಿಗೆ ಯೆಲ್ಲೊ ಅಲರ್ಟ್ ಘೋಷಣೆ ಮಾಡಲಾಗಿದೆ.

### ಗ್ರಾಮದ ರಸ್ತೆಯು ಮಳೆಯಿಂದಾಗಿ ಜಲಾವೃತ

ಮಡಿಕೇರಿಯಲ್ಲಿ ಮಳೆ ಮುಂದುವರಿದಿದೆ. ಪೊನ್ನಂಪೇಟೆ ಹೋಬಳಿ ವ್ಯಾಪ್ತಿಯಲ್ಲಿ 20 ಸೆಂ.ಮೀಗೂ ಅಧಿಕ ಮಳೆ ಸುರಿದಿರುವುದರಿಂದ ಕಾನೂರು ಗ್ರಾಮದ ರಸ್ತೆಯು ಮಳೆಯಿಂದಾಗಿ ಜಲಾವೃತಗೊಂಡಿದೆ. ಆದರೆ, ಈ ಗ್ರಾಮಕ್ಕೆ ತೆರಳಲು ಬದಲಿ ಸಂಪರ್ಕ ರಸ್ತೆ ಇದೆ. ಶೆಟ್ಟಿಗೇರಿ ಮತ್ತು ಹೈಸೂಡೂರು ಮಧ್ಯ ಮರ ಬಿದ್ದು ಸಂಚಾರ ಅಸ್ತವ್ಯಸ್ತಗೊಂಡಿದೆ. ನಾಪೋಕ್ಲು ಹೋಬಳಿಯಲ್ಲಿ 15 ಸೆಂ.ಮೀ ಮಳೆ ಸುರಿದಿರುವುದರಿಂದ ಕಾವೇರಿ ನದಿ ನೀರು ರಸ್ತೆಗೆ ಬಂದು ಹಲವು ಗ್ರಾಮಗಳು ಸಂಪರ್ಕ ಕಡಿದುಕೊಂಡಿವೆ. ಮಳೆ ಮತ್ತು ಗಾಳಿ ಮುಂದುವರಿದಿದೆ. ಜಡಿಮಳೆಯಿಂದಾಗಿ ದಕ್ಷಿಣ ಕನ್ನಡ ಜಿಲ್ಲೆ ಉಜಿರೆ ಬಳಿಯ ಕಪಿಲಾ ನದಿರ್ಯವಾಹ ಹೆಚ್ಚಿದ್ದು, ನದಿಯ ನೀರು ಶಿಶಿಲ ಗ್ರಾಮದಲ್ಲಿರುವ ಶಿಶಿಲೇಶ್ವರ ದೇವಾಲಯ ಗರ್ಭಗುಡಿಗೆ ನುಗ್ಗಿದೆ. ಬೀದರ್, ಕಲಬುರಗಿ ಜಿಲ್ಲೆಯಲ್ಲೂ ಉತ್ತಮ ಮಳೆ ಸುರಿದಿದೆ.




ಭಾರಿ ಮಳೆಯ ಹಿನ್ನೆಲೆ ಬೆಳಗಾವಿಯ ಖಾನಾಪುರ-ಕಿತ್ತೂರು ಹಾಗೂ ಬೆಳಗಾವಿ ತಾಲ್ಲೂಕು, ಚಿಕ್ಕಮಗಳೂರಿನ ಕೊಪ್ಪ-ಮೂಡಿಗೆರೆ-ಶೃಂಗೇರಿ-ಎನ್‌ಆರ್‌ಪುರ-ಕಳಸ ತಾಲ್ಲೂಕುಗಳಲ್ಲಿ ಹಾಗೂ ಕೊಡಗು ಮತ್ತ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿಯ ಶಾಲೆ, ಪ್ರೌಢಶಾಲೆಗಳಿಗೆ ರಜೆ ಘೋಷಣೆ ಮಾಡಲಾಗಿದೆ.

ಈ ನಡುವೆ, ಬುಧವಾರ ಕರಾವಳಿ ಹಾಗೂ ಒಳನಾಡಿನ ಹಲವು ಕಡೆ ಮಳೆಯಾಗಿದೆ. ಪ್ರಮುಖವಾಗಿ ಉತ್ತರ ಕನ್ನಡ ಜಿಲ್ಲೆಯ ಕ್ಯಾಸಲ್‌ರಾಕ್, ಯಲ್ಲಾಪುರ ಮತ್ತು ಬೆಳಗಾವಿ ಜಿಲ್ಲೆಯ ಖಾನಾಪುರ ಮತ್ತು ಲೋಂಡಾದಲ್ಲಿ ತಲಾ 13 ಸೆಂ.ಮೀ. ಮಳೆಯಾಗಿದೆ. ಬೆಳಗಾವಿ ಜಿಲ್ಲೆಯ ಕಿತ್ತೂರು, ಶಿವಮೊಗ್ಗ ಜಿಲ್ಲೆಯ ಹುಂಚದಕಟ್ಟೆ, ಚಿಕ್ಕಮಗಳೂರು ಜಿಲ್ಲೆಯ ಕಮ್ಮರಡಿಯಲ್ಲಿ ತಲಾ 11 ಸೆಂ.ಮೀ,, ಶಿವಮೊಗ್ಗ ಜಿಲ್ಲೆಯ ಆಗುಂಬೆ, ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ, ಕಳಸದಲ್ಲಿ ತಲಾ 9 ಸೆಂ.ಮೀ. ಮಳೆಯಾಗಿದೆ.

**ಕೊಡಗಿನಲ್ಲಿ ವ್ಯಾಪಕ ಮಳೆ ಮುಂಜಾಗ್ರತೆಗೆ ಸೂಚನೆ**

ಮಡಿಕೇರಿ ಕೊಡಗು ಜಿಲ್ಲೆಯಲ್ಲಿ ವ್ಯಾಪಕ ಮಳೆಯಾಗುತ್ತಿದ್ದು, ಭಾರತೀಯ ಹವಾಮಾನ ಇಲಾಖೆ ಗುರುವಾರ ಮುಂಜಾನೆ 8.30ರವರೆಗೆ ರೆಡ್ ಅಲರ್ಟ್ ಹಾಗೂ ನಂತರ ಆರೆಂಜ್ ಅಲರ್ಟ್ ಘೋಷಿಸಿದೆ. ಸಾರ್ವಜನಿಕರು ಮುಂಜಾಗ್ರತೆ ವಹಿಸಲು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸೂಚನೆ ನೀಡಿದೆ.
ಮಳೆ ಗಾಳಿ, ಸಿಡಿಲು ಸಂದರ್ಭದಲ್ಲಿ ಸಾರ್ವಜನಿಕರು ಹೊರಗೆ ತಿರುಗಾಡದೆ ಸೂಕ್ತ ಕಟ್ಟಡದಲ್ಲಿ ವಾಸಿಸಬೇಕು. ದುರ್ಬಲ ಕಟ್ಟಡದಲ್ಲಿ ವಾಸವಿದ್ದಲ್ಲಿ ಸುರಕ್ಷಿತ ಸ್ಥಳಕ್ಕೆ ತೆರಳಬೇಕು.
ಮೀನುಗಾರರು ನದಿ ಹಾಗೂ ನೀರಿರುವ ಪ್ರದೇಶಕ್ಕೆ ಇಳಿಯದಂತೆ ಕಟ್ಟೆಚ್ಚರ ವಹಿಸಬೇಕು. ಅಪಾಯಕಾರಿ ಮರ, ವಿದ್ಯುತ್ ಕಂಬದ ಹತ್ತಿರ ಸುಳಿಯಬಾರದು ಮತ್ತು ತುಂಡಾದ ವಿದ್ಯುತ್ ತಂತಿಗಳಿಂದ ದೂರವಿರಬೇಕು. ಮರಗಳ ಕೆಳಗೆ ನಿಲ್ಲಬಾರದು. ಕೆಲವು ಪ್ರದೇಶಗಳಲ್ಲಿ ಭೂಕುಸಿತವಾಗುವ ಸಂಭವ ಹೆಚ್ಚಾಗಿರುತ್ತದೆ.
ಹಾಗಾಗಿ ಇಂತಹ ಪ್ರದೇಶದಲ್ಲಿ ವಾಸಿಸುವ ಸಾರ್ವಜನಿಕರು ಹೆಚ್ಚಿನ ಮುಂಜಾಗ್ರತೆ ವಹಿಸಬೇಕು. ಮಾಹಿತಿಗಾಗಿ ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದ ಕಂಟ್ರೋಲ್ ರೂಂ. ದೂ: 08272-221077/221099 ಸಂಪರ್ಕಿಸಬಹುದು ಎಂದು ತಿಳಿಸಲಾಗಿದೆ.



### ದೋಣಿ ವಿಹಾರ ಸ್ಥಗಿತ ನಿಷೇಧಾಜ್ಞೆ

ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲ್ಲೂಕಿನ ಕೆಆರ್‌ಎಸ್ ಜಲಾಶಯದಿಂದ 30 ಸಾವಿರ ಕ್ಯೂಸೆಕ್ ನೀರನ್ನು ಹರಿಸಲಾಗುತ್ತಿದ್ದು, ಕಾವೇರಿ ನದಿ ಮೈದುಂಬಿ ಹರಿಯುತ್ತಿದೆ. ಜಲಾಶಯದ ಪ್ಲಸ್ 80 ಅಡಿ ಮಟ್ಟದ ಗೇಟ್‌ಗಳ ಮೂಲಕ ಬುಧವಾರ ಮಧ್ಯಾಹ್ನದಿಂದ 30 ಸಾವಿರ ಕ್ಯೂಸೆಕ್ ನೀರನ್ನು ಬಿಡಲಾಗುತ್ತಿದೆ. ನದಿ ತೀರದ ಅಪಾಯಕಾರಿ ಸ್ಥಳಗಳಲ್ಲಿ ಬುಧವಾರ ಬೆಳಿಗ್ಗೆ 6 ಗಂಟೆಯಿಂದ ಅನಿರ್ದಿಷ್ಟಾವಧಿಗೆ ನಿಷೇಧಾಜ್ಞೆ ಜಾರಿಯಾಗಿದೆ. ರಂಗನತಿಟ್ಟು ಪಕ್ಷಿಧಾಮದಲ್ಲಿ ನದಿಯ ನೀರಿನ ಮಟ್ಟ ಏರಿಕೆಯಾಗುತ್ತಿರುವುದರಿಂದ ಮಂಗಳವಾರ ಸಂಜೆಯಿಂದ ದೋಣಿ ವಿಹಾರವನ್ನು ಸ್ಥಗಿತಗೊಳಿಸಲಾಗಿದೆ. ಪ್ರವಾಸಿಗರಿಗೆ ಪಕ್ಷಿ ವೀಕ್ಷಣೆಗೆ ಮಾತ್ರ ಅವಕಾಶವಿದೆ.

# ಏಷ್ಯಾದಲ್ಲೇ ಅತಿ ದೂರದ ಅಕ್ವೆಡಕ್ಟ್ ಈಗ ಕರ್ನಾಟಕದಲ್ಲಿ: ಡಿಸಿಎಂ

**● 10 ಕಿ.ಮೀ.ಗೂ ಅಧಿಕ ಉದ್ದದ ಅಕ್ವೊಡೆಕ್ ● ಮುಂದಿನ ಕ್ಯಾಬಿನೆಟ್ ಸಭೆಯಲ್ಲಿ ಯೋಜನೆ ಬಗ್ಗೆ ಚರ್ಚೆ**

• **ಉದಯವಾಹಿನಿ, ಬೆಂಗಳೂರು**

ಏಷ್ಯಾದಲ್ಲೇ ಅತಿದೊಡ್ಡ 10 ಕಿ.ಮೀ.ಗೂ ಅಧಿಕ ಉದ್ದದ ಅಕ್ವೊಡೆಕ್ಟ್‌ನ್ನು ಒಳಗೊಂಡಿದ್ದು, ಕೇಂದ್ರ ಸರಕಾರವು ಈ ಕಾಮಗಾರಿ ಗುರುತಿಸಿ ಪ್ರತಿಷ್ಠಿತ ಐಬಿಎನ್ ಪ್ಲಾಟಿನಂ – 2025 ರಾಷ್ಟ್ರೀಯ ಪ್ರಶಸ್ತಿಯನ್ನು ನೀಡಿದೆ ಎಂದು ಬೃಹತ್ ನೀರಾವರಿ ಸಚಿವರಾಗಿರುವ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದ್ದಾರೆ.
ತುಮಕೂರಿನಲ್ಲಿ ಎತ್ತಿನಹೊಳೆ ಯೋಜನೆಯ ಕಾಮಗಾರಿಯನ್ನು ವೀಕ್ಷಿಸಿ ಮಾತನಾಡಿದ ಅವರು, ನನ್ನ ಮೊದಲ ಆದ್ಯತೆ ಎಲ್ಲರಿಗೂ ಕುಡಿಯುವ ನೀರನ್ನು ಒದಗಿಸುವುದು, ಎಂದು ಡಿ.ಕೆ. ಶಿವಕುಮಾರ್ ಒತ್ತಿ ಹೇಳಿದ್ದಾರೆ.
ಈ ನಿಟ್ಟಿನಲ್ಲಿ ಗುತ್ತಿಗೆದಾರರೊಂದಿಗೆ ಸಮಸ್ಯೆಗಳನ್ನು ಚರ್ಚಿಸಿ, ತೀರ್ಮಾನಗಳನ್ನು ಕೈಗೊಳ್ಳಲಾಗುತ್ತಿದೆ. ಇತ್ತೀಚೆಗೆ ಕೊರಟಗೆರೆ ಮತ್ತು ದೊಡ್ಡಬಳ್ಳಾಪುರದ ಬ್ಯಾಲೆನ್ಸಿಂಗ್ ರಿಸರ್ವಾಯರ್‌ಗೆ ಭೇಟಿ ನೀಡಿ, ಸ್ಥಳದ ಪರಿಸ್ಥಿತಿಯನ್ನು ಕಣ್ಣಾರೆ ಪರಿಶೀಲಿಸಿದ್ದೇನೆ ಎಂದು ಅವರು ತಿಳಿಸಿದ್ದಾರೆ. ಮುಂದಿನ ಕ್ಯಾಬಿನೆಟ್ ಸಭೆಯಲ್ಲಿ ಈ ಯೋಜನೆಯ ಪ್ರಗತಿಯನ್ನು ಮಂಡಿಸುವುದಾಗಿ ತಿಳಿಸಿದರು.
**ಜಲಾಶಯಗಳ ಸುರಕ್ಷತೆಗೆ ಒತ್ತು:** ರಾಜ್ಯದಲ್ಲಿ ಮಳೆ ಉತ್ತಮವಾಗಿ ಬೀಳುತ್ತಿರುವ ಹಿನ್ನೆಲೆಯಲ್ಲಿ, ಹೇಮಾವತಿ, ಕೆಆರ್‌ಎಸ್ ಸೇರಿದಂತೆ ಎಲ್ಲಾ ಜಲಾಶಯಗಳ ಸುರಕ್ಷತೆಗೆ ಆದ್ಯತೆ ನೀಡಲಾಗುವುದು ಎಂದು ಶಿವಕುಮಾರ್ ತಿಳಿಸಿದ್ದಾರೆ. ನೀರು ಸಮುದ್ರಕ್ಕೆ ಹೋಗದಂತೆ ತಡೆಯುವುದು, ತಮಿಳುನಾಡಿಗೆ ಕೊಡಬೇಕಾದ ನೀರನ್ನು ಕೊಡುವುದು, ಮತ್ತು ಉಳಿದ ನೀರನ್ನು ಕೆರೆಗಳಿಗೆ ತುಂಬಿಸುವುದು ನಮ್ಮ ಗುರಿ ಎಂದು ಅವರು ಹೇಳಿದ್ದಾರೆ. ಈ ಸಂಬಂಧ ಎಲ್ಲಾ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಸಭೆ ನಡೆಸಿ, ಕೆಆರ್‌ಎಸ್‌ನಿಂದ ಕಾಲುವೆಗಳನ್ನು ತೆರೆದು ಕೆರೆಗಳನ್ನು ತುಂಬಿಸಲು ಸೂಚನೆ ನೀಡಲಾಗಿದೆ ಎಂದು ಡಿಕೆ ಶಿವಕುಮಾನ್ ತಿಳಿಸಿದ್ದಾರೆ.

**ಡ್ಯಾಮ್ ಸುರಕ್ಷತೆಗೆ ಅಗತ್ಯಕ್ರಮ**

**ಕಬಿನಿ ಜಲಾಶಯ ಬಿರುಕು ವಿಚಾರ:** ಕಬಿನಿ ಜಲಾಶಯದಲ್ಲಿ ಬಿರುಕು ಕಾಣಿಸಿಕೊಂಡಿರುವ ವಿಚಾರಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ತಂಡವು ಈಗಾಗಲೇ ಪರಿಶೀಲನೆ ನಡೆಸುತ್ತಿದ್ದು, ಜಲಾಶಯದ ಸುರಕ್ಷತೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಶಿವಕುಮಾರ್ ಭರವಸೆ ನೀಡಿದ್ದಾರೆ. ತಾಂತ್ರಿಕ ತಂಡವು ಸಮಗ್ರವಾಗಿ ಗಮನಿಸುತ್ತಿದೆ. ಡ್ಯಾಮ್ ಸುರಕ್ಷತೆಗೆ ಏನು ಬೇಕೋ ಅದನ್ನು ಮಾಡಲಾಗುವುದು, ಎಂದು ಅವರು ತಿಳಿಸಿದ್ದಾರೆ.

### ಜಲಮಂಡಳಿಗೆ ಯಂತ್ರಗಳು ತುಕ್ಕು ಹಿಡಿಯುವ ಆತಂಕ

ಎತ್ತಿನಹೊಳೆ ಯೋಜನೆ ಅಡಿ ಬೆಂಗಳೂರು ನಗರಕ್ಕೆ 2.5 ಟಿಎಂಸಿ ನೀರು ನಿಗದಿಪಡಿಸಲಾಗಿದೆ. ಇದರಲ್ಲಿ ತಿಪ್ಪಗೊಂಡನಹಳ್ಳಿ ಜಲಾಶಯಕ್ಕೆ 1.7 ಟಿಎಂಸಿ ನೀರು ಬರುತ್ತದೆ ಮತ್ತು ಹೆಸರಘಟ್ಟ ಜಲಾಶಯಕ್ಕೆ 0.8 ಟಿಎಂಸಿ ನೀರು ಹಂಚಿಕೆ ಮಾಡಲಾಗಿದೆ. ಟಿಜಿ ಹಳ್ಳಿಗೆ ಎತ್ತಿನಹೊಳೆ ನೀರು ಸದ್ಯಕ್ಕೆ ಹರಿದು ಬರುವ ಲಕ್ಷಣಗಳೇ ಕಾಣುತ್ತಿಲ್ಲ. ಅದರಿಂದಾಗಿ, ಶುದ್ಧೀಕರಣ, ಸಂಸ್ಕರಣಾ ಘಟಕ ಹಾಗೂ ಪಂಪಿಂಗ್ ಸ್ಟೇಷನ್‌ಗಳಲ್ಲಿರುವ ಯಂತ್ರಗಳು ತುಕ್ಕು ಹಿಡಿಯದಂತೆ ಕಾಪಾಡಿಕೊಳ್ಳುವ ಹೆಚ್ಚುವರಿ ಜವಾಬ್ದಾರಿ ಅಲ್ಲಿನ ಅಧಿಕಾರಿಗಳ ಮೇಲಿದೆ.



**ಎಕ್ಸ್‌ಪ್ರೆಸ್ ಕಾಲುವೆ ವಿವಾದ:** ಎಕ್ಸ್‌ಪ್ರೆಸ್ ಕಾಲುವೆಯಿಂದ ಈ ಭಾಗದ ರೈತರಿಗೆ ಅನ್ಯಾಯವಾಗುತ್ತಿದೆ ಎಂಬ ಆರೋಪಕ್ಕೆ ಪ್ರತಿಕ್ರಿಯಿಸಿದ ಶಿವಕುಮಾರ್, ಯಾವ ಪುಲಿಯೂ ಇಲ್ಲ, ದರಿಯೂ ಇಲ್ಲ. ಎಲ್ಲರಿಗೂ ಸಮಬಾಳು, ಸಮಪಾಲು ನೀಡಲಾಗುವುದು, ಎಂದು ಸ್ಪಷ್ಟಪಡಿಸಿದ್ದಾರೆ. ಸಚಿವ ವಿ. ಸೋಮಣ್ಣ ಅವರ ಮನವಿಯ ಮೇರೆಗೆ ಜುಲೈ 4 ಅಥವಾ 5ಕ್ಕೆ ಸಭೆಯನ್ನು ಮುಂದೂಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

### ಎತ್ತಿನಹೊಳೆ ನೀರು ಫಿಕ್ಸ್!

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಎತ್ತಿನಹೊಳೆ ಯೋಜನೆಗೆ ಹೊಸ ವೇಗ ಸಿಕ್ಕಿದೆ. ಇತ್ತೀಚೆಗೆ, ಬೆಂಗಳೂರಿನಲ್ಲಿ ಮಾತನಾಡಿದ ಡಿಕೆ ಶಿವಕುಮಾರ್, 2027ರಲ್ಲಿ ಕೋಲಾರ ಜಿಲ್ಲೆಗೆ ಎತ್ತಿನಹೊಳೆ ನೀರನ್ನು ಪೂರೈಕೆ ಮಾಡುವುದಾಗಿ ಭರವಸೆ ನೀಡಿದ್ದಾರೆ. ಎತ್ತಿನಹೊಳೆ ಯೋಜನೆ ಮಹತ್ವಾಕಾಂಕ್ಷೆಯ ಕುಡಿಯುವ ನೀರಿನ ಯೋಜನೆಯಾಗಿದೆ.

**ಎತ್ತಿನಹೊಳೆ ನೀರು ತುಮಕೂರಿಗೆ**

2026ರಲ್ಲಿ ಎತ್ತಿನಹೊಳೆ ಯೋಜನೆಯ ನೀರು ತುಮಕೂರು ಜಿಲ್ಲೆಗೆ ಲಭ್ಯವಾಗಲಿದೆ ಎಂದು ಗೃಹ ಸಚಿವ ಜಿ. ಪರಮೇಶ್ವರ್ ತಿಳಿಸಿದ್ದಾರೆ. 2026ರ ಜೂನ್ ಅಂತ್ಯದೊಳಗೆ ತುಮಕೂರು ಜಿಲ್ಲೆಯ ತಿಪಟೂರು, ಚಿಕ್ಕನಾಯಕನಹಳ್ಳಿ, ಕೊರಟಗೆರೆ ಮತ್ತು ಮಧುಗಿರಿ ಕ್ಷೇತ್ರದ 343 ಕೆರೆಗಳಿಗೆ ಯೋಜನೆಯ ನೀರು ಲಭ್ಯವಾಗಲಿದೆ ಎಂದು ಜಿ. ಪರಮೇಶ್ವರ್ ಹೇಳಿದ್ದಾರೆ. ಸಮಾರಂಭವೊಂದರಲ್ಲಿ ಮಾತನಾಡಿದ ಅವರು ಈ ವಿಚಾರ ತಿಳಿಸಿದ್ದಾರೆ.

| ಈ ದಿನದ ದರ | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,895/Gram24ct ₹9,070/Gram22ct | ಬೆಳ್ಳಿ: ₹108.00/Gram |
|---|---|---|---|---|

## ಪ್ರಖ್ಯಾತ ನೃತ್ಯ ವಿದುಷಿ ಉಷಾ ಬಸಪ್ಪ ಅವರಿಗೆ ಗೌರವಾರ್ಪಣೆ

• ಉದಯವಾಹಿನಿ, ಬೆಂಗಳೂರು

ಹಿರಿಯ ನೃತ್ಯ ವಿದುಷಿ ಉಷಾ ಬಸಪ್ಪ ಅವರಿಗೆ ನಗರದ ಸಂಭ್ರಮ ಸಂಸ್ಥೆ ಜೂನ್ 29ರಂದು ನೃತ್ಯಾಭಿವಂದನೆ ಕಾರ್ಯಕ್ರಮದ ಮೂಲಕ ಗೌರವ ಸಮರ್ಪಣೆ ಮಾಡಲಿದೆ. ಅಂದು ಸಂಜೆ 4 ಗಂಟೆಗೆ ನಗರದ ಜೆಸಿ ರಸ್ತೆಯ ನಯನ ಸಭಾಂಗಣ ಭವನದಲ್ಲಿ ಕಾರ್ಯಕ್ರಮ ಆಯೋಜನೆಗೊಂಡಿದೆ. ಕರ್ನಾಟಕ ಗೃಹ ಮಂಡಳಿ ಆಯುಕ್ತರಾದ ಶ್ರೀ ಕೆ.ಎ. ದಯಾನಂದ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.



ಮುಖ್ಯ ಅತಿಥಿಗಳಾಗಿ ಕನಕದಾಸ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ಅಧ್ಯಕ್ಷ ಕಾತ. ಚಿಕ್ಕಣ್ಣ, ಸಂಗೀತ ವಿದುಷಿ ಕೆ. ಎಂ. ಕುಸುಮ, ಹಿರಿಯ ಮೃದಂಗ ವಿದ್ವಾಂಸ ಎಸ್. ವಿ. ಗಿರಿಧರ ಆಗಮಿಸಲಿದ್ದಾರೆ. ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಅಧ್ಯಕ್ಷೆ ಶುಭಧನಂಜಯ ಅವರು ಉಷಾ ಬಸಪ್ಪ ಅವರಿಗೆ ಅಭಿನಂದನೆಗಳನ್ನು ಸಮರ್ಪಿಸಲಿದ್ದಾರೆ. ನಂತರ ವಿವಿಧ ಸಂಘ ಸಂಸ್ಥೆಗಳ ಕಲಾವಿದರಿಂದ ನೃತ್ಯ ವೈವಿಧ್ಯ ಕಾರ್ಯಕ್ರಮ ಪ್ರಸ್ತುತಗೊಳ್ಳಲಿದೆ. ಕಲಾಸಕ್ತರು ಭಾಗವಹಿಸಬೇಕು ಎಂದು ಸಂಭ್ರಮ ಸಂಸ್ಥೆ ವಿನಂತಿಸಿದೆ.

## ಮಾಸಾಶನ ಪಾವತಿಸಲು ರೂ.32.94 ಕೋಟಿ ಅನುದಾನ ಬಿಡುಗಡೆ

• ಉದಯವಾಹಿನಿ, ಬೆಂಗಳೂರು

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಡಿ ನೀಡುವ ಕಲಾವಿದರ ಮಾಸಾಶನವನ್ನು ರೂ.2,500ಕ್ಕೆ ಹೆಚ್ಚಿಸಲು ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆ. ಸಂಕಷ್ಟದಲ್ಲಿರುವ ಕಲಾವಿದರಿಗೆ ರೂ. 2,000 ಮಾಸಾಶನ ನೀಡುತ್ತಿದ್ದು ಇದನ್ನು ರೂ. 2,500ಕ್ಕೆ ಹೆಚ್ಚಿಸುವುದಾಗಿ ಬಜೆಟ್‌ನಲ್ಲಿ ಘೋಷಿಸಲಾಗಿತ್ತು. 2025-26ನೇ ಸಾಲಿಗೆ ಮಾಸಾಶನ ಪಾವತಿಸಲು ರೂ. 32.94 ಕೋಟಿ ಅನುದಾನ ಬಿಡುಗಡೆ ಮಾಡಿ ಇಲಾಖೆ ಆದೇಶ ಹೊರಡಿಸಿದೆ.

## ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣ: ಸೂರಜ್ ರೇವಣ್ಣಗೆ ರಿಲೀಫ್

• ಉದಯವಾಹಿನಿ, ಬೆಂಗಳೂರು

ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ವಿಧಾನಪರಿಷತ್ ಸದಸ್ಯ ಸೂರಜ್ ರೇವಣ್ಣಗೆ ಬಿಗ್ ರಿಲೀಫ್ ಸಿಕ್ಕಿದೆ. ಸೂರಜ್ ವಿರುದ್ಧದ ಆರೋಪ ಸಂಬಂಧ ಸಿಐಡಿ ಬಿ ರಿಪೋರ್ಟ್ ಸಲ್ಲಿಸಿದೆ. ಹೊಳೆನರಸೀಪುರ ಗ್ರಾಮಾಂತರ ಠಾಣೆಯಲ್ಲಿ ದಾಖಲಾಗಿದ್ದ ಪ್ರಕರಣ ಸಂಬಂಧ ಸಿಐಡಿ ಅಧಿಕಾರಿಗಳು ತನಿಖೆ ನಡೆಸಿದ್ದರು. ಸೂರಜ್ ರೇವಣ್ಣ ವಿರುದ್ಧ 2 ಎಫ್‌ಐಆರ್ ದಾಖಲಾಗಿದ್ದವು. ಒಂದು ಪ್ರಕರಣದಲ್ಲಿ ಸಿಐಡಿ ಈಗಾಗಲೇ ಚಾರ್ಜ್‌ಶೀಟ್ ಸಲ್ಲಿಸಿದೆ. ಮತ್ತೊಂದು ಪ್ರಕರಣದಲ್ಲಿ ಇದೀಗ ಬಿ ರಿಪೋರ್ಟ್ ಸಲ್ಲಿಸಿದೆ. ಹೊಳೆನರಸೀಪುರ ಠಾಣೆಯಲ್ಲಿ ದಾಖಲಾಗಿದ್ದ ಪ್ರಕರಣ ಸಿಐಡಿಗೆ ವರ್ಗಾವಣೆ ಆಗಿತ್ತು. ಆರೋಪ ಸಾಬೀತುಪಡಿಸಲು ಬೇಕಾದ ಸಾಕ್ಷ್ಯಗಳು ಲಭ್ಯವಿಲ್ಲದ ಕಾರಣ ಜನಪ್ರತಿನಿಧಿಗಳ ವಿಶೇಷ ನ್ಯಾಯಲಯಕ್ಕೆ ಸಿಐಡಿ ಬಿ ರಿಪೋರ್ಟ್ ಸಲ್ಲಿಸಿದೆ.

## ಜೆಡಿಎಸ್ ಸೇವಾದಳ ರಾಜ್ಯಾಧ್ಯಕ್ಷರಾದ ಶ್ರೀ ಬಸವರಾಜು ಪಾದಯಾತ್ರಿ ಹುಟ್ಟುಹಬ್ಬದ ಆಚರಣೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಜೆಡಿಎಸ್ ಸೇವಾದಳ ರಾಜ್ಯಾಧ್ಯಕ್ಷರಾದ ಹಾಗೂ ಜನ ಮೆಚ್ಚಿದ ಜನನಾಯಕ ನಮ್ಮ ಗುರುಗಳಾದ ಶ್ರೀ ಬಸವರಾಜು ಪಾದಯಾತ್ರಿ ರವರ ಹುಟ್ಟುಹಬ್ಬದ ಆಚರಣೆಯನ್ನು ಬೆಂಗಳೂರು ಮತ್ತು ಪುಣೆ ಹೆದ್ದಾರಿಯ ಗೊರಗುಂಟೆ ಪಾಳ್ಯದ ಜಂಕ್ಷನ್ ಹತ್ತಿರ ಶಿವನ ದೇವಾಲಯಕ್ಕೆ ಪೂಜೆ ಸಲ್ಲಿಸಿ ತದನಂತರ ಸಮೀಪದ ಹಿರಿಯ ದೇವರುಗಳ ಸಮಾನರಾದ ವೃದ್ಧರ ಆಶ್ರಮದಲ್ಲಿ ಜೆಡಿಎಸ್ ಮುಖಂಡರು ಹಾಗೂ ಮಾಜಿ ಕಾರ್ಯಧ್ಯಕ್ಷರಾದ ಶ್ರೀ ಪುರುಷೋತ್ತಮ್ ರವರ ನೇತೃತ್ವದಲ್ಲಿ ಹಾಗೂ ಹಿತೈಷಿಗಳು ಹಾಗೂ ಕ್ಷೇತ್ರದ ಗೆಳೆಯರ ಬಳಗದವರು ಹಾಗೂ ಕಾರ್ಮಿಕ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿಯಾದ ಶ್ರೀ ಕೊಟ್ರೇಶ್ ರವರು ಹಾಗೂ ಜೆಡಿಎಸ್ ಸೇವಾದಳ ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿ ಮತ್ತು ನಮ್ಮ ಕರ್ನಾಟಕ ಜಾತ್ಯಾತೀತ ಯುವಶಕ್ತಿ ವೇದಿಕೆಯ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಶ್ರೀ ಲಿಂಗರಾಜು ಎನ್ ಸಿ ರವರು ಹಾಗೂ ಚಾಲಕರ ಘಟಕದ ರಾಜ್ಯಾಧ್ಯಕ್ಷರಾದ ಶ್ರೀ ಚನ್ನಪ್ಪ ಹೂಡಿ ಹೊಸಹಳ್ಳಿ ಚನ್ನಪಟ್ಟಣ,ಚಾಲಕರ ಘಟಕದ ರಾಜ್ಯ ಉಪಾಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ದೇವದುರ್ಗ ದವರು ಹಾಗೂ ಚಾಲಕರ ಘಟಕದ ತಾಲ್ಲೂಕು ಮುಖಂಡರು ಶ್ರೀ ಮೌನೇಶ್ ದೇವದುರ್ಗದವರು ಹಾಗೂ ಜೆಡಿಎಸ್ ಸೇವಾದಳದ ಕಾರ್ಯಕರ್ತರು ಹಾಗೂ ಅಭಿಮಾನಿಬಳಗದವರೆಲ್ಲರೂ ಕೇಕ್ ಕತ್ತರಿಸಿ ಸಿಹಿ ತಿನ್ನಿಸಿ ಹುಟ್ಟುಹಬ್ಬದ ಆಚರಣೆ ಮಾಡಿದರು ಈ ಸಂದರ್ಭದಲ್ಲಿ ವೃದ್ಧ ಆಶ್ರಮದ ಹಿರಿಯದೇವರುಗಳಿಗೆ ಸನ್ಮಾನಿಸಿ ಹುಟ್ಟುಹಬ್ಬದ ಪ್ರಯುಕ್ತ ಅನ್ನಸಂತರ್ಪಣೆ ಮಾಡಿಸಿ ಶ್ರೀ ಬಸವರಾಜು ಪಾದಯಾತ್ರಿ ರವರು ಸ್ವತಹ ಅವರುಗಳಿಗೆ ಬಡಿಸಿದರು ಆಶ್ರಮದ ಹಿರಿಯ ದೇವರುಗಳು ಹರ್ಷೋಧಯಕವಾಗಿ ಅವರು ಹುಟ್ಟುಹಬ್ಬದ ಶುಭಾಶಯಗಳುನ್ನು ಕೋರಿ ಸಂತೋಷ ವ್ಯಕ್ತಪಡಿಸಿ ಆರ್ಶಿವಾದಿಸಿದರು

**ಬಿಎಂಆರ್‌ಸಿಎಲ್ ಅಧಿಕಾರಿಗಳ ಪ್ರಕಾರ, ಜಪಾನ್‌ನಿಂದ ಪ್ರಮುಖ ಬಿಡಿಭಾಗಗಳ ವಿತರಣೆಯಲ್ಲಿ ವಿಳಂಬವಾಗುತ್ತಿದ್ದು, ಇದು ರೈಲುಗಳ ಪೂರೈಕೆಯನ್ನು ನಿಧಾನಗೊಳಿಸಬಹುದು. ಪ್ರಸಕ್ತ ಹಣಕಾಸು ವರ್ಷದ ಅಂತ್ಯದ ವೇಳೆಗೆ ಕೇವಲ 8-9 ರೈಲು ಸೆಟ್‌ಗಳು ಮಾತ್ರ ಬರಬಹುದು ಎಂದು ನಿರೀಕ್ಷಿಸಲಾಗಿದೆ. ಮೊದಲ ರೈಲು ಅಕ್ಟೋಬರ್ ವೇಳೆಗೆ ಬಂದ ತಕ್ಷಣ, ಬಿಎಂಆರ್‌ಸಿಎಲ್ ಪರೀಕ್ಷೆಗಳನ್ನು ಪ್ರಾರಂಭಿಸಲಿದೆ. ಬಿಡಿಭಾಗಗಳು ಮತ್ತು ವಿನ್ಯಾಸಗಳು ಅಂತಿಮಗೊಂಡ ನಂತರ ಬಿಇಎಂಎಲ್ ಪ್ರತಿ ತಿಂಗಳು 2-3 ರೈಲುಗಳನ್ನು ಉತ್ಪಾದಿಸಬಹುದು ಎಂದು ಅಧಿಕಾರಿಗಳು ವಿಶ್ವಾಸ ವ್ಯಕ್ತಪಡಿಸಿದ್ದಾರೆ.**

# ಮಾರ್ಚ್‌ನೊಳಗೆ 20 ಮೆಟ್ರೋ ಟ್ರೈನ್ ಸಿದ್ಧ ಆಗ್ತವೆ ಎಂದ ಬಿಇಎಂಎಲ್

### 2026ರ ಆರ್ಥಿಕ ವರ್ಷದೊಳಗೆ ರೂ.200 ಕೋಟಿಗೂ ಹೆಚ್ಚು ಬಂಡವಾಳ ಹೂಡಿಕೆ ಮಾಡುವ ಯೋಜನೆ ಹೊಂದಿದೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಕಾಳೇನ ಅಗ್ರಹಾರದಿಂದ ನಾಗವಾರದವರೆಗಿನ ಪಿಂಕ್ ಮೆಟ್ರೋ ಲೈನ್ ಕುರಿತು ಮಹತ್ವದ ಅಪ್‌ಡೇಟ್ ಸಿಕ್ಕಿದೆ. 2026 ರ ಮಾರ್ಚ್ ಒಳಗೆಯೇ 20 ಚಾಲಕರಹಿತ ರೈಲುಗಳನ್ನು ಬಿಎಂಆರ್‌ಸಿಎಲ್‌ಗೆ ಡೆಲಿವರಿ ಮಾಡುವುದಾಗಿ ಗುತ್ತಿಗೆ ಪಡೆದ ಬಿಇಎಮ್‌ಎಲ್ ತಿಳಿಸಿದೆ. ಹೀಗಾಗಿ ಪಿಂಕ್ ಮಾರ್ಗವು ಭಾಗಶಃ 2026ರ ಆರಂಭದಲ್ಲಿ ಕಾರ್ಯಾರಂಭ ಮಾಡುವ ನಿರೀಕ್ಷೆಯಿದೆ. ಬೆಂಗಳೂರು ಮೂಲದ ಸಾರ್ವಜನಿಕ ವಲಯದ ಕಂಪನಿಯಾದ ಬಿಇಎಂಎಲ್ ಲಿಮಿಟೆಡ್ ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತಕ್ಕೆ 20 ಚಾಲಕರಹಿತ ರೈಲುಗಳನ್ನು 2026ರ ಮಾರ್ಚ್ ವೇಳೆಗೆ ಕೊಡುವ ಭರವಸೆ ನೀಡಿದ್ದು ಈ ಬಗ್ಗೆ ಬಿಇಎಂಎಲ್ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಶಾಂತನು ರಾಯ್ ಹೇಳಿಕೆ ನೀಡಿದ್ದಾರೆ.

ಬಿಎಂಆರ್‌ಸಿಎಲ್‌ಗಾಗಿ ರೈಲುಗಳ ಉತ್ಪಾದನೆಯು ವೇಗ ಪಡೆದಿದೆ. ಮೊದಲ ರೈಲು ಸೆಟ್‌ನ ಅರ್ಧದಷ್ಟು ಕೆಲಸ



ಪೂರ್ಣಗೊಂಡಿದೆ ಎಂದು ತಿಳಿಸಿದ್ದಾರೆ.

ಪ್ರಸ್ತುತ ಹಣಕಾಸು ವರ್ಷದಲ್ಲಿ 20 ಚಾಲಕರಹಿತ ರೈಲುಗಳನ್ನು ತಲುಪಿಸುವ ಗುರಿಯನ್ನು ಹೊಂದಲಾಗಿದೆ , ಬಿಇಎಂಎಲ್ ತನ್ನ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಲು ಬೆಂಗಳೂರಿನಲ್ಲಿ ಹೊಸ ಉತ್ಪಾದನಾ ಘಟಕವನ್ನು ಪ್ರಾರಂಭಿಸಿದೆ ಮತ್ತು ಭೋಪಾಲ್‌ನಲ್ಲಿ ಮೆಟ್ರೋ ಹಾಗೂ ರೈಲು ಕೋಚ್ ಗಳಿಗಾಗಿಯೇ ಮೀಸಲಾದ ಹೊಸ ಕಾರ್ಖಾನೆಯನ್ನು ನಿರ್ಮಿಸುತ್ತಿದೆ. ಇದು ಕಾರ್ಯಾರಂಭ ಮಾಡಿದ ನಂತರ ಕಂಪನಿಯ ಉತ್ಪಾದನಾ ಸಾಮರ್ಥ್ಯ ದ್ವಿಗುಣಗೊಳ್ಳುವ ನಿರೀಕ್ಷೆಯಿದೆ ಎಂದಿದ್ದಾರೆ.

> **ಪಿಂಕ್ ಲೈನ್‌ನ 7.5 ಕಿ.ಮೀ. ಉದ್ದದ ಎಲಿವೇಟೆಡ್ ವಿಭಾಗ (ಕಾಳೇನ ಅಗ್ರಹಾರದಿಂದ ತಾವರೆಕೆರೆವರೆಗೆ) ಸಿದ್ಧವಾಗಿದ್ದು, ಸಾಕಷ್ಟು ರೈಲುಗಳು ದೊರೆತಲ್ಲಿ ಈ ಭಾಗವನ್ನು 2026ರ ಮಾರ್ಚ್ ವೇಳೆಗೆ ತೆರೆಯಲು ಬಿಎಂಆರ್‌ಸಿಎಲ್ ಯೋಜನೆ ಹಾಕಿದೆ. ಆದರೆ, ಡೈರಿ ಸರ್ಕಲ್ ಮತ್ತು ನಾಗವಾರ ನಡುವಿನ 13.76 ಕಿ.ಮೀ. ಉದ್ದದ ಸುರಂಗ ಮಾರ್ಗದ ಸಿವಿಲ್ ಕಾಮಗಾರಿ ಇನ್ನೂ ನಡೆಯುತ್ತಿದೆ.**
>
> **ನಿರ್ದೇಶಕ ಶಾಂತನು ರಾಯ್ ಹೇಳಿಕೆ**


ಬಿಇಎಂಎಲ್ ನಮ್ಮ ಮೆಟ್ರೋಗೆ 318 ಮೆಟ್ರೋ ಕೋಚ್‌ಗಳನ್ನು ಪೂರೈಸಲು 3,177 ಕೋಟಿ ಮೌಲ್ಯದ ಒಪ್ಪಂದವನ್ನು ಪಡೆದುಕೊಂಡಿದೆ. ಇದರಲ್ಲಿ 96 ಕೋಚ್‌ಗಳು ಪಿಂಕ್ ಲೈನ್‌ಗೆ ಮತ್ತು 222 ಕೋಚ್‌ಗಳು ಬ್ಲೂ ಲೈನ್‌ಗೆ (ಸಿಲ್ಕ್ ಬೋರ್ಡ್‌ನಿಂದ ವಿಮಾನ ನಿಲ್ದಾಣದವರೆಗೆ) ಸೇರಿವೆ. ಎಲ್ಲಾ ಕೋಚ್‌ಗಳು ವ್ಯವಸ್ಥೆಯನ್ನು ಹೊಂದಿದ್ದು, ಇದು ಚಾಲಕರಹಿತ ರೈಲುಗಳಾಗಿವೆ. ಬಿಇಎಂಎಲ್ 2026ರ ಆರ್ಥಿಕ ವರ್ಷದಲ್ಲಿ ತನ್ನ ರೈಲು ವ್ಯವಹಾರದಲ್ಲಿ 200 ಕೋಟಿಗೂ ಹೆಚ್ಚು ಬಂಡವಾಳ ಹೂಡಿಕೆ ಮಾಡಲು ಯೋಜಿಸಿದೆ. ಮೂಲಸೌಕರ್ಯ ಸುಧಾರಣೆ ಮತ್ತು ಹೆಚ್ಚಿನ ಆದೇಶಗಳ ಮೂಲಕ ಭವಿಷ್ಯದಲ್ಲಿ ಉತ್ತಮ ಬೆಳವಣಿಗೆಯನ್ನು ನಿರೀಕ್ಷಿಸಲಾಗಿದೆ.

## ಲೋಕಾಯುಕ್ತ ಪರಿಶೀಲನೆ ವೇಳೆ ಬಹಿರಂಗ!

• ಉದಯವಾಹಿನಿ, ಬೆಂಗಳೂರು

ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ವಿವಿಧ ವಲಯಗಳ ಅಡಿಯಲ್ಲಿ ಬರುವ ಬೆಂಗಳೂರು ಮತ್ತು ಸುತ್ತಮುತ್ತಲಿನ 2,020 ಕೆರೆಗಳ ನೀರಿನ ಗುಣಮಟ್ಟವು 'ಆ' ಮತ್ತು 'ಇ' ವರ್ಗಗಳಿಗೆ ಸೇರಿದ್ದು, ಅವು ಕೃಷಿಗೆ ಸಹ ಯೋಗ್ಯವಾಗಿಲ್ಲ ಎಂಬ ವಿಷಯ ಬಹಿರಂಗವಾಗಿದೆ.

ಲೋಕಾಯುಕ್ತ ಅಧಿಕಾರಿಗಳು KSPCB-ಕಚೇರಿಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಈ ವಿಷಯ ತಿಳಿದು ಬಂದಿದೆ. ಕೈಗಾರಿಕೆಗಳು ಮತ್ತು ಅಪಾರ್ಟ್‌ಮೆಂಟ್‌ಗಳು ಭೂಗತ ಒಳಚರಂಡಿ ವ್ಯವಸ್ಥೆಯ ಕೊರತೆಯಿಂದಾಗಿ ವೃಷಭಾವತಿ ನದಿಗೆ ಸಂಸ್ಕರಿಸದ ಕೊಳಚೆ ನೀರನ್ನು ಬಿಡುತ್ತಿವೆ ಆದರೆ ಈ ಸಂಬಂಧ ಬಿಬಿಎಂಪಿ ಮತ್ತು KSPCB ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಈ ಜಲಾನಯನ ಪ್ರದೇಶದಲ್ಲಿನ ನೀರಿನ ಗುಣಮಟ್ಟವನ್ನು 'ಆ' ಮತ್ತು 'ಇ' ಎಂದು ವರ್ಗೀಕರಿಸಲಾಗಿದೆ ಎಂದು ತಿಳಿಸಿದರು. ಕಳೆದ ಹಲವಾರು ವರ್ಷಗಳಿಂದ ಪರೀಕ್ಷಾ ಫಲಿತಾಂಶಗಳು ಪ್ರತಿ ತಿಂಗಳು ಒಂದೇ ಆಗಿದ್ದರೂ, ಅದನ್ನು ಪರಿಹರಿಸಲು ಯಾವುದೇ ಕ್ರಮಗಳನ್ನು ತೆಗೆದುಕೊಂಡಿಲ್ಲ ಮತ್ತು KSPCB-ಎರಡೂ ಸಂಸ್ಥೆಗಳ ವಿರುದ್ಧ ಗಾಳಿ ಮತ್ತು ನೀರು



ಉದಯವಾಹಿನಿ ಚಿತ್ರ

(ಮಾಲಿನ್ಯ ತಡೆಗಟ್ಟುವಿಕೆ ಮತ್ತು ನಿಯಂತ್ರಣ) ಕಾಯ್ದೆಗಳು ಮತ್ತು ಪರಿಸರ (ರಕ್ಷಣೆ) ಕಾಯ್ದೆಯ ನಿಬಂಧನೆಗಳ ಅಡಿಯಲ್ಲಿ ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸಿಲ್ಲ. ಬಿಡಿಎ ಮತ್ತು ಬಿಬಿಎಂಪಿ ಮಿತಿಯಲ್ಲಿ ವೃಷಭಾವತಿ ನದಿಯ ಉದ್ದಕ್ಕೂ 50 ಮೀಟರ್ ಬಫರ್ ವಲಯವಿದೆ ಎಂದು ಕೆಎಸ್‌ಪಿಸಿಬಿ ಅಧಿಕಾರಿಗಳು ಹೇಳಿಕೊಂಡಿದ್ದಾರೆ, ಆದರೆ 500 ಮೀಟರ್ ಬಫರ್ ವಲಯಕ್ಕೆ ವಿರುದ್ಧವಾಗಿ ವಿನಾಯಿತಿ ಇದ್ದ ಕಾರಣ, ಅವರು 50 ಮೀಟರ್ ಒಳಗೆ ಅಕ್ರಮ ನಿರ್ಮಾಣಗಳನ್ನು ತಡೆಯಲಿಲ್ಲ. ನ್ಯಾಯಾಲಯಗಳು ಸ್ವಯಂಪ್ರೇರಿತ ಪ್ರಕರಣಗಳನ್ನು ಕೈಗೆತ್ತಿಕೊಂಡಿರುವ ಕೆಲವು ಕೆರೆಗಳನ್ನು ಹೊರತುಪಡಿಸಿದರೆ, ಹೆಚ್ಚಿನ ಕೆರೆಗಳು ತೀವ್ರವಾಗಿ ಕಲುಷಿತಗೊಂಡಿವೆ ಮತ್ತು ಅತಿಕ್ರಮಣಗೊಂಡಿವೆ ಎಂದು ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ ವೀರಪ್ಪ ಅವರು ಆರ್‌ಆರ್ ನಗರ ಪ್ರದೇಶಕ್ಕೆ ಭೇಟಿ ನೀಡಿದ ವೇಳೆ ಕೆಎಸ್‌ಪಿಸಿಬಿ ಅಧಿಕಾರಿಗಳೇ ಇದನ್ನು ಬಹಿರಂಗಪಡಿಸಿದರು.

**ಮಾರಾಟ, ಬಳಕೆ ನಿಷೇಧ**

ಆನೇಕಲ್ ವಲಯದಲ್ಲಿ 35 ಕೆರೆಗಳು, ಬೊಮ್ಮನಹಳ್ಳಿ ವಲಯದಲ್ಲಿ 40 ಕೆರೆಗಳು, ಬೆಂಗಳೂರು ದಕ್ಷಿಣ ವಲಯದಲ್ಲಿ 35 ಕೆರೆಗಳು, ಕೋಲಾರ, ಚಿಕ್ಕಬಳ್ಳಾಪುರ, ಮಹದೇವಪುರ ಮತ್ತು ಹೊಸಕೋಟೆ ಒಳಗೊಂಡ ಬೆಂಗಳೂರು ಪೂರ್ವ ವಲಯದಲ್ಲಿ 1,772 ಕೆರೆಗಳು, ಬೆಂಗಳೂರು ನಗರ ವಲಯದಲ್ಲಿ 24 ಕೆರೆಗಳು, ಬೆಂಗಳೂರು ನಗರ ಪೂರ್ವ ವಲಯದಲ್ಲಿ 8 ಕೆರೆಗಳು, ಸರ್ಜಾಪುರ ವಲಯದಲ್ಲಿ 16 ಕೆರೆಗಳು, ಮಹದೇವಪುರ ವಲಯದಲ್ಲಿ 40 ಕೆರೆಗಳು, ಹೊಸಕೋಟೆ ಮತ್ತು ದೇವನಹಳ್ಳಿ ವಲಯದಲ್ಲಿ 12 ಕೆರೆಗಳು, ಬೆಂಗಳೂರು ನಗರ ಪಶ್ಚಿಮ ವಲಯದಲ್ಲಿ 2 ಕೆರೆಗಳು, ಬೆಂಗಳೂರು ನಗರ ದಕ್ಷಿಣ ವಲಯದಲ್ಲಿ 6 ಕೆರೆಗಳು ಮತ್ತು ಬೆಂಗಳೂರು ಉತ್ತರ ವಲಯದಲ್ಲಿ 30 ಕೆರೆಗಳು ಈ 'ಡಿ' ಮತ್ತು 'ಇ' ವರ್ಗಗಳಲ್ಲಿ ನೀರಿನ ಗುಣಮಟ್ಟ ಹೊಂದಿರುವ ಜಲಮೂಲಗಳಲ್ಲಿ ಸೇರಿವೆ.

ಕೆಎಸ್‌ಪಿಸಿಬಿ ಅಧಿಕಾರಿಗಳು ತಮ್ಮ ಕಾನೂನುಬದ್ಧ ಆದಾಯವನ್ನು ಮೀರಿ ಯುಪಿಐ ವಹಿವಾಟುಗಳನ್ನು ಮಾಡಿದ್ದಾರೆ ಎಂದು ಕಂಡು ಬಂದ ಹಿನ್ನೆಲೆಯಲ್ಲಿ ಅವರ ಹಣಕಾಸು ಹೇಳಿಕೆಗಳನ್ನು ನ್ಯಾಯಮೂರ್ತಿ ವೀರಪ್ಪ ಅವರು ಕೋರಿದ್ದಾರೆ.

## ರಾಜ್ಯದಲ್ಲಿ 15 ಬಗೆಯ ಔಷಧಗಳು, ಸೌಂದರ್ಯವರ್ಧಕಗಳ ಸಂಗ್ರಹ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಮಾರಾಟವಾಗುತ್ತಿರುವ 15 ಬಗೆಯ ಔಷಧಗಳು ಹಾಗೂ ಸೌಂದರ್ಯವರ್ಧಕಗಳು ಪ್ರಮಾಣೀಕೃತ ಗುಣಮಟ್ಟದಲ್ಲಿಲ್ಲ ಎಂದು ಕರ್ನಾಟಕದ ಔಷಧ ಪರೀಕ್ಷಾ ಪ್ರಯೋಗಾಲಯ ಅವುಗಳ ಮೇಲೆ ನಿಷೇಧ ಹೊರಡಿಸಿ ಆದೇಶಿಸಿದೆ.



ಈ ವಿಚಾರವನ್ನು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ತಮ್ಮ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದಾರೆ. ಕರ್ನಾಟಕದ ಔಷಧ ಪರೀಕ್ಷಾ ಪ್ರಯೋಗಾಲಯವು 15 ಬಗೆಯ ಸೂಚಿತ ಔಷಧಗಳು/ಸೌಂದರ್ಯವರ್ಧಕಗಳನ್ನು 'ಪ್ರಮಾಣೀಕೃತ ಗುಣಮಟ್ಟದಲ್ಲಿಲ್ಲ' ಎಂದು ಅಭಿಪ್ರಾಯಪಟ್ಟಿದೆ ಎಂದು ತಿಳಿಸಿದ್ದಾರೆ.

ನಿಮ್ಮ ಸುರಕ್ಷತೆ ನಮ್ಮ ಆದ್ಯತೆ. ದಯವಿಟ್ಟು ಈ ಕೆಳಗೆ ಪಟ್ಟಿ ಮಾಡಲಾದ ಬ್ಯಾಚ್‌ನ ಔಷಧಗಳು/ ಸೌಂದರ್ಯವರ್ಧಕಗಳನ್ನು ಬಳಸಬೇಡಿ. ಈ ನಿಯಮ ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

ಅಲ್ಪಾ ಲ್ಯಾಬೋರೊಟರೀಸ್ ಅವರ ಕಂಪೌಂಡ್ ಸೋಡಿಯಮ್ ಲ್ಯಾಕ್ಟೈಟ್ ಇಂಜಕ್ಷನ್ ಐ.ಪಿ. ಅಬಾನ್ ಫಾರ್ಮಾಸುಟಿಕಲ್ಸ್‌ನ ಫೋಮೋಲ್-650 ಸೇರಿದಂತೆ 15 ಬಗೆಯ ಔಷಧಗಳು/ಸೌಂದರ್ಯವರ್ಧಕಗಳನ್ನು ನಿಷೇಧಿಸಲಾಗಿದೆ.

> **ಎಲ್ಲಾ ಔಷಧ ಮಾರಾಟಗಾರರು, ವೈದ್ಯರು, ಆಸ್ಪತ್ರೆಗಳು ಮತ್ತು ನರ್ಸಿಂಗ್ ಹೋಂಗಳು ಸೂಚಿತ ಉತ್ಪನ್ನಗಳನ್ನು ಸಂಗ್ರಹಿಸುವುದು/ ಮಾರಾಟ ಮಾಡುವುದು/ ಬಳಸುವುದನ್ನು ತಕ್ಷಣವೇ ನಿಲ್ಲಿಸಬೇಕೆಂದು ಮನವಿ ಮಾಡಿದ್ದಾರೆ. ಆಸ್ಪತ್ರೆ, ಔಷಧ ಮಳಿಗೆಗಳಲ್ಲಿ ನಿಷೇಧಿಸಿರುವ ಔಷಧ, ಸೌಂದರ್ಯವರ್ಧಕಗಳ ಯಾವುದೇ ಸಂಗ್ರಹ ಇದ್ದರೆ, ನಿಮ್ಮ ಸ್ಥಳೀಯ ಔಷಧ ನಿರೀಕ್ಷಕರು ಅಥವಾ ಸಹಾಯಕ ಔಷಧ ನಿಯಂತ್ರಕರಿಗೆ ತಕ್ಷಣವೇ ತಿಳಿಸಿ ಎಂದು ಮನವಿ ಮಾಡಿದ್ದಾರೆ.**

## ಕೆಎಸ್‌ಡಿಎಲ್ ಉತ್ಪನ್ನಗಳನ್ನು ಲಂಡನ್‌ನಲ್ಲಿ ಪ್ರದರ್ಶಿಸಿ

• ಉದಯವಾಹಿನಿ, ಬೆಂಗಳೂರು

ಮೈಸೂರು ಸ್ಯಾಂಡಲ್ ಸೋಪ್‌ನ ಉತ್ಪಾದನಾ ಪ್ರಕ್ರಿಯೆಯನ್ನು ವೀಕ್ಷಿಸಲು ಬೆಂಗಳೂರಿನಲ್ಲಿರುವ ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ಸ್ ಲಿಮಿಟೆಡ್ ಘಟಕಕ್ಕೆ ಭಾರತದ ಬ್ರಿಟಿಷ್ ಹೈಕಮಿಷನರ್ ಲಿಂಡಿ ಕ್ಯಾಮರೂನ್ ಭೇಟಿ ನೀಡಿದರು. ಲಂಡನ್‌ನಲ್ಲಿ ಅಂತಹ ಪಾರಂಪರಿಕ ಉತ್ಪನ್ನಗಳನ್ನು – ಮೀಸಲಾದ ಅಂಗಡಿ ಅಥವಾ ಔಟ್‌ಲೆಟ್ ಮೂಲಕ – ಪ್ರದರ್ಶಿಸುವುದರಿಂದ ಪ್ರವಾಸೋದ್ಯಮ ಮತ್ತು ಸಾಂಸ್ಕೃತಿಕ ವಿನಿಮಯವನ್ನು ಉತ್ತೇಜಿಸಲು ಸಹಾಯವಾಗುತ್ತದೆ ಎಂದು ಸಲಹೆ ನೀಡಿದರು.

ಕೆಎಸ್ ಡಿಎಲ್ ಪರಂಪರೆ, ಆರ್ಥಿಕ ಬೆಳವಣಿಗೆ, ಮಾರುಕಟ್ಟೆ ಉಪಸ್ಥಿತಿ ಮತ್ತು ಭವಿಷ್ಯದ ವಿಸ್ತರಣಾ ಯೋಜನೆಗಳ ಬಗ್ಗೆಯೂ ಸಣ್ಣ ಮತ್ತು ಮಧ್ಯಮ ಗಾತ್ರ ಕೈಗಾರಿಕೆಗಳ ಸಚಿವ ಎಂ.ಬಿ. ಪಾಟೀಲ್ ಲಿಂಡಿ ಅವರಿಗೆ ವಿವರಿಸಿದರು. ಪ್ರಸ್ತಾವಿತ ಭಾರತ-ಯುಕೆ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಬೆಂಬಲ ವ್ಯಕ್ತಪಡಿಸಿದ ಅವರು, ನಮ್ಮ ಗುರಿಗಳನ್ನು ರಾಜಿ ಮಾಡಿಕೊಳ್ಳದೆ ಪರಸ್ಪರ ಹಿತಾಸಕ್ತಿಗಳನ್ನು ಪೂರೈಸುವ ರೀತಿಯಲ್ಲಿ ನಾವು ಪರಿಣತಿಯನ್ನು ಹಂಚಿಕೊಳ್ಳಬೇಕು ಎಂದು ಹೇಳಿದರು. ಮೈಸೂರು ಸ್ಯಾಂಡಲ್ ಸೋಪ್‌ನಂತಹ ವಸ್ತುಗಳು ಕರ್ನಾಟಕದ ಶ್ರೀಮಂತ ಪರಂಪರೆಯನ್ನು ವಿದೇಶದಲ್ಲಿ ಪ್ರತಿನಿಧಿಸಲು ಕಾರ್ಯನಿರ್ವಹಿಸಬಹುದು ಎಂದು ಲಿಂಡಿ ಹೇಳಿದರು. ಈ ಉತ್ಪನ್ನಗಳು ಕರ್ನಾಟಕದಿಂದ ಬರುವ ವಸ್ತುಗಳನ್ನು ಉಡುಗೊರೆಯಾಗಿ ನೀಡಲು ಮತ್ತು ಪ್ರದರ್ಶಿಸಲು ಹೆಚ್ಚಿನ ಸಾಮರ್ಥ್ಯವನ್ನು ಹೊಂದಿವೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

> **ಎಫ್‌ಟಿಎ ಎರಡೂ ರಾಷ್ಟ್ರಗಳಿಗೆ ಮತ್ತು ನಿರ್ದಿಷ್ಟವಾಗಿ ಕರ್ನಾಟಕದಂತಹ ಕೈಗಾರಿಕಾ ರಾಜ್ಯಗಳಿಗೆ ಪ್ರಯೋಜನವನ್ನು ನೀಡುತ್ತದೆ. ಸಾಂಪ್ರದಾಯಿಕ ಭಾರತೀಯ ಬ್ರ್ಯಾಂಡ್‌ಗಳನ್ನು ಜಾಗತಿಕವಾಗಿ ಪ್ರಚಾರ ಮಾಡುವುದು ಸೇರಿದಂತೆ ವ್ಯಾಪಾರ ಮತ್ತು ಕೈಗಾರಿಕಾ ಸಹಕಾರಕ್ಕಾಗಿ ಇದು ಹೊಸ ಮಾರ್ಗಗಳನ್ನು ತೆರೆಯಬಹುದು ಎಂದು ಅವರು ಹೇಳಿದರು.**

**ಬ್ರಿಟಿಷ್ ರಾಯಭಾರಿ ಲಿಂಡಿ ಕ್ಯಾಮರೂನ್**

## ಪಶ್ಚಿಮ ಘಟ್ಟಗಳ ಸಾಮರ್ಥ್ಯ ಅಧ್ಯಯನಕ್ಕೆ ಸಮಿತಿ ರಚನೆ

• ಉದಯವಾಹಿನಿ, ಬೆಂಗಳೂರು

ಪಶ್ಚಿಮಘಟ್ಟದ ಸಾಮರ್ಥ್ಯದ ಅಧ್ಯಯನಕ್ಕೆ ಅರಣ್ಯ ಪಡೆ ಮುಖ್ಯಸ್ಥರ ನೇತೃತ್ವದಲ್ಲಿ ಸಮಿತಿ ರಚಿಸಿ, 6 ತಿಂಗಳಲ್ಲಿ ವರದಿ ಸಲ್ಲಿಸಲು ಸೂಚಿಸಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ಮೂಲಸೌಕರ್ಯ, ಗಣಿಗಾರಿಕೆ, ವಾಣಿಜ್ಯ, ವಸತಿ ಮತ್ತು ಪ್ರವಾಸೋದ್ಯಮ ಯೋಜನೆಗಳಿಂದಾಗಿ ಈ ಪ್ರದೇಶದ ಮೇಲೆ ಹೆಚ್ಚುತ್ತಿರುವ ಒತ್ತಡದಿಂದಾಗಿ ಈ ಆದೇಶಗಳನ್ನು ಹೊರಡಿಸಲಾಗಿದೆ. ಯುನೆಸ್ಕೋದಿಂದ ಜೀವವೈವಿಧ್ಯ ತಾಣವೆಂದು ಘೋಷಿಸಲ್ಪಟ್ಟ ನಂತರ ಈ ಪ್ರದೇಶದ ಮೊದಲ ಅಧ್ಯಯನ ಇದಾಗಿದೆ. ವಿಕಾಸಸೌಧದ ತಮ್ಮ ಕಚೇರಿಯಲ್ಲಿ ಕರ್ನಾಟಕ ಜೀವವೈವಿಧ್ಯ ಮಂಡಳಿ ವಿಶೇಷ ಸಭೆಯಲ್ಲಿ ಮಾತನಾಡಿದ ಅವರು, ಪಶ್ಚಿಮ ಘಟ್ಟ ಪ್ರದೇಶದಲ್ಲಿ ನಿರಂತರ ಭೂಕುಸಿತ ಸಂಭವಿಸುತ್ತಿದ್ದು, ಜೀವಹಾನಿ ಆಗುತ್ತಿರುವುದನ್ನು ಸರಕಾರ ಗಂಭೀರವಾಗಿ ಪರಿಗಣಿಸಿದೆ. ಈ ನಿಟ್ಟಿನಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಪಡೆ ಮುಖ್ಯಸ್ಥರಾದ ಮೀನಾಕ್ಷಿ ನೇಗಿ ನೇತೃತ್ವದಲ್ಲಿ, ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ, ಕರ್ನಾಟಕ ಜೀವ ವೈವಿಧ್ಯ ಮಂಡಳಿ ಹಾಗೂ ತಜ್ಞರನ್ನೊಳಗೊಂಡ ಸಮಿತಿಯನ್ನು 10 ದಿನಗಳ ಒಳಗಾಗಿ ರಚಿಸಿ, 6 ತಿಂಗಳಲ್ಲಿ ವರದಿ ಸಲ್ಲಿಸುವಂತೆ ಸೂಚಿಸಿದರು.

ಉತ್ತರ ಕನ್ನಡ ಪ್ರದೇಶ ಮತ್ತು ಬಂಡೀಪುರ ಹುಲಿ ಮೀಸಲು ಪ್ರದೇಶದಲ್ಲಿ ನಡೆಸಲಾದ ಸಾಗಣೆ ಸಾಮರ್ಥ್ಯ ಅಧ್ಯಯನಗಳ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ ಎಂದು ಜೀವವೈವಿಧ್ಯ ಸಮಿತಿಯ ಸದಸ್ಯರು ತಿಳಿಸಿದ್ದಾರೆ.





ಉದಯವಾಹಿನಿ ಚಿತ್ರ

> **ಅಧ್ಯಯನಕ್ಕೆ ಭಾಗವಹಿಸುವ ವಿಧಾನದ ಅಗತ್ಯವನ್ನು ಚರ್ಚಿಸಲಾಯಿತು. ಸಾಗಣೆ ಸಾಮರ್ಥ್ಯದ ಮಿತಿಯನ್ನು ನಿಗದಿಪಡಿಸಬೇಕಾದರೆ, ಪ್ರಾಯೋಗಿಕ ದತ್ತಾಂಶದ ಅಗತ್ಯವಿದೆ ಮತ್ತು ಅದನ್ನು ಹೇಗೆ ಸಂಗ್ರಹಿಸಬೇಕು ಮತ್ತು ಒಟ್ಟುಗೂಡಿಸಬೇಕು ಎಂಬುದರ ಕುರಿತು ಚರ್ಚಿಸಲಾಯಿತು ಎಂದು ಸಮಿತಿಯ ಸದಸ್ಯರೊಬ್ಬರು ಹೇಳಿದರು.**

# ರಾಜ್ಯ ರಾಜಕೀಯದಲ್ಲಿ ಮತ್ತೊಮ್ಮೆ ಗರಿಗೆದರಿದ ಚರ್ಚೆ

### ದೆಹಲಿಯ ಭೇಟಿಯ ವೇಳೆ ಡಿ.ಕೆ.ಶಿವಕುಮಾರ್‌ರವರ ವರ್ತನೆಗಳ ಬಗ್ಗೆ ದೂರುಗಳ ಸುರಿಮಳೆಯೇ ಆಗಿವೆ

• ಉದಯವಾಹಿನಿ, ಬೆಂಗಳೂರು

ರಾಜ್ಯ ರಾಜಕೀಯದಲ್ಲಿ ಬದಲಾವಣೆಯ ಚರ್ಚೆಗಳು ಮತ್ತೊಮೆ ಗರಿಗೆದರಿವೆ. ಈವರೆಗೂ ಮುಖ್ಯಮಂತ್ರಿ ಅಧಿಕಾರದ ಬದಲಾವಣೆಗಳ ಬಗ್ಗೆ ಚರ್ಚೆಗಳಾಗಿದ್ದವು. ಆದರೆ ಪ್ರಸ್ತುತ ಚರ್ಚೆಯಲ್ಲಿ ಕೆಪಿಸಿಸಿ ಅಧ್ಯಕ್ಷ ಸ್ಥಾನ, ಹೆಚ್ಚುವರಿ ಉಪಮುಖ್ಯಮಂತ್ರಿ ಹುದ್ದೆಗಳು ಹಾಗೂ ಪ್ರಮುಖ ಖಾತೆಗಳ ಪರಿಷ್ಕರಣೆಯ ಬಗ್ಗೆ ಗಂಭೀರ ಚರ್ಚೆ ನಡೆಯುತ್ತಿವೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ತಮ ಆಪ್ತ ಸಚಿವರಾದ ಸತೀಶ್ ಜಾರಕಿಹೊಳಿ, ಕೆ.ಜೆ.ಜಾರ್ಜ್, ಎಚ್.ಸಿ.ಮಹದೇವಪ್ಪ ಅವರ ಜೊತೆ ದೆಹಲಿಗೆ ಭೇಟಿ ನೀಡಿದ್ದರು. ಅಲ್ಲಿ ಸಚಿವರೊಟ್ಟಿಗೆ ಹೈಕಮಾಂಡ್ ನಾಯಕರು ಮೊದಲ ಸುತ್ತಿನ ಚರ್ಚೆ ನಡೆಸಿದ್ದು, ನಂತರ ಸಿದ್ದರಾಮಯ್ಯರೊಂದಿಗೆ ಪ್ರತ್ಯೇಕ ರಹಸ್ಯ ಸಮಾಲೋಚನೆ ನಡೆಸಿದ್ದಾರೆ. ಇದು ತೀವ್ರ ಕುತೂಹಲ ಕೆರಳಿಸಿದೆ.

ದೆಹಲಿಯ ಭೇಟಿಯ ವೇಳೆ ಡಿ.ಕೆ.ಶಿವಕುಮಾರ್‌ರವರ ವರ್ತನೆಗಳ ಬಗ್ಗೆ ದೂರುಗಳ ಸುರಿಮಳೆಯೇ ಆಗಿವೆ. ಕಾಂಗ್ರೆಸ್‌ನ ಶಾಸಕ ರಾಜು ಕಾಗೆ ಹೇಳಿದಂತೆ ಸಚಿವರು ಮುಖ ಕೊಟ್ಟು ಮಾತನಾಡುತ್ತಿಲ್ಲ. ಶಾಸಕರನ್ನು ಹಾದಿ ಮಧ್ಯೆಯೇ ನಿಲ್ಲಿಸಿ ಮನವಿ ತೆಗೆದುಕೊಳ್ಳುತ್ತಾರೆ, ಮತ್ತಿನ್ಯಾರೊಂದಿಗೋ ಮಾತನಾಡುತ್ತಾ ಮುಂದೆ ಹೋಗುತ್ತಿರುತ್ತಾರೆ, ಶಾಸಕರು ಅವರ ಹಿಂದೆ ಓಡಿಹೋಗಬೇಕು, ಈ ರೀತಿಯ ದುಸ್ಥಿತಿ ಯಾರಿಗೂ ಬೇಡ ಎಂದು ಹೇಳಿದರು. ರಾಜು ಕಾಗೆ ಹೆಸರು ಹೇಳದೇ ಇದ್ದರೂ ಅದು ಡಿ.ಕೆ. ಶಿವಕುಮಾರ್‌ರವರ ಕುರಿತಾದ ವ್ಯಾಖ್ಯಾನ ಎಂದು ಚರ್ಚೆಗಳಾಗುತ್ತಿವೆ. ಬಹುತೇಕ ಶಾಸಕರು ಒಳಗೊಳಗೇ ಕುದಿಯುತ್ತಿದ್ದು, ಬಹಿರಂಗ ಟೀಕೆ ಮಾಡಲಾಗದೆ, ಕೈಕೈ ಹಿಸುಕಿಕೊಳ್ಳುತ್ತಿದ್ದಾರೆ. ಶಾಸಕಾಂಗ ಸಭೆಯಲ್ಲಿ ಡಿ.ಕೆ.ಶಿವಕುಮಾರ್‌ರವರನ್ನು ವೇದಿಕೆಯಲ್ಲಿ ಕೂರಿಸಿ ದೂರು ಕೇಳಿದರೆ ಯಾರು ತಾನೇ ಮಾತನಾಡಲು ಸಾಧ್ಯ. ಅದರ ಬದಲು ಶಾಸಕರಿಗೆ ಸಮಯ ಕೊಟ್ಟು ವೈಯಕ್ತಿಕವಾಗಿ ಅಭಿಪ್ರಾಯ ಆಲಿಸಿದರೆ ಸತ್ಯಾಂಶ ತಿಳಿಯಲಿದೆ. ಇದು ಮುಂದಿನ ದಿನದಲ್ಲಿ ಪಕ್ಷ ಸಂಘಟನೆಗೂ ಸಹಾಯವಾಗಲಿದೆ. ಇಲ್ಲವಾದರೆ ಸ್ಥಳೀಯ ಸಂಸ್ಥೆಗಳಲ್ಲೇ ಕಾಂಗ್ರೆಸ್ ಮುಗ್ಗರಿಸಲಿದೆ ಎಂಬ ಅಭಿಪ್ರಾಯವನ್ನು ದೆಹಲಿಗೆ ತಲುಪಿಸಲಾಗಿದೆ. ಡಿ.ಕೆ.ಶಿವಕುಮಾರ್‌ರವರ ಬಳಿ ಕೆಪಿಸಿಸಿ ಅಧ್ಯಕ್ಷ ಸ್ಥಾನ, ಉಪಮುಖ್ಯಮಂತ್ರಿ ಹುದ್ದೆ, ಬೆಂಗಳೂರು ನಗರಾಭಿವೃದ್ಧಿ ಮತ್ತು ಜಲಸಂಪನೂಲಗಳಂತಹ ಪ್ರಮುಖ ಖಾತೆಗಳಿವೆ. ಇವುಗಳು ಜನಸಂಪರ್ಕ ಇರುವ ಹಾಗೂ ಹೆಚ್ಚಿನ ಅನುದಾನ ಪಡೆಯುವ ಸಚಿವಾಲಯಗಳಾಗಿವೆ. ಡಿ.ಕೆ.ಶಿವಕುಮಾರ್ ಹಿಂದಿನ ಸರ್ಕಾರದ ಬಾಕಿ ಬಿಲ್‌ನ ನೆಪದಲ್ಲಿ ಹೊಸ ಯೋಜನೆಗಳಿಗೆ ಅನುಮೋದನೆ ನೀಡುತ್ತಿಲ್ಲ. ಶಾಸಕ ಎಚ್.ಸಿ.ಬಾಲಕೃಷ್ಣ ಹೇಳಿದಂತೆ ಡಿ.ಕೆ.ಶಿವಕುಮಾರ್‌ರವರಿಗೆ ಜೈ ಎನ್ನುವವರಿಗೆ ಅನುದಾನ ದೊರೆಯುತ್ತಿದೆ. ಉಳಿದವರನ್ನು ಉದ್ದೇಶಪೂರಕವಾಗಿ ಕಡೆಗಣಿಸಲಾಗುತ್ತಿದೆ ಎಂದು ದೂರಲಾಗಿದೆ.



ಉದಯವಾಹಿನಿ ಚಿತ್ರ



> **ಉಸ್ತುವಾರಿ ಕಾರ್ಯದರ್ಶಿ ವಿರುದ್ಧವೇ ಆಕ್ರೋಶ**
>
> **ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ವಿರುದ್ಧವೂ ಆಕ್ಷೇಪಗಳು ಕೇಳಿಬಂದಿವೆ. ಈ ಹಿಂದೆ ಕೆ.ಸಿ.ವೇಣುಗೋಪಾಲ್ ಬೆಂಗಳೂರಿಗೆ ಬಂದಾಗ ನಾಯಕರುಗಳ ಜೊತೆ ವೈಯಕ್ತಿಕ ಸಮಾಲೋಚನೆ ನಡೆಸುತ್ತಿದ್ದರು. ದೂರು ದುಮಾನಗಳನ್ನು ಕೇಳಿ ಬಗೆಹರಿಸುತ್ತಿದ್ದರು. ಸುರ್ಜೇವಾಲ ಕೇವಲ ಡಿ.ಕೆ. ಶಿವಕುಮಾರ್ ಹಾಗೂ ಸಿದ್ದರಾಮಯ್ಯನವರನ್ನು ಮಾತ್ರ ಕೇಂದ್ರೀಕರಿಸಿ ಸಭೆ ನಡೆಸುತ್ತಿದ್ದಾರೆ. ಶಾಸಕರುಗಳ ವೈಯಕ್ತಿಕ ಭೇಟಿಗೆ ಸಮಯ ನೀಡುತ್ತಿಲ್ಲ ಎಂಬ ಆರೋಪಗಳಿವೆ.**

**ಜನಸಂಪರ್ಕ ಇರುವ ಹೆಚ್ಚಿನ ಅನುದಾನ**


ಡಿಕೆಶಿ ಉಪಮುಖ್ಯಮಂತ್ರಿಯಾದ ಬಳಿಕ ರಾಜ್ಯದಲ್ಲಿ ಶಕ್ತಿ ಕೇಂದ್ರಗಳ ಸಂಖ್ಯೆ ಹೆಚ್ಚಾಗಿದೆ. ಹೀಗಾಗಿ ಜಾತಿವಾರು ಹುದ್ದೆಗಳನ್ನು ಸೃಷ್ಟಿಸಬೇಕು ಎಂದು ಲೋಕಸಭೆ ಚುನಾವಣೆಯ ವೇಳೆ ಬೇಡಿಕೆಗಳಿದ್ದವು. ಈಗ ಅದೇ ಬೇಡಿಕೆಗಳನ್ನು ಪುನರುಚ್ಚರಿಸಲಾಗಿದೆ. ಹೈಕಮಾಂಡ್ ನಾಯಕರು ಡಿ.ಕೆ.ಶಿವಕುಮಾರ್‌ರವರ ಒತ್ತಡಕ್ಕೆ ಮಣಿದು ಜಾತಿ ಜನಗಣತಿಗೆ ಬ್ರೇಕ್ ಹಾಕಿದ್ದ ಬಗ್ಗೆಯೂ ಮುಖ್ಯಮಂತ್ರಿ ಮತ್ತವರ ತಂಡ ತೀವ್ರ ಅಸಮಾಧಾನವನ್ನು ವ್ಯಕ್ತಪಡಿಸಿರುವುದಾಗಿ ತಿಳಿಸಲಾಗಿದೆ.

ಡಿ.ಕೆ.ಶಿವಕುಮಾರ್‌ರಿಂದ ಕೆಪಿಸಿಸಿ ಅಧ್ಯಕ್ಷ ಸ್ಥಾನವನ್ನು ಹಿಂಪಡೆಯಬೇಕು. ಉಪಮುಖ್ಯಮಂತ್ರಿ ಹುದ್ದೆಯ ಜೊತೆಗೆ ಒಂದು ಇಲಾಖೆಯ ಜವಾಬ್ದಾರಿ ಮಾತ್ರ ವಹಿಸಬೇಕು ಎಂದು ಹೈಕಮಾಂಡ್ ಬಳಿ ಸಿದ್ದರಾಮಯ್ಯ ಮತ್ತವರ ಬೆಂಬಲಿಗರು ದೂರಿರುವುದಾಗಿ ತಿಳಿದುಬಂದಿದೆ. ಈ ಬೇಡಿಕೆಗೆ ಹೈಕಮಾಂಡ್ ಸ್ಪಂದಿಸಿದ್ದು, ಮುಂದಿನ ದಿನಗಳಲ್ಲಿ ಪರಿಶೀಲನೆ ನಡೆಸುವುದಾಗಿ ತಿಳಿದುಬಂದಿದೆ. ಎರಡೂವರೆ ವರ್ಷಗಳಲ್ಲಿ ಸಚಿವ ಸಂಪುಟ ಪುನರ್‌ರಚನೆಯಾಗಬೇಕು. ಆ ವೇಳೆ ಬಹಳಷ್ಟು ಬದಲಾವಣೆಗಳಾಗಲಿವೆ ಎಂದು ಹೈಕಮಾಂಡ್ ಸುಳಿವು ನೀಡಿವೆ. ಇದನ್ನು ಆಧರಿಸಿ ಸಿದ್ದರಾಮಯ್ಯನವರ ಬೆಂಬಲಿಗರು ರಾಜ್ಯ ರಾಜಕೀಯದಲ್ಲಿ ಸಣ್ಣಪ್ರಮಾಣದ ಬದಲಾವಣೆಗಳಾಗಲಿವೆ ಎಂದು ಮಾತನಾಡಲಾರಂಭಿಸಿದ್ದಾರೆ.

# ಚಾಮುಂಡಿಬೆಟ್ಟಕ್ಕೆ ಸರ್ಕಾರಿ ಬಸ್ಸುಗಳಲ್ಲಿ ಪುರುಷರಿಗೂ ಉಚಿತ ಪ್ರಯಾಣ

## ಬೆಟ್ಟಕ್ಕೆ ಸಾಗುವ ಮಾರ್ಗದಲ್ಲಿ ಖಾಸಗಿ ವಾಹನಗಳಿಗೆ ನಿಷೇಧವಿದ್ದು, ಭಕ್ತರು ಮಾತ್ರ ಸರ್ಕಾರಿ ಬಸ್ಸುಗಳಲ್ಲಿ ಪ್ರಯಾಣಿಸಬೇಕು


• ಉದಯವಾಹಿನಿ, ಮೈಸೂರು


ಉದಯವಾಹಿನಿ ಚಿತ್ರ

ಆಷಾಢ ಮಾಸ ಆರಂಭವಾಗಿದೆ. ಎಂದಿನಂತೆ ಚಾಮುಂಡಿಬೆಟ್ಟದಲ್ಲಿ ಮಹಾಜನಸಾಗರವೇ ಹರಿದುಬರಲಿದೆ. ಬೆಟ್ಟಕ್ಕೆ ಆಗಮಿಸಲಿರುವ ಲಕ್ಷಾಂತರ ಭಕ್ತಾದಿಗಳು ಬೆಟ್ಟದ ಮೇಲಿರುವ ಚಾಮುಂಡೇಶ್ವರಿಯನ್ನು ದರ್ಶನ ಮಾಡಿ ಪೂಜಿಸಿಕೊಂಡು ಹೋಗುತ್ತಾರೆ. ಶಕ್ತಿ ಯೋಜನೆಯಡಿ ವರ್ಷದ ಎಲ್ಲಾ ದಿನಗಳಲ್ಲಿ ಸರ್ಕಾರಿ ಬಸ್ಸುಗಳಲ್ಲಿ ಉಚಿತ ಪ್ರಯಾಣ ಸೌಕರ್ಯವಿರುವುದು ಎಲ್ಲರಿಗೂ ಗೊತ್ತೇ ಇದೆ. ಆದರೆ, ವಿಶೇಷವೆಂದರೆ, ಈ ಬಾರಿಯ ಆಷಾಢ ಶುಕ್ರವಾರದ ಒಂದು ದಿನ ಮಾತ್ರ ಪುರುಷರಿಗೂ ಸರ್ಕಾರಿ ಬಸ್ಸುಗಳಲ್ಲಿ ಉಚಿತ ಪ್ರಯಾಣ ಸೌಕರ್ಯವಿರಲಿದೆ. ಮಹಿಳೆಯರಿಗೆ ಹಾಗೂ ಪುರುಷರಿಗೆ ಉಚಿತ ಬಸ್ ಪ್ರಯಾಣ ಇರುವುದರ ಜೊತೆಗೆ, ಬೆಟ್ಟಕ್ಕೆ ಅನೇಕ ಸರ್ಕಾರಿ ಬಸ್ಸುಗಳನ್ನು ಹೆಚ್ಚುವರಿಯಾಗಿ ಬಿಡಲಾಗುತ್ತದೆ. ಸಾಮಾನ್ಯ ಬಸ್ಸುಗಳು ಸೇರಿದಂತೆ ಹವಾನಿಯಂತ್ರಿತ ಬಸ್ಸುಗಳ ಸೌಕರ್ಯವನ್ನೂ ಕಲ್ಪಿಸಲಾಗಿದೆ. ಆ ಹಿನ್ನೆಲೆಯಲ್ಲಿ, ಉಚಿತ ಟಿಕೆಟ್ ಸೌಕರ್ಯವನ್ನೂ ಕಲ್ಪಿಸಲಾಗಿರುದರಿಂದ ಜನರು ಸಾಗರೋಪಾದಿಯಲ್ಲಿ ಬೆಟ್ಟಕ್ಕೆ ಆಗಮಿಸುವ ನಿರೀಕ್ಷೆಯಿದೆ. ಆ ಹಿನ್ನೆಲೆಯಲ್ಲಿ, ಚಾಮುಂಡಿಬೆಟ್ಟದಲ್ಲಿ ಭದ್ರತಾ ವ್ಯವಸ್ಥೆಗಳು, ಮೂಲಸೌಕರ್ಯ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ. ಲಕ್ಷಾಂತರ ಜನರು ಒಂದೆಡೆ ಸೇರುವ ಸ್ಥಳವಾಗಿರುವುದರಿಂದ ಜೂ. 27ರಂದು ಬೆಟ್ಟಕ್ಕೆ ಖಾಸಗಿ ವಾಹನಗಳ ಸಂಚಾರವನ್ನು ನಿಷೇಧಿಸಲಾಗಿದೆ. (ಈಗಾಗಲೇ ಕೆಲವು ದಿನಗಳಿಂದ ಖಾಸಗಿ ವಾಹನಗಳನ್ನು ಬಿಡುತ್ತಿಲ್ಲ). ಕೇವಲ ಸರ್ಕಾರಿ ಬಸ್ಸುಗಳಲ್ಲಿಯೇ ಪ್ರಯಾಣಿಸಬೇಕು. ಎಲ್ಲಾ ಖಾಸಗಿ ವಾಹನಗಳಿಗೆ ಬೆಟ್ಟದ ತಪ್ಪಲಿನಲ್ಲಿ ಪಾರ್ಕಿಂಗ್ ಗೆ ಅವಕಾಶ ಕಲ್ಪಿಸಲಾಗಿದೆ.

**ಪಾಸ್ ಪಡೆದವರಿಗೆ ಮೂರು ಹಂತದ ವ್ಯವಸ್ಥೆ:** 300 ರೂಪಾಯಿ ಮತ್ತು 2000 ರೂಪಾಯಿ ನೀಡಿ ಪಾಸ್ ಪಡೆದು ಸಾಗುವ ಭಕ್ತರಿಗೆ ವಿಶೇಷ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ. ಇದರ ಜೊತೆಗೆ ಧರ್ಮ ದರ್ಶನ (ಉಚಿತ ದರ್ಶನ) ಪಡೆಯುವ ಭಕ್ತಾಧಿಗಳೂ ಸೇರಿದಂತೆ 3 ವಿಭಾಗ ಮಾಡಿ ಪ್ರತ್ಯೇಕವಾಗಿ ಪ್ರಯಾಣಿಸಲು ವ್ಯವಸ್ಥೆ ನೀಡಲಾಗಿದೆ.

### ಯಾವತ್ತು ಏನೇನು ಪೂಜೆ?



**ಚಾಮುಂಡಿಬೆಟ್ಟದ ಚಾಮುಂಡೇಶ್ವರಿ ದೇವಸ್ಥಾನದಲ್ಲಿ ಜೂ. 27 ರಂದು ಮೊದಲ ಆಷಾಢ ಪೂಜೆ ನಡೆಯಲಿದೆ. ಆನಂತರ ಎರಡನೇ ಶುಕ್ರವಾರವಾದ ಜು. 4 ರಂದು, ಮೂರನೇ ಶುಕ್ರವಾರವಾದ ಜು. 11ರಂದು ಹಾಗೂ ಜು. 18ರಂದು 4ನೇ ಆಷಾಢ ಶುಕ್ರವಾರ ಆಚರಣೆ ನಡೆಯುತ್ತದೆ. ಈ ಹಿನ್ನಲೆಯಲ್ಲಿ ವಾರಾಂತ್ಯದ ಮೂರು ದಿನ(ಆಷಾಢ ಶುಕ್ರವಾರ, ಶನಿವಾರ, ಭಾನುವಾರ) ಖಾಸಗಿ ವಾಹನಗಳಿಗೆ ಪ್ರವೇಶ ನಿರ್ಬಂಧಿಸಲಾಗಿದೆ**

**-ಡಾ.ಎಚ್.ಸಿ.ಮಹದೇವಪ್ಪ , ಸಚಿವ**

### ಹಳೆಯ ಉಚಿತ ಪಾಸ್ ಗಳು ರದ್ದು

**ಕಳೆದ ಬಾರಿ, ನಾಡದೇವತೆ ಮೈಸೂರಿನ ಚಾಮುಂಡೇಶ್ವರಿ ದೇವಾಲಯದಲ್ಲಿ 2024ರ ಆಷಾಢ ಮಾಸದಿಂದಲೇ ಎರಡು ಹೊಸ ಪದ್ಧತಿ ಜಾರಿಗೆ ತರಲಾಗಿದೆ. ಈ ಹಿಂದೆ ಆಷಾಢ ಶುಕ್ರವಾರದಂದು ತಾಯಿಯ ದರ್ಶನ ಪಡೆಯಲು ವಿಶೇಷ ಪಾಸ್ ವ್ಯವಸ್ಥೆಗಳಿದ್ದವು. 2024ರಿಂದಲೇ ಆಷಾಢ ಶುಕ್ರವಾರದಂದು ಈ ಪಾಸ್ ಅನ್ನು ರದ್ದು ಪಡಿಸಲಾಗಿದೆ.**

**2000 ರೂ. ವಿಶೇಷ ಟಿಕೆಟ್ ಪಡೆದವರಿಗೆ ಹೆಚ್ಚುವರಿ ಸೌಕರ್ಯ**
ಈ ಬಾರಿಯ ಆಷಾಢದಿಂದ ಜಾರಿಯಾಗಿರುವ, ಚಾಮುಂಡಿಬೆಟ್ಟದಲ್ಲಿನ ಪೂಜೆಗಾಗಿ 2,000 ರೂಪಾಯಿ ಟಿಕೆಟ್ ಪಡೆದ ಭಕ್ತರನ್ನು ಕರೆದೊಯ್ಯಲು ಮಲ್ಟಿಪಲ್ ಆಕ್ಸಲ್ ಹವಾನಿಯಂತ್ರಿತ ಎಂಟು ಹೈಟೆಕ್ ಬಸ್‌ಗಳ ವ್ಯವಸ್ಥೆ ಕಲ್ಪಿಸಲಾಗಿದೆ. ಇದರ ಜೊತೆಗೆ ಸುಮಾರು 50ಕ್ಕೂ ಹೆಚ್ಚು ಸಾಮಾನ್ಯ ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ. ಪ್ರಯಾಣಿಕರ ಜೊತೆ ಸೌಜನ್ಯದಿಂದ ವರ್ತಿಸುವಂತಹ ನಿರ್ವಾಹಕರನ್ನೇ ಗುರುತಿಸಿ ನಿಯೋಜನೆ ಮಾಡಲಾಗಿದೆ ಎಂದು ಮೈಸೂರು ನಗರ ಸಾರಿಗೆ ಸಂಸ್ಥೆ ತಿಳಿಸಿದೆ.

# ಅಲೆಮಾರಿ ಅಭಿವೃದ್ಧಿ ನಿಗಮದ ತಂಡ ಇರುಳಿಗರ ಕಾಲೋನಿಗೆ ಭೇಟಿ

• ಉದಯವಾಹಿನಿ, ಕನಕಪುರ


ಉದಯವಾಹಿನಿ ಚಿತ್ರ

ಈ ನೆಲದ ಮೂಲ ನಿವಾಸಿಗಳಿಗೆ ಸ್ವಾತಂತ್ರ್ಯ ಬಂದು 78 ವರ್ಷಗಳಾದರೂ ಮೂಲ ಸೌಕರ್ಯಗಳು ದೊರಕುತ್ತಿಲ್ಲ. ಅದನ್ನು ದೊರಕಿಸಿಕೊಡುವ ಕೆಲಸ ಅಧಿಕಾರಿಗಳು ಮಾಡಬೇಕೆಂದು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ.ಪಲ್ಲವಿ ತಿಳಿಸಿದರು. ಕಸಬಾ ಹೋಬಳಿ ಕಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಸಕೋಟೆ ಬಳಿಯ ಇರುಳಿಗರ ಕಾಲೋನಿಗೆ ಅಭಿವೃದ್ಧಿ ನಿಗಮದ ತಂಡ ಭೇಟಿ ನೀಡಿ ಇರುಳಿಗರ ಸ್ಥಿತಿಗತಿ ಅಧ್ಯಯನ ಮತ್ತು ಕುಂದು ಕೊರತೆಗಳ ಕುರಿತು ಚರ್ಚಿಸಿದರು.

ಹಾಡಿಗಳಲ್ಲಿ ಬದುಕುತ್ತಿರುವ ಬುಡಕಟ್ಟು ಜನರಿಗೆ ಸರ್ಕಾರಿ ದಾಖಲೆಗಳೇ ಇಲ್ಲ. ಅದರಿಂದ ಸರ್ಕಾರಿ ಸವಲತ್ತುಗಳಿಂದ ವಂಚಿತರಾಗುತ್ತಿದ್ದಾರೆ. ಹಾಗಾಗಿ ಸರ್ಕಾರವು ವಿಶೇಷವಾಗಿ ಪರಿಗಣಿಸಿ ದಾಖಲೆ ಗಳನ್ನು ನೀಡುವಂತೆ ಸೂಚಿಸಿದೆ. ಆದರೆ, ಈವರೆಗೂ ಯಾರಿಗೂ ದಾಖಲೆಗಳು ದೊರೆತಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು. ಬುಡಕಟ್ಟು ಜನರು ಸರ್ಕಾರಿ ದಾಖಲೆಗಳನ್ನು ಪಡೆದು, ಸವಲತ್ತುಗಳನ್ನು ಪಡೆದುಕೊಳ್ಳಬೇಕು. ಕಡ್ಡಾಯವಾಗಿ ಶಿಕ್ಷಣ ಪಡೆದು ಸಂವಿಧಾನವನ್ನು ಅರಿತಾಗ ಮಾತ್ರ ಸಮಾಜದ ಮುಖ್ಯ ವಾಹಿನಿಗೆ ಬರಲು ಸಾಧ್ಯ ಎಂದು ತಿಳಿಸಿದರು. ತಾಲ್ಲೂಕು ಆಡಳಿತವು ಬುಡಕಟ್ಟು ಜನರು ವಾಸಿಸುವ ಪ್ರದೇಶಗಳಿಗೆ ಭೇಟಿ ನೀಡಿ, ಅಲ್ಲಿ ವಿಶೇಷ ಸಭೆಗಳನ್ನು ನಡೆಸಿ ಅವರ ಸ್ಥಿತಿಗತಿಗಳನ್ನು ಅರಿತು ಸರ್ಕಾರದ ಸವಲತ್ತುಗಳ ಬಗ್ಗೆ ಮಾಹಿತಿ ನೀಡಬೇಕು. ಅವರಿಗೆ ಆಧಾರ್ ಕಾರ್ಡ್, ರೇಷನ್ ಕಾರ್ಡ್, ಗುರಿತಿನ ಚೀಟಿ, ಸರ್ಕಾರಿ ದಾಖಲೆಗಳನ್ನು ತ್ವರಿತವಾಗಿ ನೀಡಬೇಕು ಎಂದು ಹೇಳಿದರು.

ಕಾಲೋನಿಗೆ ನಿಗಮದ ಅಧಿಕಾರಿಗಳು ಭೇಟಿ ನೀಡಿದಾಗ ಮಾತ್ರ ಎಲ್ಲಾ ಅಧಿಕಾರಿಗಳು ಬಂದು ನಮ್ಮ ಸಮಸ್ಯೆಗಳನ್ನು ಕೇಳಿ ಹೋಗುತ್ತಾರೆ. ಆದರೆ ನಮಗೆ ಮತ್ತೆ ಸ್ಪಂದಿಸುತ್ತಿಲ್ಲ ಎಂದು ಹಾಡಿ ಜನರು ಅಳಲು ತೋಡಿಕೊಂಡರು. ನಾನು ನಿಮ್ಮ ಕಷ್ಟವನ್ನು ದೂರ ಮಾಡಿ, ಸರ್ಕಾರದಿಂದ ನಿಮಗೆ ಮೂಲ ಸೌಕರ್ಯ ಕೊಡಸುವ ಉದ್ದೇಶದಿಂದ ಬಂದಿದ್ದೇನೆ ಎಂದು ತಿಳಿಸಿ ಸ್ಥಳದಲ್ಲಿ ಸಮಿತಿ ರಚಿಸಿದರು.

ತಹಶೀಲ್ದಾರ್ ಮಂಜುನಾಥ್ ಮಾತನಾಡಿ, ಕಾನೂನಿನ ನಿಯಮದಂತೆ ನೀವು ಅರ್ಜಿ ಸಲ್ಲಿಸಿದರೆ ಅರಣ್ಯ ಮತ್ತು ಕಂದಾಯ ಇಲಾಖೆ ಸ್ಥಳ ಪರಿಶೀಲನೆ ನಡೆಸಿ ನಿವೇಶನ ಮತ್ತು ಸಾಗುವಳಿ ಹಕ್ಕುಪತ್ರಗಳನ್ನು ಕೊಡಿಸಲಾಗುವುದು ಎಂದು ಭರವಸೆ ನೀಡಿದರು.

### ಅರ್ಜಿ ಸ್ವೀಕರಿಸಿ ಪರಿಶೀಲನೆ

**ಸಭೆಯಲ್ಲಿ ಪಾಲ್ಗೊಂಡಿದ್ದ ತಹಶೀಲ್ದಾರ್ ಮಂಜುನಾಥ್, ಸಮಾಜ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಶಿವಕುಮಾರ್ ಹಾಡಿಯ ಜನರಿಂದ ಅರ್ಜಿ ಸ್ವೀಕರಿಸಿ ಪರಿಶೀಲನೆ ನಡೆಸಿ ತ್ವರಿತವಾಗಿ ಅವರಿಗೆ ಸಿಗಬೇಕಾದ ಸವಲತ್ತುಗಳನ್ನು ಕೊಡುವಂತೆ ಸೂಚಿಸಿದರು.**

# ಕಾವೇರಿ ನದಿಗೆ ಉಪವಿಭಾಗಾಧಿಕಾರಿ ಮಹೇಶ್ ಭೇಟಿ

• ಉದಯವಾಹಿನಿ, ಕೊಳ್ಳೇಗಾಲ


ಉದಯವಾಹಿನಿ ಚಿತ್ರ

ಕೊಡಗು ಹಾಗೂ ಕೇರಳದ ವಯನಾಡ್‌ನಲ್ಲಿ ನಿರಂತರ ಮಳೆಯಾಗುತ್ತಿರುವುದರಿಂದ ಜಲಾಶಯಗಳಿಂದ ನದಿಗೆ ಯಾವಾಗ ಬೇಕಾದರೂ ನೀರು ಬಿಡಬಹುದು. ಹಾಗಾಗಿ ನದಿ ತೀರಕ್ಕೆ ಯಾರೂ ಹೋಗಬಾರದು ಎಂದು ಉಪವಿಭಾಗಾಧಿಕಾರಿ ಮಹೇಶ್ ಸೂಚನೆ ನೀಡಿದರು. ತಾಲ್ಲೂಕಿನ ದಾಸನಪುರ ಗ್ರಾಮದ ಕಾವೇರಿ ನದಿ ತೀರಕ್ಕೆ ಗುರುವಾರ ಭೇಟಿ ನೀಡಿ ವೀಕ್ಷಣೆ ಮಾಡಿದ ಅವರು ಗ್ರಾಮಸ್ಥರ ಜೊತೆ ಚರ್ಚಿಸಿ, ಯಾರು ನದಿಗೆ ಇಳಿಯದಂತೆ ಸೂಚನೆ ನೀಡಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಬಿನಿ ಕಾವೇರಿ ಜಲಾಶಯಗಳಿಂದ 50 ಸಾವಿರಕ್ಕೂ ಹೆಚ್ಚು ಕ್ಯೂಸೆಕ್ ನೀರನ್ನು ನದಿಗೆ ಬಿಟ್ಟಿರುವ ಹಿನ್ನೆಲೆ ದಾಸನಪುರ ಗ್ರಾಮದಲ್ಲಿ ಕಾವೇರಿ ನದಿ ವೀಕ್ಷಣೆ ಮಾಡಲಾಯಿತು. ಈಗಾಗಲೇ ತಾಲ್ಲೂಕು ಮಟ್ಟದ ಅಧಿಕಾರಿಗಳ ಜೊತೆ ಸಭೆ ನಡೆಸಿ ಅಗತ್ಯ ಸಿದ್ಧತೆ ಹಾಗೂ ಏನೆಲ್ಲ ಮುಂಜಾಗ್ರತ ಕ್ರಮ ಕೈಗೊಳ್ಳಬೇಕೆಂದು ಸೂಚನೆಗಳನ್ನು ನೀಡಲಾಗಿದೆ. ಅದರಂತೆ ತಾಲ್ಲೂಕಿನ ಅಧಿಕಾರಿಗಳು ಸಿದ್ಧತೆ ಮಾಡಿಕೊಂಡಿದ್ದಾರೆ ಎಂದರು.

ನಗರದ ವಸತಿ ಪ್ರದೇಶಗಳಲ್ಲಿ ಪ್ರವಾಹ ಹೆಚ್ಚಾದರೆ ಕಾಳಜಿ ಕೇಂದ್ರ ತೆರೆಯಲು ಸಹ ಸೂಚಿಸಲಾಗಿದೆ. ಈಗಾಗಲೇ ನದಿ ತೀರದ ಎಲ್ಲಾ ಗ್ರಾಮಗಳಿಗೂ ಗ್ರಾಮ ಪಂಚಾಯಿತಿಯವರು ಟಾಂ ಟಾಂ ಮಾಡಿ ನದಿ ತೀರಕ್ಕೆ ಯಾರು ಇಳಿಯಬಾರದೆಂದು ಎಚ್ಚರಿಕೆ ನೀಡುತ್ತಿದ್ದಾರೆ ಎಂದು ತಿಳಿಸಿದರು. ಈಗಾಗಲೇ ಪೊಲೀಸ್ ಸಿಬ್ಬಂದಿಯನ್ನು ಸಹ ನದಿ ತೀರಕ್ಕೆ ನಿಯೋಜಿಸಲಾಗಿದೆ. ತಾಲ್ಲೂಕಿನ ನದಿ ತೀರದ 9 ಗ್ರಾಮಗಳಾದ ಮುಳ್ಳೂರು, ಹಳೆ ಹಂಪಾಪುರ, ದಾಸನಪುರ, ಹಳೆ ಹಣಗಳ್ಳಿ, ಹರಳೆ, ಸರಗೂರು, ಧನಗೆರೆ, ಯಡಕುರಿಯ, ಸತ್ತೇಗಾಲ ಗ್ರಾಮಗಳು ಪ್ರತಿ ವರ್ಷ ಪ್ರವಾಹಕ್ಕೆ ಸಿಲುಕುತ್ತವೆ. ಹಾಗಾಗಿ ಮುಂಜಾಗ್ರತೆ ಕ್ರಮಗಳನ್ನು ವಹಿಸಿದ್ದೇವೆ. ಅಧಿಕಾರಿಗಳು ಕಡ್ಡಾಯವಾಗಿ ಕೇಂದ್ರ ಸ್ಥಾನದಲ್ಲೇ ಇರಬೇಕೆಂದು ಸೂಚನೆಗಳನ್ನು ನೀಡಲಾಗಿದೆ ಎಂದರು.

# ಡ್ರಗ್ಸ್‌ಸೇವನೆಯಿಂದ ಜೀವನ ಹಾಳು

• ಉದಯವಾಹಿನಿ, ಕೆಜಿಎಫ್


ಮಾದಕ ವಸ್ತುಗಳ ಸೇವನೆಯಿಂದ ಸಮಾಜದಲ್ಲಿ ಗೌರವ ಕಳೆದುಕೊಳ್ಳುವುದಲ್ಲದೆ, ಜೀವನವೂ ಹಾಳಾಗಲಿದೆ. ಆದ್ದರಿಂದ ವಿದ್ಯಾರ್ಥಿಗಳು ಮಾದಕ ವಸ್ತುಗಳ ಸೇವನೆಯಿಂದ ದೂರ ಇರಬೇಕು ಎಂದು ಊರಿಗಾಂ ಪೊಲೀಸ್ ಠಾಣೆ ಸಬ್ ಇನ್ಸ್‌ಪೆಕ್ಟರ್ ಕೃಷ್ಣಮೂರ್ತಿ ಹೇಳಿದರು. ಊರಿಗಾಂನಲ್ಲಿ ಗುರುವಾರ ನಡೆದ ಅಂತರ ರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಮತ್ತು ಸಾಗಾಣಿಕೆ ವಿರುದ್ಧ ನಡೆದ ವಿದ್ಯಾರ್ಥಿಗಳ ಅರಿವು ಜಾಥಾದಲ್ಲಿ ಪಾಲ್ಗೊಂಡು ಮಾತನಾಡಿದರು.

ಮಾದಕ ವಸ್ತುಗಳ ವ್ಯಾಮೋಹದಿಂದ ವಿದ್ಯಾರ್ಥಿಗಳು ಶಿಕ್ಷಣದಲ್ಲಿ ನಿರ್ದಿಷ್ಟ ಗುರಿ ಸಾಧಿಸವುದು ಕಠಿಣವಾಗುತ್ತಿದೆ. ಮನಸ್ಸಿನ ಮೇಲೆ ನಿಗ್ರಹ ಇರುವುದಿಲ್ಲ. ಚಟಕ್ಕೆ ಬಿದ್ದವರು ಮಾದಕ ವಸ್ತುಗಳನ್ನು ಖರೀದಿ ಮಾಡಬೇಕೆಂಬ ಉಮೇದಿನಲ್ಲಿ ಕಾನೂನು ಬಾಹಿರ ಚಟುವಟಿಕೆಗಳಲ್ಲೂ ಭಾಗಿಯಾಗುವ ಅಪಾಯವಿರುತ್ತದೆ. ಇಂತಹ ವಸ್ತುಗಳ ವಿರುದ್ಧ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಬೇಕು. ಕುತೂಹಲಕ್ಕಾಗಿಯೂ ಇಂಥ ವಸ್ತುಗಳನ್ನು ವಿದ್ಯಾರ್ಥಿಗಳು ಸೇವಿಸಬಾರದು ಎಂದರು. ಪೊಲೀಸ್ ಇಲಾಖೆ ಮಾದಕ ವಸ್ತುಗಳ ಸೇವನೆ, ಸಾಗಾಣಿಕೆ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳುತ್ತದೆ.

ಇಂತಹ ಕೃತ್ಯಗಳಲ್ಲಿ ತೊಡಗಿರುವವರ ಬಗ್ಗೆ ತಿಳಿದವರು ಪೊಲೀಸ್ ಇಲಾಖೆಗೆ ಮಾಹಿತಿ ನೀಡಬೇಕು. ವಿದ್ಯಾರ್ಥಿಗಳು ಸಮುದಾಯದಲ್ಲಿ ಮಾದಕ ವಸ್ತುಗಳ ದುಷ್ಪರಿಣಾಮಗಳನ್ನು ಕುರಿತು ಅರಿವು ಮೂಡಿಸಬೇಕು ಎಂದು ಸಹಾಯಕ ಸಬ್ ಇನ್ಸ್‌ಪೆಕ್ಟರ್ ಕೋನಪ್ಪರೆಡ್ಡಿ ಮನವಿ ಮಾಡಿದರು.

# ಎಕ್ಸ್‌ಪ್ರೆಸ್ ಕೆನಾಲ್ ಕಾಮಗಾರಿ: ಮಠಾಧೀಶರಿಗೆ ಮನವಿ

• ಉದಯವಾಹಿನಿ, ಮಾಗಡಿ


ಉದಯವಾಹಿನಿ ಚಿತ್ರ

ಹೇಮಾವತಿ ಎಕ್ಸ್‌ಪ್ರೆಸ್ ಕೆನಾಲ್ ಕಾಮಗಾರಿಪೂರ್ಣಗೊಳಿಸಲು ವಿರೋಧ ವ್ಯಕ್ತವಾಗದಂತೆ ರಾಮನಗರ, ತುಮಕೂರು ಜಿಲ್ಲೆಯ ನಾಯಕರ ಜೊತೆ ಚರ್ಚಿಸಬೇಕೆಂದು ಒತ್ತಾಯಿಸಿ ವೀರಶೈವ, ಲಿಂಗಾಯಿತ ಮಠಾಧೀಶರು ತುಮಕೂರು ಸಿದ್ದಗಂಗಾ ಮಠಾಧ್ಯಕ್ಷ ಸಿದ್ದಲಿಂಗ ಸ್ವಾಮೀಜಿ, ಆದಿಚುಂಚನಗಿರಿ ಮಠಾಧ್ಯಕ್ಷ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಅವರಿಗೆ ಮನವಿ ಸಲ್ಲಿಸಿದರು.

ತಾಲ್ಲೂಕಿನ ವೀರಶೈವ, ಲಿಂಗಾಯಿತ ಸಮಾಜದ ಗದ್ದಿಗೆ ಮಠದ ಮಹಾಂತ ಸ್ವಾಮೀಜಿ, ಜಗಣ್ಣಯ್ಯನ ಮಠದ ಚನ್ನಬಸವ ಸ್ವಾಮೀಜಿ, ಜಡೆದೇವರ ಮಠದ ಇಮ್ಮಡಿ ಬಸವರಾಜ ಸ್ವಾಮೀಜಿ, ಬಂಡೆ ಮಠದ ಮಹಾಲಿಂಗ ಸ್ವಾಮೀಜಿಗಳು ತುಮಕೂರು ಮಠ ಹಾಗೂ ಆದಿಚುಂಚನಗಿರಿ ಮಠಕ್ಕೆ ಭೇಟಿ ನೀಡಿ ಸ್ವಾಮೀಜಿಗಳಿಗೆ ಮನವಿ ಸಲ್ಲಿಸಿದರು. ಹೇಮಾವತಿ ಎಕ್ಸ್‌ಪ್ರೆಸ್ ಕೆನಾಲ್ ಕಾಮಗಾರಿ ಪೂರ್ಣಗೊಂಡರೆ, ಮಾಗಡಿ ತಾಲ್ಲೂಕಿಗೆ ಮುಕ್ಕಾಲು ಟಿಎಂಸಿ ನೀರು ಬರುವ ಹಿನ್ನೆಲೆ ಅದನ್ನು ತುಮಕೂರಿನವರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ.

ಹಾಗಾಗಿ ರಾಮನಗರ, ತುಮಕೂರು ಜಿಲ್ಲೆಯ ಪ್ರಮುಖ ನಾಯಕರ ಜೊತೆ ಚರ್ಚಿಸಿ ಕಾಮಗಾರಿಗೆ ವಿರೋಧ ವ್ಯಕ್ತವಾಗದಂತೆ ಇಬ್ಬರೂ ಮಠಾಧ್ಯಕ್ಷರು ನೇತೃತ್ವ ವಹಿಸಬೇಕೆಂದು ಮನವಿ ಮಾಡಿದರು. ಮನವಿ ಸ್ವೀಕರಿಸಿದ ಸಿದ್ಧಗಂಗಾ ಮಠಾಧ್ಯಕ್ಷ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ನೀರು ರಾಷ್ಟ್ರೀಯ ಸಂಪತ್ತು. ಅದು ಎಲ್ಲರಿಗೂ ಅತ್ಯವಶ್ಯಕ. ಬೇರೆಯವರಿಗೆ ನೀರು ಕೊಡುವುದಿಲ್ಲ ಎಂದು ಹೇಳಲು ಬರುವುದಿಲ್ಲ.

ಆದಿಚುಂಚನಗಿರಿ ಮಠಾಧ್ಯಕ್ಷರ ಜೊತೆ ನಾನು ಕೂಡ ಚರ್ಚಿಸಿ ಎರಡು ಜಿಲ್ಲೆಯ ನಾಯಕರ ಸಭೆ ಕರೆದು ಯೋಜನೆಗೆ ಅಡ್ಡಿಪಡಿಸದಂತೆ ತಿಳಿಸುವ ಕೆಲಸ ಮಾಡಲಾಗುವುದು ಎಂದು ಭರವಸೆ ನೀಡಿದರು.

> **ಹೇಮಾವತಿ ನೀರಿನ ವಿಚಾರವಾಗಿ ಮಾಹಿತಿ ಪಡೆದುಕೊಂಡು ಎರಡು ಜಿಲ್ಲೆಗಳ ನಾಯಕರನ್ನು ಸಭೆ ಕರೆದು ಚರ್ಚೆ ನಡೆಸಲಾಗುವುದು. ಪ್ರತಿಯೊಬ್ಬರಿಗೂ ಕುಡಿಯುವ ನೀರಿನ ಮೇಲೆ ಹಕ್ಕಿದೆ. ಈ ವಿಚಾರ ಶ್ರೀಗಳ ಜೊತೆ ಚರ್ಚಿಸಲಾಗುತ್ತದೆ**
>
> **-ಡಾ.ನಿರ್ಮಲಾನಂದ ನಾಥ ಸ್ವಾಮೀಜಿ**
> **ಆದಿಚುಂಚನಗಿರಿ ಮಠಾಧ್ಯಕ್ಷ**

# 1.35 ಕೋಟಿ ರೂ. ಬಾಡಿಗೆ ವಸೂಲಿಗೆ ಸೂಚನೆ

• ಉದಯವಾಹಿನಿ, ಚಿಕ್ಕಬಳ್ಳಾಪುರ


ಉದಯವಾಹಿನಿ ಚಿತ್ರ

ಚಿಂತಾಮಣಿ ನಗರದ ಝೂನ್ಸಿರಾಣಿ ಲಕ್ಷ್ಮಿಬಾಯಿ ಕ್ರೀಡಾಂಗಣದ ಅಧೀನದ ಮಳಿಗೆಗಳನ್ನು ಬಾಡಿಗೆ ನೀಡಲಾಗಿದೆ. ಬಾಡಿಗೆದಾರರಿಂದ ಬರಬೇಕಾಗಿರುವ 1.35 ಕೋಟಿ ಬಾಡಿಗೆಯನ್ನು ಕಡ್ಡಾಯವಾಗಿ ವಸೂಲಿ ಮಾಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ ಸುಧಾಕರ್ ಕ್ರೀಡಾ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ಕ್ರೀಡಾಂಗಣಗಳ ಅಭಿವೃದ್ಧಿ ಕುರಿತ ಸಭೆ ನಡೆಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಝೂನ್ಸಿರಾಣಿ ಲಕ್ಷ್ಮಿಬಾಯಿ ಕ್ರೀಡಾಂಗಣವು ರಾಜ್ಯದಲ್ಲೆ ಮಾದರಿಯಾಗಿದೆ. ಕ್ರೀಡಾಂಗಣಕ್ಕೆ ಹೊಂದಿಕೊಂಡು ಆದಾಯ ಬರುವಂತೆ ಮಳಿಗೆ ನಿರ್ಮಿಸಲಾಗಿದೆ. ಈ ಕೆಲವು ಮಳಿಗೆಗಳಿಂದ 1.35 ಕೋಟಿ ಬಾಡಿಗೆ ವಸೂಲಿ ಮಾಡಬೇಕು. ಈ ಹಣವನ್ನು ಕ್ರೀಡಾಂಗಣದ ಅಭಿವೃದ್ಧಿಗೆ ಬಳಸಬೇಕು ಎಂದರು. 193 ಮಳಿಗೆಗಳ ಪೈಕಿ ಹರಾಜು ಅವಧಿ ಮುಗಿದಿರುವ ಮಳಿಗೆಗಳನ್ನು ಮರುಹರಾಜು ಮಾಡಬೇಕು. ಮಳಿಗೆಗಳ ಬಾಡಿಗೆದಾರರಿಗೆ ಸಂಬಂಧಿಸಿದಂತೆ ಯಾವ ದಾಖಲೆಗಳನ್ನು ಇಡುವ ಕೆಲಸವನ್ನು ಇಲಾಖೆ ಮಾಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಕ್ರೀಡಾಂಗಣದಲ್ಲಿ ಸಿಂಥೆಟಿಕ್ ಟ್ರ್ಯಾಕ್ ನಿರ್ಮಾಣಕ್ಕೆ 9 ಕೋಟಿ ಮಂಜೂರಾಗಿದೆ. ಚಿಂತಾಮಣಿಯ ಲೋಕೋಪಯೋಗಿ ಇಲಾಖೆಯ ಬಳಿ 9 ಎಕರೆಯಲ್ಲಿ ನೈಜ ಹುಲ್ಲು ಹಾಸಿನ ಕ್ರಿಕೆಟ್ ಕ್ರೀಡಾಂಗಣ ನಿರ್ಮಿಸಲು 7 ಕೋಟಿ ಮಂಜೂರಾಗಿದೆ. ಈ ಎಲ್ಲಾ ಕಾರ್ಯಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಪ್ರಕ್ರಿಯೆ ಚಾಲನೆಯಲ್ಲಿದೆ. ಸದ್ಯದಲ್ಲೇ ಸದರಿ ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಲಿವೆ ಎಂದರು. ಜಿಲ್ಲಾ ಕ್ರೀಡಾಂಗಣ ಉಸ್ತುವಾರಿ ಸಮಿತಿ, ಜಿಲ್ಲಾ ಕ್ರೀಡಾಂಗಣ ನಿರ್ವಹಣಾ ಸಮಿತಿಯನ್ನು ರಚಿಸಲಾಗಿದೆ. ಚಿಕ್ಕಬಳ್ಳಾಪುರದ ಸರ್. ಎಂ.ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣ ಸೇರಿದಂತೆ ತಾಲ್ಲೂಕು ಕೇಂದ್ರಗಳ ಕ್ರೀಡಾಂಗಣಗಳನ್ನು ಅಭಿವೃದ್ಧಿ ಮಾಡಲು ಕ್ರಮವಹಿಸಲಾಗುತ್ತಿದೆ. ಗೌರಿಬಿದನೂರಿನಲ್ಲಿ ಒಳಾಂಗಣ ಕ್ರೀಡಾಂಗಣ ಅಭಿವೃದ್ಧಿ ಸೇರಿದಂತೆ ಎಲ್ಲಾ ತಾಲ್ಲೂಕು ಕ್ರೀಡಾಂಗಣ ಅಭಿವೃದ್ಧಿಗೆ ಚರ್ಚೆಗಳು ನಡೆದಿವೆ ಎಂದರು.

**ಪ್ರತ್ಯೇಕ ಖಾತೆಗೆ ಮನವಿ:** ಎಲ್ಲಾ ಕ್ರೀಡಾಂಗಣಗಳಿಗೂ ಒಂದೇ ಖಾತೆ ಇದೆ. ಇದಕ್ಕೆ ನನ್ನ ವಿರೋಧವಿದೆ. ಪ್ರತಿ ತಿಂಗಳು ಚಿಂತಾಮಣಿಯ ಕ್ರೀಡಾಂಗಣದಿಂದ 3 ಲಕ್ಷ ಬಾಡಿಗೆ ಬರುತ್ತದೆ. ಯಾವ ಕ್ರೀಡಾಂಗಣದಲ್ಲಿ ಆದಾಯವಿದೆಯೊ ಅವುಗಳಿಗೆ ಪ್ರತ್ಯೇಕ ಖಾತೆಯನ್ನು ನಿರ್ವಹಿಸಬೇಕು ಎಂದು ಕ್ರೀಡಾ ಖಾತೆ ಹೊಂದಿರುವ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸುವೆ ಎಂದರು.

**ಮುಂದಿನ ತಿಂಗಳು ಚಿಮುಲ್ ಚುನಾವಣೆ:** ಚಿಕ್ಕಬಳ್ಳಾಪುರ ಹಾಲು ಒಕ್ಕೂಟಕ್ಕೆ ಮುಂದಿನ ತಿಂಗಳು ಚುನಾವಣೆ ನಡೆಸುತ್ತೇವೆ. ಕ್ಷೇತ್ರ ಪುನರ್ವಿಂಗಡಣೆ ಕುರಿತು ಗೊಂದಲ ಇದ್ದವು. ಅವುಗಳನ್ನು ಪರಿಹರಿಸಿ ಚುನಾವಣೆ ನಡೆಯುತ್ತದೆ ಎಂದು ಡಾ.ಎಂ.ಸಿ.ಸುಧಾಕರ್ ತಿಳಿಸಿದರು. ಈ ಹಿಂದಿನ ಸರ್ಕಾರದ ದೊಡ್ಡ ಹೊರೆ ನಮ್ಮ ಮೇಲೆ ಬಿದ್ದಿದೆ. ಚುನಾವಣೆ ಹತ್ತಿರ ಬಂದಿತು ಎಂದು ಕಾಮಗಾರಿಗೆ ಅನುಮೋದನೆ ನೀಡಿದರು.

### ಪೆವಿಲಿಯನ್‌ಗೆ 10 ಕೋಟಿ

**ಜಿಲ್ಲಾ ಕೇಂದ್ರದಲ್ಲಿನ ಸರ್.ಎಂ.ವಿ ಕ್ರೀಡಾಂಗಣವನ್ನು ಅಂತರರಾಷ್ಟ್ರೀಯ ಮಟ್ಟದಲ್ಲಿ 69 ಕೋಟಿ ವೆಚ್ಚದಲ್ಲಿ ನಿರ್ಮಿಸಲು ಯೋಜಿಸಿ ಈಗಾಗಲೇ ನೀಲ ನಕ್ಷೆ ಸಿದ್ಧಪಡಿಸಲಾಗಿದೆ ಎಂದು ಸಚಿವರು ತಿಳಿಸಿದರು. ಅದರ ಭಾಗವಾಗಿ ಮೊದಲ ಹಂತದಲ್ಲಿ ಪೆವಿಲಿಯನ್ ಬ್ಲಾಕ್ ನಿರ್ಮಿಸಲು 10 ಕೋಟಿ ಮಂಜೂರಾಗಿದೆ. ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಪಡೆಯುವ ಪ್ರಕ್ರಿಯೆ ಚಾಲನೆಯಲ್ಲಿದೆ ಎಂದು ಹೇಳಿದರು.**

# ಲೋಕಾಯುಕ್ತ ಪೊಲೀಸ್ ಕಂಡು ಓಡಿದ ಸಿಬ್ಬಂದಿ

• ಉದಯವಹಿನಿ, ಮುಳಬಾಗಿಲು


ಉದಯವಾಹಿನಿ ಚಿತ್ರ

**ಲೋಕಾ ಬಲೆಗೆ ಎಡಿಎಲ್‌ಆರ್**

ಜಮೀನೊಂದರ ಪೋಡಿ ದಾಖಲೆ ನೀಡಲು ತಾಲ್ಲೂಕು ಕಚೇರಿಯಲ್ಲಿ 1.50 ಲಕ್ಷ ಪಡೆಯುತ್ತಿದ್ದ ಎಡಿಎಲ್‌ಆರ್ ನಿವೇದಿತಾ ಎಂಬುವರು ಲೋಕಾಯುಕ್ತ ಪೊಲೀಸರನ್ನು ಕಂಡು ಕಚೇರಿಯಿಂದ ಓಡಿ ಹೋಗಿದ್ದಾರೆ. ಓಡಿ ಹೋಗುತ್ತಿದ್ದ ನಿವೇದಿತಾ ಅವರನ್ನು ಲೋಕಾಯುಕ್ತ ಪೊಲೀಸರು ಹಿಡಿದು ಕರೆ ತಂದು ಕಚೇರಿಯಲ್ಲಿ ವಿಚಾರಣೆ ನಡೆಸಿದಾಗ 1.50 ಲಕ್ಷ ಪಡೆಯುತ್ತಿದ್ದಾಗಿ ಒಪ್ಪಿಕೊಂಡಿದ್ದಾರೆ ಎಂದು ಲೋಕಾಯುಕ್ತ ಪೊಲೀಸರು ತಿಳಿಸಿದ್ದಾರೆ. ಜಮೀನೊಂದರ ಪೋಡಿ ದಾಖಲೆ ನೀಡಲು ನಿವೇದಿತಾ 2 ಲಕ್ಷಕ್ಕೆ ಬೇಡಿಕೆ ಇಟ್ಟಿದ್ದಾರೆ ಎಂದು ಹೊಸಕೋಟೆ ತಾಲ್ಲೂಕಿನ ನಾಗಸಂದ್ರ ಗ್ರಾಮದ ಮಂಜುನಾಥ್ ಎಂಬುವರು ಲೋಕಾಯುಕ್ತ ಪೊಲೀಸರಿಗೆ ದೂರು ಸಲ್ಲಿಸಿದ್ದರು. ಮುಳಬಾಗಿಲು ತಾಲ್ಲೂಕಿನ ಕಪ್ಪಲಮಡಗು ಗ್ರಾಮದ ಬಳಿ ಜಮೀನು ಖರೀದಿಸಿದ್ದ ಮಂಜುನಾಥ್ ಅದರ ದಾಖಲೆ ಪಡೆಯಲು ಕೋಲಾರದ ಡಿಡಿಎಲ್ ಆರ್ ಸಂಜಯ್ ಅವರಿಗೆ ಮನವಿ ಮಾಡಿದ್ದರು.

ಈ ಬಗ್ಗೆ ಕಚೇರಿಯ ಸಿಬ್ಬಂದಿ ಸಂದೀಪ್ ಮೂಲಕ ಮಾಹಿತಿ ಪಡೆದ ಎಡಿಎಲ್‌ಆರ್ ನಿವೇದಿತಾ, ಮುಳಬಾಗಿಲಿನ ಸರ್ವೇಯರ್ ಸಂತೋಷ್ ಮೂಲಕ 2 ಲಕ್ಷಕ್ಕೆ ಬೇಡಿಕೆ ಇಟ್ಟಿದ್ದರು. ಬೆಂಗಳೂರಿನ ಹೋಟೆಲ್‌ನಲ್ಲಿ ಮಂಜುನಾಥ್ ಅವರು ನಿವೇದಿತಾ ಅವರಿಗೆ 50 ಸಾವಿರ ಮುಂಗಡವಾಗಿ ನೀಡಿದ್ದರು. ಬಾಕಿ 1.50 ಲಕ್ಷ ನೀಡಲು ಮಂಜುನಾಥ್ ಸಮಯಾವಕಾಶ ಕೋರಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಲೋಕಾಯುಕ್ತ ಪೊಲೀಸರು ತಾಲ್ಲೂಕು ಕಚೇರಿ ಮೇಲೆ ದಾಳಿ ನಡೆಸಿದಾಗ ವಿವಿಧ ವಿಭಾಗಗಳಲ್ಲಿ ಕೆಲಸ ಮಾಡುತ್ತಿದ್ದ ಅಧಿಕಾರಿಗಳು ಕಚೇರಿ ಬಿಟ್ಟು ಹೊರಗೆ ಹೋಗಿದ್ದಾರೆ. ಕೆಲವು ಅಧಿಕಾರಿಗಳ ಮೊಬೈಲ್ ಬಂದ್ ಆಗಿದ್ದವು. ಅಂತಹವರಿಗೆ ನೋಟಿಸ್ ಜಾರಿ ಮಾಡಲಾಗುತ್ತದೆ' ಎಂದು ಲೋಕಾಯುಕ್ತ ಇನ್ಸ್‌ಪೆಕ್ಟರ್ ರೇಣುಕಾ ತಿಳಿಸಿದ್ದಾರೆ. ಡಿಡಿಎಲ್‌ಆರ್ ಸಂಜಯ್, ಎಡಿಎಲ್‌ಆರ್ ನಿವೇದಿತಾ, ಸರ್ವೇಯರ್ ಸಂತೋಷ್ ಹಾಗೂ ಸಂದೀಪ್ ಮೇಲೆ ಪ್ರಕರಣ ದಾಖಲಾಗಿದೆ.

# ಒಂದೇ ರಾಜ್ಯದವರಾಗಿ ನಾವು ನಾವೇ ನೀರಿಗಾಗಿ ಕಿತ್ತಾಡುವುದು ಬೇಡ

## ಕೊರಟಗೆರೆ, ದೊಡ್ಡಬಳ್ಳಾಪುರದಲ್ಲಿ ಸಮತೋಲಿತ ಅಣೆಕಟ್ಟು ನಿರ್ಮಾಣ ಎಂದು ಡಿಸಿಎಂ ಘೋಷಣೆ

• ಉದಯವಾಹಿನಿ, ತುಮಕೂರು

**ಮೇಲ್ ಸೇತುವೆ ದೇಶದಲ್ಲಿ ಎಲ್ಲೂ ಇಲ್ಲ**



ನಾವು ಒಂದೇ ರಾಜ್ಯದವರು. ನೀರಿಗಾಗಿ ನಾವು ನಾವೇ ಕಿತ್ತಾಟ ನಡೆಸುವುದು ಬೇಡ. ಎಲ್ಲರಿಗೂ ಸರಿಯಾದ ರೀತಿಯಲ್ಲಿ ನೀರನ್ನು ನೀಡಲಾಗುವುದು. ನೆರೆ ರಾಜ್ಯದವರ ಜೊತೆ ತಿಕ್ಕಾಟ ನಡೆಸುವಂತೆ ನಾವು, ನಾವೇ ಕಿತ್ತಾಡುವುದು ಸರಿಯಲ್ಲ ಎಂದು ಡಿಸಿಎಂ ಡಿಕೆ ಶಿವಕುಮಾರ್ ಅವರು ತಿಳಿಸಿದರು. ಗುಬ್ಬಿ ತಾಲ್ಲೂಕಿನ 42 ಗ್ರಾಮಗಳಿಗೆ ಕುಡಿಯುವ ನೀರು ಪೂರೈಸುವ 50 ಕೋಟಿ ವೆಚ್ಚದ ಮಠದ ಹಳ್ಳ ಏತ ನೀರಾವರಿ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು. ಬೆಂಗಳೂರಿನಲ್ಲಿ ಕಾವೇರಿ ಆರತಿ ಮಾಡಿ ಪ್ರಾರ್ಥನೆ ಮಾಡಿದೆ. ಕಾವೇರಿ ತಾಯಿ ಕೃಪೆಯಿಂದ ಮುಂಗಾರು ಆರಂಭವಾಗುವ ಮುನ್ನವೇ ಕಾವೇರಿ ಜಲಾನಯನ ಪ್ರದೇಶದ ಅಣೆಕಟ್ಟುಗಳು ಬಹುತೇಕೆ ತುಂಬಿವೆ. ಕಳೆದ ವರ್ಷ 30% ತುಂಬಿದ್ದ ಕೆಆರ್ ಎಸ್ ಈ ವರ್ಷ 89% ತುಂಬಿದೆ. ಕಳೆದ ವರ್ಷ 30% ತುಂಬಿದ್ದ ಹೇಮಾವತಿ ಈ ವರ್ಷ 85% ತುಂಬಿದೆ. ಕಳೆದ ವರ್ಷ 40% ತುಂಬಿದ್ದ ಹಾರಂಗಿ ಈ ವರ್ಷ 70% ತುಂಬಿದೆ. 51% ತುಂಬಿದ್ದ ಕಬಿನಿ ಈ ವರ್ಷ 80% ತುಂಬಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಬಹಳ ಸಂತೋಷದಿಂದ ಗುರುವಾರ ಈ ಯೋಜನೆಗೆ ಶಂಕುಸ್ಥಾಪನೆ ಮಾಡಿದ್ದೇನೆ. ವಾಸು ಅವರ ಕ್ಷೇತ್ರ ಬೇರೆ ಅಲ್ಲ, ಡಿ.ಕೆ. ಶಿವಕುಮಾರ್ ಕ್ಷೇತ್ರ ಬೇರೆ ಅಲ್ಲ. ಇದು ನಮ್ಮ ಕ್ಷೇತ್ರ. ಯಾರು ಎಷ್ಟೇ ವಿರೋಧ ಮಾಡಲಿ, ಇಲ್ಲಿನ ರೈತರಿಗಾಗಿ ಏನು ಕೆಲಸ ಮಾಡಬೇಕೋ ನಾವು ಅದನ್ನು ಮಾಡುತ್ತೇವೆ. ಟಿ.ಬಿ ಜಯಚಂದ್ರ ಅವರಂತೆಯೇ ವಾಸು ಅವರೂ ನೀರಾವರಿ ಯೋಜನೆಗೆ ಹೆಚ್ಚಿನ ಒತ್ತು ಕೊಟ್ಟು ಕೆಲಸ ಮಾಡುತ್ತಿದ್ದಾರೆ. ನೀವು ಆತಂಕಪಡುವ ಅಗತ್ಯವಿಲ್ಲ ಎಂದು ತಿಳಿಸಿದರು. ಪಕ್ಕದ ರಂಗನಹಳ್ಳಿಯವರು ನಮ್ಮ ಊರಿಗೂ ನೀರು ಕೊಡಿ ಎಂದು ಮನವಿ ಸಲ್ಲಿಸಿದರು. ಅವರ ಗ್ರಾಮಕ್ಕೂ ನೀರು ಪೂರೈಸಲಾಗುವುದು ಎಂದು ಭರವಸೆ ನೀಡಿದರು.

**ಕಾವೇರಿ ತೀರ್ಪಿನಂತೆ ನೀರನ್ನು ಹೇಮಾವತಿ ತುಂಬಿಸಲಾಗುವುದು:** ಈ ಯೋಜನೆಯಲ್ಲಿ ಮೊದಲು ಕುಡಿಯುವ ನೀರನ್ನು ಪೂರೈಸಬೇಕು. ಆನಂತರ ಕೆರೆಗಳಿಗೆ ನೀರು ತುಂಬಿಸಲಾಗುವುದು. ಎಲ್ಲರಿಗೂ ಸರಿಯಾಗಿ ನೀರು ಹಂಚುವ ಕೆಲಸ ಮಾಡಲಾಗುವುದು ಎಂದು ತಿಳಿಸಿದರು.

ಹೇಮಾವತಿ ನೀರು ಬರುತ್ತಿದೆ. ಎತ್ತಿನಹೊಳೆ ನೀರನ್ನು ಕಳೆದ ವರ್ಷ ವಾಣಿ ವಿಲಾಸಕ್ಕೆ ಹರಿಸಲಾಗಿತ್ತು. ಕಾವೇರಿ ಅಂತಿಮ ತೀರ್ಪಿನಂತೆ ನೀರನ್ನು ಹೇಮಾವತಿ ತುಂಬಿಸಲಾಗುವುದು. ಇನ್ನು ಸ್ಥಳೀಯ ನಾಯಕರ ಮನವಿಯಂತೆ ಈ ಭಾಗದ ಕಾಲುವೆಗಳಿಗೆ ಎರಡು ದಿನಗಳಲ್ಲಿ ನೀರನ್ನು ಹರಿಸಿ ಕೆರೆ ತುಂಬಿಸಲು ಸೂಚನೆ ನೀಡಲಾಗುವುದು ಎಂದು ತಿಳಿಸಿದರು. ಕೋಲಾರದಲ್ಲಿ 2 ಸಾವಿರ ಅಡಿ ಕೊಳವೆ ಬಾವಿ ಕೊರೆದರೂ ನೀರು ಬರದ ಸ್ಥಿತಿ ಇದೆ. ಹೀಗಾಗಿ ದಕ್ಷಿಣ ಕನ್ನಡ ಜಿಲ್ಲೆಯಿಂದ ನೀರು ತರಲಾಗುತ್ತಿದೆ ಎಂದು ತಿಳಿಸಿದರು. ಇಲ್ಲಿರುವ ಮೇಲ್‌ಸೇತುವೆ ದೇಶದಲ್ಲಿ ಬೇರೆ ಎಲ್ಲೂ ಇಲ್ಲ. ಇದಕ್ಕಾಗಿ ರಾಷ್ಟ್ರ ಮಟ್ಟದ ಪ್ರಶಸ್ತಿ ಲಭಿಸಿದೆ. ನಿಮ್ಮ ಸಹಕಾರ ಇರಲಿ. ನಿಮ್ಮ ಬದುಕಿನಲ್ಲಿ ಬದಲಾವಣೆ ತರಲು ಶ್ರಮಿಸುತ್ತೇವೆ. ನೀವು ಶಾಸಕ ಗುಬ್ಬಿ ವಾಸು ಅವರ ಪರವಾಗಿ ನಿಲ್ಲಿ. ನಾನು ನಿಮ್ಮ ಪರ ನಿಲ್ಲುತ್ತೇನೆ ಎಂದು ತಿಳಿಸಿದರು.

### ಎತ್ತಿನಹೊಳೆ ಯೋಜನೆ ಸಾಧ್ಯವಾಗಿಸಿದ್ದೇನೆ

**ಕುಮಾರಸ್ವಾಮಿ ಅವರು ಎತ್ತಿನಹೊಳೆ ನೀರು ಹೊರಗೆ ಹರಿಸುವುದು ಅಸಾಧ್ಯ ಎಂದಿದ್ದರು. ನಾವು ಅದನ್ನು ಸಾಧ್ಯವಾಗಿಸಿದ್ದೇನೆ. ಮಾತನಾಡುವವರು ಕಣ್ಣಾರೆ ನೋಡಲಿ ಎಂದು ನೀರನ್ನು ಹರಿಸಿದ್ದೇವೆ. ಅದು ನಿಮ್ಮ ಜಿಲ್ಲೆ ಗಡಿವರೆಗೂ ಬಂದಿದೆ. ಕೆಲವು ಕಡೆ ಅರಣ್ಯ ಇಲಾಖೆ ಸಮಸ್ಯೆ ಇದೆ. ಹಾಸನ, ಜಿಲ್ಲಾಧಿಕಾರಿಗಳು ಭೂಮಿ ನೀಡಿದ್ದು, ಆದಷ್ಟು ಬೇಗ ಇಲ್ಲಿಗೆ ನೀರು ಹರಿಯಲಿದೆ**

**-ಡಿಕೆ ಶಿವಕುಮಾರ್, ಡಿಸಿಎಂ**

### 2 ಕಡೆ ಸಮತೋಲಿತ ಅಣೆಕಟ್ಟು

**ನಾನು ಕೊರಟಗೆರೆ ಹಾಗೂ ದೊಡ್ಡಬಳ್ಳಾಪುರದಲ್ಲಿ ಸಮತೋಲಿತ ಅಣೆಕಟ್ಟು ನಿರ್ಮಾಣಕ್ಕೆ ಮುಂದಾಗಿದ್ದೇವೆ. ಈ ವಿಚಾರವಾಗಿ ಪರಮೇಶ್ವರ್ ಅವರ ಜೊತೆ ಮಾತನಾಡಿದ್ದೇನೆ. ರೈತರು ತಮ್ಮ ಆತಂಕ ವ್ಯಕ್ತಪಡಿಸಿದ್ದಾರೆ. ನಾವು ಕನಿಷ್ಠ 3 ಟಿಎಂಸಿ ನೀರು ಸಂಗ್ರಹ ಮಾಡದಿದ್ದರೆ, ಕೋಲಾರ ಹಾಗೂ ಚಿಕ್ಕಬಳ್ಳಾಪುರಕ್ಕೆ ನೀರು ನೀಡಲು ಸಾಧ್ಯವಿಲ್ಲ. ಹೀಗಾಗಿ ಈ ಯೋಜನೆ ಜಾರಿಗೆ ತಾಂತ್ರಿಕ ಸಾಧ್ಯತೆಗಳ ಬಗ್ಗೆ ಚರ್ಚೆ ಮಾಡಿದ್ದು, ಸಚಿವ ಸಂಪುಟದಲ್ಲಿ ಪ್ರಸ್ತಾಪ ಮಾಡುತ್ತೇನೆ ಎಂದು ತಿಳಿಸಿದರು.**

# ಮಿನಿ ನ್ಯೂಸ್

### ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

• ಉದಯವಾಹಿನಿ, ರಾಮನಗರ

ಕನಕಪುರದ ಮಾತೆ ಸಾವಿತ್ರಿ ಬಾಪುಲೆ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಚಿತ್ರದುರ್ಗದ ಶಿವಶರಣ ಮಾದಾರ ಗುರುಪೀಠದ ಪೀಠಾಧ್ಯಕ್ಷ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಅವರಿಗೆ ಜು.27ರಂದು ರಾಮನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಗುರುವಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಪ್ರತಿಭಾನ್ವಿತ ಬಡ ವಿದ್ಯಾರ್ಥಿಗಳಿಗೆ ಟ್ರಸ್ಟ್‌ನಿಂದ ಪ್ರತಿಭಾ ಪುರಸ್ಕಾರ ಸಹ ಹಮ್ಮಿಕೊಳ್ಳಲಾಗಿದೆ. ಹಾಗಾಗಿ, 2025-26ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿರುವ ಬಡ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಿದೆ. ವಿದ್ಯಾರ್ಥಿಗಳು ಜುಲೈ 10ರೊಳಗೆ ತಮ್ಮ ಸ್ವವಿವರದೊಂದಿಗೆ (ಬಯೋಡಾಟ) ಅಂಕಪಟ್ಟಿ, ಆಧಾರ್ ಕಾರ್ಡ್, ಜಾತಿ ಪ್ರಮಾಣಪತ್ರದ ನಕಲು ಪ್ರತಿಗಳೊಂದಿಗೆ ಅಂಚೆ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು.

ವಿಳಾಸ: ಮಿತ್ರ ಆಫ್‌ಸೆಟ್ ಪ್ರಿಂಟರ್ಸ್, ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ರಸ್ತೆ, ಮಂಜುನಾಥ ರೈಸ್ ಮಿಲ್ ಹತ್ತಿರ, ಕನಕಪುರ ಟೌನ್-562117. ಮಾಹಿತಿಗಾಗಿ ಸಂಪರ್ಕಿಸಿ : 9008912628, 9611446653, 9845212650 2 ಅಧ್ಯಕ್ಷ ಎಂ. ನಾಗೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಕ್ರಮವಾಗಿ ಕೆರೆ ಮಣ್ಣು ಸಾಗಾಟ

• ಉದಯವಾಹಿನಿ, ಹಾರೋಹಳ್ಳಿ

ತಾಲ್ಲೂಕಿನ ಹನುಮಂತಪುರ ಗ್ರಾಮದ ದೊಡ್ಡಕೆರೆಯಲ್ಲಿ ಅಕ್ರಮವಾಗಿ ಮಣ್ಣು ಸಾಗಾಟ ಮಾಡಲಾಗುತ್ತಿದೆ. ಸಂಬಂಧಪಟ್ಟ ಇಲಾಖೆಗಳ ಅನುಮತಿ ಪಡೆಯದೆ ಟ್ರ್ಯಾಕ್ಟರ್ ಮತ್ತು ಜೆಸಿಬಿ ಬಳಸಿ ಲೇಔಟ್ ಜಾಗಗಳು ಮತ್ತು ತೋಟಗಳಿಗೆ ಮಣ್ಣು ಸಾಗಿಸಲಾಗುತ್ತಿದೆ. ಹಗಲಿನಲ್ಲೇ ಅಕ್ರಮವಾಗಿ ಮಣ್ಣು ಸಾಗಿಸುತ್ತಿರುವ ಕುರಿತು ತಹಶೀಲ್ದಾರ್‌ಗೆ ದೂರು ನೀಡಿದ್ದರೂ, ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿಲ್ಲ. ಪೊಲೀಸರು ಸಹ ಮಣ್ಣು ತುಂಬಿಕೊಂಡು ಹೋಗುವ ವಾಹನಗಳನ್ನು ಪರಿಶೀಲಿಸದೆ ಹಾಗೆಯೇ ಬಿಟ್ಟು ಕಳಿಸುತ್ತಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ.

ಮಣ್ಣು ಸಾಗಿಸುವವರಿಗೆ ಅಧಿಕಾರಿಗಳ ಅಭಯಹಸ್ತವಿದೆ. ಹಾಗಾಗಿಯೇ, ದೂರು ಕೊಟ್ಟರೂ ಕ್ರಮ ಕೈಗೊಂಡಿಲ್ಲ. ಕಂದಾಯ ಇಲಾಖೆ ನಿಯಮಗಳ ಪ್ರಕಾರ, ಕೆರೆಗಳಲ್ಲಿ 4 ಅಡಿಗಿಂತಲೂ ಹೆಚ್ಚು ಆಳವಾಗಿ ಹಾಗೂ ನೇರವಾಗಿ ಮಣ್ಣು ತೆಗೆಯುವಂತಿಲ್ಲ. ತೆಗೆದರೂ ಅನುಮತಿ ಪಡೆಯಬೇಕು. ಇಷ್ಟೆಲ್ಲಾ ನಿಯಮಗಳಿದ್ದರೂ ಕೆಲ ಪ್ರಭಾವಿಗಳಿಂದ ಮಣ್ಣು ದಂಧೆ ನಡೆಯುತ್ತಲೇ ಇದೆ ಎಂದು ಮರಳವಾಡಿ ನಿವಾಸಿ ಮಂಜುನಾಥ್ ಎಂ.ಬಿ ಅಸಮಾಧಾನ ವ್ಯಕ್ತಪಡಿಸಿದರು.

### ಅವೈಜ್ಞಾನಿಕ ಭೂಸ್ವಾಧೀನ ರೈತರ ಆರೋಪ

• ಉದಯವಾಹಿನಿ, ಚಿಂತಾಮಣಿ

ದೇವನಹಳ್ಳಿ ತಾಲ್ಲೂಕಿನಲ್ಲಿ ರೈತರ ಭೂಸ್ವಾಧೀನ ವಿರೋಧಿಸಿ ಹೋರಾಟ ನಡೆಸುತ್ತಿದ್ದ ರೈತ ಮುಖಂಡರ ಬಂಧನ, ಭೂಸ್ವಾಧೀನ ಕೈಬಿಡಬೇಕು ಎಂದು ಒತ್ತಾಯಿಸಿ ಕರ್ನಾಟಕ ಪ್ರಾಂತ ರೈತ ಸಂಘದ ನೇತೃತ್ವದಲ್ಲಿ ವಿವಿಧ ಸಂಘಟನೆಗಳ ಕಾರ್ಯಕರ್ತರು ಗುರುವಾರ ನಗರದಲ್ಲಿ ಪ್ರತಿಭಟನೆ ನಡೆಸಿದರು. ಕರ್ನಾಟಕ ಪ್ರಾಂತ ರೈತ ಸಂಘದ ರಾಜ್ಯ ಸಮಿತಿ ಸದಸ್ಯ ಆನಂದ್ ಮಾತನಾಡಿ, ದೇವನಹಳ್ಳಿ ತಾಲ್ಲೂಕಿನ 13 ಗ್ರಾಮಗಳಲ್ಲಿ 1775 ಎಕರೆ ಜಮೀನನ್ನು ಅವೈಜ್ಞಾನಿಕವಾಗಿ ಭೂಸ್ವಾಧೀನ ಮಾಡಿಕೊಳ್ಳಲು ಬಿಜೆಪಿ ಸರ್ಕಾರದ ಅವಧಿಯಲ್ಲಿ ನೋಟಿಸ್ ನೀಡಿ ರೈತರನ್ನು ಒಕ್ಕಲೆಬ್ಬಿಸುವ ಕೆಲಸವನ್ನು ಮಾಡಿದ್ದರು. ಅಂದಿನಿಂದಲೂ 13 ಹಳ್ಳಿಗಳ ರೈತರು ಸತತವಾಗಿ 1080 ದಿನಗಳಿಂದ ವಿವಿಧ ಹಂತಗಳಲ್ಲಿ ಹೋರಾಟ ನಡೆಸುತ್ತಿದ್ದಾರೆ. ದೇವನಹಳ್ಳಿ ತಾಲ್ಲೂಕು ಕಚೇರಿ, ಜಿಲ್ಲಾಧಿಕಾರಿ ಕಚೇರಿ, ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಪ್ರತಿಭಟನೆ ನಡೆಸಿದ್ದರು. ಸಚಿವರು, ಸರ್ಕಾರಕ್ಕೆ ಅನೇಕ ಬಾರಿ ಮನವಿ ಸಲ್ಲಿಸಿದ್ದರೂ ಯಾವುದೇ ಪ್ರಯೋಜನವಾಗಿರಲಿಲ್ಲ.

### ಬಂಧಿತ ರೈತರ ಬಿಡುಗಡೆಗೆ ಆಗ್ರಹ

• ಉದಯವಾಹಿನಿ, ಮಂಡ್ಯ

ಬೆಂಗಳೂರು ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಣ್ಣದಲ್ಲಿ ನಡೆದ ಪ್ರತಿಭಟನೆಯಲ್ಲಿ ಪೊಲೀಸರು ಬಂಧಿಸಿರುವ ರೈತರು, ಹೋರಾಟಗಾರರನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿ ಸಿಪಿಎಂ, ರೈತ ಸಂಘ ಹಾಗೂ ವಿವಿಧ ಸಂಘಟನೆಯ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿ ಎದುರು ಗುರುವಾರ ಪ್ರತಿಭಟನೆ ನಡೆಸಿದರು. ಸುಮಾರು 13 ಗ್ರಾಮಗಳ 1770 ಎಕರೆ ಕೃಷಿ ಜಮೀನುಗಳ ಭೂ ಸ್ವಾಧೀನ ಪ್ರಕ್ರಿಯೆಯನ್ನು ನಿಲ್ಲಿಸಬೇಕು. ಟನ್ ಕಬ್ಬಿಗೆ 5,500 ನೀಡಬೇಕು. ಕಬ್ಬು ಅರೆದ 14 ದಿನಗಳೊಳಗೆ ಹಣ ಪಾವತಿಸಬೇಕು. ಕಾವೇರಿ ಆರತಿ ಎಂಬ ಮೌಢ್ಯಾಚರಣೆ ಮತ್ತು ದುಂದುವೆಚ್ಚದ ಕಾರ್ಯಕ್ರಮ ಕೈಬಿಡಬೇಕು. ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣ ನಿಲ್ಲಿಸಬೇಕು ಎಂದು ಆಗ್ರಹಿಸಿದರು. ಜಿಲ್ಲೆಯ ಎಲ್ಲಾ ಸರ್ಕಾರಿ ಆಸ್ಪತ್ರೆಗಳನ್ನು ಬಲಪಡಿಸಬೇಕು. ದುಡಿಯುವ ಜನತೆಯ ಬದುಕು ದಿನದಿಂದ ದಿನಕ್ಕೆ ದುಸ್ತರವಾಗುತ್ತಿದೆ. ಎಷ್ಟು ದುಡಿದರು ಹೊಟ್ಟೆ ತುಂಬ ಊಟ ಮತ್ತು ನೆಮ್ಮದಿಯ ನಿದ್ದೆ ಮರೀಚಿಕೆಯಾಗಿದೆ. ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ ಸೇರಿದಂತೆ ಅಗತ್ಯ ವಸ್ತುಗಳ ನಿರಂತರ ಬೆಲೆ ಏರಿಕೆಯಿಂದ ದುಡಿಯುವ ವರ್ಗದ ಜನರ ಆದಾಯ ಕುಸಿಯುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

### ರೈತ ವಿರೋಧಿ ನೀತಿಗೆ ಖಂಡನೆ

• ಉದಯವಾಹಿನಿ, ಸೋಮವಾರಪೇಟೆ

ಬೆಂಗಳೂರು ಗ್ರಾಮಾಂತರ ದೇವನಹಳ್ಳಿಯ ಚನ್ನರಾಯಪಟ್ಟಣದಲ್ಲಿ ಸುಮಾರು 13 ಗ್ರಾಮಗಳ ಕೃಷಿ ಭೂಮಿಯನ್ನು ಈ ಹಿಂದೆ ಬಿಜೆಪಿ ಸರ್ಕಾರ ಕೈಗಾರಿಕಾ ಉದ್ದೇಶಕ್ಕೆ ಕಾರ್ಪೊರೇಟ್ ನವರಿಗೆ ನೀಡಲು ಮುಂದಾದಾಗ ವಿರೋಧಿಸಿದ್ದ ಕಾಂಗ್ರೆಸ್ ಗುರುವಾರ ಅದೇ ಕೆಲಸವನ್ನು ಮಾಡಲು ಮುಂದಾಗಿದೆ' ಎಂದು ಅಖಿಲ ಭಾರತ ಯುನೈಟೆಡ್ ಕಿಸಾನ್ ಸಭಾದ ಕೊಡಗು ಜಿಲ್ಲಾ ಸಮಿತಿ ಆರೋಪಿಸಿದೆ. 3 ವರ್ಷಗಳಿಂದ ಭೂಮಿ ಉಳಿಸಿಕೊಳ್ಳಲು ರೈತರು ಹೋರಾಟ ನಡೆಸುತ್ತಿದ್ದಾರೆ.

ಕಾಂಗ್ರೆಸ್ ವಿರೋಧ ಪಕ್ಷದಲ್ಲಿದ್ದಾಗ ರೈತರಿಗೆ ಧೈರ್ಯ ತುಂಬಿದ್ದ ಸಿಎಂ ಸಿದ್ದರಾಮಯ್ಯ ಅವರು ಮತ್ತೊಮ್ಮೆ ರೈತರಿಂದ ಕೃಷಿ ಭೂಮಿ ಕಸಿಯಲು ಮುಂದಾಗಿದ್ದಾರೆ. ಜೂ.25ರಂದು ನಡೆದ ಪ್ರತಿಭಟನೆ ಸಂದರ್ಭ 500ಕ್ಕೂ ಹೆಚ್ಚು ಹೋರಾಟಗಾರರನ್ನು ಬಂಧಿಸಲಾಗಿದೆ. ಬಂಧಿತರನ್ನು ಬಿಡುಗಡೆ ಮಾಡಬೇಕು. ರೈತರಿಂದ ಕೃಷಿ ಭೂಮಿಯನ್ನು ಕಿತ್ತುಕೊಳ್ಳಬಾರದು ಎಂದು ಸಂಘಟನೆಯ ರಾಜ್ಯ ಕಾರ್ಯದರ್ಶಿ ಡಿ.ಎಸ್. ನಿರ್ವಾಣಪ್ಪ ಒತ್ತಾಯಿಸಿದ್ದಾರೆ.

ಅಂತರಾಳದಿಂದ.. EDITORIAL

# ಅಂದಿನದು ತುರ್ತುಪರಿಸ್ಥಿತಿಯಾದರೆ ಇಂದಿನದು ಯಾವ ಸ್ಥಿತಿ?

1974ರಲ್ಲಿ ಅಂದಿನ ಪ್ರಧಾನಿ ಇಂದಿರಾಗಾಂಧಿ ದೇಶದ ಮೇಲೆ ಹೇರಿದ್ದ ತುರ್ತು ಪರಿಸ್ಥಿತಿಯನ್ನು ಇಂದಿನ ಪ್ರಧಾನಿ ಮೋದಿ ಸರಕಾರ ಅದ್ದೂರಿಯಾಗಿ ಆಚರಿಸಿದೆ. ದೇಶದಲ್ಲಿ ನಡೆಯುತ್ತಿರುವ ತುರ್ತುಪರಿಸ್ಥಿತಿಯ ಕರಾಳ ದಿನದ ಆಚರಣೆಯ ಹಿಂದೆ ಎರಡು ಮನಸ್ಥಿತಿಗಳಿವೆ. ಒಂದು ಮನಸ್ಥಿತಿ, ತುರ್ತುಪರಿಸ್ಥಿತಿಯ ಕರಾಳ ದಿನವನ್ನು ಸಂಭ್ರಮಿಸಿದರೆ, ಇನ್ನೊಂದು ಮನಸ್ಥಿತಿ, ಇಂದಿನ ಮೋದಿ ಸರಕಾರದ ಅಘೋಷಿತ ತುರ್ತುಪರಿಸ್ಥಿತಿಯನ್ನು ಎದುರಿಸುವುದಕ್ಕಾಗಿ ಈ ದಿನವನ್ನು ನೆಪವಾಗಿ ಬಳಸಿಕೊಳ್ಳುತ್ತಿದೆ. ಇನ್ನೊಮ್ಮೆ ಅಂತಹದೊಂದು ಪರಿಸ್ಥಿತಿ ಈ ದೇಶಕ್ಕೆ ಎದುರಾಗಬಾರದು ಎನ್ನುವ ನಿಟ್ಟಿನಲ್ಲಿ ಜನರಲ್ಲಿ ಜಾಗೃತಿಯನ್ನು ಮೂಡಿಸಲು ಹಿಂದೆಲ್ಲ ತುರ್ತುಪರಿಸ್ಥಿತಿಯ ದಿನವನ್ನು ನೆನಪಿಸಲಾಗುತ್ತಿತ್ತು. ಆದರೆ ಇಂದು ತುರ್ತುಪರಿಸ್ಥಿತಿಯ ಬಗ್ಗೆ ಜಾಗೃತಿ ಮೂಡಿಸುತ್ತಿದ್ದ ಆ ಹಿರಿಯರೆಲ್ಲ ಗೊಂದಲದಲ್ಲಿದ್ದಾರೆ. ಯಾಕೆಂದರೆ, ಘೋಷಿತ ತುರ್ತುಪರಿಸ್ಥಿತಿಗಿಂತಲೂ, ಈಗ ಪ್ರಜಾಸತ್ತೆಯ ಮುಖವಾಡದಲ್ಲಿರುವ ಅಘೋಷಿತ ತುರ್ತುಪರಿಸ್ಥಿತಿಯೇ ಹೆಚ್ಚು ಭಯಾನಕವಾಗಿದೆ.



**ಲಾಕ್‌ಡೌನ್ ಕಾಲದಲ್ಲಿ ಮೃತಪಟ್ಟ ವಲಸೆ ಕಾರ್ಮಿಕರ ಅಂಕಿಸಂಕಿಗಳ ವಿವರ ಸರಕಾರದ ಬಳಿ ಈಗಲೂ ಇಲ್ಲ. ಪ್ರಜಾಸತ್ತೆಯ ಮರೆಯಲ್ಲಿ ಸರಕಾರ ಮಾಡಿದ್ದೇ ಕಾನೂನು ಎಂದ ಮೇಲೆ ಈ ಕಾಲವನ್ನು ತುರ್ತುಪರಿಸ್ಥಿತಿ ಎಂದು ಕರೆಯದೇ ಇನ್ನೇನೆಂದು ಕರೆಯಬೇಕು ಇಂದಿರಾ ತುರ್ತುಪರಿಸ್ಥಿತಿಯ ಕಾಲದಲ್ಲಿ ಮಾಧ್ಯಮಗಳನ್ನು, ನ್ಯಾಯಾಂಗವನ್ನು ನಿಯಂತ್ರಿಸಲಾಗಿತ್ತು ಎಂದು ಬಿಜೆಪಿ ಆರೋಪ ಮಾಡುತ್ತಿದೆ.**

ಕಳೆದ ಒಂದು ದಶಕದ ಮೋದಿ ನೇತೃತ್ವದ ಆಡಳಿತ ಯಾವ ತುರ್ತುಪರಿಸ್ಥಿತಿಯನ್ನು ಅಧಿಕೃತವಾಗಿ ಹೇರದೆಯೇ ಜನರನ್ನು ಕಂಗಾಲುಗೊಳಿಸಿದೆ. ಜನರ ನೋಟುಗಳನ್ನು ನಿಷೇಧಿಸಿ ಅವರು ಬ್ಯಾಂಕಿನ ಮುಂದೆ ಕ್ಯೂ ನಿಲ್ಲುವ ಸ್ಥಿತಿ ನಿರ್ಮಾಣ ಮಾಡಲಾಯಿತು. ತಮ್ಮ ಹಣವನ್ನು ಕಪ್ಪು ಹಣವಲ್ಲ ಎಂದು ಸಾಬೀತು ಪಡಿಸುವಂತಹ ಈ ಸ್ಥಿತಿ ನಿರ್ಮಾಣವಾಗಿರುವುದು ಇಂದಿರಾಗಾಂಧಿಯಿಂದ ಅಲ್ಲ ಬದಲಿಗೆ ಪ್ರಧಾನಿ ಮೋದಿಯವರ ಅಘೋಷಿತ ತುರ್ತುಪರಿಸ್ಥಿತಿಯ ಸಂದರ್ಭದಲ್ಲಿ ಕಪ್ಪುಹಣವನ್ನು ನಿರ್ಮೂಲನೆ ಮಾಡುವುದಕ್ಕಾಗಿ ನೋಟು ನಿಷೇಧವನ್ನು ಮಾಡಲಾಯಿತು ಎಂದು ಸರಕಾರ ತನ್ನನ್ನು ಸಮರ್ಥಿಸಿಕೊಳ್ಳುತ್ತಿದೆಯಾದರೂ, ಈವರೆಗೆ ನೋಟು ನಿಷೇಧದಿಂದ ವಶಪಡಿಸಿಕೊಂಡ ಕಪ್ಪು ಹಣದ ಕುರಿತ ಯಾವುದೇ ವಿವರಗಳನ್ನು ಬಹಿರಂಗಪಡಿಸಿಲ್ಲ. ಇದರ ಬಗ್ಗೆ ವಿವರಕೇಳಿ ಸರಕಾರವನ್ನು ಒತ್ತಾಯಿಸುವ ಸ್ಥಿತಿಯೂ ಈ ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಇಲ್ಲ. ಇಂದಿರಾಗಾಂಧಿಯ ಕಾಲದ ತುರ್ತುಪರಿಸ್ಥಿತಿಯ ಸಂದರ್ಭದಲ್ಲಿ ರಾಜಕೀಯ ನೇತಾರರು ಮತ್ತು ಪತ್ರಕರ್ತರೇ ನೇರ ಸಂತ್ರಸ್ತರಾಗಿದ್ದರು. ಆದರೆ ಪ್ರಧಾನಿ ಮೋದಿ ನೇತೃತ್ವದ ಅಘೋಷಿತ ತುರ್ತುಪರಿಸ್ಥಿತಿಯ ಪರಿಣಾಮಗಳನ್ನು ಉಣ್ಣುತ್ತಿರುವುದು ಈ ದೇಶದ ಬಡವರು, ತಳಸ್ತರದ ಜನರಾಗಿದ್ದಾರೆ. ಇಂದಿರಾಗಾಂಧಿ ತುರ್ತುಪರಿಸ್ಥಿತಿ ಹೇರಿಕೆಯ ಸಂದರ್ಭದಲ್ಲಿ ಈ ದೇಶದ ಜನರ ಬಳಿ ನಿಮ್ಮ ಪೌರತ್ವವನ್ನು ಸಾಬೀತು ಪಡಿಸಿ ಎಂದು ಕೇಳಿರಲಿಲ್ಲ. ಇಂದು ಅಸ್ಸಾಮಿನಂತಹ ರಾಜ್ಯಗಳಲ್ಲಿ ತಮ್ಮ ಪೌರತ್ವವನ್ನು ಸಾಬೀತುಪಡಿಸಲಾಗದೆ ನೂರಾರು ಜನರು ಬಂಧನ ಕೇಂದ್ರದಲ್ಲಿದ್ದಾರೆ. ಇವರಲ್ಲಿ ಬಹುತೇಕರು ವಲಸೆ ಕಾರ್ಮಿಕರು, ರೈತರು, ಬಡವರು. ತುರ್ತುಪರಿಸ್ಥಿತಿಯ ಸಂದರ್ಭದಲ್ಲಿ ಕಾರ್ಮಿಕರಿಗೆ, ರೈತರಿಗೆ ಇಂತಹ ಸ್ಥಿತಿನಿರ್ಮಾಣವಾಗಿರಲಿಲ್ಲ. ಬದಲಿಗೆ ಬ್ಯಾಂಕ್ ರಾಷ್ಟ್ರೀಕರಣ, ಭೂಸುಧಾರಣೆಯಂತಹ ಮಹತ್ವದ ಕಾಯ್ದೆಗಳನ್ನು ಜಾರಿಗೆ ತರಲು ಇಂದಿರಾಗಾಂಧಿ ಪ್ರಯತ್ನಿಸಿದ್ದರು. ದುಡಿಯುವ ಬಡವರಿಗೆ ಅವರ ಭೂಮಿಯ ಹಕ್ಕನ್ನು ನೀಡಲು ಈ ತುರ್ತುಪರಿಸ್ಥಿತಿಯ ಸಂದರ್ಭವನ್ನು ಬಳಸಿಕೊಳ್ಳಲು ಹಲವು ರಾಜ್ಯಗಳು ಶ್ರಮಿಸಿದವು. ಅವುಗಳಲ್ಲಿ ಕರ್ನಾಟಕ ಕೂಡ ಒಂದು. ಉಳುವವನಿಗೆ ಭೂಮಿಯ ಹಕ್ಕು ದೇವರಾಜ ಅರಸು ಕಾಲದಲ್ಲಿ ಜಾರಿಗೆ ತರಲು ನಡೆಸಿದ ಪ್ರಯತ್ನವೇ ಇಂದಿರಾಗಾಂಧಿಯನ್ನು ದಕ್ಷಿಣ ಭಾರತದಲ್ಲಿ ಜನಪ್ರಿಯಗೊಳಿಸಿತು. ಮೋದಿ ಆಡಳಿತದಲ್ಲಿ ಬಡವರ ಭೂಮಿಯನ್ನು ಕಿತ್ತುಕೊಂಡು ಬಹುರಾಷ್ಟ್ರೀಯ ಕಂಪೆನಿಗಳಿಗೆ ಕೊಡುವುದಕ್ಕಾಗಿ ಕಾನೂನುಗಳು ರಚಿಸಲ್ಪಟ್ಟವು. ಕೊರೋನ ಸಂದರ್ಭ ಯಾವುದೇ ಪೂರ್ವ ಸಿದ್ಧತೆಗಳಿಲ್ಲದೆ ಆತುರಾತುರವಾಗಿ ಘೋಷಿಸಲ್ಪಟ್ಟ ಸುಮಾರು ಎರಡು ತಿಂಗಳ ಲಾಕ್‌ಡೌನ್ ಯಾವುದೇ ತುರ್ತುಪರಿಸ್ಥಿತಿಗಿಂತ ಕಡಿಮೆಯಿರಲಿಲ್ಲ. ಬೀದಿಗಿಳಿದ ತಪ್ಪಿಗೆ ಜನರು ಪೊಲೀಸರ ಲಾಠಿ ಏಟು ತಿನ್ನಬೇಕಾಯಿತು. ಜನರನ್ನು ಬಲವಂತವಾಗಿ ಕೊರೋನ ನೆಪದಲ್ಲಿ ಪರೀಕ್ಷೆ ನಡೆಸಿ ಅವರನ್ನು ಆಸ್ಪತ್ರೆಯ ಪ್ರಯೋಗ ಪಶುವನ್ನಾಗಿಸಲಾಯಿತು. ಸಾವಿರಾರು ಜನರು ಮರಣ ಹೊಂದಿದರು. ಗಂಗಾನದಿಯ ತಟದಲ್ಲಿ ನೂರಾರು ಮೃತದೇಹಗಳ ಅವಶೇಷಗಳು ಕಂಡು ಬಂದವು. ನರಿ ನಾಯಿಗಳು ಮೃತದೇಹಗಳನ್ನು ಎಳೆದಾಡುತ್ತಿರುವ ಫೋಟೊಗಳು ಅಂತರ್‌ರಾಷ್ಟ್ರೀಯ ಮಟ್ಟದ ಪತ್ರಿಕೆಗಳಲ್ಲಿ ರಾರಾಜಿಸಿದವು. ಉದ್ಯೋಗ, ಊಟವಿಲ್ಲದೆ ಜನರು ಮನೆಯೊಳಗೆ ಬಂದಿಯಾದರು. ಸಾವಿರಾರು ವಲಸೆ ಕಾರ್ಮಿಕರು ನೂರಾರು ಕಿಲೋಮೀಟರ್ ಕಾಲು ನಡಿಗೆಯಲ್ಲಿ ತಮ್ಮ ಹಳ್ಳಿಯ ಕಡೆಗೆ ಸಾಗಬೇಕಾಯಿತು. ಅವರ ನೋವು, ಸಂಕಟಗಳನ್ನು ಕೇಳುವವರಿರಲಿಲ್ಲ. ಹಳಿಗಳ ಮೇಲೆ ನಡೆದುಕೊಂಡು ಹೋಗುತ್ತಿದ್ದ ಕಾರ್ಮಿಕರ ಮೇಲೆ ರೈಲು ಹರಿಯಿತು. ಮೃತಪಟ್ಟ ಕಾರ್ಮಿಕರ ನೋವು ದುಮ್ಮಾನಗಳ ಹೊಣೆಯನ್ನು ಸರಕಾರ ಹೊತ್ತುಕೊಳ್ಳಲಿಲ್ಲ. ಮೋದಿ ಆಡಳಿತದಲ್ಲಿ ನ್ಯಾಯ ವ್ಯವಸ್ಥೆ ನೀಡುತ್ತಿರುವ ತೀರ್ಪುಗಳು ಎಷ್ಟರಮಟ್ಟಿಗೆ ಸಂವಿಧಾನ ಬದ್ಧವಾಗಿವೆ ನ್ಯಾಯ ವ್ಯವಸ್ಥೆಯ ಅತ್ಯುನ್ನತ ಸ್ಥಾನದಲ್ಲಿರುವವರನ್ನು ಸರಕಾರ, ಅಧಿಕಾರದ ಆಮಿಷವೊಡ್ಡಿ ಕೊಂಡುಕೊಳ್ಳುತ್ತಿರುವ ಬಗ್ಗೆ ವ್ಯಾಪಕ ಆರೋಪಗಳಿವೆ. ಸರಕಾರದ ಮೂಗಿನ ನೇರಕ್ಕೆ ತೀರ್ಪುಗಳು ಹೊರಬೀಳುತ್ತಿವೆ.

# ರಾಮಾಯಣ



## ಶ್ರೀರಾಮನು ಅರಣ್ಯದಲ್ಲಿ ಮಲಗಿದ್ದ ಸ್ಥಳವನ್ನು ಭರತನು ನೋಡಿದ್ದು

• ಹಿಂದಿನ ಸಂಚಿಕೆಯಿಂದ **78ನೆಯ ಅಧ್ಯಾಯ**

ನೀನು ಇಷ್ಟು ಕಂಗೆಡುವುದಕ್ಕೆ ಕಾರಣವೇನು ಲಕ್ಷ್ಮಣನ ವಿಷಯ ದಲ್ಲಾಗಲಿ ಏಕಪುತ್ರನಾದ ನನ್ನ ಮಗನ ವಿಷಯದಲ್ಲಾಗಲಿ ಏನಾದರೂ ದುರ್ವಾರ್ತೆಯನ್ನು ಕೇಳಿದೆಯಾ ಎಂದು ಆತನ ಕಣ್ಣೀರನ್ನು ತೊಡೆದು ಸಂತವಿಟ್ಟಳು. ಭರತನು ಕೌಸಲ್ಯಾದೇವಿಯನ್ನು ಸಂತವಿಟ್ಟು ಗುಹನನ್ನು ಕುರಿತು ಎಲೈ ಗುಹನೆ, ನಮ್ಮ ಅಣ್ಣನಾದ ಶ್ರೀರಾಮನು ಗಂಗಾತೀರದಲ್ಲಿ ಎಲ್ಲಿದ್ದನು ಸೀತಾದೇವಿಯಲ್ಲಿದ್ದಳು ಲಕ್ಷ್ಮಣ ನೆಲ್ಲಿದ್ದನು ಶ್ರೀರಾಮನು ಯಾವ ಹಾಸಿಗೆಯ ಮೇಲೆ ಮಲಗಿದ್ದನು ಎಂದು ಕೇಳಿದನು.

ಗುಹನು ರಾಜಪುತ್ರ. ನಾನು ಅನೇಕ ಬಗೆಯ ಅನ್ನವನ್ನೂ ಕಜ್ಜಾಯಗಳನ್ನೂ ಫಲಾದಿಗಳನ್ನೂ ತಂದುಕೊಟ್ಟೆನು. ಶ್ರೀರಾಮನು ಅವನ್ನು ಸ್ವೀಕರಿಸದೆ ನನಗೆ ಮರಳಿ ಕೊಟ್ಟನು. ಕ್ಷತ್ರಿಯಧರ್ಮದಲ್ಲಿ ಪರಿಗ್ರಹಿಸುವುದು ಧರ್ಮವಲ್ಲವೆಂದು ಒಂದನ್ನೂ ಅಂಗೀಕರಿಸಲಿಲ್ಲ. ಆತನು ನನ್ನನ್ನು ನೋಡಿ ಎಲೈ ಗುಹನೆ, ನಾವು ಪ್ರತಸ್ಥರಾದ್ದರಿಂದ ಇಂಥ ವಸ್ತುಗಳನ್ನು ಯಾವಾಗಲೂ ಪರಿಗ್ರಹಿಸಬಾರದು ಎಂದು ನುಡಿದು ಲಕ್ಷ್ಮಣನು ತಂದ ಉದಕವನ್ನು ಪಾನಮಾಡಿ ಸೀತಾಸಮೇತನಾಗಿ ಉಪವಾಸ ಮಾಡಿದನು. ಲಕ್ಷ್ಮಣನು ಅವರು ಪಾನಮಾಡಿ ಮಿಕ್ಕ ಉದಕವನ್ನು ಕುಡಿದು ತಾನೂ ಉಪವಾಸ ವಾಗಿದ್ದನು. ಆ ಸಾಯಂಕಾಲದಲ್ಲಿ ಸಂಧ್ಯಾವಂದನೆ ಜಪ ಹೋಮಾದಿ ನಿಯಮಗಳನ್ನು ತೀರಿಸಿಕೊಂಡು ಲಕ್ಷ್ಮಣನು ನಿರ್ಮಿಸಿದ ದರ್ಭೆಯ ಹಾಸಿಗೆಯಮೇಲೆ ಸೀತಾಸಮೇತನಾಗಿ ಶ್ರೀರಾಮನು ಪಾದಪ್ರಕ್ಷಾಳನ ಮಾಡಿಕೊಂಡು ಶಯನಮಾಡಿದನು. ಲಕ್ಷ್ಮಣನು ದೂರಕ್ಕೆ ಸಾರಿದನು. ಸೀತಾ ಲಕ್ಷ್ಮಣಸಮೇತನಾದ ಶ್ರೀರಾಮನು ಈ ವನದಲ್ಲಿರುವ ಇಂಗಳವೃಕ್ಷದಡಿಯಲ್ಲಿ ದರ್ಭೆಯ ಹಾಸಿಗೆಯಮೇಲೆ ಬತ್ತಳಿಕೆಯನ್ನು ಮಗ್ಗುಲಲ್ಲಿಟ್ಟುಕೊಂಡು ಬಿಲ್ಲುನಾರಿಯನ್ನು ಧ್ವನಿಮಾಡುವ ಹೆಬ್ಬೆಟ್ಟಿನ ಉಂಗುರವನ್ನು ಧರಿಸಿಕೊಂಡು ಶಯನಮಾಡಿದನು. ಲಕ್ಷ್ಮಣನು ಜಿಲ್ಲುಹೆದೆಯನ್ನು ಇಳಿಸದೆಯೇ, ದರ್ಭೆಯ ಹಾಸಿಗೆಯಮೇಲೂ ಮಲಗದೆಯೇ ನಿದ್ರೆಯಿಲ್ಲದೆ ಎಚ್ಚರಿಕೆಯಾಗಿ ಅವರಿಗೆ ಕಾವಲಾಗಿದ್ದನು. ನಾನೂ ಬಿಲ್ಲುಬಾಣಗಳನ್ನು ಧರಿಸಿಕೊಂಡು ನಮ್ಮ ಜ್ಞಾತಿಗಳನ್ನು ಕೂಡಿಕೊಂಡು ಲಕ್ಷ್ಮಣನ ಸಮೀಪದಲ್ಲಿ ದೇವೇಂದ್ರನಿಗೆ ಸಮಾನನಾದ ಶ್ರೀ ರಾಮನನ್ನು ಕಾಯುತ್ತ ಮಲಗಿ ಆ ರಾತ್ರಿಯನ್ನು ಕಳೆದೆನು ಎಂದು ಹೇಳಿದನು.


### ಭರತನ ವಿಲಾಪ

ಈ ಪ್ರಕಾರ ಭರತನು ಸೀತಾಲಕ್ಷ್ಮಣ ಸಮೇತನಾದ ಶ್ರೀರಾಮನ ವೃತ್ತಾಂತವನ್ನು ಕೇಳಿ ಆತನು ಮಲಗಿದ್ದ ಇಂಗಳದ ಮರದಡಿಗೆ ಹೋದನು. ದರ್ಭೆಯ ಹಾಸಿಗೆಯನ್ನು ನೋಡಿ ತನ್ನ ತಾಯಂದಿರನ್ನು ಕರೆದು ಹೇಳಿದನು ಶ್ರೀರಾಮನು ಗಂಗಾತೀರಕ್ಕೆ ಬಂದು ಇಂಗಳದ ಮರದಡಿಯಲ್ಲಿ ಭೂಮಿಯ ಮೇಲೆ ದರ್ಭೆಯ ಹಾಸಿಗೆಯನ್ನು ಹಾಸಿಕೊಂಡು ಮಲಗಿದ್ದ ಸ್ಥಳವಿದು.

ಮುಂದುವರಿಯುವುದು...

# ಸೂಜಿ ಚುಚ್ಚದೆ, ರಕ್ತ ಪರೀಕ್ಷೆ ಮಾಡದೆ ಕಾಯಿಲೆ ಪತ್ತೆಹಚ್ಚಬಹುದಂತೆ!

ದೇಹಕ್ಕೆ ಸೂಜಿ ಚುಚ್ಚದೇ ಹಾಗೂ ಒಂದು ಚೂರು ಕೂಡ ರಕ್ತ ತೆಗೆದುಕೊಳ್ಳದೆ, ನಿಮ್ಮಲ್ಲಿ ಕಂಡು ಬರುವ ಆರೋಗ್ಯ ಸಮಸ್ಯೆಗಳನ್ನು ಪತ್ತೆ ಹಚ್ಚಿ ಅದಕ್ಕೆ ತ್ವರಿತವಾಗಿ ಚಿಕಿತ್ಸೆ ನೀಡುವ ತಂತ್ರಜ್ಞಾನ ವೈದ್ಯಲೋಕಕ್ಕೆ ಕಾಲಿಟ್ಟಿದೆ ಇವೆಲ್ಲಾ AI ತಂತ್ರಜ್ಞಾನದ ಮಹಿಮೆ ಎನ್ನುತ್ತಾರೆ ಆರೋಗ್ಯ ತಜ್ಞರು. ಇಂದಿನ ದಿನಗಳಲ್ಲಿ ಆರೋಗ್ಯ ಸಮಸ್ಯೆಗಳು ಯಾವಾಗ ಬಂದು ನಮ್ಮ ದೇಹವನ್ನು ವಕ್ಕರಿಸಿಕೊಂಡು ಬಿಡುತ್ತವೆ ಎಂದು ಹೇಳಲು ಆಗದು! ಹೀಗಾಗಿ ಆರೋಗ್ಯದ ವಿಚಾರದಲ್ಲಿ ಆದಷ್ಟು ಎಚ್ಚರವಹಿಸಬೇಕು. ಇನ್ನು ಮುಖ್ಯವಾಗಿ ವರ್ಷಕ್ಕೆ ಒಮ್ಮೆಯಾದರೂ, ಕೆಲವೊಂದು ಪ್ರಮುಖ ಕಾಯಿಲೆಗಳಿಗೆ ಸಂಬಂಧಿಸಿದ ರಕ್ತ ಪರೀಕ್ಷೆ ಅಥವಾ ಕಂಪ್ಲೀಟ್ ಬ್ಲಡ್ ಕೌಂಟ್ ಪರೀಕ್ಷೆಯನ್ನು ಮಾಡಿಸಿಕೊಳ್ಳುತ್ತಿರಬೇಕು, ಇದರಿಂದ ಮುಂದೆ ಬರುವ ಅನಾರೋಗ್ಯದ ಬಗ್ಗೆ ತಿಳಿಯಬಹುದು ಹಾಗೂ ಇದನ್ನು ಬರದಂತೆ ತಡೆಯಲು ಮುನ್ನೆಚ್ಚರಿಕೆಗಳನ್ನು ಕೂಡ ತೆಗೆದುಕೊಳ್ಳಬಹುದು. ಇನ್ನು ರಕ್ತ ಪರೀಕ್ಷೆಯ ವಿಷಯಕ್ಕೆ ಬಂದಾಗ, ಸೂಜಿಯಿಂದ ರಕ್ತವನ್ನು ಹೊರತೆಗೆಯುವ ಸಂದರ್ಭದಲ್ಲಿ ಕೆಲವರಿಗೆ ತಲೆಸುತ್ತು ಬರುವ ಸಮಸ್ಯೆ ಕಾಡುತ್ತಿರುತ್ತದೆ, ಹೀಗಾಗಿ ಹೆಚ್ಚಿನವರು ರಕ್ತ ಪರೀಕ್ಷೆಯ ವಿಚಾರದಲ್ಲಿ ಆದಷ್ಟು ದೂರ ನಿಲ್ಲಲು ಪ್ರಯತ್ನಿಸುತ್ತಿರುತ್ತಾರೆ. ಆದರೆ ಈಗ ಕಾಲ ಬದಲಾಗಿದೆ ತಂತ್ರಜ್ಞಾನದ ಮುಖಾಂತರ ಬಹಳ ಸುಲಭವಾಗಿ ಬ್ಲಡ್ ಟೆಸ್ಟ್ ಮಾಡಿಸಿಕೊಳ್ಳಬಹುದಂತೆ!





**ಸೂಜಿ ಚುಚ್ಚದೆ ರಕ್ತ ಪರೀಕ್ಷೆ ಮಾಡುವ ತಂತ್ರಜ್ಞಾನ ಬಂದಿದೆ! :** ಹೌದು ನಿಮಗೆ ಸೂಜಿ ಚುಚ್ಚದೆ ರಕ್ತ ಪರೀಕ್ಷೆ ಮಾಡಿ, ರೋಗಪತ್ತೆ ಹಚ್ಚಿ ಸೂಕ್ತ ಚಿಕಿತ್ಸೆ ನೀಡುವ AI ತಂತ್ರ ಜ್ಞಾನ ವೈದ್ಯಲೋಕಕ್ಕೆ ಕಾಲಿಟ್ಟಿದೆ ಎಂದರೆ ನೀವು ನಂಬಲೇ ಬೇಕು. ನಿಮ್ಮ ಮುಖವನ್ನು ಸ್ಕ್ಯಾನ್ ಮಾಡುವ ಮೂಲಕ ಅಂದರೆ (ಫೇಸ್ ಸ್ಕ್ಯಾನ್) ಮಾಡುವ ಮೂಲಕ, ದೇಹದಲ್ಲಿ ಕಂಡು ಬಂದಿರುವ ಅನಾರೋಗ್ಯ ಸಮಸ್ಯೆಗಳನ್ನು ಕಂಡುಹಿಡಿಯಬಹುದಂತೆ!

ಇದರಿಂದ ದೀರ್ಘಕಾಲದ ಕಾಯಿಲೆಗಳಾದ ಹೃದಯ ಸಂಬಂಧಿ ಕಾಯಿಲೆ, ಮಧುಮೇಹ, ಅಧಿಕರಕ್ತದೊತ್ತಡ ಮುಂತಾದ ಆರೋಗ್ಯ ಸಮಸ್ಯೆಗಳನ್ನು ಈ ನೂತನ ತಂತ್ರಜ್ಞಾನದ ಮೂಲಕ ಪತ್ತೆಹಚ್ಚಬಹುದಂತೆ ಇದೆಲ್ಲವೂ AI ಮೂಲಕ ಸಾಧ್ಯವಾಗಿದೆ ಎಂದು ಅಚ್ಚರಿ ಯಾಗುತ್ತದೆ ಅಲ್ಲವೇ ಇನ್ನು ಮುಖ್ಯವಾದ ಸಂಗತಿ ಏನೆಂದರೆ, ಫೇಸ್ ಸ್ಕ್ಯಾನ್ ಮಾಡುವ ಮೂಲಕ ಆರೋಗ್ಯ ಸ್ಥಿತಿ 20 ಸೆಕೆಂಡುಗಳಲ್ಲಿ ಬಹಿರಂಗಗೊಳ್ಳುತ್ತದೆಯಂತೆ

### ರಕ್ತಹೀನತೆಯಿಂದ ಬಳಲುವವರಿಗೆ ನೆರವಾಗಲಿದೆ

**ಭಾರತದಲ್ಲಿ, ಪ್ರತಿ 10 ಮಹಿಳೆಯರಲ್ಲಿ 4 ಜನರು ರಕ್ತ ಹೀನತೆಯಿಂದ ಬಳಲುತ್ತಿದ್ದಾರೆ. ಅಂತಹ ಪರಿಸ್ಥಿತಿಯಲ್ಲಿ, ರಕ್ತವನ್ನು ತೆಗೆದುಕೊಳ್ಳದೆ ಪರೀಕ್ಷೆಯನ್ನು ಕಡಿಮೆ ದರದಲ್ಲಿ ಮತ್ತು ತ್ವರಿತವಾಗಿ ಮಾಡಿದರೆ ಹಾಗೂ ಇದಕ್ಕೆ ಸಂಬಂಧಿಸಿದ ಚಿಕಿತ್ಸೆಯನ್ನು ಸಮಯಕ್ಕೆ ಸರಿಯಾಗಿ ಚಿಕಿತ್ಸೆ ನೀಡಲು ಸಾಧ್ಯವಾಗುತ್ತದೆ. ಈ ಉಪಕರಣವು ಆರೋಗ್ಯ ಕ್ಷೇತ್ರದಲ್ಲಿ, ವಿಶೇಷವಾಗಿ ಗರ್ಭಿಣಿಯರು ಮತ್ತು ಚಿಕ್ಕ ಮಕ್ಕಳಿಗೆ ಕ್ರಾಂತಿಯನ್ನು ತರಬಹುದು ಎಂದು ವೈದ್ಯರು ನಂಬುತ್ತಾರೆ.**

**ಮಹಿಳೆಯರಲ್ಲಿ ಕಬ್ಬಿಣಾಂಶದ ಕೊರತೆಯನ್ನು ಪರೀಕ್ಷೆ ಮಾಡಿಸಲು:** ಆಧಾರಿತ ಅಪ್ಲಿಕೇಶನ್ ಈಗ ವೈದ್ಯಲೋಕದಲ್ಲಿ ಸಂಚಲನವನ್ನೇ ಮೂಡಿಸುತ್ತಿದೆ! ಈ ಅಪ್ಲಿಕೇಶನ್ ಅನ್ನು 2024 ರಲ್ಲಿ ಪ್ರಾರಂಭಿಸಲಾಯಿತು ಮತ್ತು ಇದನ್ನು ಮೊದಲು ಹೈದರಾಬಾದ್‌ನ ಸರ್ಕಾರಿ ಆಸ್ಪತ್ರೆ ನಿಲೋಫರ್' ನಲ್ಲಿ ಬಳಸಲಾಯಿತು. ಇಲ್ಲಿ ಇದನ್ನು ಗರ್ಭಿಣಿ ಮಹಿಳೆಯರಲ್ಲಿ ಕಬ್ಬಿಣಾಂಶದ ಕೊರತೆಯನ್ನು ಅಂದರೆ ರಕ್ತಹೀನತೆಯನ್ನು ಪರೀಕ್ಷಿಸಲು ಬಳಸಲಾಗುತ್ತಿತ್ತು, ಇದು ಉತ್ತಮಫಲಿತಾಂಶಗಳನ್ನು ನೀಡಿತು ಎನ್ನುತ್ತಾರೆ ತಜ್ಞರು.

**20 ಸೆಕೆಂಡುಗಳಲ್ಲಿ ದೇಹದ ಹಲವು ಪ್ರಮುಖ ಅಂಗಗಳ ಬಗ್ಗೆ ಮಾಹಿತಿ ನೀಡುತ್ತದೆ:** ಈ ಅಪ್ಲಿಕೇಶನ್ 20 ಸೆಕೆಂಡುಗಳಲ್ಲಿ ದೇಹದ ಹಲವು ಪ್ರಮುಖ ಅಂಗಾಂಗಳ ಬಗ್ಗೆ ಮಾಹಿತಿಯನ್ನು ಹಂಚಿಕೊಳ್ಳುತ್ತದೆ. ಪ್ರಮುಖವಾಗಿ ರಕ್ತದೊತ್ತಡ, ಹಿಮೋಗ್ಲೋಬಿನ್ ಮಟ್ಟದಲ್ಲಿ ಕಂಡು ಬರುವ ಏರುಪೇರು, ಹೃದಯದಬಡಿತದ ಕಾರ್ಯಚಟುವಟಿಕೆ, ಆಮ್ಲಜನಕ ಶುದ್ಧತ್ವ, ಉಸಿರಾಟದ ಪ್ರಕ್ರಿಯೆ, ಒತ್ತಡದ ಮಟ್ಟ, ಕೊಲೆಸ್ಟ್ರಾಲ್ ಮಟ್ಟ, ಹೃದಯ ಬಡಿತದ ಕಾರ್ಯಸಾಧ್ಯತೆ, ಪ್ಯಾರಾಸಿಂಪಥೆಟಿಕ್ ಚಟುವ ಟಿಕೆಯ ಬಗ್ಗೆ ಮಾಹಿತಿಯನ್ನು ಹಂಚಿಕೊಳ್ಳುತ್ತದೆ.

### ಇದು ಹೇಗೆ ಕಾರ್ಯ ನಿರ್ವಹಿಸುತ್ತದೆ?


**ಈ ಉಪಕರಣದ ತಂತ್ರಜ್ಞಾನವನ್ನು ಫೋಟೋಪ್ಲೆಥಿಸ್ಮೋಗ್ರಫಿ ಎಂದು ಕರೆಯಲಾಗುತ್ತದೆ. ನೀವು ಉತ್ತಮ ಬೆಳಕಿನಲ್ಲಿ ನಿಮ್ಮ ಮುಖವನ್ನು ಸ್ಕ್ಯಾನ್ ಮಾಡಿದಾಗ, ಈ ಅಪ್ಲಿಕೇಶನ್ ಫೋನ್‌ನ ಕ್ಯಾಮೆರಾದಿಂದ ಪ್ರತಿಫಲಿತ ಬೆಳಕನ್ನು ಸೆರೆಹಿಡಿಯುತ್ತದೆ. ನಂತರ ಅಲ್ಗಾರಿದಮ್ ಸಹಾಯದಿಂದ, ಇದು ಹೃದಯ ಬಡಿತ, ಉಸಿರಾಟ ಮತ್ತು ರಕ್ತದ ಹರಿವಿಗೆ ಸಂಬಂಧಿಸಿದ ಸಂಕೇತಗಳನ್ನು ಓದುವ ಮೂಲಕ ಆರೋಗ್ಯ ವರದಿಯನ್ನು ಸಿದ್ಧಪಡಿಸುತ್ತದೆ.**



**ರಕ್ತ ಪರೀಕ್ಷಾ ಸೌಲಭ್ಯಗಳು ಇಲ್ಲದ ಕಡೆಗಳಲ್ಲಿ ಉಪಯೋಗವಾಗಲಿದೆ:** ಭಾರತದಂತಹ ಅನೇಕ ಪ್ರದೇಶಗಳಲ್ಲಿ ರಕ್ತ ಪರೀಕ್ಷಾ ಸೌಲಭ್ಯಗಳು ಅಥವಾ ಪ್ರಯೋಗಾಲಯಗಳು ಇಲ್ಲದ ದೇಶದಲ್ಲಿ, ಈ ತಂತ್ರಜ್ಞಾನವು ಒಂದು ವರದಾನವೆಂದು ಸಾಬೀತುಪಡಿಸಬಹುದು. ಮಹಾರಾಷ್ಟ್ರದ ನಂತರ ಬುಡಕಟ್ಟು ಪ್ರದೇಶಗಳಲ್ಲಿ ಇದನ್ನು ಜಾರಿಗೆ ತರಲು ತಜ್ಞರು ಈ ಬಗ್ಗೆ ಆಲೋಚನೆ ಮಾಡುತ್ತಾ ಇದ್ದಾರೆ. ಮುಂಬರುವ ಸಮಯದಲ್ಲಿ, ಇದನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಶಾಲೆಗಳು ಮತ್ತು RBSK, RKSK ಮುಂತಾದ ಸರ್ಕಾರಿ ಆರೋಗ್ಯ ಕಾರ್ಯಕ್ರಮಗಳಿಗೆ ಲಿಂಕ್ ಮಾಡಬಹುದು.

# ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ವಿಶೇಷ ಪೂಜೆ

• **ಉದಯವಾಹಿನಿ, ಬೆಂಗಳೂರು**



ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್ ಕೆ ವಾದೀಂದ್ರಾಚಾರ್ ಅವರ ನೇತೃತ್ವದಲ್ಲಿ ಜೂನ್ 26, ಗುರುವಾರ ಬೆಳಗ್ಗೆ ರಾಯರಿಗೆ ಪಂಚಾಮೃತ ಅಭಿಷೇಕ, ಕನಕಾಭಿಷೇಕ, ವಿಶೇಷ ಅಲಂಕಾರ, ಮಹಾಮಂಗಳಾರತಿ ಹಾಗೂ ಅನ್ನದಾನ ಸೇವೆ ಕಾರ್ಯಕ್ರಮಗಳು ನಡೆದವು. ಸಂಜೆಯ ಕಾರ್ಯಕ್ರಮದಲ್ಲಿ ರಥೋತ್ಸವ, ಗಜವಾಹನೋತ್ಸವ ಅಷ್ಟಾವಧಾನ, ತೊಟ್ಟಿಲು ಪೂಜೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದ ಅಂಗವಾಗಿ ವಿದುಷಿ ಶ್ರೀಮತಿ ಕಮಲಾ ಪ್ರಾಣೇಶ್ ಮತ್ತು ಸಂಗಡಿಗರಿಂದ ಗಾಯನ ಸೇವೆಗಳು ಜರುಗಿದವು ಎಂದು ಶ್ರೀ ನಂದಕಿಶೋರ್ ಆಚಾರ್ ಅವರು ತಿಳಿಸಿದ್ದಾರೆ

# ವಿಟಿಲಿಗೋ ಸಮಸ್ಯೆಯನ್ನು ಈ ಮನೆಮದ್ದಿನಿಂದ ನಿವಾರಿಸಬಹುದಾ?



ನೀವು ಕೆಲವರ ಕೈಗಳಲ್ಲಿ ಮುಖದಲ್ಲಿ ಗಮನಿಸಿರಬಹುದು. ಬಿಳಿ ಮಚ್ಚೆ ರೀತಿಯಲ್ಲಿ ಸಿಪ್ಪೆ ಸುಲಿದಿರುವ ರೀತಿಯಲ್ಲಿ ಕಾಣಿಸುತ್ತದೆ. ಇದನ್ನು ವಿಟಿಲಿಗೋ ಸಮಸ್ಯೆ ಎಂದು ಕರೆಯುತ್ತಾರೆ. ಕ್ರಮೇಣ ಇದು ಇಡೀ ದೇಹವನ್ನು ಆವರಿಸಲಾರಂಭಿಸುತ್ತದೆ. ಈ ಸಮಸ್ಯೆಯಲ್ಲಿ ಚರ್ಮದ ಬಣ್ಣ ಮಸುಕಾಗಿ ಕ್ರಮೇಣ ಚರ್ಮ ಹೋಗಿ ಬಿಳಿ ಬಣ್ಣ ಕಾಣಿಸಲಾರಂಭಿಸುತ್ತದೆ. ಈ ಸಮಸ್ಯೆಯನ್ನು ಈ ಕೆಲವೊಂದು ಮನೆಮದ್ದಿನಿಂದ ನಿವಾರಿಸಲು ಸಾಧ್ಯ.

**ಮನೆಮದ್ದಿನಿಂದ ಪರಿಹಾರ:** ಹಲವಾರು ಆರೋಗ್ಯ ಸಮಸ್ಯೆಗಳಿಗೆ ಮನೆಮದ್ದಿನಿಂದ ಪರಿಹಾರ ಪಡೆಯಲು ಸಾಧ್ಯ. ನಮ್ಮ ಮನೆಯಲ್ಲೇ ಇರುವ ಕೆಲವೊಂದು ಸಾಮಾಗ್ರಿಗಳು ವಿಟಿಲಿಗೋವನ್ನು ನಿವಾರಿಸಲು ಸಹಾಯ ಮಾಡುತ್ತದೆ ಎನ್ನಲಾಗುತ್ತದೆ ಅಂತಹ ಮನೆಮದ್ದು ಯಾವುವು ತಿಳಿಯೋಣ.

**ಬೇವು ಮತ್ತು ತುಳಸಿ ರಸ:** ಬೇವು ಮತ್ತು ತುಳಸಿ ಆಯುರ್ವೇದಿಕ್ ಗುಣಗಳನ್ನು ಹೊಂದಿದ್ದು, ಚರ್ಮಕ್ಕೆ ಪ್ರಯೋಜನಕಾರಿ ಎಂದು ಪರಿಗಣಿಸಲಾಗುತ್ತದೆ. ಅವು ಬ್ಯಾಕ್ಟೀರಿಯಾ ವಿರೋಧಿ ಮತ್ತು ಶಿಲೀಂಧ್ರನಾಶಕ ಗುಣಗಳನ್ನು ಹೊಂದಿದ್ದು ಚರ್ಮದ ಸಮಸ್ಯೆಗಳ ವಿರುದ್ಧ ಹೋರಾಡಲು ಸಹಾಯ ಮಾಡುತ್ತವೆ. ಬೇವು ಮತ್ತು ತುಳಸಿ ಎಲೆಗಳನ್ನು ಪುಡಿಮಾಡಿ ಅದರ ರಸವನ್ನು ತೆಗೆದು ವಿಟಿಲಿಯೋ ಇರುವ ಪ್ರದೇಶಕ್ಕೆ ನಿಯಮಿತವಾಗಿ ಹಚ್ಚುತ್ತಿರಿ.

**ತೆಂಗಿನ ಎಣ್ಣೆ:** ತೆಂಗಿನ ಎಣ್ಣೆ ಚರ್ಮವನ್ನು ತೇವಗೊಳಿಸಲು ಸಹಾಯ ಮಾಡುತ್ತದೆ ಮತ್ತು ಮೆಲನಿನ್ ಅನ್ನು ಉತ್ಪಾದಿಸುತ್ತದೆ, ಇದು ಚರ್ಮದ ನೈಸರ್ಗಿಕ ಬಣ್ಣವನ್ನು ಕಾಪಾಡಿಕೊಳ್ಳಲು, ವರ್ಣದ್ರವ್ಯವನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ. ರಾತ್ರಿ ಮಲಗುವ ಮೊದಲು ಬಿಳಿ ಕಲೆಗಳ ಮೇಲೆ ತೆಂಗಿನ ಎಣ್ಣೆ ಮಸಾಜ್ ಮಾಡುವುದರಿಂದ ಚರ್ಮವು ಕ್ರಮೇಣ ಸಾಮಾನ್ಯವಾಗುತ್ತದೆ.

**ಅರಿಶಿನ, ಸಾಸಿವೆ ಎಣ್ಣೆ:** ಅರಿಶಿನ, ಸಾಸಿವೆ ಎಣ್ಣೆಯು ಒಂದು ಹಳೆಯ ಆಯುರ್ವೇದ ಪರಿಹಾರವಾಗಿದ್ದು, ವಿಟಲಿಗೋದ ಆರಂಭಿಕ ಲಕ್ಷಣಗಳನ್ನು ಕಡಿಮೆ ಮಾಡಲು ಉಪಯುಕ್ತವಾಗಿದೆ. ಸಾಸಿವೆ ಎಣ್ಣೆಯೊಂದಿಗೆ ಅರಿಶಿನ ಪುಡಿಯನ್ನು ಸಂಯೋಜಿಸುವುದರಿಂದ ವಿಟಿಲಿಗೋ ಚಿಕಿತ್ಸೆಗೆ ಪ್ರಯೋಜನಕಾರಿಯಾಗಿದೆ. ಸಾಸಿವೆ ಎಣ್ಣೆಯು ಚರ್ಮದ ಆರೋಗ್ಯವನ್ನು ಬೆಂಬಲಿಸುವ ಅಗತ್ಯವಾದ ಕೊಬ್ಬಿನಾಮ್ಲಗಳು, ಖನಿಜಗಳು, ವಿಟಮಿನ್‌ಗಳಲ್ಲಿ ಸಮೃದ್ಧವಾಗಿದೆ. ಅರಿಶಿನದೊಂದಿಗೆ ಬೆರೆಸಿದಾಗ, ಇದು ಪೀಡಿತ ಪ್ರದೇಶಗಳಿಗೆ ಸ್ಥಳೀಯವಾಗಿ ಅನ್ವಯಿಸಬಹುದಾದ ಪೇಸ್ಟ್ ಅನ್ನು ರೂಪಿಸುತ್ತದೆ. ಅರಿಶಿನ ಮತ್ತು ಸಾಸಿವೆ ಎಣ್ಣೆಯ ನಡುವಿನ ಸಿನರ್ಜಿ ಚರ್ಮದ ಬಣ್ಣಕ್ಕೆ ಕಾರಣವಾದ ವರ್ಣದ್ರವ್ಯವಾದ ಮೆಲನಿನ್ ಉತ್ಪಾದನೆಯನ್ನು ಉತ್ತೇಜಿಸುತ್ತದೆ ಎನ್ನಲಾಗುತ್ತದೆ. 2 ಟೀ ಚಮಚ ಅರಿಶಿನ ಪುಡಿಯನ್ನು ಸುಮಾರು 250 ಮಿಲಿ ಸಾಸಿವೆ ಎಣ್ಣೆಯೊಂದಿಗೆ ಬೆರೆಸಿ ಪೇಸ್ಟ್ ಮಾಡಿ. ಇದನ್ನು ದಿನಕ್ಕೆ ಎರಡು ಬಾರಿ ಬಿಳಿ ಕಲೆಗಳ ಮೇಲೆ ಹಚ್ಚಿ.

**ಆಪಲ್ ಸೈಡರ್ ವಿನೆಗರ್:** ಆಪಲ್ ಸೈಡರ್ ವಿನೆಗರ್ ಚರ್ಮದ pH ಸಮತೋಲನವನ್ನು ಕಾಯ್ದುಕೊಳ್ಳುತ್ತದೆ ಮತ್ತು ಬ್ಯಾಕ್ಟೀರಿಯಾವನ್ನು ತೆಗೆದುಹಾಕುತ್ತದೆ. ಆಪಲ್ ಸೈಡರ್ ವಿನೆಗರ್ ಅನ್ನು ನೀರಿನಲ್ಲಿ ಬೆರೆಸಿ ಪೀಡಿತ ಪ್ರದೇಶದ ಮೇಲೆ ಹಚ್ಚಿ ಅಥವಾ ನೀವು ಸ್ನಾನ ಮಾಡುವ ನೀರಿಗೆ ಆಪಲ್ ಸೈಡರ್ ವಿನೆಗರ್‌ನ ಕೆಲವು ಹನಿಗಳನ್ನು ಮಿಕ್ಸ್ ಮಾಡಿ ಸ್ನಾನ ಮಾಡಿ.

# ಚಿನ್ನ, ಬೆಳ್ಳಿ ಪದಕ ಗೆದ್ದ ವಿದ್ಯಾರ್ಥಿ ಶುಭ್ ಚೌಧರಿ




• **ಉದಯವಾಹಿನಿ, ಬೆಂಗಳೂರು**

ಪ್ರತಿಷ್ಠಿತ ಕರ್ನಾಟಕ ರಾಜ್ಯ ಕುದುರೆ ಸವಾರಿ ಸ್ಪರ್ಧೆಯಲ್ಲಿ ಅಸಾಧಾರಣ ಪ್ರತಿಭೆಯನ್ನು ಪ್ರದರ್ಶಿಸಿದ 11 ನೇ ತರಗತಿಯ ವಿದ್ಯಾರ್ಥಿ ಶುಭ್ ಚೌಧರಿಯ ಗಮನಾರ್ಹ ಸಾಧನೆಯನ್ನು ವೈಟ್‌ಫೀಲ್ಡ್‌ನ ಗ್ಲೋಬಲ್ ಇಂಡಿಯನ್ ಇಂಟರ್‌ನ್ಯಾಷನಲ್ ಸ್ಕೂಲ್ (ಜಿಐಐಎಸ್) ಹೆಮ್ಮೆಯಿಂದ ಆಚರಿಸುತ್ತದೆ. ಶುಭ್ ಅವರ ಅದ್ಭುತ ಪ್ರದರ್ಶನವು ಅವರಿಗೆ ಒಂದು ಚಿನ್ನ ಮತ್ತು ಎರಡು ಬೆಳ್ಳಿ ಪದಕಗಳನ್ನು ಗಳಿಸಿಕೊಟ್ಟಿತು, ಇದು ಅವರ ಕ್ರೀಡಾ ಪ್ರಯಾಣದಲ್ಲಿ ಮಹತ್ವದ ಮೈಲಿಗಲ್ಲಾಗಿದೆ.

20 ಕ್ಕೂ ಹೆಚ್ಚು ಕುದುರೆ ಸವಾರಿ ಕ್ಲಬ್‌ಗಳಿಂದ ಸುಮಾರು 70 ಸ್ಪರ್ಧಿಗಳ ವಿರುದ್ಧ ಸ್ಪರ್ಧಿಸಿದ ಶುಭ್ ಅವರ ಅತ್ಯುತ್ತಮ ಪ್ರದರ್ಶನವು ಅವರ ಕ್ರೀಡಾ ಶ್ರೇಷ್ಠತೆ ಮತ್ತು ಸಮಗ್ರ ಪ್ರತಿಭೆಯನ್ನು ಪೋಷಿಸುವಲ್ಲಿ ಜಿಐಐಎಸ್ ವೈಟ್‌ಫೀಲ್ಡ್‌ನ ಹೆಚ್ಚುತ್ತಿರುವ ಪ್ರಾಮುಖ್ಯತೆಯನ್ನು ಎತ್ತಿ ತೋರಿಸುತ್ತದೆ.

ವೈಟ್‌ಫೀಲ್ಡ್‌ನ ಗ್ಲೋಬಲ್ ಇಂಡಿಯನ್ ಇಂಟರ್‌ನ್ಯಾಷನಲ್ ಸ್ಕೂಲ್‌ನ ಪ್ರಾಂಶುಪಾಲ ಮನೋಜ್ ಕುಮಾರ್ ತಿವಾರಿ ಈ ಸಾಧನೆಯ ಕುರಿತು ಪ್ರತಿಕ್ರಿಯಿಸುತ್ತಾ, ಅಚಲ ಗಮನ ಮತ್ತು ಕುದುರೆ ಸವಾರಿ ಕ್ರೀಡೆಯ ಬಗ್ಗೆ ಅಚಲ ಉತ್ಸಾಹದಿಂದ, ಶುಭ್ ಅವರ ಯಶಸ್ಸು ಅವರ ಸಮರ್ಪಣೆ, ಶಿಸ್ತು ಮತ್ತು ಸಹಜ ಪ್ರತಿಭೆಗೆ ಸಾಕ್ಷಿಯಾಗಿದೆ. ಅವರ ಸಾಧನೆಗಳು ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ಮಿಂಚುವುದಲ್ಲದೆ, ಜಿಐಐಎಸ್ ವೈಟ್‌ಫೀಲ್ಡ್ ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿ ಬೆಳೆಸಲು ಶ್ರಮಿಸುವ ಸರ್ವತೋಮುಖ ಶ್ರೇಷ್ಠತೆಯ ನೀತಿಯನ್ನು ಪ್ರತಿಧ್ವನಿಸುತ್ತದೆ ಎಂದು ಹೇಳಿದರು, ಅವರ ಸಾಧನೆಗಳು ಇಡೀ ಜಿಐಐಎಸ್ ಸಮುದಾಯಕ್ಕೆ ಅಪಾರ ಹೆಮ್ಮೆಯ ಮೂಲವಾಗಿದೆ. ಈ ಗೆಲುವು ಈಗಾಗಲೇ ಶ್ರೇಷ್ಠ ಪ್ರಯಾಣಕ್ಕೆ ಮತ್ತಷ್ಟು ಮೆರುಗು ನೀಡುತ್ತದೆ. ಇದಕ್ಕೂ ಮೊದಲು, 2024 ರಲ್ಲಿ ದೆಹಲಿಯಲ್ಲಿ ನಡೆದ ರಾಷ್ಟ್ರೀಯ ಕುದುರೆ ಸವಾರಿ ಚಾಂಪಿಯನ್‌ಶಿಪ್‌ನಲ್ಲಿ, ಶುಭ್ ಡ್ರೆಸ್ಸೇಜ್ ಇಂಡಿವಿಜುಯಲ್, ಡ್ರೆಸ್ಸೇಜ್ ಟೀಮ್ ಮತ್ತು ಶೋ ಜಂಪಿಂಗ್ ಟೀಮ್‌ನಲ್ಲಿ ಮೂರು ಚಿನ್ನದ ಪದಕಗಳನ್ನು ತಂದರು.

**ತನ್ನ ಗೆಲುವಿನ ಬಗ್ಗೆ ಮಾತನಾಡಿದ ಶುಭ್ ಚೌಧರಿ, ಕುದುರೆ ಸವಾರಿ ಕ್ರೀಡೆಯು ನನಗೆ ಸ್ಥಿತಿಸ್ಥಾಪಕತ್ವ, ತಾಳ್ಮೆ ಮತ್ತು ಸವಾರ ಮತ್ತು ಕುದುರೆಯ ನಡುವಿನ ಬಾಂಧವ್ಯದ ಮಹತ್ವವನ್ನು ಕಲಿಸಿದೆ. ರಾಜ್ಯ ಮಟ್ಟದಲ್ಲಿ ಗೆಲ್ಲುವುದು ಅದ್ಭುತ ಭಾವನೆ, ಮತ್ತು ನನ್ನ ತರಬೇತುದಾರರು, ನನ್ನ ಕುಟುಂಬ ಮತ್ತು ನನ್ನ ಶಾಲೆಗೆ ನನ್ನ ಉತ್ಸಾಹವನ್ನು ಯಾವಾಗಲೂ ಬೆಂಬಲಿಸಿದ್ದಕ್ಕಾಗಿ ಮತ್ತು ಉತ್ತಮವಾಗಿ ಮಾಡಲು ನನ್ನನ್ನು ಪ್ರೇರೇಪಿಸಿದ್ದಕ್ಕಾಗಿ ನಾನು ಕೃತಜ್ಞನಾಗಿದ್ದೇನೆ ಎಂದು ಹೇಳಿದರು.**

# ಟೈಪ್ 2 ಮಧುಮೇಹಕ್ಕೆ ಜ್ಯೂಸ್

ಟೈಪ್ 2 ಮಧುಮೇಹ ಇರುವವರು ತಮ್ಮ ಶುಗರ್ ಲೆವೆಲ್‌ನ್ನು ಕಂಟ್ರೋಲ್‌ನಲ್ಲಿಡಲು ಬರೀ ಹಾಗಲಕಾಯಿ ಜ್ಯೂಸ್ ಮಾತ್ರವಲ್ಲ, ಈ ಜ್ಯೂಸ್ ಕೂಡಾ ಕುಡಿಯೋದು ಒಳ್ಳೆಯದು. ಮಧುಮೇಹ ರೋಗಿಗಳು ಹಣ್ಣಿನ ರಸವನ್ನು ಕುಡಿಯಬಾರದು ಎನ್ನುವುದನ್ನು ನೀವು ಕೇಳಿರಬೇಕು. ಯಾಕೆಂದರೆ ಜ್ಯೂಸ್ ರೋಗಿಗಳ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಬಹಳ ಬೇಗನೆ ಹೆಚ್ಚಿಸುವುದಲ್ಲದೆ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಹೆಚ್ಚಿನ ಮಧುಮೇಹ ರೋಗಿಗಳು ವಿಶೇಷವಾಗಿ ಟೈಪ್ 2 ಮಧುಮೇಹ ಹೊಂದಿರುವ ರೋಗಿಗಳು ಯಾವುದೇ ರೀತಿಯ ಹಣ್ಣಿನ ರಸವನ್ನು ಕುಡಿಯುವುದನ್ನು ತಪ್ಪಿಸಬೇಕು. ಆದರೆ, ಟೈಪ್ 2 ಮಧುಮೇಹ ರೋಗಿಗಳು ಕುಡಿಯಬಹುದಾದ ಕೆಲವೊಂದು ಜ್ಯೂಸ್‌ಗಳನ್ನು ನಾವಿಲ್ಲಿ ತಿಳಿಸಿದ್ದೇವೆ. ಇದು ಅವರ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಸಹ ಸಮತೋಲನಗೊಳಿಸಬಲು ಸಹಕಾರಿಯಾಗಿದೆ.

**ಹಾಗಲಕಾಯಿ ಜ್ಯೂಸ್:** ಟೈಪ್ 2 ಮಧುಮೇಹ ರೋಗಿಗಳು ಖಂಡಿತವಾಗಿಯೂ ತಮ್ಮ ಆಹಾರದಲ್ಲಿ ಹಾಗಲಕಾಯಿಯನ್ನು ಸೇರಿಸಿಕೊಳ್ಳಬೇಕು.

ಹಾಗಲಕಾಯಿ ಸಂಕೋಚಕ ರುಚಿಯನ್ನು ಹೊಂದಿರುತ್ತದೆ ಹಾಗಾಗಿ ಬಹುತೇಕರು ಇದನ್ನು ಇಷ್ಟಪಡೋದಿಲ್ಲ. ಆದರೆ ಹಾಗಲಕಾಯಿ ಜ್ಯೂಸ್ ಸೇವನೆಯು ಟೈಪ್ 2 ಮಧುಮೇಹ ರೋಗಿಗಳಿಗೆ ತುಂಬಾ ಒಳ್ಳೆಯದು. ಇದು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಇದು ವಿಟಮಿನ್-ಎ ಮತ್ತು ವಿಟಮಿನ್-ಸಿ ನಂತಹ ಅನೇಕ ಪೋಷಕಾಂಶಗಳನ್ನು ಹೊಂದಿರುತ್ತದೆ, ಇದು ನಮ್ಮ ಒಟ್ಟಾರೆ ಆರೋಗ್ಯಕ್ಕೆ ಪ್ರಯೋಜನಕಾರಿಯಾಗಿದೆ.



**ನೆಲ್ಲಿಕಾಯಿ ರಸವನ್ನು ಕುಡಿಯಿರಿ:** ನೆಲ್ಲಿಕಾಯಿ ಜ್ಯೂಸ್ ಟೈಪ್ 2 ಮಧುಮೇಹ ರೋಗಿಗಳಿಗೆ ಪ್ರಯೋಜನಕಾರಿಯಾಗಿದೆ. ಇದು ವಿಟಮಿನ್ ಸಿ ಯ ಉತ್ತಮ ಮೂಲವಾಗಿದ್ದು ದೇಹದ ಇನ್ಸುಲಿನ್ ಸೂಕ್ಷ್ಮತೆಯನ್ನು ಉತ್ತೇಜಿಸಲು ಸಹಾಯ ಮಾಡುತ್ತದೆ. ಟೈಪ್ 2 ಮಧುಮೇಹ ರೋಗಿಗಳಲ್ಲಿ ಇನ್ಸುಲಿನ್ ಸಂಬಂಧಿತ ಸಮಸ್ಯೆಗಳು ಇರುತ್ತವೆ. ಇದನ್ನು ಹೆಚ್ಚಿಸಲು ನೀವು ನೆಲ್ಲಿಕಾಯಿ ರಸವನ್ನು ನಿಮ್ಮ ಡಯೆಟ್‌ನಲ್ಲಿ ಸೇರಿಸಿಕೊಳ್ಳಬಹುದು.

**ಸೌತೆಕಾಯಿ ರಸ:** ಟೈಪ್ 2 ಮಧುಮೇಹ ರೋಗಿಗಳು ತಮ್ಮ ಆಹಾರದಲ್ಲಿ ಸೌತೆಕಾಯಿ ರಸವನ್ನು ಸೇರಿಸಿಕೊಳ್ಳಬೇಕು. ಇದು ದೇಹವನ್ನು ಹೈಡ್ರೇಟ್ ಆಗಿಡುವುದಲ್ಲದೆ ರಕ್ತದಲ್ಲಿನ ಸಕ್ಕರೆಯನ್ನು ನಿರ್ವಹಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಸೌತೆಕಾಯಿ ರಸವು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿದೆ, ಇದು ನಮ್ಮ ದೇಹದ ಆಕ್ಸಿಡೇಟಿವ್ ಒತ್ತಡವನ್ನು ಕಡಿಮೆ ಮಾಡುತ್ತದೆ. ಹೆಚ್ಚಿದ ಆಕ್ಸಿಡೇಟಿವ್ ಒತ್ತಡವು ಜೀವಕೋಶಗಳನ್ನು ಹಾನಿಗೊಳಿಸುತ್ತದೆ ಮತ್ತು ಇನ್ಸುಲಿನ್ ಪ್ರತಿರೋಧವನ್ನು ಇನ್ನಷ್ಟು ಹದಗೆಡಿಸುತ್ತದೆ. ಇದು ಟೈಪ್ 2 ಮಧುಮೇಹ ರೋಗಿಗಳಿಗೆ ಪ್ರಮುಖ ಸಮಸ್ಯೆಯಾಗಬಹುದು. ಆದ್ದರಿಂದ ಆಕ್ಸಿಡೇಟಿವ್ ಒತ್ತಡವನ್ನು ಕಡಿಮೆ ಮಾಡಲು ಸೌತೆಕಾಯಿ ರಸ ಕುಡಿಯೋದು ಒಳ್ಳೆಯದು.

**ಬೂದುಗುಂಬಳಕಾಯಿ ರಸವನ್ನು ಕುಡಿಯಿರಿ:** ಬೂದುಗುಂಬಳಕಾಯಿ ಒಂದು ಆರೋಗ್ಯಕರ ತರಕಾರಿಯಾಗಿದ್ದು, ಜನರು ಇದನ್ನು ಖಂಡಿತವಾಗಿಯೂ ತಮ್ಮ ಆಹಾರದಲ್ಲಿ ಸೇರಿಸಿಕೊಳ್ಳಬೇಕು. ಇದರ ರಸವನ್ನು ಸೇವಿಸುವುದು ಟೈಪ್ 2 ಮಧುಮೇಹ ರೋಗಿಗಳಿಗೆ ಪ್ರಯೋಜನಕಾರಿಯಾಗಿದೆ. ಈ ತರಕಾರಿಯು ಸಾಕಷ್ಟು ನೀರಿನಿಂದ ಕೂಡಿದ್ದು, ಪೋಷಕಾಂಶ ಭರಿತವಾಗಿದೆ. ಇದು ಉತ್ಕರ್ಷಣ ನಿರೋಧಕಗಳ ಉತ್ತಮ ಮೂಲವಾಗಿದೆ. ಇದರಲ್ಲಿ ಫೈಬರ್, ಕಾರ್ಬೋಹೈಡ್ರೇಟ್‌ಗಳು, ಖನಿಜಗಳು ಮತ್ತು ವಿಟಮಿನ್‌ಗಳಿವೆ. ಬೂದುಗುಂಬಳಕಾಯಿ ಜ್ಯೂಸ್ ಕುಡಿಯುವುದು ಜೀವಕೋಶಗಳು ಹಾನಿಯಾಗದಂತೆ ತಡೆಯಲು ಸಹಾಯ ಮಾಡುತ್ತದೆ.



### ಟೊಮೆಟೊ ರಸ

**ಟೊಮೆಟೋ ರಸವನ್ನು ಟೈಪ್ 2 ಮಧುಮೇಹ ರೋಗಿಗಳಿಗೆ ಪ್ರಯೋಜನಕಾರಿ ಎಂದು ಪರಿಗಣಿಸಲಾಗುತ್ತದೆ. ಇದು ಲೈಕೋಪೀನ್ ಎಂಬ ಪೋಷಕಾಂಶದಿಂದ ಸಮೃದ್ಧವಾಗಿದೆ. ಇದು ಮಧುಮೇಹಕ್ಕೆ ಸಂಬಂಧಿಸಿದ ಆಕ್ಸಿಡೇಟಿವ್ ಒತ್ತಡದ ಮಟ್ಟವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ, ದೇಹದಲ್ಲಿ ಉರಿಯೂತವನ್ನು ಕಡಿಮೆ ಮಾಡುತ್ತದೆ.ಈ ರೀತಿಯಾಗಿ, ಟೊಮೆಟೊ ರಸವನ್ನು ಕುಡಿಯುವುದರಿಂದ ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸುತ್ತದೆ. ಇದು ಕಡಿಮೆ ಗ್ಲೈಸೆಮಿಕ್ ಸೂಚಿಯನ್ನು ಹೊಂದಿದೆ, ಇದು ಟೈಪ್ 2 ಮಧುಮೇಹ ರೋಗಿಗಳಿಗೆ ಉತ್ತಮ ಆಯ್ಕೆಯಾಗಿದೆ.**

## ಮಳೆಗಾಗಿ ಗುರ್ಜಿ ಪೂಜೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕುಕನೂರು

ಪಟ್ಟಣದ ಜವಳದ ಕಾಲೋನಿಯಲ್ಲಿ ಮಳೆಗಾಗಿ ಗುರ್ಜಿ ಪೂಜೆ ಮಾಡಿ ಪ್ರಾರ್ಥಿಸಲಾಯಿತು. ಈ ಬಾರಿ ಮುಂಗಾರು ಮಳೆ ಕೈಕೊಟ್ಟಿದ್ದರಿಂದ ತಾಲ್ಲೂಕಿನ ರೈತರು ಪರಿತಪಿಸುವಂತಾಗಿದೆ. ಬೇಗನೇ ಬಾರೋ ಮಳೆರಾಯ ಎಂದು ಹಲವು ಆಚರಣೆಗಳ ಮೂಲಕ ರೈತರು ಪೂಜೆ ಸಲ್ಲಿಸುತ್ತಿದ್ದಾರೆ. ಅದರಂತೆ, ಪಟ್ಟಣದ ಜವಳದ ಕಾಲೋನಿಯಲ್ಲಿ ಮಹಿಳೆಯರು ಗುರ್ಜಿ ಪೂಜಿಸಿ ಮಳೆರಾಯನನ್ನು ಆಹ್ವಾನಿಸಿದರು.

ಜೋಳದ ರೊಟ್ಟಿ ಬೇಯಿಸುವ ಹಂಚಿನ ಮೇಲೆ ಸಗಣಿಯಿಂದ ತಯಾರಿಸಿದ ಗುರ್ಜಿಯನ್ನು ಒಬ್ಬ ಯುವಕನ ತಲೆ ಮೇಲೆ ಇಟ್ಟು ಮನೆ ಮನೆಗೆ ಹೋಗಿ 'ಗುರ್ಜಿ ಗುರ್ಜಿ ಎಲ್ಲಾಡಿ ಬಂದೆ. ಹಳ್ಳಕೊಳ್ಳ ಸುತ್ತಾಡಿ ಬಂದೆ. ಕಾರ ಮಳೆಯೋ ಕಪ್ಪತ ಮಳೆಯೋ, ಸುರಿ ಸುರಿ ಸುರಿಯೋ ಮಳೆರಾಯ, ಬಣ್ಣ ಕೊಡ್ತೀನಿ ಬಾರಲೇ ಮಳೆಯೇ, ಸುಣ್ಣ ಕೊಡ್ತೀನಿ ಸುರಿಯಲೇ ಮಳೆಯೇ' ಎಂದು ಮಹಿಳೆಯರು ಹಾಡುತ್ತಿರುವ ದೃಶ್ಯ ಕಂಡುಬಂತು. ಶಿವಪುತ್ರಪ್ಪ ಕಲಾದಗಿ, ರವಿ ಮಡಿವಾಳರ, ಜಯಲಕ್ಷ್ಮಿ ಬಿನ್ನಾಳ, ರಜಿಯಾ ಬೇಗಂ, ಮಂಜುಳಾ, ಕವಿತಾ, ಶ್ಯಾಂತವ್ವ ಇದ್ದರು.

● ವಸತಿ ಯೋಜನೆಯ ಭ್ರಷ್ಟಾಚಾರದ ಕರ್ಮಕಾಂಡ ಹಾವೇರಿಯಲ್ಲೂ ಬಯಲು

# ಪತ್ನಿಯ ಮಾಂಗಲ್ಯ ಸರ ಒತ್ತೆ ಇಟ್ಟು ಲಂಚ ಕೊಟ್ರೂ ಸಿಗದ ವಸತಿ ಬಿಲ್

• ಉದಯವಾಹಿನಿ, ಹಾವೇರಿ

ವಸತಿ ಇಲಾಖೆಯಲ್ಲಿ ಲಂಚ, ಭ್ರಷ್ಟಾಚಾರ ಗುಲ್ಲೆದ್ದಿರುವ ಸಂದರ್ಭದಲ್ಲೇ, ಹಾವೇರಿಯಲ್ಲಿ ಕರುಳುಹಿಂಡುವಂತಹ ಘಟನೆ ಬೆಳಕಿಗೆ ಬಂದಿದೆ.

ನೆರೆ ಸಂತ್ರಸ್ತರ ವಸತಿ ಯೋಜನೆಯಡಿ ಬಿಲ್ ಮಂಜೂರಾತಿಗೆ ಎಂದು, ಬಡತನದಲ್ಲಿ ಬೆಂದುಹೋಗಿರುವ ಕುಟುಂಬದ ಸಂತ್ರಸ್ತರೊಬ್ಬರು ಪತ್ನಿಯ ಮಾಂಗಲ್ಯ ಸರ ಒತ್ತೆ ಇಟ್ಟು ಸರ್ಕಾರಿ ನೌಕರನಿಗೆ 20 ಸಾವಿರ ರೂ. ಲಂಚ ನೀಡಿರುವ ಆರೋಪ ಕೇಳಿ ಬಂದಿದೆ. ಇಷ್ಟಾದರೂ ಅವರ ಬಿಲ್ ಮಾತ್ರ ಮಂಜೂರಾತಿ ಮಾಡಿ ಕೊಟ್ಟಿಲ್ಲ.

ತಾಲ್ಲೂಕಿನ ಬೆಳವಗಿ ಗ್ರಾಮದ ಮಹಾಂತೇಶ ಬಡಿಗೇರ ಎಂಬುವವರ ಮನೆ ಅತಿವೃಷ್ಟಿಯಿಂದ ಕುಸಿದು ಬಿದ್ದಿದ್ದರಿಂದ ಮನೆ ನಿರ್ಮಾಣಕ್ಕೆ ಅರ್ಜಿ ಸಲ್ಲಿಸಿದ್ದರು. ಹಣ ಮಂಜೂರು ಮಾಡುವಂತೆ ಹಾವೇರಿ ತಹಶೀಲ್ದಾರ್ ಕಚೇರಿಯ ನೌಕರನನ್ನು ಸಂಪರ್ಕಿಸಿದ್ದರು. ಅಲ್ಲಿನ ನೌಕರ 20 ಸಾವಿರ ರೂ.ಗೆ ಬೇಡಿಕೆ ಇಟ್ಟಿದ್ದು, ನೌಕರನಿಗೆ 20 ಸಾವಿರ ರೂ. ಲಂಚ ನೀಡಿದರೂ ಬಿಲ್ ಮಂಜೂರು ಮಾಡಿಲ್ಲ ಎಂದು ಸಂತ್ರಸ್ತ ಮಹಾಂತೇಶ, ತಹಶೀಲ್ದಾರ್ ಬಳಿ ಆರೋಪಿಸಿದ್ದಾರೆ. ಆರೋಪದ ಬಗ್ಗೆ ತನಿಖೆ ನಡೆಸಿ, ಸಾಬೀತಾದರೆ ಕ್ರಮ ಜರುಗಿಸಲಾಗುವುದು ಎಂದು ತಹಶೀಲ್ದಾರ್ ಶರಣಮ್ಮ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

**ಕ್ರಮಕ್ಕೆ ಕೆಆರ್‌ಎಸ್ ಆಗ್ರಹ**

ಸಂತ್ರಸ್ತನ ಜತೆಗೆ ತಹಶೀಲ್ದಾರ್ ಕಚೇರಿಗೆ ತೆರಳಿದ ಕೆಆರ್‌ಎಸ್ ಪಕ್ಷದ ಕಾರ್ಯಕರ್ತರು, ಲಂಚ ಪಡೆದ ಆರೋಪಿ ನೌಕರನನ್ನು ಅಮಾನತು ಮಾಡುವಂತೆ ಆಗ್ರಹಿಸಿದ್ದಾರೆ. ಇತ್ತೀಚೆಗೆ ಕಲಬುರಗಿ ಜಿಲ್ಲೆಯಅಫಜಲ್‌ಪುರ ತಾಲ್ಲೂಕಿನಲ್ಲಿ ರಾಜೀವ್ ಗಾಂಧಿ ವಸತಿ ನಿಗಮದ 200 ಮನೆಗಳನ್ನು ವಿತರಿಸಲು ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಅವರ ಆಪ್ತ ಕಾರ್ಯದರ್ಶಿ ಹಣ ಪಡೆದಿದ್ದಾರೆ ಎಂದು ಆಡಳಿತ ಪಕ್ಷದ ಶಾಸಕ ಬಿ.ಆರ್.ಪಾಟೀಲ್ ಆರೋಪಿಸಿದ್ದರು. ಇದರಂತೆಯೇ ರಾಜ್ಯಾಧ್ಯಂತ ಹಣ ಪಡೆದು ಮನೆ ಮಂಜೂರು ಮಾಡಿದ್ದಾರೆ. ಹಣ ಕೊಡದೆ ಇರುವ ತಾಲ್ಲೂಕುಗಳ ಮನೆಗಳನ್ನು ರದ್ದುಗೊಳಿಸಿದ್ದಾರೆ. ವಸತಿ ಇಲಾಖೆ ಪೂರ್ಣ ಭ್ರಷ್ಟಾಚಾರದಲ್ಲಿ ಮುಳುಗಿದೆ ಎಂಬ ಆರೋಪಗಳು ಸರ್ಕಾರವನ್ನು ತಲ್ಲಣಗೊಳಿಸಿದೆ.

**ಆರೋಪದ ಬಗ್ಗೆ ತನಿಖೆ**

- ಪತ್ನಿಯ ಮಾಂಗಲ್ಯ ಸರ ಒತ್ತೆ ಇಟ್ಟು ಸರ್ಕಾರಿ ನೌಕರನಿಗೆ 20 ಸಾವಿರ ರೂ. ಲಂಚ
- ಇಷ್ಟಾದರೂ ಅವರಿಗೆ ವಸತಿ ಯೋಜನೆಯಡಿ ಬಿಲ್ ಮಾತ್ರ ಮಂಜೂರಾತಿ ಮಾಡಿ ಕೊಟ್ಟಿಲ್ಲ
- ಲಂಚ ಪಡೆದ ಆರೋಪಿ ನೌಕರನನ್ನು ಅಮಾನತು ಮಾಡುವಂತೆ ಕೆ ಆರ್ ಎಸ್ ಆಗ್ರಹಿಸಿದ್ದಾರೆ.

ಬಡವರಿಂದ ಹಣ ಪಡೆದು ಮನೆ ಕೊಡುತ್ತಿಲ್ಲ, ಈ ರೀತಿ ಮಾಡೋದು ಸರಿಯಲ್ಲ ಎಂದು ಸಚಿವ ಜಮೀರ್ ಅಹ್ಮದ್ ಸ್ಪಷ್ಟನೆ ನೀಡಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವ ಭರವಸೆಯನ್ನೂ ಕೊಟ್ಟಿದ್ದಾರೆ. ರಾಜೀವ್ ಗಾಂಧಿ ವಸತಿ ಯೋಜನೆಯಡಿ ಮನೆಗಳನ್ನು ಬಡವರಿಗೆ ಹಂಚಿಕೆಯಾಗಬೇಕಿತ್ತು. ಆದರೆ ದುರ್ಬಲರಿಗೆ ಹಂಚಿಕೆಯಾಗಬೇಕಿದ್ದ ಮನೆಗಳಿಗೆ ಪ್ರತಿ ಮನೆಗೆ 10 ಸಾವಿರ ರೂ. ಪಡೆಯಲಾಗಿದೆ ಎಂಬ ಆಘಾತಕಾರಿ ವಿಷಯವಿರುವ ಆಡಿಯೊ ವೈರಲ್ ಆಗಿದೆ. ಹೀಗಾಗಿ, ಬಿ.ಆರ್. ಪಾಟೀಲ್ ಹಾಗೂ ಸರ್ಫರಾಜ್ ಮಾತನಾಡಿರುವುದರ ಬಗ್ಗೆಯೂ ಸರ್ಕಾರವನ್ನು ಪ್ರತಿಪಕ್ಷಗಳು ತೀವ್ರ ಟೀಕೆಗೆ ಒಳಪಡಿಸಿವೆ.

## ಮಿನಿ ನ್ಯೂಸ್

### ಕಳವು: ಚಿನ್ನಾಭರಣ, ಬೈಕ್ ವಶ

• ಉದಯವಾಹಿನಿ ಹಾರೂಗೇರಿ

ರಾಯಬಾಗ ತಾಲ್ಲೂಕಿನ ಹಾರೂಗೇರಿ ಕ್ರಾಸ್ ಬಳಿ ಕಳ್ಳತನ ಆರೋಪಿಗಳನ್ನು ಬಂಧಿಸಿದ ಪೊಲೀಸರು, ಚಿನ್ನಾಭರಣ ವಶಪಡಿಸಿಕೊಂಡಿದ್ದಾರೆ.

ಸಂಗೀತಾ ಕುಡಚಿ ಎನ್ನುವವರ ಮಿರಜ್ ಕಡೆ ಹೋಗುವಾಗ 3.6 ಲಕ್ಷ ಮೌಲ್ಯದ ತಾಳಿ ಕಳ್ಳತನವಾಗಿತ್ತು. ಪ್ರಕರಣ ದಾಖಲಿಸಿಕೊಂಡ ಪೊಲೀಸರು ಆರೋಪಿಯನ್ನು ಬಂಧಿಸಿ, ಮಾಲು ಜಪ್ತಿ ಪಡೆಸಿಕೊಂಡಿದ್ದಾರೆ. ಹಿಡಕಲ್ ಗ್ರಾಮದ ರುಕ್ಸವ್ವ ಕಾಂಬಳೆ ಎಂಬ ಮಹಿಳೆಗೆ ಬ್ಯಾಂಕ್‌ನಲ್ಲಿ ನಿಮ್ಮ ಹೆಸರಿಗೆ 40 ಸಾವಿರ ಬಂದಿದೆ. ಹಣ ಪಾವತಿಸಿ ಕೊಡುತ್ತೇನೆ ಎಂದು ಕರೆದುಕೊಂಡು ಹೋದ ಆರೋಪಿ ದಾರಿ ಮಧ್ಯದಲ್ಲಿ ಬೈಕ್ ನಿಲ್ಲಿಸಿ, ಮಹಿಳೆ ಕೊರಳಲ್ಲಿದ್ದ ಬೋರಮಾಳ ಸರ ಕಸಿದುಕೊಂಡು ಪರಾರಿಯಾಗಿದ್ದ. ಆರೋಪಿಯನ್ನು ಬಂಧಿಸಿದ ಪೊಲೀಸರು 46.20 ಗ್ರಾಂ. ಸರ ಹಾಗೂ 80 ಸಾವಿರ ನಗದು ವಶಪಡಿಸಿಕೊಂಡಿದ್ದಾರೆ.

## ಹಿಂದೂ-ಮುಸ್ಲಿಮ್ ಭಾವೈಕ್ಯತೆ ಹಬ್ಬ ಮೊಹರಂ ನಿಮಿತ್ತ ಶಾಂತಿ ಸಭೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಅಥಣಿ

ಮೊಹರಂ ಆಚರಣೆ ವೇಳೆ ಜನದಟ್ಟಣೆ ಉಂಟಾಗದಂತೆ ನೋಡಿಕೊಳ್ಳಬೇಕು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ಸೂಕ್ಷ್ಮ ಪ್ರದೇಶಗಳಲ್ಲಿ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಿ ಅನುಮಾನಾಸ್ಪದ ವ್ಯಕ್ತಿಗಳು ಹಾಗೂ ವಾಹನಗಳ ಮೇಲೆ ಸೂಕ್ತ ನಿಗಾ ವಹಿಸಲಾಗುವುದು ಸಮಾಜದಲ್ಲಿ ಶಾಂತಿ ಸುವ್ಯವಸ್ಥೆ ಕೈಗೊಳ್ಳಲು ಇಲಾಖೆಯೊಂದಿಗೆ ನಾಗರಿಕರ ಸಹಕಾರ ಅವಶ್ಯ ಪ್ರತಿಯೊಂದಕ್ಕೂ ಕಾನೂನು ಇದೆ, ಯಾರು ಸಹ ಕಾನೂನು ಮೀರಿ ಹೋಗಬೇಡಿ, ಯಾರು ಸಹ ಗೊಂದಲಕ್ಕೆ ಇಡಾಗಬೇಡಿ ಮನುಷ್ಯನ ಭಾವನೆ ಹಾಗೂ ಮನುಷ್ಯನ ವಿಚಾರಗಳು ನೂರಾರು ಇರಬಹುದು ಆದರೆ ಕಾನೂನಿಗೆ ಸರ್ವರು ತಲೆಭಾಗಬೇಕು. -ಗಿರಿಮಲ್ಲಪ್ಪ ಉಪ್ಪಾರ, ಪಿಎಸ್ಐ

ಹಿಂದೂ-ಮುಸ್ಲಿಮ್ ಭಾವೈಕ್ಯತೆ ಹಾಗೂ ಸೌಹಾರ್ದತೆಗೆ ಹೆಸರಾಗಿರುವ ಮೊಹರಂ ಹಬ್ಬವನ್ನು ಎಲ್ಲರೂ ಶಾಂತಿಯುತವಾಗಿ ಆಚರಿಸಬೇಕು ಎಂದು ಪಿಎಸ್ಐ ಗಿರಿಮಲ್ಲಪ್ಪ ಉಪ್ಪಾರ ತಿಳಿಸಿದರು. ಅವರು ಅಥಣಿ ಪೊಲೀಸ್ ಠಾಣೆ ವತಿಯಿಂದ ಡಿವೈಎಸ್ಪಿ ಪ್ರಶಾಂತ ಮುನ್ನೋಳ್ಳಿ ಅವರ ಅಧ್ಯಕ್ಷತೆಯಲ್ಲಿ ಇಲ್ಲಿನ ಪೊಲೀಸ್ ಸಮುದಾಯ ಭವನದಲ್ಲಿ ಏರ್ಪಡಿಸಲಾಗಿದ್ದ ಮೊಹರಂ ಪ್ರಯುಕ್ತ ಶಾಂತಿ ಪಾಲನಾ ಸಭೆಯಲ್ಲಿ ಮಾತನಾಡುತ್ತಿದ್ದರು.

ಮೊಹರಂ ಹಬ್ಬವು 10 ದಿನಗಳ ವರೆಗೆ ನಡೆಯುತ್ತಿದ್ದು. ಕೆಲ ಕಿಡಿಗೇಡಿಗಳು ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನಕಾರಿ ಪೋಸ್ಟಗಳನ್ನ ಹರಿಬಿಟ್ಟು ಸಮಾಜದ ಸ್ವಾಸ್ಥ್ಯ ಕೆಡಿಸುವ ಪ್ರಯತ್ನ ಮಾಡುತ್ತಾರೆ ಇಂತಹ ಸಮಾಜ ಘಾತುಕರ ಸಾಮಾಜಿಕ ಜಾಲತಾಣಗಳ ಮೇಲೆ ಸೂಕ್ತ ನಿಗಾವಹಿಸಲಾಗುವುದು ಹಾಗೂ ತಪ್ಪು ಕಂಡು ಬಂದರೆ ಅಂತವರ ಮೇಲೆ ಕಾನೂನು ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಯಾರು ಕೂಡ್ ಅಹಿತಕರ ಘಟನೆಗೆ ಆಸ್ಪದ ನೀಡಬಾರದು ಎಂದು ಎಚ್ಚರಿಕೆ ನೀಡಿದರು.

## ಕಾಂಗ್ರೆಸ್ ಸರಕಾರದ ದುರಡಾಳಿತದಿಂದ ಜನರು ಬೇಸೆತ್ತಿದ್ದಾರೆ ಶಾಸಕಿ ಭಾಗೀರಥಿ ಮುರುಳ್ಯ

• ಉದಯವಾಹಿನಿ ಸುಳ್ಯ

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ಮೇಲೆ ಜನರು ಒಂದಿಲ್ಲೊಂದು ಸಮಸ್ಯೆಯಲ್ಲಿದ್ದಾರೆ. ಅಭಿವೃದ್ದಿಗೆ ಯಾವುದೇ ಅನುದಾನ ಬರುತ್ತಿಲ್ಲ. ದುರಾಡಳಿತದಿಂದ ಸರಕಾರದ ಬೊಕ್ಕಸ ಖಾಲಿಯಾಗಿದೆ. ಜನರಿಗೆ 5 ರೂಪಾಯಿ ಕೊಟ್ಟು ತೆರಿಗೆ ರೂಪದಲ್ಲಿ ಹತ್ತು ರೂಪಯಿಯನ್ನು ಕಸಿದುಕೊಳ್ಳುತ್ತಿದೆ ಎಂದು ಶಾಸಕಿ ಭಾಗೀರಥಿ ಮುರುಳ್ಯ ಹೇಳಿದರು.

ಅವರು ರಾಜ್ಯ ಕಾಂಗ್ರೆಸ್ ಸರ್ಕಾರದ ಜನ ವಿರೋಧಿ ನೀತಿಗಳನ್ನು ಖಂಡಿಸಿ ಮುರುಳ್ಯ ಗ್ರಾಮ ಪಂಚಾಯತಿ ಎದುರು ನಡೆದ ಪ್ರತಿಭಟನೆಯಲ್ಲಿ ಮಾತನಾಡಿದರು. ರಾಜ್ಯ ಸರಕಾರ ಯಾವುದೇ ಅಭಿವೃದ್ಧಿ ಕೆಲಸ ಮಾಡದೆ ಜನವಿರೋಧಿ ನೀತಿಯನ್ನು ಅನುಸರಿಸುತ್ತಿದೆ. ಬಡವರ 94 ಸಿ ಹಕ್ಕು ಪತ್ರಗಳಿಗೆ 9/11 ನೀಡುವುದನ್ನು ತಡೆ ಮಾಡಿದೆ. ಬಡವರ ಅನಧಿಕೃತ ಕಟ್ಟಡಗಳಿಗೆ ನೀಡುತ್ತಿದ್ದ 11 ಬಿ ಖಾತೆಯನ್ನು ನೀಡದಂತೆ ಆದೇಶ ಹೊರಡಿಸಿದೆ. ಪ್ಲಾಟಿಂಗ್ ಆಗದೇ ಇರುವ ಜಮೀನಿನಲ್ಲಿ ಮನೆ ಕಟ್ಟಿ ಕೊಂಡವರಿಗೆ ಮನೆ ನಂಬರ್ ನೀಡುವುದನ್ನು ತಡೆ ಹಿಡಿದಿದೆ. ಕುಟುಂಬಸ್ಥರು ವಾಸ್ತವ್ಯ ವಿದ್ದುಕೊಂಡು ಮನೆ ನಂಬರ್ ಇಲ್ಲದ ಮನೆಗಳಿಗೆ ವಿದ್ಯುತ್ ಸಂಪರ್ಕವನ್ನು ತಡೆ ಹಿಡಿಯುವ ಮೂಲಕ ಸರಕಾರ ಬಡವರ ವಿರೋಧಿ ಆಗಿದೆ ಎಂದರು.


ಉದಯವಾಹಿನಿ ಚಿತ್ರ

### ಸಿಲಿಂಡರ್ ಕಳ್ಳತನ: ಆರೋಪಿಗಳ ಬಂಧನ

• ಉದಯವಾಹಿನಿ ಗಂಗಾವತಿ

ನಗರದ ವಿವಿಧ ವಾರ್ಡುಗಳಲ್ಲಿ ಸಿಲಿಂಡರ್ ಕಳ್ಳತನ ಮಾಡಿದ ಮೂವರು ಆರೋಪಿಗಳನ್ನ ನಗರ ಪೊಲೀಸರು ಗುರುವಾರ ಬಂಧಿಸಿದ್ದಾರೆ. ಗಂಗಾವತಿಯ ಗೌಸ್, ಅನ್ವರ್, ಅಕ್ರಮ್ ಬಂಧಿತರು. ಅವರಿಂದ 11 ಸಿಲಿಂಡರ್, 4 ಮೋಟರ್ ಸೈಕಲ್‌ಗಳು ವಶಕ್ಕೆ ಪಡೆದುಕೊಳ್ಳಲಾಗಿದೆ.

ಗಂಗಾವತಿ ಹೊಸಳ್ಳಿ ರಸ್ತೆಯ ರಮೇಶ ನಾಯಕ, ಹನುಮಂತಪ್ಪ ಕುರುಬರ, ಜಯನಗರ ನಾರಾಯಣಪ್ಪ ನಾಯಕ ಎನ್ನುವವರ ಮನೆಯಲ್ಲಿ ಸಿಲಿಂಡರ್ ಕಳ್ಳತನವಾಗಿರುವ ಕುರಿತು ಪ್ರಕರಣ ದಾಖಲಾಗಿತ್ತು. ಪ್ರಕರಣದ ಭಾಗವಾಗಿ ಅಧಿಕಾರಿಗಳು ಮೂವರು ಆರೋಪಿಗಳನ್ನ ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.


### ಪಾರ್ಲರ್, ಮನೆ ಬೀಗ ಒಡೆದು ಕಳ್ಳತನ

• ಉದಯವಾಹಿನಿ ಇಳಕಲ್

ನಗರದ ಕಿಲ್ಲಾದಲ್ಲಿ ಬ್ಯೂಟಿ ಪಾರ್ಲರ್ ಹಾಗೂ ಮನೆಯೊಂದರ ಬೀಗ ಒಡೆದು ಕಳ್ಳತನ ಮಾಡಿದ ಘಟನೆ ರಾತ್ರಿ ನಡೆದಿದೆ.

ಬ್ಯೂಟಿ ಪಾರ್ಲರನಲ್ಲಿ 38 ಸಾವಿರ, ಮಗುವಿನ ಕಿವಿಯೊಲೆ, ಒಂದು ಉಂಗುರ ಕಳುವಾಗಿದೆ ಎಂದು ಮಾಲೀಕ ಪವನ ಪವಾರ ಹೇಳಿದರು. ಕಿಲ್ಲಾದಲ್ಲಿಯೇ ಬೀಗ ಹಾಕಲಾಗಿದ್ದ ಮತ್ತೊಂದು ಮನೆಯ ಬೀಗ ಒಡೆದು ಕಳ್ಳತನ ಮಾಡಲಾಗಿದ್ದು ಕಳುವಾದ ವಸ್ತುಗಳ ಬಗ್ಗೆ ಮಾಹಿತಿ ಲಭ್ಯವಾಗಿಲ್ಲ. ಪಿಎಸ್ಐ ಎಸ್.ಆರ್.ನಾಯಕ ಹಾಗೂ ಪೊಲೀಸರು ಸ್ಥಳಕ್ಕೆ ಆಗಮಿಸಿ, ತನಿಖೆ ಕೈಗೊಂಡಿದ್ದಾರೆ.

## ದಾರಿ ಯಾವುದಯ್ಯ ಚನ್ನರಾಯಪಟ್ಟಣಕ್ಕೆ?


ಉದಯವಾಹಿನಿ ಚಿತ್ರ

• ಉದಯವಾಹಿನಿ, ಹೊಳೆನರಸೀಪುರ

ರಾಷ್ಟ್ರೀಯ ಹೆದ್ದಾರಿ ಗುತ್ತಿಗೆದಾರರು ಹಾಗೂ ಇಲಾಖೆಯ ಎಂಜಿನಿಯರ್‌ಗಳ ಬೇಜವಾಬ್ದಾರಿಯಿಂದ ಸಾರ್ವಜನಿಕರಿಗೆ, ವಾಹನಗಳ ಚಾಲಕರಿಗೆ ತೀವ್ರ ತೊಂದರೆ ಆಗುತ್ತಿದ್ದು, ಜನರು ಅಸಮಾಧಾನ ವ್ಯಕ್ತಪಡಿಸಿದ್ದಾರೆ ಚನ್ನಾಂಬಿಕ ವೃತ್ತದಿಂದ ಕನಕಭವನದವರೆಗೆ ಹೊಳೆನರಸೀಪುರದಿಂದ ಚನ್ನರಾಯಪಟ್ಟಣ ಹಾಗೂ ಹಾಸನ ಸಂಪರ್ಕಿಸುವ ರಸ್ತೆಯನ್ನು29 ಕೋಟಿ ವೆಚ್ಚದಲ್ಲಿ ಕಾಂಕ್ರೀಟೀಕರಣಕ್ಕಾಗಿ ಎರಡೂ ಬದಿಯಲ್ಲಿ ಬಾಕ್ಸ್ ಚರಂಡಿ ಕಾಮಗಾರಿ ನಡೆಯುತ್ತಿದೆ. ರಸ್ತೆಯಲ್ಲಿ ವಾಹನಗಳು ಸಂಚರಿಸದಂತೆ ಮಣ್ಣು ಸುರಿದು ಬಂದ್ ಮಾಡಿದ್ದಾರೆ ರಸ್ತೆ ಬಂದ್ ಮಾಡಿದ ಗುತ್ತಿಗೆದಾರರು, ಚನ್ನರಾಯಪಟ್ಟಣಕ್ಕೆ ಹೋಗಲು ಬದಲಿ ರಸ್ತೆ ಯಾವುದು ಎಂದು ಫಲಕ ಹಾಕದ ಕಾರಣ ಚಾಲಕರು ತೊಂದರೆ ಅನುಭವಿಸುತ್ತಿದ್ದಾರೆ. ಚನ್ನರಾಯಪಟ್ಟಣಕ್ಕೆ ಸಾಗುವ ರಸ್ತೆ ಹುಡುಕಲು ಸುತ್ತಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

**ಹೀಗೆ ಹೋಗಿ...**

ಚನ್ನರಾಯಪಟ್ಟಣಕ್ಕೆ ಹೋಗುವವರು ಸೂರನಹಳ್ಳಿ ರೈಲ್ವೆ ಗೇಟ್ ದಾಟಿ ಹೋಗಬೇಕು. ಈ ಗೇಟ್‌ಗೆ ಹೋಗಲು ಮೈಸೂರು ಕಡೆಯಿಂದ ಬರುವ ವಾಹನಗಳು ಬಸ್ ನಿಲ್ದಾಣದ ಸಮೀಪ ಇರುವ ಅಂಬೇಡ್ಕರ್ ವೃತ್ತದಲ್ಲಿ ಎಡಕ್ಕೆ ತಿರುಗಿ ಗಾಂಧೀವೃತ್ತದ ಮೂಲಕ ಅರಕಲಗೂಡು ರಸ್ತೆಯಲ್ಲಿ ಸ್ವಲ್ಪ ದೂರ ಸಾಗಬೇಕು. ನಂತರ ಅಂಚೆ ಕಚೇರಿ ಸಮೀಪ ಬಲಕ್ಕೆ ತಿರುಗಿ ರಿವರ್ ಬ್ಯಾಂಕ್ ರಸ್ತೆ ಚನ್ನಾಂಬಿಕ ವೃತ್ತದ ಮೂಲಕ ಸೂರನಹಳ್ಳಿ ಗೇಟ್ ಮೂಲಕ ಚನ್ನರಾಯಪಟ್ಟಣ ರಸ್ತೆಗೆ ತಿರುಗಬೇಕು . ಇಲ್ಲವೇ ಬಸವ ಭವನ ರಸ್ತೆ ಕಡೆ ತಿರುಗಿ ಬೈಪಾಸ್ ರಸ್ತೆಯ ಮೂಲಕ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ರಸ್ತೆಯಲ್ಲಿ ಸಾಗಿ ಚನ್ನರಾಯಪಟ್ಟಣಕ್ಕೆ ಹೋಗಬೇಕು ಎಂದು ಆಟೋ ವರ್ಕ್ಸ್ ಮಾಲೀಕ ಮುಜಾಹಿದ್ ಹೇಳಿದರು. .

## ಅಗತ್ಯ ಮೂಲಭೂತ ಸೌಲಭ್ಯ ಕಲ್ಪಿಸಿ: ಯತ್ನಾಳ ಅಧಿಕಾರಿಗಳಿಗೆ ಸೂಚನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ವಿಜಯಪುರ

**ಮೂಲಭೂತ ಸೌಕರ್ಯ ಒದಗಿಸಲು ಪ್ರಥಮ ಆದ್ಯತೆ**

ಈ ವಸತಿ ಗೃಹಗಳಲ್ಲಿ ವಾಸಿಸುವ ಕುಟುಂಬಗಳ ಅನುಕೂಲವಾಗುವಂತೆ ಅಂಗನವಾಡಿ ಕೇಂದ್ರ, ಮಾರುಕಟ್ಟೆ, ದಿನಸಿ ಅಂಗಡಿ, ಶುದ್ಧ ಕುಡಿಯುವ ನೀರಿನ ಘಟಕ, ಸಮರ್ಪಕ ವಿದ್ಯುತ್ ಸೌಲಭ್ಯ, ಒಳಚರಂಡಿ ಹಾಗೂ ಇತರೇ ಮೂಲಭೂತ ಸೌಕರ್ಯ ಒದಗಿಸಲು ಪ್ರಥಮ ಆದ್ಯತೆ ನೀಡಬೇಕು. ವಿಕಲಚೇತನರ ಫಲಾನುಭವಿಗಳಿದ್ದಲ್ಲಿ ಅವರಿಗೆ ಕೆಳಮಹಡಿ ಮನೆ ದೊರೆಯುವ ನಿಟ್ಟಿನಲ್ಲಿ ಆದ್ಯತೆ ನೀಡಬೇಕು. ಈ ಆಶ್ರಯ ಮನೆಗಳಿಗೆ ಅರ್ಜಿ ಸಲ್ಲಿಸಿ, ವಂತಿಕೆ ಹಣ ಭರಿಸಲು ಸಾಧ್ಯವಾಗದೇ ಇರುವ ಫಲಾನುಭವಿಗಳಿಗೆ ವಿವಿಧ ರಾಷ್ಟ್ರೀಕೃತ ಬ್ಯಾಂಕಗಳಿಂದ ಕಡಿಮೆ ಬಡ್ಡಿ ದರದಲ್ಲಿ ಸಾಲ ಸೌಲಭ್ಯ ಒದಗಿಸುವಂತೆ ಸಭೆಯಲ್ಲಿ ಹಾಜರಿದ್ದ ವಿವಿಧ ಬ್ಯಾಂಕಿನ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪ್ರಧಾನ ಮಂತ್ರಿ ಆವಾಸ ಯೋಜನೆಯಡಿ ವಿಜಯಪುರ ನಗರದ ಅಲ್ ಅಮೀನ್ ಮೆಡಿಕಲ್ ಕಾಲೇಜ್ ಹಿಂಭಾಗದ ನಮೋ ನಗರ ಪ್ರದೇಶದಲ್ಲಿ ನಿರ್ಮಾಣಗೊಳ್ಳುತ್ತಿರುವ ಜಿ+1 ಮಾದರಿಯ 1,493 ಗುಂಪು ಮನೆಗಳ ಪೈಕಿ, ಈಗಾಗಲೇ ನಿರ್ಮಾಣಗೊಂಡ 300 ಫಲಾನುಭವಿಗಳಿಗೆ ಅಂತಿಮ ಹಕ್ಕುಪತ್ರ ನೀಡಲಾಗಿದ್ದು, ಫಲಾನುಭವಿಗಳ ಅನುಕೂಲಕ್ಕಾಗಿ ಅಗತ್ಯ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಸಮರ್ಪಕ ವಿದ್ಯುತ್ ಸಂಪರ್ಕ ವ್ಯವಸ್ಥೆ ಕಲ್ಪಿಸುವುದು, ಬೀದಿ ದೀಪ ಹಾಗೂ ಒಳಚರಂಡಿ ವ್ಯವಸ್ಥೆಯನ್ನು ತ್ವರಿತವಾಗಿ ಒದಗಿಸಲು ಕ್ರಮಕೈಗೊಳ್ಳುವಂತೆ ನಗರ ಶಾಸಕ ಬಸನಗೌಡ ಪಾಟೀಲ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪ್ರಧಾನಮಂತ್ರಿ ಆವಾಸ ಯೋಜನೆಯಡಿ ವಿಜಯಪುರ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪಿ.ಎಂ.ಎ.ವಾಯ್ ಯೋಜನೆಯಡಿ ಮನೆಗಳ ಹಂಚಿಕೆ ಮತ್ತು ಮೂಲಭೂತ ಸೌಲಭ್ಯಗಳ ಕುರಿತ ಸಭೆಯಲ್ಲಿ ಮಾತನಾಡಿದರು. 439 ಫಲಾನುಭವಿಗಳಿಗೆ ತಾತ್ಕಾಲಿಕ ಹಕ್ಕುಪತ್ರ ನೀಡಲಾಗಿದ್ದು, ಈ ಯೋಜನೆಯಡಿ ನಿರ್ಮಾಣ ಕಾಮಗಾರಿ ಹಾಗೂ ಮೂಲಭೂತ ಸೌಕರ್ಯ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಸಂಬಂಧಿಸಿದ ಗುತ್ತಿಗೆದಾರರಿಗೆ ನಿರ್ದೇಶನ ನೀಡಿದರು.

ನಮೋ ನಗರ ಪ್ರದೇಶಕ್ಕೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲು ಆರ್.ಓ ಘಟಕ ಸ್ಥಾಪಿಸಲು ಕ್ರಮ ಕೈಗೊಳ್ಳುವಂತೆ ಆಯುಕ್ತರು ಮಹಾನಗರ ಪಾಲಿಕೆ ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧಿಕಾರಿಗಳಿಗೆ ಸೂಚಿಸಿದರು. ನಾಗಠಾಣ ಮತಕ್ಷೇತ್ರದ ಶಾಸಕ ವಿಠ್ಠಲ ಕಟಕದೊಂಡ ಮಾತನಾಡಿ, ಯೋಗಾಪೂರ, ಗಾಂಧಿ ನಗರ, ಬಸವ ನಗರ ಹಾಗೂ ಹಮಾಲ ಕಾಲೋನಿಯ ಆಶ್ರಯ ಬಡಾವಣೆಯಲ್ಲಿ ಹಕ್ಕು ಪತ್ರ ಇರದೇ ಹಲವಾರು ವರ್ಷಗಳಿಂದ ವಾಸಿಸುತ್ತಿರುವವರಿಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮಕೈಗೊಳ್ಳುವಂತೆ ಮಹಾನಗರ ಪಾಲಿಕೆ ಆಯುಕ್ತರಿಗೆ ಸೂಚಿಸಿದರು.

### ಬಾಕಿ ಬಿಲ್ ಪಾವತಿಗೆ ಆಗ್ರಹ

• ಉದಯವಾಹಿನಿ ಚನ್ನಮ್ಮನ ಕಿತ್ತೂರು

ಸಮೀಪದ ಬೈಲಹೊಂಗಲ ತಾಲ್ಲೂಕಿನ ಶ್ರೀಸೋಮೇಶ್ವರ ಸಹಕಾರಿ ಸಕ್ಕರೆ ಕಾರ್ಖಾನೆ (ನಿ) ಸಿದ್ದಸಮುದ್ರ, ಬೆಳವಡಿ. ಇಲ್ಲಿ ರೈತರ ಬಿಲ್ಲು ಬಾಕಿ ಉಳಿಸಿಕೊಂಡು 6 ತಿಂಗಳಾದರೂ ಇದುವರೆಗೂ ರೈತರಿಗೆ ಬಾಕಿ ಹಣ ನೀಡಿಲ್ಲ. ಎಂದು ರಾಜ್ಯ ರೈತ ಸಂಘಗಳ ಮಹಾಒಕ್ಕೂಟಗಳಿಂದ ಕಾರ್ಖಾನೆಗೆ ರೈತರೆಲ್ಲರೂ ಜೊತೆಗೂಡಿ ಬಿಲ್ ರೈತರ ಖಾತೆಗೆ ಜಮೆ ಮಾಡಬೇಕೆಂದು ಆಗ್ರಹಿಸಿದರು.

ನಂತರ ರೈತ ಮುಖಂಡರು ಮಾತನಾಡಿ ರೈತನಿಗೆ ಸರಿಯಾದ ಸಮಯಕ್ಕೆ ಬಿಲ್ ಪಾವತಿಸಿದರೆ ಅನುಕೂಲವಾಗುತ್ತದೆ ಎಂದರು. ಕಾರ್ಖಾನೆ ಅಧ್ಯಕ್ಷ ಬಸವರಾಜ ಬಾಳೇಕುಂದ್ರಿ, ಹಾಗೂ ವ್ಯವಸ್ಥಾಪಕ ನಿರ್ದೇಶಕ, ಆಡಳಿತ ಸರ್ವ ನಿರ್ದೇಶಕರು ಜೊತೆಗೂ ಆದಷ್ಟು ಬೇಗನೆ ರೈತರ ಬಾಕಿ ಉಳಿಸಿಕೊಂಡಿರುವ ಕಬ್ಬಣ ಬಿಲ್ಲ ರೈತರ ಖಾತೆಗಳಿಗೆ ಸದಾಯ ಮಾಡಿ. ಇದಾಗದಿದ್ದರೆ ಮುಂಬರುವ ದಿಮಗಳಲ್ಲಿ ಕಾರ್ಖಾನೆಯಲ್ಲಿ ಟಿಕಾಣೆ ಹೂಡಿ ಉಪವಾಸ ಸತ್ಯಾಗ್ರಹ ಮಾಡುತ್ತೇವೆಂದು ಎಚ್ಚರಿಸಿದರು.

ಈ ವೇಳೆ ಮಲ್ಲಿಕಾರ್ಜುನ ಮುರಗೊಡ, ಮಹಾಂತೇಶ ಕಮತ ಬಸವರಾಜ ರುದ್ರಪ್ಪ ಮೊಕಾಶಿ, ಬೀರಪ್ಪ ದೇಶನೂರ, ಸಂಜೀವ ತಿಲಗರ, ಮಹಾಂತೇಶ ಗೌರಿ ಸೇರಿದಂತೆ ನೂರಾರು ರೈತರಿದ್ದರು.

## ಉಪವಿಭಾಗದಲ್ಲಿ ವಸತಿ ಸಮಸ್ಯೆ : ಪ.ಜಾತಿ-ಪಂಗಡ 2182 ಕುಟುಂಬಗಳಿಗೆ ಸೂರಿಲ್ಲ

• ಉದಯವಾಹಿನಿ, ಪುತ್ತೂರು

ಬಡವರ್ಗದ ಕುಟುಂಬಗಳಿಗೆ ಮೂಲಭೂತ ಸೌಕರ್ಯವಾದ ವಸತಿ ನೀಡುವುದು ಸರ್ಕಾರ ಬದ್ಧತೆ. ಇದಕ್ಕಾಗಿ ರಾಜ್ಯದಲ್ಲಿ ಬಂದ ಎಲ್ಲಾ ಸರ್ಕಾರಗಳೂ ವಸತಿಯೋಜನೆಗಳನ್ನು ಅನುಷ್ಠಾನಕ್ಕೆ ತಂದಿವೆ. ಆದರೂ ಇನ್ನೂ ಎಷ್ಟೋ ಸಾವಿರ ಕುಟುಂಬಗಳು ಬದುಕುವುದಕ್ಕೊಂದು ಸೂರು ಕಂಡುಕೊಳ್ಳಲು ಸಾಧ್ಯವಾಗಿಲ್ಲ. ತಮ್ಮ ಕುಟುಂಬಕ್ಕೊಂದು ನೆಲೆ ಕಂಡುಕೊಳ್ಳುವ ಕನಸು ಇನ್ನೂ ಈಡೇರಿಲ್ಲ. ಆಶ್ರಯ ಅಂಬೇಡ್ಕರ್ ರಾಜೀವಗಾಂಧಿ ವಸತಿ ಯೋಜನೆ ಸೇರಿದಂತೆ ಸರ್ಕಾರದಿಂದ ಬಡ ವರ್ಗದ ಕುಟುಂಬಗಳಿಗೆ ವಸತಿ ನೀಡುವ ಅನುಕೂಲಗಳಿದ್ದರೂ ಪುತ್ತೂರು ಉಪವಿಭಾಗದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದ ಸುಮಾರು 2182 ಕುಟುಂಬಗಳಿಗೆ ಮನೆಯೇ ಇಲ್ಲ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಪ್ರತಿಯೊಂದು ಕುಟುಂಬಕ್ಕೂ ವಸತಿ ನೀಡುವ ಭರವಸೆಯನ್ನು ಆಗಾಗ್ಗೆ ನೀಡುತ್ತಲೇ ಇರುತ್ತವೆ. ಸ್ಥಳೀಯಾಡಳಿತ ಸಂಸ್ಥೆಗಳಿಗೆ ಈ ಜವಾಬ್ದಾರಿಯನ್ನೂ ನೀಡಿವೆ. ಆದರೆ ವಸತಿ ಯೋಜನೆಗಳಲ್ಲಿ ಗ್ರಾಪಂ , ನಗರಸಭೆ, ಪಟ್ಟಣಪಂಚಾಯತ್, ಪುರ ಸಭೆಗಳಿಗೆ ಅಗತ್ಯವಿರುವಷ್ಟು ಮನೆಗಳ ಲಭ್ಯವಾಗುತ್ತಿಲ್ಲ.


ಉದಯವಾಹಿನಿ ಚಿತ್ರ

**ದಾಖಲೆಗಳ ಕೊರತೆ;** ಗ್ರಾಮೀಣ ಭಾಗದ ಬಹುತೇಕ ಅರ್ಹ ಫಲಾನುಭವಿಗಳಲ್ಲಿ ನಿವೇಶನವಿದ್ದರೆ ಅದರ ದಾಖಲೆಗಳು ಇರುವುದಿಲ್ಲ. ಇದರಿಂದ ನಿಯಮಾನುಸಾರ ಈ ಅರ್ಹ ಕುಟುಂಬಗಳು ವಂಚಿತರಾಗುತ್ತಿದ್ದಾರೆ. ಹಕ್ಕುಪತ್ರ, ಪಹಣಿ ಇಲ್ಲದ ಕುಟುಂಬಗಳಿಗೆ ಸ್ಥಳೀಯಾಡಳಿತಗಳು ವಸತಿ ನೀಡಲು ಕಾನೂನಿನ ತೊಡಕು ಕಾಣಿಸಿಕೊಳ್ಳುತ್ತವೆ. ಹಾಗಾಗಿ ಅಧಿಕಾರಿಗಳ ಪ್ರಕಾರ ಮನೆಗಳನ್ನು ನೀಡಲು ತೊಡಕಾಗುತ್ತಿರುವುದು ದಾಖಲೆಗಳ ಕೊರತೆಯಿಂದ ಸಮರ್ಪಕವಾಗಿ ಜಾರಿಯಾಗುತ್ತಿಲ್ಲ.

**ಇಚ್ಛಾಶಕ್ತಿಯ ಕೊರತೆ**

ಸ್ಥಳೀಯಾಡಳಿತದ ವ್ಯವಸ್ಥೆಯಲ್ಲಿ ನಡೆಯುವ ರಾಜಕೀಯವೂ ವಸತಿ ಯೋಜನೆಗಳ ವಿಫಲತೆಗೆ ಕಾರಣವಾಗುತ್ತಿವೆ. ಇದರಿಂದ ಅರ್ಹ ಫಲಾನುಭವಿಗಳು ವಸತಿ ಯೋಜನೆಯಿಂದ ವಂಚಿತರಾಗುತ್ತಿದ್ದಾರೆ. ಇದಕ್ಕೆ ಸ್ಥಳೀಯಾಡಳಿತ ವ್ಯವಸ್ಥೆಯ ಆಡಳಿತ ಹಾಗೂ ಅಧಿಕಾರಿಗಳ ಇಚ್ಛಾಶಕ್ತಿಯ ಕೊರತೆಯೂ ಮೊದಲ ಕಾರಣವಾಗುತ್ತಿದೆ.

## ಲೋಕ ಅದಾಲತ್: ತಗ್ಗಲಿದೆ ಕೋರ್ಟ್ ಮೇಲಿನ ಹೊರೆ

• ಉದಯವಾಹಿನಿ, ಜಗಳೂರು

ಇತ್ತೀಚಿನ ವರ್ಷಗಳಲ್ಲಿ ಕೋರ್ಟ್‌ಗಳಲ್ಲಿ ಪ್ರಕರಣಗಳು ಹೆಚ್ಚಾಗಿದ್ದು, ಲೋಕ ಅದಾಲತ್ ಕಾರ್ಯಕ್ರಮಗಳಿಂದಾಗಿ ಕೋರ್ಟ್‌ಗಳ ಮೇಲಿನ ಹೊರೆ ಕಡಿಮೆಯಾಗುವುದಲ್ಲದೇ, ನೆಮ್ಮದಿಯ ಸಮಾಜಕ್ಕೆ ಕಾರಣವಾಗಲಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಕರೆಣ್ಣವರ್ ಅಭಿಪ್ರಾಯಪಟ್ಟರು.

ಪಟ್ಟಣದ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ಗುರುವಾರ ನಡೆದ ಮೆಗಾ ಲೋಕ ಅದಾಲತ್ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. ಜಗಳೂರಿನಂತಹ ತಾಲ್ಲೂಕು ನ್ಯಾಯಾಲಯದಲ್ಲೇ 2,500ಕ್ಕೂ ಹೆಚ್ಚು ಪ್ರಕರಣಗಳು ವಿಚಾರಣೆಗೆ ಬಾಕಿ ಇವೆ.


ಉದಯವಾಹಿನಿ ಚಿತ್ರ

ಕ್ಷುಲ್ಲಕ ಕಾರಣಗಳಿಗಾಗಿ ಜಗಳ, ವಿವಾದಗಳಿಗೆ ಕಾರಣವಾಗಿ ವರ್ಷಾನುಗಟ್ಟಲೆ ಕೋರ್ಟ್‌ಗಳಿಗೆ ಅಲೆದಾಡಬೇಕಾದ ಸ್ಥಿತಿ ಇದೆ. ಕಾನೂನಿಗನುಗುಣವಾಗಿ ಪ್ರತಿಯೊಬ್ಬರೂ ನಡೆದಲ್ಲಿ ವ್ಯಾಜ್ಯಗಳಿಗೆ ಆಸ್ಪದವಿರುವುದಿಲ್ಲ. ಮಾನವೀಯ ಸಂಬಂಧಗಳಿಗೆ ಬೆಲೆ ಕೊಡಬೇಕು. ರಾಜೀ ಸಂಧಾನದಿಂದ ಮಾತ್ರ ನೆಮ್ಮದಿಯ ಜೀವನ ಸಾಗಿಸಲು ಸಾಧ್ಯ' ಎಂದು ಹೇಳಿದರು.

### ಬಾಂಬ್‌ಗಿಂತ ಮಾದಕ ವಸ್ತು ಅಪಾಯಕಾರಿ

• ಉದಯವಾಹಿನಿ ದಾವಣಗೆರೆ

ದೇಶವನ್ನು ನಾಶಪಡಿಸಲು ಬಾಂಬ್‌ಗಳು ಬೇಕಾಗಿಲ್ಲ, ಮಾದಕ ವಸ್ತುಗಳೇ ರಾಷ್ಟ್ರವೊಂದನ್ನು ಸರ್ವನಾಶ ಮಾಡುವಷ್ಟು ಅಪಾಯಕಾರಿಯಾಗಿವೆ ಎಂದು ಪೂರ್ವ ವಲಯದ ಐಜಿಪಿ ಬಿ.ಆರ್. ರವಿಕಾಂತೇಗೌಡ ಕಳವಳ ವ್ಯಕ್ತಪಡಿಸಿದರು. ಇಲ್ಲಿನ ರೇಣುಕ ಮಂದಿರದಲ್ಲಿ ಮಾದಕ ವಸ್ತು ವಿರೋಧಿ ದಿನಾಚರಣೆಯ ಅಂಗವಾಗಿ ಗುರುವಾರ ಏರ್ಪಡಿಸಿದ್ದ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ವಿಶ್ವದ ಪ್ರತಿ ರಾಷ್ಟ್ರಗಳಿಗೂ ಮಾದಕವಸ್ತು ಜಾಲ ದೊಡ್ಡ ಸಮಸ್ಯೆಯಾಗಿ ಕಾಡುತ್ತಿದೆ. ಇದರಲ್ಲಿ ಶ್ರೀಮಂತ, ಬಡ ದೇಶ ಎಂಬ ಭಿನ್ನತೆ ಇಲ್ಲ. ಇದೊಂದು ಕತ್ತಲ ಪ್ರಪಂಚವಾಗಿದ್ದು, ಯುವ ಸಮೂಹ ಜಾಗೃತವಾಗುವ ಅಗತ್ಯವಿದೆ ಎಂದು ಹೇಳಿದರು. ಅಮಲು ಬರಿಸುವ ಮಾದಕ ವಸ್ತುಗಳ ಸೇವನೆಯಿಂದ ವ್ಯಕ್ತಿಯೊಬ್ಬ ದೈಹಿಕ ಹಾಗೂ ಮಾನಸಿಕ ಕಾಯಿಲೆಗೆ ತುತ್ತಾಗುವ ಸಾಧ್ಯತೆ ಹೆಚ್ಚು. ಆರ್ಥಿಕವಾಗಿ ದಿವಾಳಿಯಾಗಿ, ಇಡೀ ಜೀವನವನ್ನೇ ಕಳೆದುಕೊಳ್ಳುತ್ತಾನೆ. ಇದರಿಂದ ಕುಟುಂಬ ಮತ್ತು ಸಮಾಜದ ಮೇಲೆ ಕೆಟ್ಟ ಪರಿಣಾಮ ಉಂಟಾಗುತ್ತದೆ ಎಂದರು.

ವಿಶ್ವದಾದ್ಯಂತ ಮಾದಕ ವಸ್ತು ಜಾಲಕ್ಕೆ ಮಕ್ಕಳು ಮತ್ತು ಯುವಕರು ಬಲಿಯಾಗುತ್ತಿದ್ದಾರೆ. ವಿದ್ಯಾರ್ಥಿಗಳ ಭವಿಷ್ಯ ಮುಖ್ಯವಾಗಿದೆ ಎಂದು ಜಿಲಾ ಪಂಚಾಯಿತಿ ಸಿಇಒ ಗಿಟೆ ಮಾದವ್ ವಿಠಲ್ ರಾವ್ ಹೇಳಿದರು. ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಪ್ರತಿಜ್ಞಾವಿಧಿ ಬೋಧಿಸಿದರು. ಚಿತ್ರನಟಿ ಆದಿತಿ ಪ್ರಭುದೇವ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಮಂಜುನಾಥ, ಡಿಡಿಪಿಐ ಜಿ.ಕೊಟ್ರೇಶ್ ಹಾಜರಿದ್ದರು.

**ಶಾಲೆ ಕಾಲೇಜಿನ ಮೇಲೆ ನಿಗಾ:** ದಾವಣಗೆರೆ ನಗರದಲ್ಲಿ 500ಕ್ಕೂ ಹೆಚ್ಚು ಸಿ.ಸಿ.ಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಶಾಲೆ-ಕಾಲೇಜುಗಳ ಮೇಲೆ ನಿಗಾ ಇಡಲಾಗಿದ್ದು ವಿದ್ಯಾರ್ಥಿಗಳು ಮಾದಕ ವಸ್ತು ಜಾಲದಿಂದ ದೂರ ಇರಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಸಲಹೆ ನೀಡಿದರು. ಮಾದಕ ವಸ್ತು ವಿರೋಧಿ ದಿನಾಚರಣೆಯ ಅಂಗವಾಗಿ ಹೈಸ್ಕೂಲ್ ಮೈದಾನದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಜಾಗೃತಿ ಜಾಥಾದಲಿ ಅವರು ಮಾತನಾಡಿದರು. ಮಾದಕ ವಸ್ತುಗಳ ಸಾಗಣೆ ಸೇವನೆ ಪ್ರಕರಣ ಜಿಲ್ಲೆಯಲ್ಲಿ ಹೆಚ್ಚಾಗುತ್ತಿವೆ. ವಿದ್ಯಾರ್ಥಿಗಳು ದಾರಿ ತಪ್ಪಿದರೆ ಭವಿಷ್ಯದ ಜೀವನ ಸರ್ವನಾಶವಾಗಲಿದೆ. ಮಾದಕ ವಸ್ತುಗಳಿಂದ ದೂರವಿದ್ದು ಉತ್ತಮ ಬದುಕು ರೂಪಿಸಿಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶೆ ಡಿ.ಕೆ. ವೇಲಾ ಹೇಳಿದರು.



ಉದಯವಾಹಿನಿ ಚಿತ್ರ

● ಹಲವು ಬ್ಯಾಂಕ್‌ಗಳಲ್ಲಿ ಸಿಬ್ಬಂದಿ ಕನ್ನಡ ಮಾತನಾಡುತ್ತಿಲ್ಲ ● ಇದರಿಂದ ಜನರಿಗೆ ತೊಂದರೆಯಾಗುತ್ತಿದೆ.

# ಬ್ಯಾಂಕ್ ನೌಕರಿ ಬೇಕಾದರೆ ಕನ್ನಡ ಕಲಿರಿ: ಬಸವರಾಜ ಬೊಮ್ಮಾಯಿ

• ಉದಯವಾಹಿನಿ, ಹಾವೇರಿ

ಗ್ರಾಮೀಣ ಜನರಿರುವ ಜಿಲ್ಲೆ ಹಾವೇರಿ. ಇಲ್ಲಿಯ ಬಹುತೇಕರು ಕನ್ನಡಿಗರು. ಕನ್ನಡದಲ್ಲೇ ಮಾತನಾಡುತ್ತಾರೆ.


ಆದರೆ, ಹಲವು ಬ್ಯಾಂಕ್‌ಗಳಲ್ಲಿ ಸಿಬ್ಬಂದಿ ಕನ್ನಡ ಮಾತನಾಡುತ್ತಿಲ್ಲ. ಇದರಿಂದ ಜನರಿಗೆ ತೊಂದರೆಯಾಗುತ್ತಿದೆ. ಪ್ರತಿಯೊಂದು ಶಾಖೆಯಲ್ಲೂ ಕನಿಷ್ಠ ಮೂವರು ಕನ್ನಡ ಮಾತನಾಡುವ ಸಿಬ್ಬಂದಿ ಇರುವಂತೆ ನೋಡಿಕೊಳ್ಳಬೇಕು ಎಂದ ಸಂಸದ ಬಸವರಾಜ ಬೊಮ್ಮಾಯಿ ಅವರು ಬ್ಯಾಂಕ್ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ನಗರ ಹೊರವಲಯದಲ್ಲಿರುವ ಜಿಲ್ಲಾ ಪಂಚಾಯಿತಿ ಸಭಾಭವನದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಬ್ಯಾಂಕ್‌ಗಳ ಸಲಹಾ ಸಮಿತಿ ಸಭೆ ಹಾಗೂ ಪ್ರಗತಿ ಪರಿಶೀಲನಾ ಸಭೆ'ಯಲ್ಲಿ ಮಾತನಾಡಿದ ಅವರು, ಹಿಂದಿ ಕಲಿಯುವಂತ ಬ್ಯಾಂಕ್ ಸಿಬ್ಬಂದಿಗೆ ಕಡ್ಡಾಯ ಮಾಡಲಾಗಿದೆ. ಅದೇ ರೀತಿಯಲ್ಲಿ ಕರ್ನಾಟಕದಲ್ಲಿ ಕನ್ನಡ ಭಾಷೆಯನ್ನೂ ಕಲಿಯುವಂತೆ ಕಡ್ಡಾಯ ಮಾಡಿ. ಬ್ಯಾಂಕ್ ನೌಕರಿ ಬೇಕಾದರೆ ಕನ್ನಡ ಕಲಿಯಲಿ ಎಂದು ಹೇಳಿದರು. ಇತ್ತೀಚೆಗೆ ರೈತರೊಬ್ಬರು ಸಂಧಾನದ ಮೂಲಕ ಏಕ ಕಂತಿನಲ್ಲಿ ಸಾಲ ಮರುಪಾವತಿ ಮಾಡಲು ಕೆನರಾ ಬ್ಯಾಂಕ್‌ನ ಶಾಖೆಯೊಂದಕ್ಕೆ ಹೋಗಿದ್ದರು. ಆದರೆ, ಅಲ್ಲಿ ವ್ಯವಸ್ಥಾಪಕನಿಗೆ ಕನ್ನಡ ಬರುವುದಿಲ್ಲ. ರೈತನಿಗೆ ಇಂಗ್ಲಿಷ್ -ಹಿಂದಿ ಬರುವುದಿಲ್ಲ.

ಎರಡೂ ಭಾಷೆ ಗೊತ್ತಿರುವ ಪರಿಚಯಸ್ಥರನ್ನು ಕರೆದುಕೊಂಡು ಬ್ಯಾಂಕ್‌ಗೆ ಹೋದರೆ, ವ್ಯವಸ್ಥಾಪಕ ಮಾತನಾಡಲಿಲ್ಲ. ಮೂರನೇ ವ್ಯಕ್ತಿ ಬೇಕಿಲ್ಲ. ಸಾಲ ಪಡೆದ ರೈತನಷ್ಟೇ ಮಾತನಾಡಬೇಕು ಎಂದು ಹೇಳಿದ್ದಾನೆ. ಇಂಥ ವ್ಯವಸ್ಥಾಪಕರಿಂದ ಗ್ರಾಮೀಣ ಜನರಿಗೂ ತೊಂದರೆ, ಬ್ಯಾಂಕ್ ವಹಿವಾಟಿಗೂ ಸಮಸ್ಯೆ ಎಂದು ತಿಳಿಸಿದರು.

**ಕೃಷಿಗೂ ಬಂಡವಾಳ ಸಾಲ ನೀಡಿ:** ಹಾವೇರಿ ಕೃಷಿ ಪ್ರಧಾನ ಜಿಲ್ಲೆ. ರೈತರು ಹೆಚ್ಚಾಗಿ ಗೋವಿನ ಜೋಳ ಹಾಗೂ ಕಬ್ಬು ಬೆಳೆಯುತ್ತಿದ್ದಾರೆ. ಈ ಬೆಳೆಗಳಿಂದ ಇಥೆನಾಲ್ ಹಾಗೂ ಇತರ ಇಂಧನ ತಯಾರಾಗುತ್ತಿದೆ. ಆದರೆ, ರೈತರಿಗೆ ಮಾತ್ರ ಕೃಷಿ ಸಾಲವನ್ನಷ್ಟೇ ಬ್ಯಾಂಕ್‌ನವರು ನೀಡುತ್ತಿದ್ದಾರೆ. ಕಾರ್ಖಾನೆಗಳಿಗೆ ಕಚ್ಚಾ ವಸ್ತು ಪೂರೈಸುವ ರೈತರಿಗೆ ಬಂಡವಾಳ ಸಾಲ ನೀಡುವ ಬಗ್ಗೆ ಅಧಿಕಾರಿಗಳು ಗಮನ ಹರಿಸಬೇಕು ಎಂದು ಬೊಮ್ಮಾಯಿ ಹೇಳಿದರು.

ಕೃಷಿ ಜೊತೆಯಲ್ಲಿ ಹೈನುಗಾರಿಕೆ, ಕುರಿ, ಕೋಳಿ ಸಾಕಣೆಯನ್ನೂ ರೈತರು ಮಾಡುತ್ತಿದ್ದಾರೆ. ಹೀಗಾಗಿ, ಅವರನ್ನು ಕ್ಯಾಪಿಟಲ್ ಲೋನ್ ವ್ಯಾಪ್ತಿಗೆ ತರುವ ಪ್ರಯತ್ನ ಆಗಬೇಕು. ರೈತರ ಜೀವನ ಮಟ್ಟ ಸುಧಾರಣೆಗೆ ಬ್ಯಾಂಕ್ ಅಧಿಕಾರಿಗಳು ವೈಯಕ್ತಿಕ ಕಾಳಜಿ ತೆಗೆದುಕೊಳ್ಳಬೇಕು ಎಂದರು.



ಉದಯವಾಹಿನಿ ಚಿತ್ರ

**ಪ್ರಗತಿ ಪರಿಶೀಲನಾ ಸಭೆ**

**ಅಲ್ಪಸಂಖ್ಯಾತರಿಗೆ ಸಿಗುವ ಅನುದಾನ ಪರಿಶಿಷ್ಟರಿಗೇಕಿಲ್ಲ?**

ಡಿ. ದೇವರಾಜ್ ಅರಸು ಅಭಿವೃದ್ಧಿ ನಿಗಮ ವಾಲ್ಮೀಕಿ ಎಸ್.ಟಿ. ಅಭಿವೃದ್ಧಿ ನಿಗಮ ಡಾ. ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಭೋವಿ ಅಭಿವೃದ್ಧಿ ನಿಗಮ ಆದಿಜಾಂಬವ ಅಭಿವೃದ್ಧಿ ನಿಗಮಗಳಿಗೆ ಸೂಕ್ತ ಅನುದಾನವಿಲ್ಲ. ಇದರಿಂದ ನಿಗದಿತ ಗುರಿಯಂತೆ ಸಾಧನೆ ಆಗುತ್ತಿಲ್ಲ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧಿಕಾರಿ ಮಾತನಾಡಿ ನಮ್ಮ ನಿಗಮದಲ್ಲಿ ಗುರಿ ಸಾಧನೆ ಆಗಿದೆ. ಸರ್ಕಾರದಿಂದಲೂ ನಿರಂತರವಾಗಿ ಅನುದಾನ ಬಂದಿದೆ. ಜಿಲ್ಲಾಧಿಕಾರಿ ಅಧ್ಯಕ್ಷತೆಯ ಸಮಿತಿಯಿಂದಲೇ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಬಸವರಾಜ ಬೊಮ್ಮಾಯಿ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಬಂದಷ್ಟು ಹಣ ಪರಿಶಿಷ್ಟರು ಹಾಗೂ ಹಿಂದುಳಿದ ವರ್ಗದವರ ನಿಗಮಗಳಿಗೆ ಏಕೆ ಬಂದಿಲ್ಲ. ಗುರಿಗಳು ಏಕೆ ಸಾಧಿಸಲು ಆಗುತ್ತಿಲ್ಲ. ಈ ಬಗ್ಗೆ ಗಮನಹರಿಸಿ. ಎಲ್ಲಾ ಸಮಾಜದವರಿಗೂ ನ್ಯಾಯ ಕೊಡಿ ಎಂದು ಹೇಳಿದರು.

**ಉದ್ಯಮ, ಶಿಕ್ಷಣ ಸಾಲಕ್ಕೆ ಒತ್ತು ನೀಡಿ:** ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಹಾಗೂ ಶಿಕ್ಷಣದ ಸಾಲ ನೀಡಲು ಒತ್ತು ಕೊಡಬೇಕು. ಹಾವೇರಿ ಬೆಳೆಯುತ್ತಿರುವ ಜಿಲ್ಲೆ. ಎಂಎಸ್ಎಂಇ ಹಾಗೂ ಶಿಕ್ಷಣ ಸಂಸ್ಥೆಗಳು ಹೆಚ್ಚಿವೆ. ಸಾಲ ನೀಡಿದರೆ ಎಲ್ಲರ ಅಭಿವೃದ್ಧಿ ಸಾಧ್ಯವಾಗುತ್ತದೆ. ಜಿಲ್ಲೆಯೂ ಬೆಳೆಯುತ್ತದೆ ಎಂದು ಬೊಮ್ಮಾಯಿ ತಿಳಿಸಿದರು.

ಲೀಡ್ ಬ್ಯಾಂಕ್ ವ್ಯವಸ್ಥಾಪಕ ಜೀವನ್, ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ, ಜಿ.ಪಂ. ಸಿಇಒ ರುಚಿ ಬಿಂದಾಲ್, ಬ್ಯಾಂಕ್ ಅಧಿಕಾರಿಗಳಾದ ಪಂಕಜಕುಮಾರ್, ಸೂರಜ್ ಎನ್. ಕೆವಿಜಿ ಬ್ಯಾಂಕ್ ಪ್ರಾದೇಶಿಕ ಅಧಿಕಾರಿ ಸೋಮಶೇಖರ್, ನಬಾರ್ಡ್ ಅಧಿಕಾರಿ ರಂಗನಾಥ್ ಇದ್ದರು.

## ದಿನ ಭವಿಷ್ಯ

| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| --- | --- | --- |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ.

**ವೃಷಭ** ನಿಮ್ಮ ಕಚೇರಿಯನ್ನು ಬೇಗನೆ ಬಿಡಲು, ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು.

**ಮಿಥುನ** ನಿಮ್ಮ ಮಕ್ಕಳ ಚಿಂತೆಗಳನ್ನು ಬೆಂಬಲಿಸುವುದು ಅಗತ್ಯ. ವೈಯಕ್ತಿಕ ಸಂಬಂಧಗಳು ಸೂಕ್ಷ್ಮ ಹಾಗೂ ಸಂವೇದನಾಶೀಲವಾಗಿವೆ. ನೀವು ಯಾವುದೇ ದುಬಾರಿ ಸಾಹಸಕ್ಕೆ ಕೈಹಾಕುವ ಮೊದಲು ನಿಮ್ಮ ವಿವೇಚನೆ ಬಳಸಿ.

**ಕರ್ಕಾಟಕ** ಮಾನಸಿಕ ಭಯ ಧೈರ್ಯಗೆಡಿಸಬಹುದು. ಸಕಾರಾತ್ಮಕ ಚಿಂತನೆ, ಉಜ್ವಲವಾದ ಭವಿಷ್ಯವನ್ನು ನೋಡುವುದು ಇದನ್ನು ದೂರವಿಡುತ್ತದೆ. ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ.

**ಸಿಂಹ** ನಿಮ್ಮ ಮುಂಗೋಪ ನಿಮ್ಮನ್ನು ಇನ್ನೂ ಹೆಚ್ಚು ತೊಂದರೆಯಲ್ಲಿ ಸಿಲುಕಿಸಬಹುದು. ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು.

**ಕನ್ಯಾ** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು.

**ತುಲಾ** ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ಕಳೆದ ದಿನಗಳನ್ನು ಹೋಲಿಸಿದರೆ ಇಂದು ಆರ್ಥಿಕ ಉತ್ತಮವಾಗಲಿದೆ ಮತ್ತು ನೀವು ಹೆಚ್ಚಿನ ಹಣವನ್ನು ಪಡೆಯುತ್ತೀರಿ.

**ವೃಶ್ಚಿಕ** ನೀವು ಇಂದು ಪ್ರೀತಿ ಮಾಡುವ ಅವಕಾಶವನ್ನು ಕಳೆದುಕೊಳ್ಳದಿದ್ದಲ್ಲಿ, ನಿಮ್ಮ ಇಡೀ ಜೀವನದಲ್ಲಿ ಈ ದಿನವನ್ನು ಎಂದಿಗೂ ಮರೆಯುವುದಿಲ್ಲ. ಇದು ಕೆಲಸದಲ್ಲಿ ಅದ್ಭುತ ದಿನದಂತೆ ತೋರುತ್ತಿದೆ.

**ಧನಸ್ಸು** ಮನೆಯಲ್ಲಿ ಒತ್ತಡ ನಿಮಗೆ ಸಿಟ್ಟು ತರಿಸಬಹುದು. ಅವುಗಳನ್ನು ದಮನಗೊಳಿಸುವುದು ಕೇವಲ ದೈಹಿಕ ಸಮಸ್ಯೆಯನ್ನು ಹೆಚ್ಚಿಸುತ್ತದೆ. ದೈಹಿಕ ಚಟುವಟಿಕೆಯೊಂದಿಗೆ ಇದನ್ನು ತೊಡೆದುಹಾಕಿ.

**ಮಕರ** ಸಂತೋಷದ ದಿನಕ್ಕಾಗಿ ಮಾನಸಿಕ ಒತ್ತಡವನ್ನು ತಪ್ಪಿಸಿ. ಸಂಬಂಧಿಕರಿಂದ ಹಣದ ಸಾಲವನ್ನು ತೆಗೆದುಕೊಂಡಿರುವ ಜನರು, ಯಾವುದೇ ಪರಿಸ್ಥಿತಿಯಲ್ಲಿಯೂ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ.

**ಕುಂಭ** ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

**ಮೀನ** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ.

---

• ರೈತರಿಗೆ ಯಾವುದೇ ತೊಂದರೆಯಾದ ದೂರುಗಳು ಬಂದಲ್ಲಿ ತಕ್ಷಣವೇ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು

# ಕಳಪೆ ಬೀಜ ಹಾಗೂ ನಕಲಿ ರಸಗೊಬ್ಬರ ಮಾರಾಟಗಾರರ ಮೇಲೆ ಕೇಸ್: ಡಿಸಿ

• ಉದಯವಾಹಿನಿ ಕಲಬುರಗಿ

ಕಳಪೆ ಬೀಜ ಹಾಗೂ ನಕಲಿ ರಸಗೊಬ್ಬರ ಮಾರಾಟ ಕುರಿತಂತೆ ರೈತರಿಂದ ದೂರು ಕೇಳಿಬಂದಲ್ಲಿ ತಕ್ಷಣವೇ ಪೊಲೀಸ್ ದೂರು ದಾಖಲಿಸಿ, ಸಂಬಂಧಿಸಿದ ಅಧಿಕಾರಿಗಳು ಕಾಲ-ಕಾಲಕ್ಕೆ ಖಾಸಗಿ ಅಥವಾ ಯಾವುದೇ ವಿತರಕರ ಅಂಗಡಿಗಳಿಗೆ ಅಚಾನಕ್ಕಾಗಿ ಭೇಟಿ ನೀಡುವ ಮೂಲಕ ಪರಿಶೀಲಿಸಬೇಕು, ರೈತರಿಗೆ ಯಾವುದೇ ತೊಂದರೆಯಾದ ದೂರುಗಳು ಬಂದಲ್ಲಿ ತಕ್ಷಣವೇ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಫೌಜಿಯಾ ತರುನ್ನಮ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಕೃಷಿ ಸಂಬಂಧಿತ ಇಲಾಖೆಗಳ ಸಭೆಯ ಅಧ್ಯಕ್ಷತೆವಹಿಸಿ ಅವರು 2025-26ನೇ ಸಾಲಿನ ಕೃಷಿ ಇಲಾಖೆಯ ಕೇಂದ್ರ ಪುರಸ್ಕೃತ ಯೋಜನೆಗಳ ಕೃಷಿ ಯಾತ್ರಿಕರಣ ಉಪ ಅಭಿಯಾನ, ಸೂಕ್ಷ್ಮ ನೀರಾವರಿ ಅನುಷ್ಠಾನ, ಕಬ್ಬಿನ ಬೆಳೆ ಹಾಗೂ ಬೆಳೆ ಸಮೀಕ್ಷೆ ಕ್ರಿಯಾ ಯೋಜನೆ ಅನುಮೋದನೆ ಸೇರಿದಂತೆ ಜಿಲ್ಲೆಯ ಕೃಷಿ ಮತ್ತು ರೈತರ ಸಮಸ್ಯೆಗಳ ಕುರಿತು ಚರ್ಚಿಸಿದರು.

ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಸರ್ಕಾರದ ಯೋಜನೆಗಳ ಲಾಭ ಪಡೆದು ಅತ್ಯುತ್ತಮ ರೈತರಾಗಿ ದುಡಿಯುತ್ತಿರುವವರನ್ನು ಗುರುತಿಸಬೇಕು. ಅವರ ಹೊಲಗಳಿಗೆ ಕೃಷಿ ಅಧಿಕಾರಿಗಳು ನೇರವಾಗಿ ಬೇಟಿ ನೀಡಿ ಸ್ಥಳೀಯರೊಂದಿಗೆ ಚಿಕ್ಕದಾಗಿ ಸಂವಾದವನ್ನು ಹಮ್ಮಿಕೊಳ್ಳಬೇಕು. ಮುಂಗಾರು ವಾಡಿಕೆಗಿಂತ ಈ ವರ್ಷ ಮುಂಚಿತವಾಗಿಯೇ ಪ್ರಾರಂಭವಾಗಿದ್ದು, ಜಿಲ್ಲೆಯಲ್ಲಿ ಬೆಳೆ ಸಮೀಕ್ಷೆಗೆ ಮತ್ತು ಬೆಳೆ ವಿಮೆಗಳಿಗೆ ಸಂಬಂಧಿಸಿದಂತೆ ರೈತರಲ್ಲಿ ಅರಿವು ಮೂಡಿಸಬೇಕು, ಬೆಳೆ ಸರ್ವೆಯಲ್ಲಿ ಗೊಂದಲಗಳಾಗಬಾರದು, ರೈತರ ಮೊಬೈಲಿನಿಂದಲೇ ಅವರಿಂದ ಅರ್ಜಿ ಸಲ್ಲಿಸಲು ಪ್ರೇರೆಪಿಸಬೇಕು.


ಉದಯವಾಹಿನಿ ಚಿತ್ರ

### ಸರ್ಕಾರದಿಂದ ಟಾರ್ಗೆಟ್ ಪಡೆದು ಕೆಲಸ ಮಾಡೋಣ

ರೈತರಿಗೆ ರಸಗೊಬ್ಬರ ಬಳಕೆ, ಒಂದೇ ತರಹದ ಬೆಳೆ ಬೆಳೆಯಬಾರದು ಎಂಬುದನ್ನು ತಿಳಿ ಹೇಳಬೇಕು, ಸ್ಥಳೀಯ ಮಾದರಿ ರೈತರೊಂದಿಗೆ ನೇರವಾಗಿ ಹಳ್ಳಿಗಳಿಗೆ ಹೋಗಿ ಚಿಕ್ಕ ರೈತರಿಗೆ ಬೆಳೆಗಳನ್ನು ಬದಲಾಯಿಸುವ ಮತ್ತು ಬೆಳೆಯುವ ಕುರಿತು ಅರಿವು ಮೂಡಿಸಬೇಕು. ಸರ್ಕಾರದ ವಿವಿಧ ಯೋಜನೆಗಳ ಅಡಿ ರೈತರಿಗೆ ವಿತರಿಸುವ ಕೃಷಿ ಸಂಬಂಧಿತ ಯಂತ್ರಗಳು ಸೇರಿದಂತೆ ಹನಿ ನೀರಾವರಿ, ಸ್ಪ್ರಿಂಕಲರ್ ಹಾಗೂ ಇತರೆ ರೈತಸ್ನೇಹಿ ಸಲಕರಣೆಗಳ ಕುರಿತ ಅರ್ಜಿಗಳ ತ್ವರಿತ ವಿಲೇವಾರಿಯಾಗಬೇಕು. ನವ ಮಾಧ್ಯಮವನ್ನು ಬಳಸಿಕೊಂಡು ಮಾದರಿ ರೈತರ ಕುರಿತು ಚಿಕ್ಕ ವಿಡಿಯೋಗಳನ್ನು ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಲ್ಲಿ ಇತರೆ ರೈತರಿಗೆ ಸ್ಫೂರ್ತಿಯಾಗುತ್ತದೆ. ಈಗಂತೂ ಪ್ರತಿಯೊಬ್ಬರು ಸಾಮಾಜಿಕ ಜಾಲತಾಣಗಳನ್ನು ಬಳಸುತ್ತಿರುವ ಕಾಲದಲ್ಲಿ ಅವುಗಳನ್ನು ಬಳಸಿಕೊಂಡು ಪ್ರಚಾರ ಕೈಗೊಳ್ಳಬೇಕು. ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಯೋಜನೆಯಡಿ ರೈತರ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡಿ ಅವರಿಗೆ ಟ್ರಾಕ್ಟರ್, ಪವರ್ ಟಿಲ್ಲರ್, ನೇಗಿಲು, ರೊಟೋವೇಟರ್ ನೀಡಲು ಕ್ರಮಕೈಗೊಳ್ಳಿ, ಶೇ 100% ರಷ್ಟು ಸಾಧನೆ ಮಾಡಿದಲ್ಲಿ ಸರ್ಕಾರದಿಂದ ಹೆಚ್ಚುವರಿಯಾಗಿ ಟಾರ್ಗೆಟ್ ಪಡೆದು ಕೆಲಸ ಮಾಡೋಣ.

> ವಿವಿಧ ಇಲಾಖೆಗಳ ವರದಿಯನ್ನು ಪರಿಶೀಲಿಸಿ ನಂತರ ಮಾತನಾಡಿದ ಅವರು ಮುಂಗಾರು ಆರಂಭವಾಗಿರುವ ಹಿನ್ನಲೆಯಲ್ಲಿ ಬಿತ್ತನೆ ಬೀಜಗಳಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಪ್ರತಿ ತಾಲ್ಲೂಕಿಗೆ ಯಾವುದೇ ದೂರುಗಳಿಲ್ಲದೆ ವಿತರಿಸಬೇಕು. ಸೋಯಬೀನ್ ಬಿತ್ತನೆ ಬೀಜಗಳ ಸಮಸ್ಯೆಯನ್ನು ಶೀಘ್ರದಲ್ಲಿ ಬಗೆಹರಿಸಬೇಕು, ರಸಗೊಬ್ಬರ ಸಹ ಸಾಕಷ್ಟು ಪ್ರಮಾಣದಲ್ಲಿ ಕಾದಿರಿಸಬೇಕು
> -ಜಿಲ್ಲಾಧಿಕಾರಿ, ಫೌಜಿಯಾ ತರುನ್ನಮ್

ಬೆಳೆ ಸಮೀಕ್ಷೆಗೆ ಸಂಬಂಧಿಸದಂತೆ ಇರುವ ತಾಂತ್ರಿಕ ಸಮಸ್ಯೆಗಳಿಗೆ ಸಂಬಂಧಿಸಿದ ರಾಜ್ಯ ಮಟ್ಟದ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸಮಸ್ಯೆಗಳನ್ನು ತುರ್ತಾಗಿ ಬಗೆಹರಿಸಬೇಕು.

**ದೂರುಗಳು ಬಂದಲ್ಲಿ ತಕ್ಷಣವೇ ಕಟ್ಟುನಿಟ್ಟಿನ ಕ್ರಮ**

ತಾಲ್ಲೂಕುವಾರು ನಕ್ಷೆಯಲ್ಲಿ ಕಾಣದ ಗ್ರಾಮಗಳನ್ನು ಗುರುತಿಸುವ ಕಾರ್ಯ ನಡೆಸಿ ರಾಜ್ಯಮಟ್ಟದ ಅಧಿಕಾರಿಗಳ ಗಮನಕ್ಕೆ ತರಬೇಕು. ರೈತರಿಗೆ ಸಾಲ ನೀಡುವ ಕುರಿತಂತೆ ಸಹಕಾರಿ ಬ್ಯಾಂಕಗಳು ಹಾಗೂ ರಾಷ್ಟ್ರೀಕೃತ ಬ್ಯಾಂಕ್‌ಗಳು ವಿನಾಕರಣ ತೊಂದರೆ ನೀಡಬಾರದು, ಬೆಳೆ ವಿಮೆಗೆ ಸಂಬಂಧಿಸಿದಂತೆ ರೈತರೊಂದಿಗೆ ಮಾನವೀಯತೆಯಿಂದ ವರ್ತಿಸಿ.

ರೈತರು ಸಾಲಗಳಿಗೆ ಸಂಬಂಧಿಸಿದಂತೆ ದೂರುಗಳು ಕೇಳಿ ಬಂದಲ್ಲಿ ಬ್ಯಾಂಕನವರನ್ನು ಜವಬ್ದಾರಿಯನ್ನಾಗಿಸಲಾಗುವುದು.

ಸಭೆಯಲ್ಲಿ ಮುಖ್ಯವಾಗಿ ಕಲಬುರಗಿ ಜಿಲ್ಲೆಯಲ್ಲಿ ತೊಗರಿ ಬೆಳೆಗೆ ನೋಂದಣಿ ಮಾಡಿದಂತಹ ರೈತರ ಬೆಳೆ ಸಮೀಕ್ಷೆಯ ದತ್ತಾಂಶದ ಪ್ರಕಾರ ತೊಗರಿ ಬೆಳೆ ಇರುವುದನ್ನು ಪರಿಶೀಲಿಸುವುದು, ಪ್ರಸ್ತುತ ಸಂಧರ್ಭದಲ್ಲಿ ಸ್ಪಷ್ಟ ಅಭಿಪ್ರಾಯದೊಂದಿಗೆ ನೊಂದಣಿ ಮಾಡಿದ ರೈತವಾರು ಪಟ್ಟಿ ಸಲ್ಲಿಸುವುದು ಸೇರಿದಂತೆ ಇನ್ನಿತರ ಮೂಲಗಳ ದತ್ತಾಂಶವನ್ನು ಸಂಗ್ರಹಿಸಿ ಪರಿಶೀಲಿಸಲು ಅಧಿಕಾರಿಗಳಿಗೆ ಸೂಚಿಸಲಾಯಿತು.

### ರೈತರಿಗೆ ತರಬೇತಿ ನೀಡಬೇಕು

ರೈತರಿಗೆ ಅಗತ್ಯ ಮಾಹಿತಿ ಹಾಗೂ ಅರಿವು ಮೂಡಿಸಲು ತರಬೇತಿ ನೀಡಬೇಕು, ಬೆಳೆಗಳಿಗೆ ಯಾವ ಯಾವ ಸಂದರ್ಭದಲ್ಲಿ ಏನನ್ನು ಹಾಕಬೇಕು, ಯಾವ ಮಣ್ಣಲ್ಲಿ ಯಾವ ಬೆಳೆಯನ್ನು ಬೆಳೆಯಬೇಕು ಎನ್ನುವುದರ ಕುರಿತು ಸಣ್ಣ-ಸಣ್ಣ ಗುಂಪುಗಳನ್ನಾಗಿ ಮಾಡಿ ತರಬೇತಿ ನೀಡಬೇಕು. ಅಂತಹ ತರಬೇತಿಗಳಿಗೆ ನನ್ನನ್ನು ಸಹ ಆಹ್ವಾನಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

---

## ಪುರಸಭೆ ಸಾಮಾನ್ಯ ಸಭೆ

• ಉದಯವಾಹಿನಿ ಇಂಡಿ

ಪುರಸಭೆಯ ಸಾಮಾನ್ಯ ಸಭೆ ಪುರಸಭೆಯ ಸಭಾಭವನದಲ್ಲಿ ಅಧ್ಯಕ್ಷ ಲಿಂಬಾಜಿ ರಾಠೋಡ ಇವರ ಅಧ್ಯಕ್ಷತೆಯಲ್ಲಿ ನಡೆಯಿತು. ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ ಎಲ್ಲರನ್ನು ಸ್ವಾಗತಿಸಿದರು.

ಪಟ್ಟಣದ ವಿವಿಧ ಕಡೆ ಸ್ಲಂ ಬೋರ್ಡುದಿಂದ ಬಡವರಿಗೆ ಜಾಗ ನೀಡಿ ಹಕ್ಕು ಪತ್ರ ನೀಡಿದ್ದಾರೆ. ಆದರೆ ಪುರಸಭೆಯವರು ಉತ್ತರ ನೀಡಬೇಕು ಎಂಬ ಕುರಿತು ಸದಸ್ಯರಾದ ಅಸ್ಲಂ ಕಡಣಿ ಮತ್ತು ದೇವೆಂದ್ರ ಕುಂಬಾರ ಕೇಳಿದ್ದಕ್ಕೆ ಚರ್ಚೆ ನಡೆಯಿತು.

ಸದಸ್ಯ ಅನೀಲಗೌಡ ಬಿರಾದಾರ ಒಬ್ಬ ಸಿಬ್ಬಂದಿ ಪುರಸಭೆ ಕೆಲಸಕ್ಕೆ ಒಂದೂ ದಿನ ಬಂದಿಲ್ಲ ಆದರೂ ಕಳೆದ ಐದು ವರ್ಷದಿಂದ ಆತನ ಸಂಬಳ ನೀಡುತ್ತಿದ್ದಾರೆ ಎಂದು ಕೇಳಿದ ಪ್ರಶ್ನೆ ಕುರಿತು ಚರ್ಚೆ ನಡೆಯಿತು. ಅದಲ್ಲದೆ ಪಟ್ಟಣದಲ್ಲಿ ಅನೇಕ ಕಡೆ ವಿದ್ಯುತ್ ಬಲ್ಬು ಸುಟ್ಟಿವೆ. ಕಳೆದ ಅನೇಕ ದಿನಗಳಿಂದ ಹಾಕಿಲ್ಲ, ಪುರಸಭೆಯ ಜಮಾ ಖರ್ಚು ಕಳೆದ 6 ತಿಂಗಳಿಂದ ಮಾಡಿಲ್ಲ ಎಂದು ಅನೀಲಗೌಡ ಕೇಳಿದ ಪ್ರಶ್ನೆಗೆ ಚರ್ಚೆ ನಡೆಯಿತು.

ಸದಸ್ಯ ಇಸ್ಮಾಯಿಲ್ ಅರಬ ನಗರೋತ್ಥಾನ ಕೆಲಸ ಕಾಮಗಾರಿ ನಡೆಯುತ್ತಿಲ್ಲ ಎಂದು ಆರೋಪಿಸಿದರು. ಮುಸ್ತಾಕ ಇಂಡಿಕರ, ವಿಜಯಕುಮಾರ ಮೂರಮನ, ಸೈಪನ ಪವಾರ, ಬನ್ನೆಮ್ಮ ಹದರಿ, ರೇಖಾ ಮೂರಮನ, ಶೈಲಜಾ ಪೂಜಾರಿ, ಕವಿತಾ ರಾಠೋಡ, ಜ್ಯೋತಿ ರಾಠೋಡ ಮತ್ತಿತರಿದ್ದರು.


ಉದಯವಾಹಿನಿ ಚಿತ್ರ

### ಐದು ವರ್ಷದಿಂದ ಚರ್ಚೆ

ಪ್ರತಿ ವಾರ್ಡನಲ್ಲಿ ಮೂರು ಟ್ಯಾಕ್ಟರ ಗರ್ಸ ಹಾಕಬೇಕು ಎಂದು ಸದಸ್ಯ ಉಮೇಶ ದೇಗಿನಾಳ ಕೇಳಿದ ಪ್ರಶ್ನೆಗೆ ಕೆಲವು ವಾರ್ಡ ದೊಡ್ಡದಿದ್ದು ಅವುಗಳಿಗೆ ಹೆಚ್ಚಿನ ಗರ್ಸ ಹಾಕಬೇಕು ಎಂಬ ಕುರಿತು, ಅದಲ್ಲದೆ ಡ್ರೇನೇಜ ಸ್ವಚ್ಚತಾಗಾಗಿ 9 ಲಕ್ಷ ವೆಚ್ಚದಲ್ಲಿ ಮಸೀನು ಖರೀದಿ ಮಾಡಿದ್ದು ಅದು ಬಳಸದೇ ಜಂಗು ಹಿಡಿದು ಚಾಲನೆಯಲ್ಲಿ ಇಲ್ಲ. ಹೀಗಾಗಿ 60 ಲಕ್ಷ ರೂ ವೆಚ್ಚದಲ್ಲಿ ಜಟ್ಟಿಂಗ ಮಸೀನು ಖರಿದಿಸಲು ಕಳೆದ ಐದು ವರ್ಷದಿಂದ ಚರ್ಚೆ ನಡೆಯುತ್ತಿದೆ. ಆದರೆ ಖರಿದಿಸುತ್ತಿಲ್ಲ ಎಂದು ಸದಸ್ಯರು ಆರೋಪಿಸಿದರು.

---

## ದ.ಕ, ಉಡುಪಿಯಲ್ಲಿ ಭಾರಿ ಮಳೆ: ಆರೆಂಜ್ ಅಲರ್ಟ್ ಘೋಷಣೆ

• ಉದಯವಾಹಿನಿ, ಮಂಗಳೂರು

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗಿದ್ದು, ಜೂನ್ 26 ಕ್ಕೆ ಅಧಿಕಾರಿಗಳು ಆರೆಂಜ್ ಎಚ್ಚರಿಕೆ ನೀಡಿದ್ದಾರೆ. ಭಾರೀ ಮಳೆ ಮತ್ತು ಬಿರುಗಾಳಿಯ ಗಾಳಿಯಿಂದಾಗಿ ಹಲವಾರು ಪ್ರದೇಶಗಳಲ್ಲಿ ಜನಜೀವನ ಅಸ್ತವ್ಯಸ್ತವಾಗಿದೆ.

ಮಂಗಳೂರು ನಗರದಲ್ಲಿ ಬೆಳಿಗ್ಗೆ ಮತ್ತು ಮಧ್ಯಾಹ್ನ ಸುರಿದ ಬಲವಾದ ಗಾಳಿ ಮತ್ತು ಭಾರೀ ಮಳೆಯಿಂದಾಗಿ ವ್ಯಾಸನಗರದ ಬಳಿ ಮರ ಮತ್ತು ವಿದ್ಯುತ್ ಕಂಬಗಳು ಉರುಳಿ ಬಿದ್ದು ಸಂಚಾರಕ್ಕೆ ಸ್ವಲ್ಪ ಸಮಯ ಅಡ್ಡಿಯಾಯಿತು.

ಸಂಪಾಜೆಯ ಗೂನಡ್ಕ ಗ್ರಾಮದಲ್ಲಿ, ನಿಲ್ಲಿಸಿದ್ದ ಕಾರಿನ ಮೇಲೆ ಮರದ ಕೊಂಬೆ ಬಿದ್ದು ಕಾರು ಹಾನಿಗೊಳಗಾಗಿದೆ. ಮರಗಳು ಮತ್ತು ಕೊಂಬೆಗಳು ಉರುಳಿ ಬಿದ್ದ ಕಾರಣ ವಿವಿಧ ಪ್ರದೇಶಗಳಲ್ಲಿ ವಿದ್ಯುತ್ ಕಂಬಗಳು ಮತ್ತು ವಿದ್ಯುತ್ ತಂತಿಗಳಿಗೆ ಹಾನಿಯಾಗಿದೆ ಎಂದು ಮೆಸ್ಕಾಂನ ಸುಳ್ಯ ಉಪವಿಭಾಗ ವರದಿ ಮಾಡಿದೆ.

ಉಡುಪಿ ಜಿಲ್ಲೆಯಾದ್ಯಂತ ಸಾಧಾರಣ ಮಳೆಯಾಗಿದ್ದು, ದಿನವಿಡೀ ಮೋಡ ಕವಿದ ವಾತಾವರಣವಿತ್ತು. ಪಡುಬಿದ್ರಿ, ಉಚ್ಚಿಲ, ಕಾಪು ಮತ್ತು ಶಿರ್ವದ ಕೆಲವು ಭಾಗಗಳಲ್ಲಿ ಮಳೆಯೊಂದಿಗೆ ಬಲವಾದ ಗಾಳಿಯೂ ಬೀಸಿತು. ಹವಾಮಾನ ಇಲಾಖೆಯು ಈ ಪ್ರದೇಶದಲ್ಲಿ ಬಲವಾದ ಗಾಳಿಯೊಂದಿಗೆ ಮಳೆ ಮುಂದುವರಿಯುವ ಮುನ್ಸೂಚನೆ ನೀಡಿದೆ. ಜೂನ್ 26 ಕ್ಕೆ ಕಿತ್ತಳೆ ಎಚ್ಚರಿಕೆಯನ್ನು ಘೋಷಿಸಲಾಗಿದೆ, ನಂತರ ಜೂನ್ 27 ಮತ್ತು 28 ಕ್ಕೆ ಯಲ್ಲೋ ಎಚ್ಚರಿಕೆಯನ್ನು ಘೋಷಿಸಲಾಗಿದೆ.


ಉದಯವಾಹಿನಿ ಚಿತ್ರ

### ಸಾರ್ವಜನಿಕರಿಗೆ ತೊಂದರೆ

ಸುಳ್ಯ ತಾಲೂಕಿನಲ್ಲಿ ಬೆಳಿಗ್ಗೆಯಿಂದ ಭಾರೀ ಗಾಳಿಯೊಂದಿಗೆ ಭಾರೀ ಮಳೆಯಾಗಿದ್ದು, ಮಧ್ಯಾಹ್ನ ಮತ್ತು ಸಂಜೆಯವರೆಗೂ ಮಳೆ ಸುರಿಯಿತು. ಪಟ್ಟಣದ ಹಲವು ಭಾಗಗಳಲ್ಲಿ ಒಳಚರಂಡಿ ವ್ಯವಸ್ಥೆ ಸರಿಯಾಗಿಲ್ಲದ ಕಾರಣ ಮಳೆನೀರು ರಸ್ತೆಗಳಲ್ಲಿ ಉಕ್ಕಿ ಹರಿಯುತ್ತಿದ್ದು, ಸಾರ್ವಜನಿಕರಿಗೆ ತೊಂದರೆಯಾಗಿದೆ.


---

## ಐನಾಪೂರ ಏತ ನೀರಾವರಿ ಯೋಜನೆ ಅನುಷ್ಠಾನ ಕೆಎನ್‌ಎಲ್ ವಿಳಂಬನೀತಿ ಸಮಗ್ರ ಮಾಹಿತಿ ನೀಡಲು ಒತ್ತಾಯ

• ಉದಯವಾಹಿನಿ, ಚಿಂಚೋಳಿ

ಎರಡು ದಶಕಗಳ ನಿರಂತರ ಹೋರಾಟದ ಫಲವಾಗಿ ಕಳೆದ ಅಧಿವೇಶನದಲ್ಲಿ ಐನಾಪೂರ ಏತ ನೀರಾವರಿ ಯೋಜನೆಗೆ ಬೇಕಾಗುವ 95ಕೋಟಿ ರೂ.ಸರ್ಕಾರದಿಂದ ಮಂಜೂರುಗೊಂಡ ತಾಂತ್ರಿಕ ಮಂಜೂರಾತಿ ಆದೇಶ ಹೊರಡಿಸಿ ವರ್ಷಗಳು ಕಳೆಯುತ್ತಿದರೂ ಗುತ್ತಿಗೆದಾರರು ಕರಾರು ಒಪ್ಪಂದ ಮಾಡಿ ಕೊಳ್ಳುವಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವ ಕುರಿತು ಸಮಗ್ರ ಮಾಹಿತಿ ನೀಡುವಂತೆ ಕೆಎನ್‌ಎಲ್ ವಲಯಕ್ಕೆ ಲಿಖಿತ ರೂಪದಲ್ಲಿ ಮನವಿಕೊಟ್ಟಿದರೂ ಹಿಂಬರಹ ರೂಪದಲ್ಲಿ ಸಮಗ್ರ ಮಾಹಿತಿ ನೀಡುತ್ತಿಲ್ಲವೆಂದು ಮುಲ್ಲಾಮಾರಿ ಏತ ನೀರಾವರಿ ಅಭಿವೃದ್ಧಿ ಸಮಿತಿ ಅಧ್ಯಕ್ಷ ಶಿವಾನಂದ ಮಾಲಿಪಾಟೀಲ ಆರೋಪಿಸಿದ್ದಾರೆ.

ತಾಲ್ಲೂಕಿನ ತಹಶೀಲ್ ಕಛೇರಿ ಎದುರು ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿಪತ್ರ ಸಲ್ಲಿಸಿದ ಅವರು, ರೈತರು ಅನೇಕ ಬಾರಿ ಐನಾಪೂರ ಏತ ನೀರಾವರಿ ಯೋಜನೆ ಬಗ್ಗೆ ಕೆಎನ್‌ಎಲ್ ಇಲಾಖೆಗೆ ಮನವಿಗಳು ಸಲ್ಲಿಸಿದರೂ ಹಿಂಬರಹ ಹಾಗೂ ಯೋಜನೆಯ ರೂಪರೇಷಗಳು ನೀಡುತ್ತಿಲ್ಲ ಇದರಿಂದ ಭಾಗದ ರೈತರಿಗೆ ಬೇಸರ ಮೂಡುತ್ತಿದೆ. ವೀರಶೆಟ್ಟಿ ಪಾಟೀಲ, ಅಮರ ಲೋಡನೂರ್, ಇದ್ದರು.


ಉದಯವಾಹಿನಿ ಚಿತ್ರ

> ಐನಾಪೂರ ಏತ ನೀರಾವರಿ ಯೋಜನೆ ಕುರಿತು ಎರಡು ದಿನದಲ್ಲಿ ಸಮಗ್ರ ಮಾಹಿತಿ ನೀಡದೆ ಇದ್ದಲ್ಲಿ ಮುಲ್ಲಾಮಾರಿ ಏತ ನೀರಾವರಿ ಅಭಿವೃದ್ಧಿ ಸಮಿತಿ ವತಿಯಿಂದ ರಸ್ತಾ ರೋಕೋ ಚಳುವಳಿ ಮಾಡಲಾಗುವುದು, ಆ ಚಳುವಳಿಗೆ ಜಿಲ್ಲಾಮಟ್ಟದ ಅಧಿಕಾರಿಗಳು ಬರುವವರೆಗೆ ಸಮಸ್ಯೆ ಪರಿಹರಿಸುವವರೆಗೆ ಹೋರಾಟ ಮಾಡುತ್ತೇವೆ -ಶಿವಾನಂದ ಮಾಲಿಪಾಟೀಲ

---

## ಸಿದ್ಧಸಿರಿ ಪವರ್ ಮತ್ತು ಎಥೆನಾಲ್ ಘಟಕದಿಂದ ಹೊರಸೂಸುವ ವಿಷಕಾರಿ ಅನಿಲ, ಧೂಳು, ದುರ್ವಾಸನೆ ಕಡಿವಾಣಕ್ಕೆ: ಬೋಮ್ನಳ್ಳಿ ಆಗ್ರಹ

• ಉದಯವಾಹಿನಿ, ಚಿಂಚೋಳಿ

ಪಟ್ಟಣದ ಹೊರವಲಯದಲ್ಲಿರುವ ಸಿದ್ಧಸಿರಿ ಪವರ್ ಮತ್ತು ಎಥೆನಾಲ್ ಘಟಕದಿಂದ ಹೊರಸೂಸುವ ವಿಷಕಾರಿ ಅನಿಲ, ಧೂಳು, ದುರ್ವಾಸನೆಯಿಂದ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದು ಶೀಘ್ರದಲ್ಲೇ ಕಡಿವಾಣಕ್ಕೆ ಸಮಾಜ ಸೇವಕ ಗೌತಮ್ ಬೋಮ್ನಳ್ಳಿ ಆಗ್ರಹಿಸಿದರು.

ಪಟ್ಟಣದ ಕಂದಾಯ ಇಲಾಖೆ ಅಧಿಕಾರಿಗಳಿಗೆ ಮನವಿಪತ್ರ ಸಲ್ಲಿಸಿದ ಅವರು, ಎಥೆನಾಲ್ ಘಟಕದಿಂದ ವಿಪರಿತವಾದ ಧೂಳು, ದುರ್ವಾಸನೆ ಮತ್ತು ವಿಶಾನಿಲ ಹೊರಸೂಸುತ್ತಿದೆ ಇದರಿಂದ ಚಿಂಚೋಳಿ-ಚಂದಾಪೂರ ಅವಳಿ ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಜನ ಜಾನುವಾರುಗಳಿಗೆ ಬಹಳಷ್ಟು ತೊಂದರೆ ಆಗುತ್ತಿದೆ, ಕಂಪನಿ ಪರಿಸರದಲ್ಲಿ ಹೊಸದಾಗಿ ಸಿದ್ಧಸಿರಿ ಶಾಲೆ ಪ್ರಾರಂಭಿಸಿದ್ದು ಅಲ್ಲಿನ ವಿಶಾನಿಲ ಧೂಳು ದುರ್ವಾಸನೆಯಿಂದ ಪೂರ್ವ ಪ್ರಾಥಮಿಕ ಮತ್ತು ಪ್ರಾಥಮಿಕ ಶಾಲೆ ಮಕ್ಕಳ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ. ಅಲ್ಲದೆ ರಸ್ತೆಮೇಲೆ ದ್ವಿಚಕ್ರ ವಾಹನ ಸವಾರರು ಸಂಚರಿಸುವ ಸಮಯದಲ್ಲಿ ಕೂಡ ಧೂಳಿನ ಕಣಗಳು ಕಣ್ಣುಗಳಲ್ಲಿ ಬೀಳುತ್ತಿವೆ, ಚಿಂಚೋಳಿ ಚಂದಾಪೂರ ಸುತ್ತಮುತ್ತಲಿನ ಗ್ರಾಮಗಳ ಮನೆಗಳ ಮೇಲ್ಛಾವಣಿಗಳ ಮೇಲೆ ಮತ್ತು ಅಂಗಳದಲ್ಲಿ ಕಂಪನಿಯ ಕಪ್ಪು ಬಣ್ಣದ ಸಾಕಷ್ಟು ಧೂಳು ಬೀಳುತ್ತಿದೆ ಮನೆಯ ಮುಂದಿರುವ ನೀರಿನ ತೊಟ್ಟಿಗಳಲ್ಲಿ ಮೇಲ್ವದರಿನಲ್ಲಿಯೂ ಸಹ ಕಪ್ಪು ಬಣ್ಣದ ಧೂಳು ಜಮಾ ಆಗುತ್ತಿದೆ.

ಈ ಸಂದರ್ಭದಲ್ಲಿ ರಾಜಶೇಖರ ಹೊಸಮನಿ, ಸುನಿಲ್ ತ್ರಿಪಾಠಿ, ಚೇತನ್ ನೀರಾಳಕರ್, ಖಿತಲಪ್ಪಾ, ಧನರಾಜ ಕೊಳ್ಳರಕರ್ ಇದ್ದರು.


ಉದಯವಾಹಿನಿ ಚಿತ್ರ

> ವಿಷಕಾರಿ ಧೂಳು ಅನಿಲ ಮತ್ತು ದುರ್ವಾಸನೆಯಿಂದ ಸಾರ್ವಜನಿಕರ ಶ್ವಾಸಕೋಶ ಮತ್ತು ಚರ್ಮರೋಗ ಸಮಸ್ಯೆವುಂಟಾಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ, ಅದಕಾರಣ ಕೂಡಲೆ ಸಿದ್ಧಸಿರಿ ಪವರ್ ಎಥೆನಾಲ್ ಘಟಕದ ಹೊರಸೂಸುವಿಕೆ ವಿಷಕಾರಿ ಅನಿಲ ದುರ್ವಾಸನೆ ಧೂಳಿನ ಕಣ ಮತ್ತು ರಾಸಾಯನಿಕಯುಕ್ತ ನೀರನ್ನು ತಡೆಯದಿದ್ದಲ್ಲಿ ಮುಂದಾಗುವ ಅನಾಹುತಗಳಿಗೆ ತಾಲ್ಲೂಕಾಡಳಿತ ಜಿಲ್ಲಾಡಳಿತವೇ ಹೊಣೆಯಾಗುವುದರಿಂದ ಕಾನೂನು ಹೋರಾಟ ಮಾಡಬೇಕಾಗುತ್ತದೆ.
> -ಗೌತಮ್ ಬೋಮ್ನಳ್ಳಿ, ಸಮಾಜ ಸೇವಕ

---

## ಮದುವೆಯಾಗುವುದಾಗಿ ನಂಬಿಸಿ ವಂಚನೆ: ಯುವಕ ವಿರುದ್ಧ ಪ್ರಕರಣ

• ಉದಯವಾಹಿನಿ, ಪುತ್ತೂರು

ಮದುವೆಯಾಗುವುದಾಗಿ ನಂಬಿಸಿ ಯುವತಿಯನ್ನು ಗರ್ಭವತಿಯಾಗಿಸಿ, ಈಗ ಮದುವೆ ನಿರಾಕರಿಸಿದ ಹಿನ್ನಲೆಯಲ್ಲಿ ನಗರಸಭಾ ಸದಸ್ಯ ಪುತ್ರನ ವಿರುದ್ಧ ಪುತ್ತೂರು ಮಹಿಳಾ ಠಾಣೆಯಲ್ಲಿ ಅತ್ಯಾಚಾರ ಮತ್ತು ವಂಚನೆ ಪ್ರಕರಣ ದಾಖಲಾಗಿದೆ.

ಬಪ್ಪಳಿಗೆ ನಿವಾಸಿ ಬಿಜೆಪಿ ನಗರ ಮಂಡಲ ಮಾಜಿ ಅಧ್ಯಕ್ಷ ಪಿ. ಜಿ. ಜಗನ್ನಿವಾಸ್ ರಾವ್ ಪುತ್ರ ಕೃಷ್ಣ ಜೆ. ರಾವ್ (21) ಕೃತ್ಯ ಎಸಗಿದಾತ. ಠಾಣೆಯಲ್ಲಿ ದೂರು ದಾಖಲಾಗುತ್ತಿದ್ದಂತೆ ತಲೆಮರೆಸಿಕೊಂಡಿದ್ದು, ಪತ್ತೆಗಾಗಿ ಪೊಲೀಸರು ಬಲೆ ಬೀಸಿದ್ದಾರೆ.

## ಕೊಲೆ ಆರೋಪಿಗಳ ಕಾಲಿಗೆ ಗುಂಡು: ಬಂಧನ

• ಉದಯವಾಹಿನಿ, ಹಾವೇರಿ

ಶಿಗ್ಗಾಂವಿ ಪಟ್ಟಣದ ಹೊರವಲಯದಲ್ಲಿ ಹಾಡಹಗಲೇ ಪ್ರಥಮ ದರ್ಜೆ ಗುತ್ತಿಗೆದಾರ ಶಿವಾನಂದ ಕುನ್ನೂರ ಅವರನ್ನು ಭೀಕರವಾಗಿ ಹತ್ಯೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಆರೋಪಿಗಳ ಕಾಲಿಗೆ ಗುಂಡು ಹಾರಿಸಿದ ಪೊಲೀಸರು ಅವರನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಗುಂಡೇಟಿನಿಂದ ಗಾಯಗೊಂಡಿರುವ ಆರೋಪಿಗಳಾದ ಅಶ್ರಫ್ ಹಾಗೂ ನಾಗರಾಜ್ ಎಂಬುವವರನ್ನು ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ಸಾಗಿಸಲಾಗಿದೆ. ಹಾನಗಲ್ ತಾಲ್ಲೂಕಿನ ಕೊಂಡೋಜಿ ಕ್ರಾಸ್ ಬಳಿ ಆರೋಪಿಗಳ ಕಾಲಿಗೆ ಗುಂಡು ಹಾರಿಸಿ ವಶಕ್ಕೆ ಪಡೆಯಲಾಗಿದ್ದು, ಸಿ.ಪಿ.ಐ. ಸತ್ಯಪ್ಪ ಮಾಳಗೊಂಡ ಹಾಗೂ ಪಿ.ಎಸ್.ಐ. ಸಂಪತ್ ಈ ಕಾರ್ಯಾಚರಣೆ ನಡೆಸಿದ್ದಾರೆ.

ಗುತ್ತಿಗೆದಾರ ಶಿವಾನಂದ ಕುನ್ನೂರ ಅವರ ಮೇಲೆ ದಾಳಿ ಮಾಡಿದ ತಂಡ ಕಬ್ಬಿಣದ ರಾಡ್ ಹಾಗೂ ತಲವಾರ್‌ಗಳಿಂದ ದಾಳಿ ನಡೆಸಿ ಹತ್ಯೆ ಮಾಡಿತ್ತು. ಕೊಂಡೋಜಿ ಕ್ರಾಸ್ ಬಳಿ ನಡೆದ ಫೈರಿಂಗ್‌ನಲ್ಲಿ ಗಾಯಗೊಂಡ ಆರೋಪಿಗಳಿಬ್ಬರನ್ನು ಮೊದಲು ಹಾವೇರಿ ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಿ ನಂತರ ಅಲ್ಲಿಂದ ಹುಬ್ಬಳ್ಳಿಯ ಕಿಮ್ಸ್‌ಗೆ ಸಾಗಿಸಲಾಯಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಂಶುಕುಮಾರ್ ನೇತೃತ್ವ ವಹಿಸಿದ್ದರು.

---

## ರೈಲ್ವೆ ಬೇಡಿಕೆಗಳ ಈಡೇರಿಕೆಗಾಗಿ ಡಿಆರ್‌ಎಂ ಗೆ ಮನವಿ

• ಉದಯವಾಹಿನಿ, ಬಳ್ಳಾರಿ

ಇಲ್ಲಿಗೆ ಆಗಮಿಸಿದ್ದ ಹುಬ್ಬಳ್ಳಿ ರೈಲ್ವೇ ವಿಭಾಗದ ಮ್ಯಾನೇಜರ್ ಮೀನಾ ಬೇಲಾ ಇವರನ್ನು ಬಳ್ಳಾರಿಯ ರೈಲ್ವೆ ನಿಲ್ದಾಣದಲ್ಲಿ ಕರ್ನಾಟಕ ರಾಜ್ಯ ರೈಲ್ವೆ ಕ್ರಿಯಾ ಸಮಿತಿಯ ನಿಯೋಗ ಭೇಟಿ ಮಾಡಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಮನವಿ ಪತ್ರ ನೀಡಿದೆ. ಈಗಾಗಲೇ ನಿಲುಗಡೆ ಆಗಿರುವ ಬೆಳಗಾಂ ಸಿಕಂದರಾಬಾದ್ ಮುನುಗುರು ಹಾಗೂ ಶಿವಮೊಗ್ಗ ಚೆನ್ನೈ ಎಕ್ಸ್‌ಪ್ರೆಸ್ ರೈಲು ಪುನರಾರಂಭಿಸಬೇಕು. ಬಳ್ಳಾರಿ ಮಾರ್ಗದಲ್ಲಿ ಇಂಟರ್‌ಸಿಟಿ ಇಲ್ಲವೇ ಒಂದೇ ಭಾರತ್ ಅಥವಾ ಜನ ಶತಾಬ್ದಿ ರೈಲು ಬೆಂಗಳೂರಿಗೆ ಹೋಗಲು ಉದಯ ಆರಂಭಿಸುವಂತೆ ಹಾಗೂ ಬಳ್ಳಾರಿ ಮಾರ್ಗದಿಂದ ಮಂಗಳೂರಿಗೆ ರೈಲು ಆರಂಭಿಸುಬೇಕು. ಪ್ರಾಸ್ತಾವಿತ ಸಿಂಧನೂರು ಹುಬ್ಬಳ್ಳಿ ಬೆಂಗಳೂರು ರೈಲುನ್ನು ಬಳ್ಳಾರಿ ಗುಂತಕಲ್ ಮಾರ್ಗದಲ್ಲಿ ಸಂಚರಿಸುವ ವ್ಯವಸ್ಥೆ ಮಾಡಬೇಕು. ಬಳ್ಳಾರಿ ನಗರದಲ್ಲಿ ಗವಿಸಿದ್ದಪ್ಪ ಸರ್ಕಲ್ ದುರ್ಗಮ್ಮ ದೇವಸ್ಥಾನ ಗುಗ್ಗರಹಟ್ಟಿ ಬೆಂಗಳೂರು ರಸ್ತೆಯ ಮಾರೆಮ್ಮ ಗುಡಿ ಹಾಗೂ ದರೋಜಿಯ ಐದು ಮೇಲ್ ಸೇತುವೆಗಳ ನಿರ್ಮಿಸಬೇಕು.

ಬಳ್ಳಾರಿ ರೈಲ್ವೆ ನಿಲ್ದಾಣದ ಅಭಿವೃದ್ಧಿ ಕೆಲಸದ ಕಾಮಗಾರಿ ನಿಧಾನ ಗತಿಯಲ್ಲಿ ಸಾಗಿದ್ದು ತ್ವರಿತವಾಗಿ ಕೆಲಸ ಪೂರ್ಣಗೊಳಿಸುವಂತೆ ಕೋರಲಾಯಿತು. ಬಳ್ಳಾರಿ ರೈಲ್ವೆ ನಿಲ್ದಾಣಕ್ಕೆ ಇನ್ನು ಹೆಚ್ಚುವರಿಯಾಗಿ ಎರಡು ಪ್ಲಾಟ್ಫಾರ್ಮ್ ಗಳು ಸೇರಿದಂತೆ ಬಳ್ಳಾರಿಯ ಹೊಸ ಬಸ್ ಸ್ಟಾಂಡ್ ಹಿಂಭಾಗದಲ್ಲಿ ನೂತನ ಬೈಪಾಸ್ ರೈಲ್ವೆ ನಿಲ್ದಾಣದ ಕಾಮಗಾರಿಯನ್ನು ಆರಂಭಿಸಲು ಕೋರಿತು.


ಉದಯವಾಹಿನಿ ಚಿತ್ರ

---

• 1 ಕೋಟಿ ವೆಚ್ಚದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳ ವಸತಿ ಉದ್ದೇಶಕ್ಕೆ ವಸತಿ ನಿಲಯ ನಿರ್ಮಾಣ

# ದಶಕದಿಂದ ಬಳಕೆಯಾಗದ ಹಾಸ್ಟೆಲ್: ಕುಡುಕರ ಅಡ್ಡೆಯಾಗಿ ಮಾರ್ಪಾಟು

• ಉದಯವಾಹಿನಿ, ಅಂಕೋಲಾ


ದಶಕದ ಹಿಂದೆ ಇಲ್ಲಿನ ಪೂಜಗೇರಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ನಿರ್ಮಿಸಲಾದ ವಿದ್ಯಾರ್ಥಿ ವಸತಿ ನಿಲಯ ಈವರೆಗೂ ಬಳಕೆಗೆ ಬಂದಿಲ್ಲ. ಕಟ್ಟಡವು ಪಾಳು ಬೀಳುತ್ತಿದ್ದು, ಕುಡುಕರ ತಾಣವಾಗಿ ಮಾರ್ಪಟ್ಟಿರುವ ಆರೋಪಗಳಿವೆ.

2013-14ರಲ್ಲಿ ಕಾಲೇಜಿಗೆ ಹೊಂದಿಕೊಂಡಿರುವ ವಿಶಾಲವಾದ ಮೈದಾನದಲ್ಲಿ 1 ಕೋಟಿ ವೆಚ್ಚದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳ ವಸತಿ ಉದ್ದೇಶಕ್ಕೆ ವಸತಿ ನಿಲಯ ನಿರ್ಮಾಣ ಮಾಡಲಾಗಿತ್ತು. ಕಟ್ಟಡಕ್ಕೆ ವಿದ್ಯುತ್ ಸರಬರಾಜಿಗೆ ವ್ಯವಸ್ಥೆಯನ್ನೂ ಕಲ್ಪಿಸಲಾಗಿದೆ. ಆದರೆ, ಕಟ್ಟಡ ಮಾತ್ರ ಇನ್ನೂ ಬಳಕೆಗೆ ಸಿಕ್ಕಿಲ್ಲ. ಸುಸಜ್ಜಿತವಾಗಿ ನಿರ್ಮಾಣವಾಗಿರುವ ಕಟ್ಟಡ ಈಗ ಪುಂಡರಿಗೆ ಮದ್ಯ ವ್ಯಸನದಂತಹ ಚಟುವಟಿಕೆ ನಡೆಸುವ ತಾಣವಾಗಿ ಮಾರ್ಪಟ್ಟಿದೆ ಎಂಬ ದೂರುಗಳು ಹೆಚ್ಚಿವೆ. ಕಟ್ಟಡದ ಒಳಗೆ ಬಿದ್ದಿರುವ ಮದ್ಯದ ಖಾಲಿ ಬಾಟಲಿಗಳು ಇದಕ್ಕೆ ಸಾಕ್ಷಿ ನೀಡುತ್ತಿವೆ. ಕಿಟಕಿ ಗಾಜುಗಳನ್ನು ಒಡೆಯಲಾಗುತ್ತಿದೆ.

ಕಟ್ಟಡದ ಸುತ್ತ ಗಿಡಗಂಟಿಗಳು ಆಳೆತ್ತರಕ್ಕೆ ಬೆಳೆದು ನಿಂತಿವೆ. 'ಕಟ್ಟಡ ನಿರ್ಮಿಸಿದ ಕೆಆರ್‌ಐಡಿಎಲ್ ಸಂಸ್ಥೆಯಿಂದ ಈವರೆಗೆ ಕಟ್ಟಡ ಹಸ್ತಾಂತರ ಆಗಿಲ್ಲ. ಕಾಲೇಜು ಶಿಕ್ಷಣ ಇಲಾಖೆ ಸುಪರ್ದಿಗೆ ನೀಡಬೇಕೋ ಅಥವಾ ಸಮಾಜ ಕಲ್ಯಾಣ ಇಲಾಖೆಗೆ ವಹಿಸಬೇಕೋ ಎಂಬ ಗೊಂದಲ ಬಗೆಹರಿದಿಲ್ಲ. ಹೀಗಾಗಿ ಕಟ್ಟಡ ಯಥಾಸ್ಥಿತಿಯಲ್ಲಿದೆ' ಎಂದು ಅಧಿಕಾರಿಯೊಬ್ಬರು ತಿಳಿಸಿದರು. ವಸತಿ ನಿಲಯ ನಿರ್ವಹಣೆ ಕಾಲೇಜಿಗೆ ನೀಡಿಲ್ಲ. ಹೆಚ್ಚಿನ ಮಾಹಿತಿ ಇಲ್ಲ ಎಂದು ಕಾಲೇಜಿನ ಪ್ರಾಚಾರ್ಯ ವಿದ್ಯಾ ನಾಯಕ ಪ್ರತಿಕ್ರಿಯಿಸಿದರು.

ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿದ ಕಟ್ಟಡ ಬಳಕೆಗೆ ಬಾರದೆ ಅನುದಾನ ಪೋಲಾದಂತಾಗುತ್ತಿದೆ. ರಾತ್ರಿ ವೇಳೆ ಕಾಲೇಜು ಬಳಿಯ ಈ ಕಟ್ಟಡದಲ್ಲಿ ಕುಡುಕರ ಹಾವಳಿ ಹೆಚ್ಚುತ್ತಿದೆ. ಬಾಟಲಿಗಳನ್ನು ಒಡೆದು ಮೈದಾನದಲ್ಲಿ ಎಸೆಯುವುದರಿಂದ ಕ್ರೀಡಾ ಚಟುವಟಿಕೆಗೂ ಸಮಸ್ಯೆಯಾಗುತ್ತಿದೆ. ವಿದ್ಯಾರ್ಥಿಗಳ ಅನುಕೂಲಕ್ಕೆ ನಿರ್ಮಿಸಿದ ಸೌಲಭ್ಯ ಬಳಕೆಯಾಗಿ ರುವುದು ಸರಿಯಲ್ಲ ಎಂದು ಸಾಮಾಜಿಕ ಕಾರ್ಯಕರ್ತ ಜಯರಾಮ ಹೇಳಿದರು.




ಉದಯವಾಹಿನಿ ಚಿತ್ರ

**ಮದ್ಯದ ಖಾಲಿ ಬಾಟಲಿಗಳು ಇದಕ್ಕೆ ಸಾಕ್ಷಿ**

> ಪೂಜಗೇರಿಯಲ್ಲಿರುವ ವಿದ್ಯಾರ್ಥಿ ವಸತಿ ನಿಲಯ ಕಟ್ಟಡ ಪಾಳುಬೀಳುತ್ತಿರುವ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತರಲಾಗಿದೆ
> -ವಿನಾಯಕ ನಾಯ್ಕ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ

### ಹಳ್ಳಿ ಮಕ್ಕಳು ಸೌಲಭ್ಯ ವಂಚಿತ

'ತಾಲ್ಲೂಕು ಕೇಂದ್ರದಿಂದ 35 ಕಿ.ಮೀ. ದೂರದ ಅಚವೆ ಸುಂಕಸಾಳ ಡೋಂಗ್ರಿ ಹಿಲ್ಲೂರು ಭಾಗದಲ್ಲಿ ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳಿದ್ದಾರೆ. ನಿತ್ಯ ಅಲ್ಲಿಂದ ಪಟ್ಟಣದ ಕಾಲೇಜುಗಳಿಗೆ ಬಸ್ ಮೂಲಕ ಓಡಾಟ ನಡೆಸಬೇಕಾಗುತ್ತದೆ. ವಸತಿ ನಿಲಯದ ಸೌಲಭ್ಯ ಇದ್ದರೆ ಅವರ ಶಿಕ್ಷಣಕ್ಕೆ ಅನುಕೂಲ ಆಗುತ್ತಿತ್ತು. ಕೆಲವರು ನಿತ್ಯ ಓಡಾಟ ನಡೆಸಲಾಗದ ಕಾರಣಕ್ಕೆ ಶಿಕ್ಷಣ ಮೊಟಕುಗೊಳಿಸಿದ್ದೂ ಇದೆ. ದಶಕಗಳಿಂದ ಪರಿಶಿಷ್ಟ ಪಂಗಡದ ಮಕ್ಕಳು ಸೌಲಭ್ಯ ವಂಚಿತರಾಗುತ್ತಿದ್ದರೂ ಜನಪ್ರತಿನಿಧಿಗಳು ವಸತಿ ನಿಲಯ ನಿರ್ವಹಣೆಗೆ ಗಮನಹರಿಸುತ್ತಿಲ್ಲ' ಎಂದು ಮುಖಂಡರೊಬ್ಬರು ಆರೋಪಿಸಿದರು.

---

## ಬಾಕಿ ಬಿಲ್ ಪಾವತಿಗೆ ಆಗ್ರಹ

• ಉದಯವಾಹಿನಿ, ಚನ್ನಮ್ಮನ ಕಿತ್ತೂರು

ಸಮೀಪದ ಬೈಲಹೊಂಗಲ ತಾಲ್ಲೂಕಿನ ಶ್ರೀಸೋಮೇಶ್ವರ ಸಹಕಾರಿ ಸಕ್ಕರೆ ಕಾರ್ಖಾನೆ (ನಿ) ಸಿದ್ದಸಮುದ್ರ, ಬೆಳವಡಿ. ಇಲ್ಲಿ ರೈತರ ಬಿಲ್ಲು ಬಾಕಿ ಉಳಿಸಿಕೊಂಡು 6 ತಿಂಗಳಾದರೂ ಇದುವರೆಗೂ ರೈತರಿಗೆ ಬಾಕಿ ಹಣ ನೀಡಿಲ್ಲ. ಎಂದು ರಾಜ್ಯ ರೈತ ಸಂಘಗಳ ಮಹಾಒಕ್ಕೂಟಗಳಿಂದ ಕಾರ್ಖಾನೆಗೆ ರೈತರೆಲ್ಲರೂ ಜೊತೆಗೂಡಿ ಬಿಲ್ ರೈತರ ಖಾತೆಗೆ ಜಮೆ ಮಾಡಬೇಕೆಂದು ಆಗ್ರಹಿಸಿದರು. ನಂತರ ರೈತ ಮುಖಂಡರು ಮಾತನಾಡಿ ರೈತನಿಗೆ ಸರಿಯಾದ ಸಮಯಕ್ಕೆ ಬಿಲ್ ಪಾವತಿಸಿದರೆ ಅನುಕೂಲವಾಗುತ್ತದೆ ಎಂದರು.

ಕಾರ್ಖಾನೆ ಅಧ್ಯಕ್ಷ ಬಸವರಾಜ ಬಾಳೇಕುಂದ್ರಿ, ಹಾಗೂ ವ್ಯವಸ್ಥಾಪಕ ನಿರ್ದೇಶಕ, ಆಡಳಿತ ಸರ್ವ ನಿರ್ದೇಶಕರು ಜೊತೆಗೂಡಿ ಆದಷ್ಟು ಬೇಗನೆ ರೈತರ ಬಾಕಿ ಉಳಿಸಿಕೊಂಡಿರುವ ಕಬ್ಬಣ ಬಿಲ್ಲ ರೈತರ ಖಾತೆಗಳಿಗೆ ಸಂದಾಯ ಮಾಡಿ. ಇದಾಗದಿದ್ದರೆ ಮುಂಬರುವ ದಿನಗಳಲ್ಲಿ ಕಾರ್ಖಾನೆಯಲ್ಲಿ ಟಿಕಾಣೆ ಹೂಡಿ ಉಪವಾಸ ಸತ್ಯಾಗ್ರಹ ಮಾಡುತ್ತೇವೆಂದು ಎಚ್ಚರಿಸಿದರು.

ಈ ವೇಳೆ ಮಲ್ಲಿಕಾರ್ಜುನ ಮುರಗೊಡ, ಮಹಾಂತೇಶ ಕಮತ ಬಸವರಾಜ ರುದ್ರಪ್ಪ ಮೊಕಾಶಿ, ಬೀರಪ್ಪ ದೇಶನೂರ, ಸಂಜೀವ ತಿಲಗರ, ಮಹಾಂತೇಶ ಗೌರಿ ಸೇರಿದಂತೆ ನೂರಾರು ರೈತರಿದ್ದರು.

# ರಕ್ಷಣಾ ವೆಚ್ಚವನ್ನು ಶೇ.5ರಷ್ಟು ಹೆಚ್ಚಿಸಲು ನ್ಯಾಟೋ ಒಪ್ಪಿಗೆ

## ಟ್ರಂಪ್ ಒತ್ತಾಯಕ್ಕೆ ಮಣಿದು ರಕ್ಷಣಾ ವೆಚ್ಚ ಹೆಚ್ಚಳಕ್ಕೆ ಅನುಮತಿಸಿದ ನ್ಯಾಟೋ ಸದಸ್ಯ ರಾಷ್ಟ್ರಗಳು

**ಹೇಗ್:** ನ್ಯಾಟೋ ಸದಸ್ಯ ರಾಷ್ಟ್ರಗಳು ನೆದರ್ಲ್ಯಾಂಡ್‌ನ ಹೇಗ್‌ನಲ್ಲಿ ಶೃಂಗಸಭೆ ನಡೆಸಿದ್ದು, ತಮ್ಮ ರಕ್ಷಣಾ ವೆಚ್ಚವನ್ನು ಹೆಚ್ಚಿಸುವ ಪ್ರಸ್ತಾವನೆಗೆ ಸಹಿ ಹಾಕಲಿವೆ. ನ್ಯಾಟೋದ ರಕ್ಷಣಾ ವೆಚ್ಚವನ್ನು ಹೆಚ್ಚಿಸುವ ಅಮೆರಿಕದ ಅಧ್ಯಕ್ಷ ಟ್ರಂಪ್ ಅವರ ಬೇಡಿಕೆಯನ್ನು ಒಪ್ಪಿಕೊಳ್ಳಲಾಗಿದ್ದು, ಟ್ರಂಪ್ ಈಗ ನ್ಯಾಟೋ ಗುಂಪಿನಲ್ಲಿ ಮತ್ತಷ್ಟು ಶಕ್ತಿಶಾಲಿಯಾಗಿ ಹೊರಹೊಮ್ಮಿದ್ದಾರೆ.

**ನ್ಯಾಟೋ ಸಹಿ ಮಾಡಲಿರುವ ಪ್ರಸ್ತಾವನೆಯ ವಿವರ:** ನ್ಯಾಟೋ ಸದಸ್ಯ ರಾಷ್ಟ್ರಗಳು ತಮ್ಮ ಜಿಡಿಪಿಯ ಶೇ. 5ರಷ್ಟನ್ನು ನ್ಯಾಟೋ ಪಡೆಯ ರಕ್ಷಣಾ ವೆಚ್ಚಕ್ಕಾಗಿ ಮೀಸಲಿಡಬೇಕು ಎಂಬುದು, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಬೇಡಿಕೆ. ಮೈತ್ರಿಕೂಟದ ಸದಸ್ಯ ರಾಷ್ಟ್ರಗಳು ಪ್ರಸ್ತುತ ತಮ್ಮ ಜಿಡಿಪಿಯ ಶೇ. 2ರಷ್ಟು ಹಣವನ್ನು ನ್ಯಾಟೋ ರಕ್ಷಣಾ ವೆಚ್ಚಕ್ಕಾಗಿ ಮೀಸಲಿಡುತ್ತಿವೆ. ಈ ಪೈಕಿ ಪೋಲೆಂಡ್. ಬಾಲ್ಟಿಕ್ ರಾಜ್ಯಗಳಂತಹ ಕೆಲವೇ ಮಿತ್ರರಾಷ್ಟ್ರಗಳು ಮಾತ್ರ, ಶೇ. 5ರಷ್ಟು ರಕ್ಷಣಾ ವೆಚ್ಚವನ್ನು ಭರಿಸುತ್ತಿದ್ದು, ಎಲ್ಲಾ ಸದಸ್ಯ ರಾಷ್ಟ್ರಗಳು ಈ ಅಂಕಿ ತಲುಪಬೇಕು ಎಂದು ಡೊನಾಲ್ಡ್ ಟ್ರಂಪ್ ಬಹಳ ದಿನಗಳಿಂದ ಒತ್ತಾಯಿಸುತ್ತಿದ್ದಾರೆ. 2024ರಲ್ಲಿ ಅಮೆರಿಕ ಶೇ. 3.4ಕ್ಕಿಂತ ಕಡಿಮೆ ಹಣವನ್ನು ನ್ಯಾಟೋ ರಕ್ಷಣಾ ವೆಚ್ಚಕ್ಕಾಗಿ ಮೀಸಲಿಟ್ಟಿದೆ ಎಂಬುದು ವಿಶೇಷ. ನ್ಯಾಟೋದ ಒಟ್ಟು 32 ಸದಸ್ಯ ರಾಷ್ಟ್ರಗಳು 2035ರ ವೇಳೆಗೆ ಪ್ರಮುಖ ಮಿಲಿಟರಿ ಅಗತ್ಯಗಳಿಗೆ ಶೇ. 3.5ರಷ್ಟು, ಸೈಬರ್ ಭದ್ರತೆ, ಮೂಲಸೌಕರ್ಯದಂತಹ ವಿಶಾಲವಾದ ರಕ್ಷಣಾ-ಸಂಬಂಧಿತ ಕ್ಷೇತ್ರಗಳಿಗೆ ಶೇ. 1.5ರಷ್ಟು ಹಣವನ್ನು ಮೀಸಲಿಡುವ ರಾಜಿ ಒಪ್ಪಂದವನ್ನು ಮಾಡಿಕೊಂಡಿವೆ.

ಈ ನಿರ್ಧಾರವನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ದೊರೆತ ಜಯ ಎಂದು ವಿಶ್ಲೇಷಿಸಲಾಗುತ್ತಿದೆ. ಅಲ್ಲದೇ ಹಣದ ಕೊರತೆಯಿರುವ ಯುರೋಪಿಯನ್ ಸರ್ಕಾರಗಳಿಗೆ, ಇದು ಅನುಕೂಲ ಮಾಡಿಕೊಡುತ್ತದೆ ಎಂದೂ ಹೇಳಲಾಗಿದೆ. ಆದಾಗ್ಯೂ, ತಮ್ಮ ಬಜೆಟ್‌ನಲ್ಲಿ ನೂರಾರು ಶತಕೋಟಿ ಡಾಲರ್‌ಗಳಷ್ಟು ಹಣವನ್ನು ನ್ಯಾಟೋ ರಕ್ಷಣಾ ವೆಚ್ಚಕ್ಕಾಗಿ ಮೀಸಲಿಡಬೇಕಾದ ಅನಿವಾರ್ಯತೆಯನ್ನು, ಈ ನಿರ್ಧಾರ ನ್ಯಾಟೋ ಸದಸ್ಯ ರಾಷ್ಟ್ರಗಳಿಗೆ ಸೃಷ್ಟಿಸಿದೆ.



ಮತ್ತಷ್ಟು ಗಟ್ಟಿ ಆಯ್ತು ಟ್ರಂಪ್ ಗದ್ದುಗೆ

**ಶೇ.3.5 ಲೆಕ್ಕಾಚಾರವೇನು?:** ಶೇ.3.5ರಷ್ಟು ಖರ್ಚಿನ ಬಹುಪಾಲು ನ್ಯಾಟೋದ ಪ್ರಮುಖ ಮಿಲಿಟರಿ ಶಕ್ತಿಗಾಗಿ ವ್ಯಯಿಸಲಾಗುವುದು ಎಂದು ಮೂಲಗಳು ಖಚಿತಪಡಿಸಿವೆ. ಒಕ್ಕೂಟದ ಸದಸ್ಯರು ರಷ್ಯಾದಿಂದ ಬರುವ ಬೆದರಿಕೆಯನ್ನು ಎದುರಿಸಲು ಅಗತ್ಯವಿರುವ ಎಲ್ಲಾ ಮಿಲಿಟರಿ ಉಪಕರಣಗಳ ಖರೀದಿಗೆ, ಕಳೆದ ತಿಂಗಳಷ್ಟೇ ಸಹಿ ಹಾಕಿದ್ದಾರೆ. ಶೇ.3.5ರಷ್ಟು ರಕ್ಷಣಾ ವೆಚ್ಚದ ಕುರಿತ ನಿಖರವಾದ ವಿವರಗಳು ಇನ್ನೂ ರಹಸ್ಯವಾಗಿವೆಯಾದರೂ, ಇದು ಶೀತಲ ಸಮರದ ನಂತರದ ಸಾಮರ್ಥ್ಯಗಳಲ್ಲಿ ಅತಿದೊಡ್ಡ ಏರಿಕೆಯನ್ನು ಒಳಗೊಳ್ಳಲಿರುವುದು ಖಚಿತ. ಮೈತ್ರಿಕೂಟದ ವಾಯು ರಕ್ಷಣೆಯಲ್ಲಿ ಐದು ಪಟ್ಟು ಹೆಚ್ಚಳ, ಸಾವಿರಾರು ಯುದ್ಧ ಟ್ಯಾಂಕ್‌ಗಳು, ಶಸ್ತ್ರಸಜ್ಜಿತ ವಾಹನಗಳನ್ನು ಶಸ್ತ್ರಾಗಾರಗಳಿಗೆ ಸೇರಿಸುವ ನಿರೀಕ್ಷೆಯಿದೆ ಎಂಬ ನ್ಯಾಟೋ ಮುಖ್ಯಸ್ಥ ಮಾರ್ಕ್ ರುಟ್ಟೆ ಹೇಳಿಕೆ, ಭಾರೀ ಪ್ರಮಾಣದಲ್ಲಿ ನ್ಯಾಟೋ ರಕ್ಷಣಾ ವೆಚ್ಚ ಏರಲಿದೆ ಎಂಬುದನ್ನು ಸೂಚಿಸುತ್ತದೆ. ಮಾರ್ಕ್ ರುಟ್ಟೆ ಪತ್ರಿಕಾಗೋಷ್ಠಿಯಲ್ಲಿ ಇಸ್ರೇಲ್-ಇರಾನ್ ನಡುವೆ ಕದನ ವಿರಾಮ ಒಪ್ಪಂದ ಜಾರಿ ಮಾಡಿಸಿದ್ದಕ್ಕಾಗಿ ಡೊನಾಲ್ಡ್ ಟ್ರಂಪ್ ಡ್ಯಾಡಿ ಇದ್ದಂತೆ ಎಂದು ಹೇಳಿದ್ದನ್ನು ಇಲ್ಲಿ ಸ್ಮರಿಬಹುದು.

**ಸಹಕಾರ ಹೇಗೆ?:** ಹಿಂದಿನ ನ್ಯಾಟೋ ತೀರ್ಮಾನಗಳನ್ನು ಗಮನಿಸಿದಾಗ, ಸದಸ್ಯ ರಾಷ್ಟ್ರಗಳು ಆ ಬಗ್ಗೆ ಹೆಚ್ಚು ತಲೆಕೆಡಿಸಿಕೊಳ್ಳದಿರುವುದು ಸ್ಪಷ್ಟವಾಗಿ ಗೋಚರವಾಗುತ್ತದೆ. ಹೀಗಾಗಿ ಹೊಸ ಒಪ್ಪಂದಗಳು ಪರಿಣಾಮಕಾರಿಯಾಗಿ ಜಾರಿಗೆ ಬರಬೇಕಾದರೆ, ಸಂಘಟಿತ ಪ್ರಯತ್ನ, ಸದಸ್ಯ ರಾಷ್ಟ್ರಗಳು ಒಪ್ಪಂದಗಳಿಗೆ ಗೌರವ ಕೊಡಬೇಕಾದ ಅಗತ್ಯತೆಯನ್ನು ಒತ್ತಿ ಹೇಳುತ್ತದೆ. ರಷ್ಯಾ-ಉಕ್ರೇನ್ ಯುದ್ಧದಲ್ಲಿ ನ್ಯಾಟೋದ ಪಾತ್ರದ ಬಗ್ಗೆ ಇನ್ನೂ ಅನಿಶ್ಚಿತತೆಗಳು ಮುಂದುವರೆದಿರುವುದು, ಮೈತ್ರಿಕೂಟದಲ್ಲಿನ ಬಿರುಕುಗಳಿಗೆ ಸಾಕ್ಷಿ.

### ವರ್ಗಾಯಿಸಲು ಸಮಯ ಬೇಕು

ಈ ಕುರಿತು ಮಾತನಾಡಿರುವ ಯುಎಸ್ ನ್ಯಾಟೋ ರಾಯಭಾರಿ ಮ್ಯಾಥ್ಯೂ ವಿಟೇಕರ್, ನ್ಯಾಟೋ ಸದಸ್ಯ ರಾಷ್ಟ್ರಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿ ಶತ್ರು ದಾಳಿಯಿಂದ ರಕ್ಷಿಸಿಕೊಳ್ಳುವಲ್ಲಿ ಅತ್ಯಂತ ಪ್ರಮುಖ ಪಾತ್ರನಿರ್ವಹಿಸುತ್ತದೆ ಎಂದು ಹೇಳಿದ್ದಾರೆ. ಆದರೆ ಈ ಖರ್ಚಿನ ಬಹುಪಾಲನ್ನು ಆಯಾ ರಾಷ್ಟ್ರೀಯ ಸರ್ಕಾರಗಳೇ ನಿಭಾಯಿಸುತ್ತಿದ್ದು, ಅದನ್ನು ಸಂಘಟಿತ ಖಾತೆಗೆ ವರ್ಗಾಯಿಸಲು ಇನ್ನೂ ಸಮಯ ಬೇಕು ಎಂದು ನ್ಯಾಟೋ ಅಧಿಕಾರಿಗಳು ಒಪ್ಪಿಕೊಳ್ಳುತ್ತಾರೆ.

### ಶೇ.1.5 ಲೆಕ್ಕಾಚಾರವೇನು?

ಇನ್ನುಳಿದ ಶೇ. 1.5ರಷ್ಟು ವೆಚ್ಚಗಳನ್ನು ಸೇತುವೆಗಳು ಮತ್ತು ರಸ್ತೆಗಳ ನಿರ್ಮಾಣ ಮತ್ತು ಸೈಬರ್ ಭದ್ರತೆಗಾಗಿ ಮೀಸಲಿಡುವ ಒಪ್ಪಂದಕ್ಕೆ ಎಲ್ಲಾ 32 ನ್ಯಾಟೋ ಸದಸ್ಯ ರಾಷ್ಟ್ರಗಳು ಸಹಿ ಹಾಕಲಿವೆ. ಮೂಲಸೌಕರ್ಯಗಳ ಅಭಿವೃದ್ಧಿ ಯಾವುದೇ ಸಂಭಾವ್ಯ ದಾಳಿಯ ವಿರುದ್ಧ ರಕ್ಷಿಸಿಕೊಳ್ಳಲು ಸಹಾಯ ಮಾಡುವಲ್ಲಿ ನಿರ್ಣಾಯಕವಾಗಿವೆ ಎಂದು ನ್ಯಾಟೋ ಹೇಳುತ್ತದೆ.

ನ್ಯಾಟೋ ಸದಸ್ಯರು ಗುರಿಯನ್ನು ತಲುಪುವವರೆಗೆ ವರ್ಷಕ್ಕೆ ಶೇ. 0.2ರಷ್ಟು ರಕ್ಷಣಾ ವೆಚ್ಚ ಹೆಚ್ಚಳಕ್ಕೆ ಬದ್ಧರಾಗುವಂತೆ ಮಾಡುವ ಯೋಜನೆಯನ್ನು, ನ್ಯಾಟೋ ಅಧಿಕಾರಿಗಳು ಈ ಮೊದಲು ಪ್ರಸ್ತಾಪಿಸಿದ್ದರು. ಆದರೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಒತ್ತಾಯದ ಕಾರಣದಿಂದಾಗಿ, ಶೇ. 5ರಷ್ಟು ಹೆಚ್ಚಳ ಒಪ್ಪಂದಕ್ಕೆ ಎಲ್ಲರೂ ಒಪ್ಪಿಕೊಂಡಿದ್ದಾರೆ. ಹೊಸ ಕರಾರಿನಂತೆ ಸದಸ್ಯ ರಾಷ್ಟ್ರಗಳು ಪ್ರತಿ ವರ್ಷವೂ ನ್ಯಾಟೋಗೆ ವರದಿಗಳನ್ನು ಸಲ್ಲಿಸಬೇಕಾಗುತ್ತದೆ. ರಕ್ಷಣಾ ವೆಚ್ಚವನ್ನು ಸಮನಾಗಿ ಹಂಚಿಕೊಳ್ಳುವುದನ್ನು ಖಾತರಿಪಡಿಸಲು ಮತ್ತು 2029ರಲ್ಲಿ ನ್ಯಾಟೋದ ಶಸ್ತ್ರಾಸ್ತ್ರ ಅಗತ್ಯವನ್ನು ಈಡೇರಿಸುವಲ್ಲಿ ಇದು ಪ್ರಮುಖ ಪಾತ್ರ ನಿರ್ವಹಿಸಲಿದೆ ಎಂದು ನಿರೀಕ್ಷಿಸಲಾಗಿದೆ. ಒಟ್ಟಿನಲ್ಲಿ ನ್ಯಾಟೋ ರಕ್ಷಣಾ ವೆಚ್ಚ ಹೆಚ್ಚಳದ ಒಪ್ಪಂದ ಈ ಮೈತ್ರಿಕೂಟದ ಮಿಲಟರಿ ಅಗತ್ಯತೆಗಳನ್ನು ಪೂರೈಸಲಿದ್ದು, ಇದಕ್ಕೆ ಎಲ್ಲಾ ಸದಸ್ಯ ರಾಷ್ಟ್ರಗಳನ್ನು ಒಪ್ಪಿಸುವ ಮೂಲಕ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಸ್ಥಾನವನ್ನು ಭದ್ರಪಡಿಸಿಕೊಂಡಿದ್ದಾರೆ ಎಂದು ಹೇಳಬಹುದು.

# ಭಯೋತ್ಪಾದನೆಯೊಂದಿಗೆ ಶಾಂತಿ, ಸಮೃದ್ಧಿ ಸಹಬಾಳ್ವೆ ನಡೆಸಲು ಸಾಧ್ಯವಿಲ್ಲ

**ಕ್ವಿಂಗ್ಡಾವೊ:** ಭಯೋತ್ಪಾದನೆಗೆ ಹಣಕಾಸು ಒದಗಿಸುವವರು, ಪ್ರಾಯೋಜಕರನ್ನು ಹೊಣೆಗಾರರನ್ನಾಗಿ ಮಾಡಬೇಕು, ಭಯೋತ್ಪಾದನೆಯೊಂದಿಗೆ ಶಾಂತಿ, ಸಮೃದ್ಧಿ ಸಹಬಾಳ್ವೆ ನಡೆಸಲು ಸಾಧ್ಯವಿಲ್ಲ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಕೆಲವು ದೇಶಗಳು ಭಯೋತ್ಪಾದಕರಿಗೆ ಆಶ್ರಯ ನೀಡಲು ಗಡಿಯಾಚೆಗಿನ ಭಯೋತ್ಪಾದನೆಯನ್ನು ನೀತಿಯ ಸಾಧನವಾಗಿ ಬಳಸುತ್ತಿವೆ ಎಂದು ಹೇಳಿದರು.

ಭಯೋತ್ಪಾದನೆ ಬೆದರಿಕೆಯನ್ನು ಎದುರಿಸುವಲ್ಲಿ ಮಾನದಂಡಗಳು ಇರಬಾರದು ಎಂದು ಪಾಕಿಸ್ತಾನವನ್ನು ಕಟುವಾಗಿ ಟೀಕಿಸಿದರು.ನಮ್ಮ ದೇಶದಲ್ಲಿ ನಾವು ಎದುರಿಸುತ್ತಿರುವ ದೊಡ್ಡ ಸವಾಲುಗಳು ಶಾಂತಿ, ಭದ್ರತೆ ಮತ್ತು ವಿಶ್ವಾಸ ಕೊರತೆಗೆ ಸಂಬಂಧಿಸಿವೆ ಎಂದು ಅವರು ಹೇಳಿದರು. ಮತ್ತು ಈ ಸಮಸ್ಯೆಗಳಿಗೆ ಮೂಲ ಕಾರಣ ಹೆಚ್ಚುತ್ತಿರುವ ಮೂಲಭೂತೀಕರಣ, ಉಗ್ರವಾದ, ಭಯೋತ್ಪಾದನೆ ಎಂದು ಹೇಳದರು. ಶಾಂತಿ, ಸಮೃದ್ಧಿಯು ಭಯೋತ್ಪಾದನೆ, ರಾಜ್ಯೇತರ ನಟರು ಮತ್ತು ಭಯೋತ್ಪಾದಕ ಗುಂಪುಗಳ ಕೈಯಲ್ಲಿರುವ



ಸಾಮೂಹಿಕ ವಿನಾಶದ ಶಸ್ತ್ರಾಸ್ತ್ರಗಳಪ್ರಸರಣದೊಂದಿಗೆ ಸಹಬಾಳ್ವೆ ನಡೆಸಲು ಸಾಧ್ಯವಿಲ್ಲ ಎಂದು ಸಿಂಗ್ ಹೇಳಿದರು. ಈ ಸವಾಲುಗಳನ್ನು ಎದುರಿಸಲು ನಿರ್ಣಾಯಕ ಕ್ರಮದ ಅಗತ್ಯವಿದೆ, ಮತ್ತು ನಮ್ಮ ಸಾಮೂಹಿಕ ಸುರಕ್ಷತೆ, ಭದ್ರತೆಗಾಗಿ ಈ ದುಷ್ಟಶಕ್ತಿಗಳ ವಿರುದ್ಧದ ಹೋರಾಟದಲ್ಲಿ ನಾವು ಒಂದಾಗಬೇಕು ಎಂದು ಅವರು ಹೇಳಿದರು.

ಭಯೋತ್ಪಾದನೆಯನ್ನು ಪ್ರಾಯೋಜಿಸುವವರು, ಪೋಷಿಸುವವರು ಮತ್ತು ತಮ್ಮ ಸಂಕುಚಿತ ಮತ್ತು ಸ್ವಾರ್ಥಿ ಉದ್ದೇಶಗಳಿಗಾಗಿ ಬಳಸಿಕೊಳ್ಳುವವರು ಉಗ್ರ ಪರಿಣಾಮಗಳನ್ನು ಅನುಭವಿಸಬೇಕಾಗುತ್ತದೆ ಎಂದು ರಕ್ಷಣಾ ಸಚಿವರು ಹೇಳಿದರು. ಭಯೋತ್ಪಾದನೆಯನ್ನು ಎದುರಿಸುವಲ್ಲಿ ದ್ವಿಮುಖ ನೀತಿಗಳಿಗೆ ಅವಕಾಶವಿಲ್ಲ ಈ ಬೆದರಿಕೆಯನ್ನು ಎದುರಿಸುವಲ್ಲಿ ದ್ವಿಮುಖ ನೀತಿಗಳಲ್ಲಿ ತೊಡಗಿರುವ ರಾಷ್ಟ್ರಗಳನ್ನು ಟೀಕಿಸಲು ಹಿಂಜರಿಯಬಾರದು ಎಂದು ಅವರು ಹೇಳಿದರು.

> ಪಹಲ್ಗಾಮ್ ಭಯೋತ್ಪಾದಕ ದಾಳಿಯ ಮಾದರಿಯು ಭಾರತದಲ್ಲಿ ಲಷ್ಕರ್-ಎ-ತೈಬಾದ ಹಿಂದಿನ ಭಯೋತ್ಪಾದಕ ದಾಳಿಗಳಿಗೆ ಹೊಂದಿಕೆಯಾಗುತ್ತದೆ ಎಂದು ಸಿಂಗ್ ಹೇಳಿದರು.ಭಾರತ ಭಯೋತ್ಪಾದನೆಯ ಬಗ್ಗೆ ಶೂನ್ಯ ಸಹಿಷ್ಣುತೆಯ ನೀತಿಯನ್ನು ಅನುಸರಿಸುತ್ತಿದೆ ಎಂದು ಅವರು ಹೇಳಿದರು. ಅಫ್ಘಾನಿಸ್ತಾನದಲ್ಲಿ ಶಾಂತಿ, ಭದ್ರತೆ, ಸ್ಥಿರತೆಯನ್ನು ಬೆಂಬಲಿಸುವ ತನ್ನ ನೀತಿಯಲ್ಲಿ ಭಾರತ ಸ್ಥಿರ, ದೃಢವಾಗಿದೆ
> 
> -ರಾಜನಾಥ್ ಸಿಂಗ್, ರಕ್ಷಣಾ ಸಚಿವ

# ಮನೆಗಳ ಬೆಲೆ ಏರಿಕೆ ಬಗ್ಗೆ ರಾಹುಲ್ ಗಾಂಧಿ ಕಳವಳ



**ನವದೆಹಲಿ:** ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ದೇಶದ ದೊಡ್ಡ ನಗರಗಳ ಮನೆಗಳ ಬೆಲೆ ಏರಿಕೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ, ಮುಂದಿನ ಬಾರಿ ಯಾರಾದರೂ ನಿಮಗೆ ಒಟ್ಟು ದೇಶೀಯ ಉತ್ಪನ್ನ ಅಂಕಿಅಂಶಗಳನ್ನು ಹೇಳಿದರೆ, ನಿಮ್ಮ ದೇಶೀಯ ಬಜೆಟ್ ಬಗ್ಗೆ ಸತ್ಯವನ್ನು ಅವರಿಗೆ ತೋರಿಸಿ ಎಂದು ಹೇಳಿದರು. ಮಹಾರಾಷ್ಟ್ರದ ನಗರ ಕುಟುಂಬಗಳಲ್ಲಿ ಆದಾಯದ ಆಧಾರದ ಮೇಲೆ ಟಾಪ್ 5 ಪ್ರತಿಶತದಷ್ಟು ಜನರು ಮುಂಬೈನಲ್ಲಿ ಮನೆ ಖರೀದಿಸಲು 100 ವರ್ಷಗಳಿಗಿಂತ ಹೆಚ್ಚು ಉಳಿತಾಯ ಬೇಕಾಗುತ್ತದೆ ಎಂದು ಹೇಳಲಾದ ಮಾಧ್ಯಮ ವರದಿಯನ್ನು ಗಾಂಧಿ ತಮ್ಮ ವಾಟ್ಸಾಪ್ ಚಾನೆಲ್‌ನಲ್ಲಿ ಹಂಚಿಕೊಂಡಿದ್ದಾರೆ. ಹೌದು, ನೀವು ಅದನ್ನು ಸರಿಯಾಗಿ ಓದಿದ್ದೀರಿ, ನೀವು ಅದನ್ನು ನಂಬದಿದ್ದರೆ, ನಾನು ಅದನ್ನು ಪುನರಾವರ್ತಿಸುತ್ತೇನೆ ಮುಂಬೈನಲ್ಲಿ ಮನೆ ಖರೀದಿಸಲು, ಭಾರತದ ಐದು ಪ್ರತಿಶತದಷ್ಟು ಶ್ರೀಮಂತ ಜನರು ಸಹ 109 ವರ್ಷಗಳವರೆಗೆ ತಮ್ಮ ಆದಾಯದ 30 ಪ್ರತಿಶತವನ್ನು ಉಳಿಸಬೇಕಾಗುತ್ತದೆ. ಎಂದು ಗಾಂಧಿ ಹೇಳಿದರು. ಇದು ಹೆಚ್ಚಿನ ದೊಡ್ಡ ನಗರಗಳ ಸ್ಥಿತಿ, ಅಲ್ಲಿ ನೀವು ಅವಕಾಶಗಳು, ಯಶಸ್ಸನ್ನು ಹುಡುಕುತ್ತಾ ಶ್ರಮಿಸುತ್ತೀರಿ. ಅಷ್ಟೊಂದು ಉಳಿತಾಯ ಎಲ್ಲಿಂದ ಬರುತ್ತದೆ ಅವರು ತಮ್ಮ ವಾಟ್ಸಾಪ್ ಚಾನೆಲ್‌ನಲ್ಲಿ ಹಿಂದಿಯಲ್ಲಿ ತಮ್ಮ ಪೋಸ್ಟ್‌ನಲ್ಲಿ ಹೇಳಿದರು. ಬಡವರು ಮತ್ತು ಮಧ್ಯಮ ವರ್ಗದವರ ಆನುವಂಶಿಕ ಆಸ್ತಿ ಸಂಪತ್ತು ಅಲ್ಲ, ಆದರೆ ಜವಾಬ್ದಾರಿಗಳು- ಮಕ್ಕಳ ದುಬಾರಿ ಶಿಕ್ಷಣ, ದುಬಾರಿ ಚಿಕಿತ್ಸೆಯ ಬಗ್ಗೆ ಚಿಂತೆ, ಪೋಷಕರ ಜವಾಬ್ದಾರಿ ಅಥವಾ ಕುಟುಂಬಕ್ಕೆ ಸಣ್ಣ ಕಾರು ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕರು ಹೇಳಿದರು. ಇನ್ನೂ, ಹೃದಯಗಳಲ್ಲಿ ಒಂದು ಕನಸು ಇದೆ ಒಂದು ದಿನ ನಮಗೆ ನಮ್ಮದೇ ಆದ ಮನೆ ಇರುತ್ತದೆ. ಆದರೆ ಆ ಒಂದು ದಿನ ಶ್ರೀಮಂತರಿಗೂ 109 ವರ್ಷಗಳ ದೂರದಲ್ಲಿರುವಾಗ, ಬಡವರು ತಮ್ಮ ಕನಸುಗಳ ಹಕ್ಕನ್ನು ಕಳೆದುಕೊಳ್ಳುತ್ತಿದ್ದಾರೆ ಎಂಬುದನ್ನು ಅರ್ಥಮಾಡಿಕೊಳ್ಳಿ ಎಂದು ಗಾಂಧಿ ಹೇಳಿದರು.

# ರಕ್ಷಣಾ ಸ್ವಾವಲಂಬನೆಗೆ ಒತ್ತು: ಪ್ರಧಾನಿ ಮೋದಿ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಸೌತ್ ಬ್ಲಾಕ್‌ನಲ್ಲಿ ನಡೆದ ಪ್ರಗತಿ ಸಭೆಯಲ್ಲಿ, ಗಣಿ, ರೈಲ್ವೆ ಮತ್ತು ಜಲಸಂಪನ್ಮೂಲ ವಲಯಗಳಲ್ಲಿನ ಪ್ರಮುಖ ಯೋಜನೆಗಳನ್ನು ಪರಿಶೀಲಿಸಿದರು. ಆರೋಗ್ಯ ಸಮಾನತೆಯ ಮೇಲೆ ಕೇಂದ್ರೀಕರಿಸುವ ಬಗ್ಗೆ ಹಾಗೂ ರಕ್ಷಣಾ ಸ್ವಾವಲಂಬನೆಯ ಕಾರ್ಯತಂತ್ರದ ಪಾತ್ರದ ಬಗ್ಗೆ ಅವರು ಇದೇ ಸಂದರ್ಭದಲ್ಲಿ ಮಾತನಾಡಿದರು. ವಾಸ್ತವವಾಗಿ, ಪ್ರಗತಿ ಬಹು-ಮಾದರಿ ವೇದಿಕೆಯಾಗಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪ್ರಯತ್ನಗಳನ್ನು ಸಂಯೋಜಿಸುವ ಮೂಲಕ ಪೂರ್ವಭಾವಿ ಆಡಳಿತ ಮತ್ತು ಸಕಾಲಿಕ ಅನುಷ್ಠಾನವನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ ಎಂದು ಅವರು ತಿಳಿಸಿದರು. ಸಭೆಯಲ್ಲಿ, ಗಣಿಗಾರಿಕೆ, ರೈಲ್ವೆ ಮತ್ತು ಜಲ ಸಂಪನ್ಮೂಲ ವಲಯಗಳಲ್ಲಿನ ಹಲವಾರು ಪ್ರಮುಖ ಮೂಲಸೌಕರ್ಯ ಯೋಜನೆಗಳನ್ನು ಪ್ರಧಾನಿ ಪರಿಶೀಲಿಸಿದರು. ಅವಕಾಶಗಳನ್ನು ಉತ್ತಮವಾಗಿ ಬಳಸಿಕೊಂಡು ಫಲಿತಾಂಶ-ಆಧಾರಿತ ವಿಧಾನವನ್ನು ಅಳವಡಿಸಿಕೊಂಡು ಕೆಲಸ ಮಾಡುವಂತೆ ಕೇಂದ್ರ ಮತ್ತು ರಾಜ್ಯ ಮಟ್ಟದ ಅಧಿಕಾರಿಗಳಿಗೆ ಕೇಳಿದರು. ಪ್ರಧಾನ ಮಂತ್ರಿ-ಆಯುಷ್ಮಾನ್ ಭಾರತ್ ಆರೋಗ್ಯ ಮೂಲಸೌಕರ್ಯ ಮಿಷನ್ ಅನ್ನು ಪರಿಶೀಲಿಸಿ, ಪ್ರಧಾನಿ ಮೋದಿ ಎಲ್ಲಾ ರಾಜ್ಯಗಳು ಆರೋಗ್ಯ ಮೂಲಸೌಕರ್ಯಗಳ ಅಭಿವೃದ್ಧಿಯನ್ನು ವೇಗಗೊಳಿಸಬೇಕೆಂದು ಒತ್ತಾಯಿಸಿದರು, ಗಡಿ ಪ್ರದೇಶಗಳು ಮತ್ತು



ದೂರದ, ಬುಡಕಟ್ಟು ಮತ್ತು ಗಡಿ ಪ್ರದೇಶಗಳ ಮೇಲೆ ವಿಶೇಷ ಗಮನ ಹರಿಸಬೇಕು. ಬಡವರು, ಅಂಚಿನಲ್ಲಿರುವ ಮತ್ತು ವಂಚಿತ ಜನಸಂಖ್ಯೆಗೆ ಗುಣಮಟ್ಟದ ಆರೋಗ್ಯ ಸೇವೆಗೆ ಸಮಾನ ಪ್ರವೇಶವನ್ನು ಖಚಿತಪಡಿಸಿಕೊಳ್ಳಬೇಕು ಎಂದು ಅವರು ಒತ್ತಿ ಹೇಳಿದರು. ಆರೋಗ್ಯ ಸೇವೆಗಳಲ್ಲಿ ಅಸ್ತಿತ್ವದಲ್ಲಿರುವ ಅಂತರವನ್ನು ನಿವಾರಿಸಲು ತಕ್ಷಣದ, ನಿರಂತರ ಪ್ರಯತ್ನಗಳನ್ನು ಮಾಡಬೇಕು ಎಂದು ಅವರು ಹೇಳಿದರು. ರಕ್ಷಣಾ ವಲಯದಲ್ಲಿ ಸ್ವಾವಲಂಬನೆಯನ್ನು ಉತ್ತೇಜಿಸಲು ವಿವಿಧ ಸಚಿವಾಲಯಗಳು, ಇಲಾಖೆಗಳು ಮತ್ತು ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳು ಮಾಡಿದ ಅನುಕರಣೀಯ ಕಾರ್ಯವನ್ನು ಪ್ರಧಾನಿಯವರು ಪರಿಶೀಲಿಸಿದರು.

> ಈ ಉಪಕ್ರಮಗಳ ಕಾರ್ಯತಂತ್ರದ ಮಹತ್ವ ಮತ್ತು ರಕ್ಷಣಾ ಪರಿಸರ ವ್ಯವಸ್ಥೆಯಲ್ಲಿ ನಾವೀನ್ಯತೆಯನ್ನು ಉತ್ತೇಜಿಸುವ ಅವುಗಳ ಸಾಮರ್ಥ್ಯವನ್ನು ಅವರು ಶ್ಲಾಘಿಸಿದರು. ಆಪರೇಷನ್ ಸಿಂಧೂರ್‌ನ ಯಶಸ್ಸನ್ನು ಉಲ್ಲೇಖಿಸಿದ ಪ್ರಧಾನಿ ಮೋದಿ, ರಕ್ಷಣಾ ವಲಯದಲ್ಲಿ ಭಾರತದ ಸ್ವಾವಲಂಬನೆಗೆ ಇದು ಪ್ರಬಲ ಪುರಾವೆಯಾಗಿದೆ
> 
> - ನರೇಂದ್ರ ಮೋದಿ, ಪ್ರಧಾನಿ

# ನದಿಗೆ ಬಿದ್ದ ಟೆಂಪೋ; ಇಬ್ಬರು ಸಾವು, 10 ಜನರು ನಾಪತ್ತೆ

**ರುದ್ರ ಪ್ರಯಾಗ:** ಯಾತ್ರಿಕರನ್ನು ಕರೆದೊಯ್ಯುತ್ತಿದ್ದ ಟೆಂಪೋ ಟ್ರಾವೆಲರ್ ವಾಹನ ಇಲ್ಲಿನ ಅಲಕನಂದಾ ನದಿಗೆ ಬಿದ್ದುಇಬ್ಬರು ಸಾವನ್ನಪ್ಪಿ, ಹತ್ತು ಜನರು ನಾಪತ್ತೆಯಾಗಿರುವ ಘಟನೆ ಇಂದು ಬೆಳಿಗ್ಗೆ ನಡೆದಿದೆ. ರುದ್ರಪ್ರಯಾಗ ಮತ್ತು ಗೌಚರ್ ನಡುವಿನ ಬದ್ರಿನಾಥ್ ರಾಷ್ಟ್ರೀಯ ಹೆದ್ದಾರಿಯಲ್ಲಿರುವ ಘೋಲ್ತಿರ್ ಗ್ರಾಮದ ಬಳಿ ಬೆಳಿಗ್ಗೆ 7.30 ರ ಸುಮಾರಿಗೆ ಅಪಘಾತ ಸಂಭವಿಸಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪರಿಹಾರ ಮತ್ತು ರಕ್ಷಣಾ ತಂಡಗಳು ಸ್ಥಳಕ್ಕೆ ತಲುಪಿ ಕಾರ್ಯಾಚರಣೆ ಕೈಗೊಂಡಿದೆ. ಅಪಘಾತ ಸ್ಥಳದ ಬಳಿ ಮತ್ತು ರುದ್ರಪ್ರಯಾಗ ಬಳಿಯ ನದಿಯಿಂದ ಎರಡು ಶವಗಳನ್ನು ಹೊರತೆಗೆಯಲಾಗಿದೆ ಎಂದು ರೆಡ್ ಕ್ರಾಸ್ ಸೊಸೈಟಿ ರಕ್ಷಣಾ ತಂಡದ ಸದಸ್ಯ ಸತ್ಯೇಂದ್ರ ಸಿಂಗ್ ಭಂಡಾರಿ ತಿಳಿಸಿದ್ದಾರೆ. ಅಪಘಾತದಲ್ಲಿ ಮೂವರು ಮಹಿಳೆಯರು, ಇಬ್ಬರು ಮಕ್ಕಳು ಸೇರಿದಂತೆ ಏಳು



ಜನರು ಗಾಯಗೊಂಡಿದ್ದಾರೆ, ಹತ್ತು ಜನರು ನಾಪತ್ತೆ ಆಗಿದ್ದಾರೆ ಎಂದು ಅವರು ಹೇಳಿದರು, ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಅವರು ಹೇಳಿದರು. ವಾಹನದಲ್ಲಿ ಚಾಲಕ ಸೇರಿದಂತೆ 20 ಜನರು ಇದ್ದರು ಮತ್ತು ಬದರಿನಾಥ ಧಾಮದ ಕಡೆಗೆ ಹೋಗುತ್ತಿದ್ದರು. ರಾಜಸ್ಥಾನದ ಉದಯಪುರದಿಂದ ಉತ್ತರಾಖಂಡದ ಚಾರ್ ಧಾಮ ಯಾತ್ರೆಗೆ ಯಾತ್ರಿಕರು ಬಂದಿದ್ದರು ಎಂದು ಗೊತ್ತಾಗಿದೆ ಎಂದು ಮಾಹಿತಿ ನೀಡಿದ್ದಾರೆ.

# ಸಂಸತ್‌ಗಿಂತ ಸಂವಿಧಾನವೇ ಸರ್ವೋಚ್ಚ: ಸಿಜೆಐ ಬಿ.ಆರ್. ಗವಾಯಿ



**ಅಮರಾವತಿ:** ಭಾರತದ ಸಂವಿಧಾನವು ಸರ್ವೋಚ್ಚವಾಗಿದ್ದು, ಪ್ರಜಾಪ್ರಭುತ್ವದ ಮೂರು ಅಂಗಗಳು ಅದರ ಅಡಿಯಲ್ಲಿ ಕಾರ್ಯನಿರ್ವಹಿಸುತ್ತವೆ ಎಂದು ಭಾರತದ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಹೇಳಿದ್ದಾರೆ. ಮೂಲ ರಚನೆ ಸಿದ್ಧಾಂತದ ಅಡಿಪಾಯದ ಕುರಿತು ಸುಪ್ರೀಂ ಕೋರ್ಟ್ ನೀಡಿದ ತೀರ್ಪನ್ನು ಉಲ್ಲೇಖಿಸಿ, ಸಂಸತ್ತಿಗೆ ತಿದ್ದುಪಡಿ ಮಾಡುವ ಅಧಿಕಾರವಿದೆ, ಆದರೆ ಅದು ಸಂವಿಧಾನದ ಮೂಲ ರಚನೆಯನ್ನು ಬದಲಾಯಿಸಲು ಸಾಧ್ಯವಿಲ್ಲ ಎಂದು ಅವರು ಹೇಳಿದರು. ಕಳೆದ ತಿಂಗಳು 52 ನೇ ಸಿಜೆಐ ಆಗಿ ಪ್ರಮಾಣ ವಚನ ಸ್ವೀಕರಿಸಿದ ನ್ಯಾಯಮೂರ್ತಿ ಗವಾಯಿ ಅವರು ತಮ್ಮ ತವರು ಮಹಾರಾಷ್ಟ್ರದ ಪೂರ್ವದ ಅಮರಾವತಿ ನಗರದಲ್ಲಿ ನಡೆದ ಸನ್ಮಾನ ಸಮಾರಂಭದಲ್ಲಿ ಮಾತನಾಡುತ್ತಿದ್ದರು. ಕೆಲವರು ಸಂಸತ್ತು ಸರ್ವೋಚ್ಚ ಎಂದು ಹೇಳಿದರೆ, ಅವರ ಅಭಿಪ್ರಾಯದಲ್ಲಿ ಸಂವಿಧಾನವು ಸರ್ವೋಚ್ಚವಾಗಿದೆ. ಪ್ರಜಾಪ್ರಭುತ್ವದ ಯಾವ ಅಂಗ ಕಾರ್ಯಾಂಗ, ಶಾಸಕಾಂಗ ಅಥವಾ ನ್ಯಾಯಾಂಗ ಸರ್ವೋಚ್ಚ ಎಂಬ ಬಗ್ಗೆ ಯಾವಾಗಲೂ ಚರ್ಚೆ ನಡೆಯುತ್ತದೆ ಎಂದು ಅವರು ಹೇಳಿದರು.

ನಮಗೆ ಒಂದು ಕರ್ತವ್ಯವಿದೆ ಮತ್ತು ನಾವು ನಾಗರಿಕರ ಹಕ್ಕುಗಳು ಮತ್ತು ಸಾಂವಿಧಾನಿಕ ಮೌಲ್ಯಗಳು ಮತ್ತು ತತ್ವಗಳ ರಕ್ಷಕರು ಎಂಬುದನ್ನು ನ್ಯಾಯಾಧೀಶರು ಯಾವಾಗಲೂ ನೆನಪಿನಲ್ಲಿಟ್ಟುಕೊಳ್ಳಬೇಕು. ನಮಗೆ ಕೇವಲ ಅಧಿಕಾರವಿಲ್ಲ, ಬದಲಾಗಿ ನಮ್ಮ ಮೇಲೆ ಕರ್ತವ್ಯವನ್ನು ಹೊರಿಸಲಾಗಿದೆ ಎಂದು ಅವರು ಹೇಳಿದರು. ಜನರು ತಮ್ಮ ತೀರ್ಪಿನ ಬಗ್ಗೆ ಏನು ಹೇಳುತ್ತಾರೆ ಅಥವಾ ಭಾವಿಸುತ್ತಾರೆ ಎಂಬುದರ ಮೇಲೆ ನ್ಯಾಯಾಧೀಶರು ಮಾರ್ಗದರ್ಶನ ಪಡೆಯಬಾರದು ಎಂದು ಸಿಜೆಐ ಹೇಳಿದರು.

> ಸಂಸತ್ತು ಸರ್ವೋಚ್ಚ ಎಂದು ಹಲವರು ಹೇಳುತ್ತಾರೆ, ನಂಬುತ್ತಾರೆ, ಆದರೆ ನನ್ನ ಪ್ರಕಾರ, ಭಾರತದ ಸಂವಿಧಾನವೇ ಸರ್ವೋಚ್ಚ. ಪ್ರಜಾಪ್ರಭುತ್ವದ ಮೂರು ಅಂಗಗಳು ಸಂವಿಧಾನದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತವೆ ಎಂದು ಅವರು ಹೇಳಿದರು. ಸರ್ಕಾರದ ವಿರುದ್ಧ ಆದೇಶಗಳನ್ನು ಹೊರಡಿಸುವುದರಿಂದ ನ್ಯಾಯಾಧೀಶರು ಸ್ವತಂತ್ರರಾಗುವುದಿಲ್ಲ
> 
> - ಬಿ.ಆರ್. ಗವಾಯಿ
> 
> ಮುಖ್ಯ ನ್ಯಾಯಮೂರ್ತಿ

# ಉಚ್ಚಾಟನೆ ಬೆನ್ನಲ್ಲೇ ಹೊಸ ಪಕ್ಷ ಸ್ಥಾಪಿಸುವ ಎಚ್ಚರಿಕೆ ನೀಡಿದ ಶಾಸಕ

**ಅಹಮದಾಬಾದ್:** ಗುಜರಾತ್ ಉಪಚುನಾವಣೆಯಲ್ಲಿ ಎಎಪಿಯ ಗೋಪಾಲ್ ಇಟಾಲಿಯಾ ಗೆಲುವು ಸಾಧಿಸಿದ ಕೆಲವು ದಿನಗಳ ನಂತರ, ಪಕ್ಷವು ಆಂತರಿಕ ಭಿನ್ನಾಭಿಪ್ರಾಯದಿಂದ ನಲುಗಿದೆ. ಇನ್ನು ಪಕ್ಷ ವಿರೋಧಿ ಚಟುವಟಿಕೆ ನಡೆಸಿದ ಆರೋಪದ ಹಿನ್ನೆಲೆಯಲ್ಲಿ ಬೊಟಾಡ್ ಶಾಸಕ ಉಮೇಶ್ ಮಕ್ವಾನಾ ಅವರನ್ನು ಇಂದು ಐದು ವರ್ಷಗಳ ಕಾಲ ಉಚ್ಚಾಟಿಸಲಾಯಿತು. ಮಕ್ವಾನಾ ಅವರು ಪಕ್ಷದ ಎಲ್ಲಾ ಹುದ್ದೆಗಳಿಗೆ ರಾಜೀನಾಮೆ ನೀಡಿ ಅರವಿಂದ್ ಕೇಜ್ರಿವಾಲ್ ಅವರಿಗೆ ಬರೆದ ಪತ್ರದಲ್ಲಿ ಪಕ್ಷದ ಸಮರ್ಪಿತ ಕಾರ್ಯಕರ್ತನಾಗಿ ಉಳಿಯುವುದಾಗಿ ಹೇಳಿದ ಕೆಲವೇ ಗಂಟೆಗಳ ನಂತರ ಈ ಕ್ರಮ ಕೈಗೊಳ್ಳಲಾಗಿದೆ. ಗುಜರಾತ್ ಎಎಪಿ ಮುಖ್ಯಸ್ಥ ಇಸುದನ್ ಗಧ್ವಿ ಅವರು ಉಚ್ಚಾಟನೆಯನ್ನು ಘೋಷಿಸಿದ್ದು, ಇದು ರಾಜ್ಯ ಘಟಕದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯನ್ನು ಪ್ರತಿಬಿಂಬಿಸುತ್ತದೆ. ತಮ್ಮ ವಿದಾಯ ಹೇಳಿಕೆಯಲ್ಲಿ ಮಕ್ವಾನಾ, ನಾಯಕತ್ವವನ್ನು ತರಾಟೆಗೆ ತೆಗೆದುಕೊಂಡರು. ಪ್ರಚಾರದ ಸಮಯದಲ್ಲಿ ತಮ್ಮನ್ನು ಕೈಬಿಡಲಾಗಿತ್ತು. ಅಲ್ಲದೆ ಕಾಡಿ ವಿಧಾನಸಭೆಯಲ್ಲಿ ದಲಿತ ಅಭ್ಯರ್ಥಿಯೊಬ್ಬರನ್ನು ಕ್ಷೇತ್ರದಲ್ಲಿ ಏಕಾಂಗಿಯಾಗಿಸಲಾಗಿತ್ತು ಎಂದು ಆರೋಪಿಸಿದರು. ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನರೊಂದಿಗೆ ಸಮಾಲೋಚಿಸಿದ ನಂತರವೇ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವ ಬಗ್ಗೆ ನಾನು ನಿರ್ಧರಿಸುತ್ತೇನೆ.

ಒಂದು ವೇಳೆ ನಾನು ರಾಜೀನಾಮೆ ನೀಡಿದರೆ, ಸ್ವತಂತ್ರವಾಗಿ ಸ್ಪರ್ಧಿಸಬೇಕೆ ಅಥವಾ ಹೊಸ ಪಕ್ಷವನ್ನು ಪ್ರಾರಂಭಿಸಬೇಕೆ ಎಂದು ಶೀಘ್ರದಲ್ಲೇ ನಿರ್ಧರಿಸುತ್ತೇನೆ ಎಂದು ಉಮೇಶ್ ಮಕ್ವಾನಾ ಹೇಳಿದರು. ಹಿಂದುಳಿದ ಸಮುದಾಯಗಳ ನಾಯಕರನ್ನು ಚುನಾವಣೆಗೆ ಮಾತ್ರ ಬಳಸಲಾಗುತ್ತಿದೆ. ಪ್ರತಿಯೊಂದು ಪಕ್ಷವು ತಮ್ಮ ನಿಜವಾದ ಸಮಸ್ಯೆಗಳನ್ನು ಎತ್ತುವಲ್ಲಿ ವಿಫಲವಾಗಿದೆ. ಎಲ್ಲಾ ಪಕ್ಷಗಳಲ್ಲಿ ಜಾತಿವಾದಿ ಮನಸ್ಥಿತಿಗಳು ಬೆಳೆಯುತ್ತಿವೆ. ಎಎಪಿಯ ರಾಷ್ಟ್ರೀಯ ರಚನೆಯಲ್ಲೂ ಕೆಲಸ ಮಾಡಿದ್ದ ಮಕ್ವಾನಾ ಅವರು, ಎಎಪಿಯ ರಾಷ್ಟ್ರೀಯ ಜಂಟಿ ಕಾರ್ಯದರ್ಶಿ ಹುದ್ದೆಯಿಂದ ಕೆಳಗಿಳಿದಿದ್ದೇನೆ. ಆದರೆ ತಳಮಟ್ಟದ ಕಾರ್ಯಕರ್ತನಾಗಿ ಮುಂದುವರಿಯುತ್ತೇನೆ ಎಂದು ಹೇಳಿದರು. ಉಮೇಶ್ ಮಕ್ವಾನಾ ಅವರು ಆಮ್ ಆದ್ಮಿ ಪಕ್ಷದಲ್ಲಿ ಕೋಲಿ ನಾಯಕರಾಗಿ ಹೊರಹೊಮ್ಮುತ್ತಿದ್ದರು. ಇದರಿಂದಾಗಿ ಪಕ್ಷವು ಕೋಲಿ ಸಮುದಾಯ ಸೇರಿದಂತೆ ಒಬಿಸಿ ಸಮುದಾಯದ ಮತದಾರರನ್ನು ಆಕರ್ಷಿಸಲು 2022ರ ಲೋಕಸಭಾ ಚುನಾವಣೆಯಲ್ಲಿ ಭಾವನಗರ ಸ್ಥಾನದಿಂದ ಉಮೇಶ್ ಮಕ್ವಾನಾ ಅವರಿಗೆ ಟಿಕೆಟ್ ನೀಡಿತು. ಇದರಲ್ಲಿ, ಬಿಜೆಪಿಯ ನಿಮುಬೆನ್ ಬಂಭಾನಿಯಾ ಅವರು ಉಮೇಶ್ ಮಕ್ವಾನಾ ಅವರನ್ನು 4,55,289 ಮತಗಳಿಂದ ಸೋಲಿಸಿದರು.

# ರಕ್ಷಣಾ ಸಚಿವರ ಶೃಂಗಸಭೆಯಲ್ಲಿ ಭಾರತದ ದಿಟ್ಟ ನಿರ್ಧಾರ

## ಪಹಲ್ಗಾಮ್ ಭಯೋತ್ಪಾದಕ ದಾಳಿ ಉಲ್ಲೇಖವಿರದ ದಾಖಲೆಗೆ ಸಹಿ ಹಾಕಲು ನಿರಾಕರಣೆ

**ಬೀಜಿಂಗ್:** ಶಾಂಘೈ ಸಹಕಾರ ಸಂಘಟನೆ (ಎಸ್‌ಸಿಒ)ಯ ರಕ್ಷಣಾ ಸಚಿವರ ಶೃಂಗಸಭೆಯಲ್ಲಿ, ಭಾರತ ಕೈಗೊಂಡ ದಿಟ್ಟ ನಿರ್ಧಾರವೊಂದು ಚೀನಾದ ನಿದ್ದೆಗೆಡಿಸಿದೆ. ಎಸ್‌ಸಿಒ ಶೃಂಗಸಭೆಯ ಜಂಟಿ ಹೇಳಿಕೆ ದಾಖಲೆಯಲ್ಲಿ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಉಲ್ಲೇಖ ಇರದಿರುವುದನ್ನು ಪ್ರತಿಭಟಿಸಿದ ಭಾರತದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ದಾಖಲೆಗೆ ಸಹಿ ಹಾಕಲು ಸ್ಪಷ್ಟವಾಗಿ ನಿರಾಕರಿಸಿದ್ದಾರೆ.

ಹೌದು, ಚೀನಾದ ಕಿಂಗ್ಡಾವೊದಲ್ಲಿ ನಡೆಯುತ್ತಿರುವ ಎಸ್‌ಸಿಒ ರಕ್ಷಣಾ ಸಚಿವರ ಶೃಂಗಸಭೆಯಲ್ಲಿ, ಜಂಟಿ ಹೇಳಿಕೆಯ ದಾಖಲೆಯೊಂದನ್ನು ಬಿಡುಗಡೆ ಮಾಡಲಾಗಿತ್ತು. ಈ ದಾಖಲೆಯಲ್ಲಿ ಪಾಕಿಸ್ತಾನದ ಬಲೂಚಿಸ್ತಾನ್ ಪ್ರಾಂತ್ಯದಲ್ಲಿ ಇತ್ತೀಚಿಗೆ ನಡೆದಿದ್ದ ಭಯೋತ್ಪಾದಕ ದಾಳಿಯ ಬಗ್ಗೆ ಉಲ್ಲೇಖ ಮಾಡಲಾಗಿತ್ತು. ಆದರೆ ಭಾರತದ ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದಿದ್ದ ಭಯೋತ್ಪಾದಕ ದಾಳಿಯ ಬಗ್ಗೆ ಈ ದಾಖಲೆಯಲ್ಲಿ ಯಾವುದೇ ಉಲ್ಲೇಖವಿರಲಿಲ್ಲ.

ಈ ದ್ವಿಮುಖ ನೀತಿಯನ್ನು ಬಹಿರಂಗವಾಗಿ ಖಂಡಿಸಿದ ಭಾರತದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಜಂಟಿ ಹೇಳಿಕೆಯ ದಾಖಲೆಗೆ ಸಹಿ ಹಾಕದಿರುವ ನಿರ್ಣಯ ಕೈಗೊಂಡರು. ರಾಜನಾಥ್ ಸಿಂಗ್ ಅವರ ಈ ನಿರ್ಧಾರದಿಂದ ಚೀನಾ ವಿಚಲಿತವಾದಂತೆ ಕಂಡುಬಂದಿತು. ಜಂಟಿ ಹೇಳಿಕೆಯು ಭಯೋತ್ಪಾದನೆಯ ಬಗ್ಗೆ ಭಾರತದ ಬಲವಾದ ನಿಲುವನ್ನು ಪ್ರತಿಬಿಂಬಿಸದ ಕಾರಣ, ದಾಖಲೆಗೆ ಸಹಿ ಹಾಕುವುದಿಲ್ಲ ಎಂದು ರಾಜನಾಥ್ ಸಿಂಗ್ ಎಸ್‌ಸಿಒ ರಕ್ಷಣಾ ಸಚಿವರ ಶೃಂಗಸಭೆಗೆ ತಿಳಿಸಿದರು. ಬಲೂಚಿಸ್ತಾನ್ ದಾಳಿಯ ಕುರಿತು ಉಲ್ಲೇಖಿಸುವ ಮೂಲಕ, ಜಂಟಿ ಹೇಳಿಕೆಯು ಆ ಪ್ರದೇಶದಲ್ಲಿ ಭಾರತ ಅಶಾಂತಿ ಸೃಷ್ಟಿಸುತ್ತಿದೆ ಎಂದು ಮೌನವಾಗಿ ಆರೋಪಿಸುವ



ಪ್ರಯತ್ನ ಮಾಡಿತ್ತು. ಅಲ್ಲದೇ ಪಾಕಿಸ್ತಾನದ ಆದೇಶದ ಮೇರೆಗೆ ಪಹಲ್ಗಾಮ್ ದಾಳಿಯ ಕುರಿತ ಉಲ್ಲೇಖವನ್ನು ದಾಖಲೆಯಿಂದ ಹೊರಗಿಡಲಾಗಿದೆ ಎಂಬುದು ಸ್ಪಷ್ಟವಾಗಿದೆ.

### ಸದಸ್ಯ ರಾಷ್ಟ್ರಗಳು ಒಂದಾಗಬೇಕು

ಬಲೂಚಿಸ್ತಾನದಲ್ಲಿ ನಡೆಯುವ ಪಾಕ್ ವಿರೋಧಿ ಕೃತ್ಯಗಳಲ್ಲಿ, ತನ್ನ ಪಾಲ್ಗೊಳ್ಳುವಿಕೆಯ ಕುರಿತು ಪಾಕಿಸ್ತಾನದ ಆರೋಪಗಳನ್ನು ಭಾರತ ಸ್ಪಷ್ಟವಾಗಿ ತಳ್ಳಿಹಾಕಿದೆ. ಶೃಂಗಸಭೆಯನ್ನುದ್ದೇಶಿಸಿ ಮಾತನಾಡಿದ ರಕ್ಷಣಾ ಸಚಿವರು, ಸಾಮೂಹಿಕ ಸುರಕ್ಷತೆ, ಭದ್ರತೆಗಾಗಿ ಭಯೋತ್ಪಾದನೆಯನ್ನು ತೊಡೆದುಹಾಕಲು SCO ಸದಸ್ಯ ರಾಷ್ಟ್ರಗಳು ಒಂದಾಗಬೇಕು ಎಂದು ಕರೆ ನೀಡಿದ್ದಾರೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್, ಜಂಟಿ ಹೇಳಿಕೆಗೆ ಸಹಿ ಹಾಕಲು ನಿರಾಕರಿಸಿರುವುದು, ಭಯೋತ್ಪಾದನೆಯ ವಿರುದ್ಧ ಭಾರತದ ಕಠಿಣ ನಿಲುವನ್ನು ಪ್ರತಿಬಿಂಬಿಸುತ್ತದೆ. ಅಲ್ಲದೇ ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ನಂತರದ ಜಾಗತಿಕ ಸಂದೇಶಕ್ಕೆ ಅನುಗುಣವಾಗಿದೆ.

> ಮಹತ್ವದ ಬೆಳವಣಿಗೆಯೊಂದರಲ್ಲಿ ಚೀನಾ ಕಿಂಗ್ಡಾವೊದಲ್ಲಿ ನಡೆಯುತ್ತಿರುವ ಶಾಂಘೈ ಸಹಕಾರ ಸಂಘಟನೆ ಶೃಂಗಸಭೆಯಲ್ಲಿ, ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಗ್ಗೆ ಯಾವುದೇ ಉಲ್ಲೇಖವಿರದ ದಾಖಲೆಗೆ ಸಹಿ ಮಾಡಲು, ಭಾರತದ ರಕ್ಷಣಾ ಸಚಿವ ರಾಜನಾಥ್ ಸಿಂಗ್ ನಿರಾಕರಿಸಿದ್ದಾರೆ. ಈ ದಾಖಲೆಯಲ್ಲಿ ಇತ್ತೀಚಿಗೆ ಬಲೂಚಿಸ್ತಾನದಲ್ಲಿ ನಡೆದ ಭಯೋತ್ಪಾದಕ ದಾಳಿಯ ಉಲ್ಲೇಖವಿತ್ತಾದರೂ, ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಗ್ಗೆ ಯಾವುದೇ ಉಲ್ಲೇಖವಿರಲಿಲ್ಲ. ಹೀಗಾಗಿ ಈ ದಾಖಲೆಗೆ ಸಹಿ ಮಾಡುವುದಿಲ್ಲ
> 
> - ರಾಜನಾಥ್ ಸಿಂಗ್

ಪಾಕಿಸ್ತಾನದ ಸಾರ್ವಕಾಲಿಕ ಮಿತ್ರ ಚೀನಾ, ಎಸ್‌ಸಿಒ ರಕ್ಷಣಾ ಸಚಿವರ ಶೃಂಗಸಭೆಯ ಅಧ್ಯಕ್ಷತೆ ವಹಿಸಿದೆ. ಈ ಅವಕಾಶವನ್ನು ಬಳಸಿಕೊಂಡು, ಪಾಕಿಸ್ತಾನ ಜಂಟಿ ಹೇಳಿಕೆಯ ದಾಖಲೆಯಲ್ಲಿ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಗ್ಗೆ ಉಲ್ಲೇಖವಿರದಂತೆ ನೋಡಿಕೊಂಡಿದೆ. ಆದರೆ ಈ ದಾಖಲೆಗೆ ಭಾರತ ಸಹಿ ಹಾಕಲು ನಿರಾಕರಿಸಿರುವುದರಿಂದ, ಚೀನಾ, ಪಾಕಿಸ್ತಾನಕ್ಕೆ ಭಾರೀ ಮುಖಭಂಗವಾಗಿದೆ.

ಭಯೋತ್ಪಾದನೆಯ ಬಗ್ಗೆ ಭಾರತದ ನಿಲುವು ಮತ್ತು ಅದನ್ನು ಭಾರತ ಎದುರಿಸುತ್ತಿರುವ ರೀತಿಯನ್ನು ಜಗತ್ತಿಗೆ ತಿಳಿಸಲು, ಇತ್ತೀಚಿಗೆ ಕೇಂದ್ರ ಸರ್ಕಾರ ಸರ್ವಪಕ್ಷ ಸಂಸದೀಯ ನಿಯೋಗವನ್ನು ವಿವಿಧ ದೇಶಗಳಿಗೆ ಕಳುಹಿಸಿದ್ದನ್ನು ಇಲ್ಲಿ ಸ್ಮರಿಸಬಹುದು.

# ಮಿನಿ ನ್ಯೂಸ್

## ಪ್ರವಾಹಕ್ಕೆ ಆರು ಮಂದಿ ಬಲಿ

**ಬೀಜಿಂಗ್:** ಗುರುವಾರ ನೈಋತ್ಯ ಚೀನಾದ ಗುಯಿಝೌ ಪ್ರಾಂತ್ಯದಲ್ಲಿ ಉಂಟಾದ ತೀವ್ರ ಪ್ರವಾಹದಿಂದಾಗಿ ಆರು ಜನರು ಸಾವನ್ನಪ್ಪಿದ್ದಾರೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ. ನಿರಂತರ ಭಾರೀ ಮಳೆ ಮತ್ತು ಮೇಲ್ಮುಖ ಒಳಹರಿವು ಗುಯಿಝೌನ ರೊಂಗ್ಜಿಯಾಂಗ್ ಮತ್ತು ಕಾಂಗ್ಜಿಯಾಂಗ್ ಕೌಂಟಿಗಳಲ್ಲಿ ತೀವ್ರ ಪ್ರವಾಹಕ್ಕೆ ಕಾರಣವಾಗಿದ್ದು, ಸಾಮೂಹಿಕ ಸ್ಥಳಾಂತರಿಸುವಿಕೆಗೆ ಕಾರಣವಾಗಿದೆ. ಪ್ರವಾಹ ಪೀಡಿತ ಕೌಂಟಿಗಳಿಂದ 80,000 ಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಲಾಗಿದೆ. ಪ್ರವಾಹ ನಿಯಂತ್ರಣ ತುರ್ತು ಪ್ರತಿಕ್ರಿಯೆಯನ್ನು ಎರಡೂ ಕೌಂಟಿಗಳಲ್ಲಿ ಅತ್ಯಧಿಕ ಮಟ್ಟಕ್ಕೆ ಹೆಚ್ಚಿಸಲಾಗಿದೆ.

100ಕ್ಕೂ ಹೆಚ್ಚು ಹಳ್ಳಿ ತಂಡಗಳನ್ನು ಒಳಗೊಂಡ ಮತ್ತು ದೇಶಾದ್ಯಂತ ಹಲವಾರು ಅಭಿಮಾನಿಗಳನ್ನು ಆಕರ್ಷಿಸುವ ಗ್ರಾಮೀಣ ಫುಟ್ಬಾಲ್ ಲೀಗ್ ಆಗಿರುವ ಕುನ್ ಚಾವೊಗೆ ಹೆಸರುವಾಸಿಯಾದ ಕೌಂಟಿಯಾದ ರೊಂಗ್ಜಿಯಾಂಗ್ ಕಳೆದ ಹಲವು ದಿನಗಳಿಂದ ಭಾರೀ ಮಳೆಯಾಗಿದೆ. ಪ್ರಾಂತೀಯ ತುರ್ತು ವಿಭಾಗವು 30,000 ಬಾಟಲಿ ಕುಡಿಯುವ ನೀರು ಮತ್ತು 10,000 ಬೌಲ್ ಇನ್ಸ್ಟಂಟ್ ನೂಡಲ್ಸ್ ಸೇರಿದಂತೆ ವಿಪತ್ತು ಪರಿಹಾರ ವಸ್ತುಗಳನ್ನು ಹೈಸ್ಪೀಡ್ ರೈಲು ಮತ್ತು ರಸ್ತೆ ಸಾರಿಗೆ ಮೂಲಕ ಎರಡು ಕೌಂಟಿಗಳಿಗೆ ಹಂಚಿಕೆ ಮಾಡಿದೆ. ಅಲ್ಲದೆ, ಗುಯಿಝೌನಲ್ಲಿ, ಮಳೆಯಿಂದ ಉಂಟಾದ ಭೂಕುಸಿತದಿಂದಾಗಿ ಸ್ಯಾಂಡು ಕೌಂಟಿಯಲ್ಲಿ ಎಕ್ಸ್‌ಪ್ರೆಸ್‌ವೇಯಲ್ಲಿ ಸೇತುವೆಯ ಒಂದು ಭಾಗ ಕುಸಿದಿದೆ.

## ಬಂದೂಕುಧಾರಿಯಿಂದ ಮನಬಂದಂತೆ ಗುಂಡಿನ ದಾಳಿ, 12 ಮಂದಿ ಸಾವು

**ಮೆಕ್ಸಿಕೊ:** ಬಂಧೂಕು ದಾರಿಯೊಬ್ಬ ಮನಬಂದಂತೆ ಗುಂಡಿನ ದಾಳಿ ನಡೆಸಿದ ಪರಿಣಾಮ 12 ಮಂದಿ ಸಾವನ್ನಪ್ಪಿರುವ ದುರಂತ ಮೆಕ್ಸಿಕನ್ ರಾಜ್ಯದ ಗುವಾನಾಜುವಾಟೊದನಲ್ಲಿ ನಡೆದಿದೆ. ಧಾರ್ಮಿಕ ಆಚರಣೆ ಅಂಗವಾಗಿ ಸ್ಯಾನ್ ಬಾರ್ಟೊಲೊ ಬೆರಿಯೊಸ್‌ನಲ್ಲಿ ಕ್ಯಾಥೋಲಿಕ್ ಚರ್ಚ್‌ನಲ್ಲಿ ಪಾರ್ಟಿ ಆಯೋಜಿಸಲಾಗಿತ್ತು. ಈ ವೇಳೆ ನೂರಾರು ಜನರು ರಸ್ತೆಯಲ್ಲಿ ಮದ್ಯ ಸೇವಿಸುತ್ತಾ ನೃತ್ಯ ಮಾಡುತ್ತಿದ್ದರು.

ಬಂಧೂಕು ದಾರಿಯೊಬ್ಬ ಗುಂಡಿನ ದಾಳಿ ನಡೆಸಿದ ಪರಿಣಾಮ ಅಲ್ಲಿದ್ದ ಜನರು ದಿಕ್ಕಾಪಾಲಾಗಿ ಹೋಡಿದ್ದಾರೆ. ಹಲವರಿಗೆ ಗುಂಡು ತಾಗಿ ಕುಸಿದು ಬಿದ್ದಿದ್ದಾರೆ, 12 ಮಂದಿ ಮೃತಪಟ್ಟಿದ್ದಾರೆ ಎಂದು ಇರಾಪುವಾಟೊನ ಪೊಲೀಸ್ ಅಧಿಕಾರಿ ರೊನಾಲ್ಡ್ ಗೋಮೇಜ್ ಸೆರ್ವಾಂಟೆಸ್ ತಿಳಿಸಿದ್ದಾರೆ. ಘಟನೆಯಲ್ಲಿ 20 ಮಂದಿ ಗಾಯಗೊಂಡಿದ್ದು, ಅವರಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಮೆಕ್ಸಿಕೊ ಅಧ್ಯಕ್ಷಕೌಡಿಯಾ ಅವರು ದಾಳಿಯ ಬಗ್ಗೆ ವಿಷಾದ ವ್ಯಕ್ತಪಡಿಸಿದ್ದಾರೆ. ಪೊಲೀಸರು ತನಿಖೆ ನಡೆಸುತ್ತಿದ್ದು, ಹಂತಕನ ಪತ್ತೆ ಕಾರ್ಯಾಚರಣೆ ನಡೆಯುತ್ತಿದೆ ಎಂದು ಹೇಳಿದ್ದಾರೆ. ಕಳೆದ 6 ತಿಂಗಳಲ್ಲಿ ಇಂತಹ ನರಮೇಧ ನಡೆಯುತ್ತಲೇ ಇದೆ. ಸುಮಾರು ಒಂದು ಸಾವಿರಕ್ಕೂ ಹೆಚ್ಚು ಜನ ಬಲಿಯಾಗಿದ್ದಾರೆ. ಆರ್ಥಿಕ ಹೊಡೆತ, ಹರಾಜುಕತೆಯಿಂದ ಮೆಕ್ಸಿಕೊದಲ್ಲಿ ವ್ಯಾಪಕ ಹಿಂಸಾಚಾರಗಳು ಕೂಡ ನಡೆಯುತ್ತಿವೆ. ಸಾವಿರಾರು ಜನರು ಈಗಾಗಲೇ ನೆರೆಯ ಅಮೇರಿಕಾ, ಯುರೋಪ್‌ನ ಹಲವು ರಾಷ್ಟ್ರಗಳಿಗೆ ವಲಸೆ ಹೋಗಿದ್ದಾರೆ.

## ಇಬ್ಬರು ಮಹಿಳಾ ನಕ್ಸಲರು ಹತ್ಯೆ

**ನಾರಾಯಣಪುರ:** ಛತ್ತೀಸ್‌ಗಢದ ನಾರಾಯಣಪುರ ಜಿಲ್ಲೆಯಲ್ಲಿ ಭದ್ರತಾ ಸಿಬ್ಬಂದಿಯೊಂದಿಗೆ ನಡೆದ ಎನ್‌ಕೌಂಟರ್‌ನಲ್ಲಿ ಇಬ್ಬರು ಮಹಿಳಾ ನಕ್ಸಲರು ಸಾವನ್ನಪ್ಪಿದ್ದಾರೆ. ಅಭುಜ್‌ಮಾದ್ ಪ್ರದೇಶದ ಕೊಲ್ಕಿಮೇಟ ಪೊಲೀಸ್ ಠಾಣೆ ವ್ಯಾಪ್ತಿಯ ಅರಣ್ಯದಲ್ಲಿ ಕಳೆದ ರಾತ್ರಿ ಜಿಲ್ಲಾ ಮೀಸಲು ಪಡೆ (ಡಿಆರ್‌ಜಿ), ವಿಶೇಷ ಕಾರ್ಯಪಡೆ (ಎಸ್‌ಟಿಎಫ್) ಜಂಟಿ ತಂಡ ನಕ್ಸಲ್ ವಿರೋಧಿ ಕಾರ್ಯಾಚರಣೆಗೆ ಹೊರಟಿದ್ದಾಗ ಗುಂಡಿನ ಚಕಮಕಿ ನಡೆದಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮಾವೋವಾದಿಗಳ ಮಾಡ್ ವಿಭಾಗದಲ್ಲಿ ಹಿರಿಯ ಕೇಡರ್‌ಗಳ ಉಪಸ್ಥಿತಿಯ ಬಗ್ಗೆ ಮಾಹಿತಿಯ ಆಧಾರದ ಮೇಲೆ ನಾರಾಯಣಪುರ ಮತ್ತು ಕೊಂಡಗಾಂವ್ ಜಿಲ್ಲೆಗಳಲ್ಲಿ ಕಾರ್ಯಾಚರಣೆ ನಡೆದಿದೆ. ಇಲ್ಲಿಯವರೆಗೆ, ಇಬ್ಬರು ಮಹಿಳಾ ನಕ್ಸಲರ ಶವಗಳು, 2 ರೈಫಲ್ ಸ್ಥಳದಿಂದ ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿ ಹೇಳಿದರು. ಕಾರ್ಯಾಚರಣೆ ಇನ್ನೂ ನಡೆಯುತ್ತಿದೆ ಎಂದರು.

## ಬಾಹ್ಯಾಕಾಶ ನಿಲ್ದಾಣ ತಲುಪಿದ ಶುಭಾಂಶು ಶುಕ್ಲಾ ಮತ್ತು ತಂಡ

**ನ್ಯೂಯಾರ್ಕ್:** ಅಮೆರಿಕಾದಿಂದ ಉಡಾವಣೆಯಾಗಿದ್ದ Axiom4 Mission ಯಶಸ್ವಿಯಾಗಿ ಬಾಹ್ಯಾಕಾಶ ನಿಲ್ದಾಣ ತಲುಪಿದ್ದು, ಡಾಕಿಂಗ್ ಪ್ರಕ್ರಿಯೆ ಪೂರ್ಣಗೊಂಡಿದೆ. ಇಸ್ರೋ ಗಗನಯಾತ್ರಿ ಶುಭಾಂಶು ಶುಕ್ಲಾ Axiom4 Mission ಪೈಲಟ್ ಆಗಿ ಕರ್ತವ್ಯ ನಿರ್ವಹಿಸಿದ್ದಾರೆ. ಸುಮಾರು 41 ವರ್ಷದ ನಂತರ ಬಾಹ್ಯಾಕಾಶ ತಲುಪಿದ ಎರಡನೇ ಭಾರತೀಯ ಎಂಬ ಹೆಗ್ಗಳಿಕೆಗೆ ಪಾತ್ರರಾಗುವ ಮೂಲಕ ಶುಭಾಂಶು ಶುಕ್ಲಾ ಐತಿಹಾಸಿಕ ಸಾಧನೆ ಮಾಡಿದ್ದಾರೆ.

ಗಗನಯಾತ್ರಿಗಳು ಬಾಹ್ಯಾಕಾಶ ನೌಕೆ ನಿಲ್ದಾಣದಲ್ಲಿ ಸುಮಾರು 14 ದಿನಗಳನ್ನು ಕಳೆಯಲಿದ್ದಾರೆ. Axiom4 ಮಿಷನ್‌ನ ಭಾಗವಾಗಿ ಫ್ಲೋರಿಡಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಇವರನ್ನು ಹೊತ್ತ ಸ್ಪೇಸ್ ಎಕ್ಸ್‌ನ ಫಾಲ್ಕನ್ -9 ರಾಕೆಟ್, ಭಾರತೀಯ ಕಾಲಮಾನ ಮಧ್ಯಾಹ್ನ 12.01ಕ್ಕೆ ನಭಕ್ಕೆ ಚಿಮ್ಮಿತ್ತು. ಗಗನಯಾತ್ರಿಗಳು 60ಕ್ಕೂ ಅಧಿಕ ಪ್ರಯೋಗಗಳನ್ನು ಕೈಗೊಳ್ಳಲಿದ್ದಾರೆ. ಈ ಪೈಕಿ ಶುಭಾಂಶು ಶುಕ್ಲಾ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ಪರ 7 ಅಧ್ಯಯನ ನಡೆಸಲಿದ್ದಾರೆ. ಇವು ಭವಿಷ್ಯದಲ್ಲಿ ಭಾರತದ ಅಂತರಿಕ್ಷಯಾನಕ್ಕೆ ನೆರವಾಗಲಿವೆ.


## ಕೊನೆಗೂ ಜೈಶ್ ಉಗ್ರನನ್ನು ಹತ್ಯೆಗೈದ ಭಾರತೀಯ ಸೇನೆ

**ಶ್ರೀನಗರ:** ಉಧಂಪುರ ಜಿಲ್ಲೆಯ ಬಸಂತ್‌ಗಢ ಪ್ರದೇಶದಲ್ಲಿ ಭಯೋತ್ಪಾದಕರು ಮತ್ತು ಭದ್ರತಾ ಪಡೆಗಳ ನಡುವೆ ಎನ್‌ಕೌಂಟರ್ ನಡೆಯುತ್ತಿದೆ. ಭದ್ರತಾ ಪಡೆಗಳು ದೊಡ್ಡ ಯಶಸ್ಸನ್ನು ಸಾಧಿಸಿವೆ. ಸೇನೆಯು ಒಬ್ಬ ಭಯೋತ್ಪಾದಕನನ್ನು ಕೊಂದಿದ್ದು, ಮೂವರನ್ನು ಸುತ್ತುವರೆದಿದ್ದಾರೆ ಎಂದು ವರದಿಯಾಗಿದೆ. ಎರಡೂ ಕಡೆಯಿಂದ ಗುಂಡಿನ ದಾಳಿ ನಡೆಯುತ್ತಿದೆ. ಎನ್‌ಕೌಂಟರ್‌ನಲ್ಲಿ ಹತನಾದ ಭಯೋತ್ಪಾದಕ ಜೈಶ್-ಎ-ಮೊಹಮ್ಮದ್‌ಗೆ ಸೇರಿದವನು. ಬಸಂತ್ ಗಢದ ಬಿಹಾಲಿ ಪ್ರದೇಶದಲ್ಲಿ ಭಯೋತ್ಪಾದಕರು ಕಾಣಿಸಿಕೊಂಡಿದ್ದಾರೆ ಎಂಬ ಮಾಹಿತಿಯ ಮೇರೆಗೆ, ಭದ್ರತಾ ಪಡೆಗಳು ಇಡೀ ಪ್ರದೇಶವನ್ನು ಸುತ್ತುವರೆದು ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದವು. ತಮ್ಮನ್ನು ಸುತ್ತುವರೆದಿರುವುದನ್ನು ನೋಡಿದ ಭಯೋತ್ಪಾದಕರು ಭದ್ರತಾ ಪಡೆಗಳ ಮೇಲೆ ಗುಂಡು ಹಾರಿಸಲು ಪ್ರಾರಂಭಿಸಿದರು. ಈ ಉಗ್ರನಿಗಾಗಿ ಭದ್ರತಾ ಪಡೆಗಳು ಒಂದು ವರ್ಷದಿಂದ ಹುಡುಕಾಟ ನಡೆಸುತ್ತಿತ್ತು ಎಂದು ತಿಳಿದುಬಂದಿದೆ.

# ಮಹಾವತಾರ ಸಿನಿಮಾಟಿಕ್ ಯೂನಿವರ್ಸ್ ಅನಾವರಣ

## ವಿಷ್ಣುವಿನ ಪವಿತ್ರ ಅವತಾರ

ಹೊಂಬಾಳೆ ಫಿಲ್ಮ್ಸ್ ಪ್ರಸ್ತುತಪಡಿಸುತ್ತಿರುವ ಮತ್ತು ಕ್ಲೀಮ್ ಪ್ರೊಡಕ್ಷನ್ಸ್ ನಿರ್ಮಿಸುತ್ತಿರುವ ಮಹತ್ವಾಕಾಂಕ್ಷೆಯ ಅನಿಮೇಟೆಡ್ ಫ್ರಾಂಚೈಸಿ 'ಮಹಾವತಾರ ಸಿನಿಮಾಟಿಕ್ ಯೂನಿವರ್ಸ್‌ನ ಪಟ್ಟಿಯನ್ನು ಅಧಿಕೃತವಾಗಿ ಅನಾವರಣಗೊಳಿಸಲಾಗಿದೆ. ಒಂದು ದಶಕಕ್ಕೂ ಹೆಚ್ಚು ಕಾಲ ವಿಸ್ತರಿಸಲಿರುವ ಈ ಸರಣಿಯು ಭಗವಾನ್ ವಿಷ್ಣುವಿನ ಹತ್ತು ದೈವಿಕ ಅವತಾರಗಳನ್ನು ಒಳಗೊಂಡಿದ್ದು, 2025 ರಲ್ಲಿ ಮಹಾವತಾರ ನರಸಿಂಹದಿಂದ ಪ್ರಾರಂಭವಾಗಿ 2037 ರಲ್ಲಿ ಮಹಾವತಾರ ಕಲ್ಕಿ ಭಾಗ 2 ರೊಂದಿಗೆ ಕೊನೆಗೊಳ್ಳಲಿದೆ. ನಿರ್ದೇಶಕ ಅಶ್ವಿನ್ ಕುಮಾರ್ ಅವರು, ನಾವು ಕ್ಲೀಮ್ ಪ್ರೊಡಕ್ಷನ್ಸ್‌ನಲ್ಲಿ, ಹೊಂಬಾಳೆ ಫಿಲ್ಮ್ಸ್‌ನೊಂದಿಗೆ ಸೇರಿ, ಭಾರತದ ಪರಂಪರೆಯನ್ನು ಹಿಂದೆಂದೂ ನೋಡಿರದ ಸಿನಿಮಾಟಿಕ್ ಪ್ರಮಾಣದಲ್ಲಿ ದೊಡ್ಡ ಪರದೆಗೆ ತರಲು ಉತ್ಸುಕರಾಗಿದ್ದೇವೆ. ದಶಾವತಾರದ ಮಹಾವತಾರ ಯೂನಿವರ್ಸ್ ಮೂಲಕ ಅಲೌಕಿಕ ಅನುಭವ ಪ್ರಾರಂಭವಾಗುತ್ತದೆ. ಈಗ ಭಾರತ ಘರ್ಜಿಸಲಿದೆ ಎಂದು ಹೇಳಿದ್ದಾರೆ. ನಿರ್ಮಾಪಕಿ ಶಿಲ್ಪಾ ಧವನ್ ಉತ್ಸಾಹ ವ್ಯಕ್ತಪಡಿಸಿ,



ಸಾಧ್ಯತೆಗಳು ಅಪರಿಮಿತವಾಗಿವೆ ಮತ್ತು ನಮ್ಮ ಕಥೆಗಳು ಪರದೆಯ ಮೇಲೆ ಘರ್ಜಿಸುವ ರೀತಿಯನ್ನು ನೋಡಲು ನಾನು ಕುತೂಹಲದಿಂದ ಕಾಯುತ್ತಿದ್ದೇನೆ. ಒಂದು ಮಹಾಕಾವ್ಯದ ಸಿನಿಮಾ ಸವಾರಿಗೆ ಸಿದ್ಧರಾಗಿ ಎಂದಿದ್ದಾರೆ.

ಹೊಂಬಾಳೆ ಫಿಲಮ್ಸ್‌ನಲ್ಲಿ, ನಾವು ಸಮಯ ಮತ್ತು ಗಡಿಗಳನ್ನು ಮೀರಿದ ಕಥೆ ಹೇಳುವಿಕೆಯನ್ನು ನಂಬುತ್ತೇವೆ. ಮಹಾವತಾರ ಮೂಲಕ, ವಿಷ್ಣುವಿನ ಪವಿತ್ರ ಅವತಾರಗಳನ್ನು ಉಸಿರುಬಿಗಿದುಕೊಳ್ಳುವ ಅನಿಮೇಷನ್ ಮೂಲಕ ಜೀವಂತಗೊಳಿಸುವ ಒಂದು ಸಿನಿಮಾಟಿಕ್ ಯೂನಿವರ್ಸ್ ಅನ್ನು ಪ್ರಸ್ತುತಪಡಿಸಲು ನಾವು ಹೆಮ್ಮೆಪಡುತ್ತೇವೆ.



# ಕಬಿನಿ ಡ್ಯಾಂಗೆ ಶಿವಣ್ಣ ದಂಪತಿ ಭೇಟಿ



## 125 ಸಿನಿಮಾಗಳನ್ನು ಪೂರೈಸಿದ ನಟ

ಮೈಸೂರಿನ ಹೆಚ್.ಡಿ.ಕೋಟೆಯ ಬೀಚನಹಳ್ಳಿಯಲ್ಲಿನ ಕಬಿನಿ ಡ್ಯಾಂಗೆ ನಟ ಶಿವರಾಜ್ ಕುಮಾರ್ ತಮ್ಮ ಪತ್ನಿ ಸಮೇತ ಭೇಟಿ ನೀಡಿದ್ದರು.

ಕಬಿನಿ ಡ್ಯಾಂನಲ್ಲಿ ಶಿವಣ್ಣ ಜೊತೆ ಫೋಟೊಗೆ ಅಭಿಮಾನಿಗಳು ಮುಗಿಬಿದ್ದರು. ರಸ್ತೆಯಲ್ಲಿ ಹೋಗುವಾಗ ಹಾಡಿ ಮಕ್ಕಳನ್ನ ಕಂಡು ಮಕ್ಕಳ ಜೊತೆ ಶಿವಣ್ಣ ದಂಪತಿ ಫೋಟೊ ತೆಗೆಸಿಕೊಂಡರು. 1986ರಲ್ಲಿ 'ಆನಂದ್' ಸಿನಿಮಾ ಮೂಲಕ ಸ್ಯಾಂಡಲ್‌ವುಡ್‌ಗೆ ಶಿವಣ್ಣ ಎಂಟ್ರಿ ಕೊಟ್ಟರು. ಸಿನಿ ಜರ್ನಿಯಲ್ಲಿ 40 ವರ್ಷ ಪೂರೈಸಿದ್ದಾರೆ. ಕನ್ನಡದ ಜನಮಾನಸದಲ್ಲಿ ಹ್ಯಾಟ್ರಿಕ್ ಹೀರೋ, ಸೆಂಚುರಿ ಸ್ಟಾರ್ ಆಗಿ ಉಳಿದಿದ್ದಾರೆ. ಶಿವರಾಜ್ ಕುಮಾರ್ ಸದ್ಯ 125 ಸಿನಿಮಾಗಳನ್ನು ಪೂರೈಸಿದ್ದಾರೆ. ಸದ್ಯ ಅವರ ಕೈಯಲ್ಲಿ ಐದಕ್ಕೂ ಹೆಚ್ಚು ಪ್ರಾಜೆಕ್ಟ್‌ಗಳಿವೆ. ಕೆಲ ದಿನಗಳ ಹಿಂದಷ್ಟೇ ಸಿನಿಪಯಣದಲ್ಲಿ 40 ವರ್ಷದ ಪೂರೈಸಿದ ಸಂಭ್ರಮವನ್ನು ಶಿವಣ್ಣ ಮಿಂದೆದ್ದರು.

ಸಿನಿ ವಾಹಿನಿ

# ವೀರ ವನಿತೆಯಾದ ರಶ್ಮಿಕಾ ಮಂದಣ್ಣ



## ಗೆಸ್ ಮಾಡಿದ್ರೆ ನಿಮಗೆ ಸಿಗುತ್ತೆ ಸರ್ಪ್ರೈಸ್

ಸಿನಿಮಾ ಲೋಕದಲ್ಲಿ ರಶ್ಮಿಕಾ ಮಂದಣ್ಣ ಹವಾ ಮುಂದುವರೆದಿದೆ. ಇದೀಗ ಅವರ ಮತ್ತೊಂದು ಚಿತ್ರ ಘೋಷಣೆಯಾಗಿದ್ದು ಶೀರ್ಷಿಕೆಯನ್ನು ಗೆಸ್ ಮಾಡುವಂತೆ ತಲೆಗೆ ಹುಳ ಬಿಟ್ಟಿದ್ದಾರೆ.


ಗ್ಲಾಮರಸ್ ಜೊತೆ ಪರ್ಫಾಮೆನ್ಸ್ ಬೇಸ್ಡ್ ಸಿನಿಮಾ ಮಾಡ್ತಾ ಭಾರತೀಯ ಚಿತ್ರರಂಗದಲ್ಲಿ ಹೆಸರು ಮಾಡಿರುವ ರಶ್ಮಿಕಾ ಮಂದಣ್ಣ ಸಿನಿಮಾ ಪಟ್ಟಿಗೆ ಈಗ ಮತ್ತೊಂದು ಸಿನಿಮಾ ಸೇರ್ಪಡೆಯಾಗಿದ್ದು ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಾಕಿದ್ದಾರೆ. ಇದು ಯಾವ ಪ್ರಾಜೆಕ್ಟ್ ಎಂಬುದು ಊಹೆಗೂ ನಿಲುಕದಂತಾಗಿದ್ದು ರಶ್ಮಿಕಾ ಇಲ್ಲಿ ಕಚ್ಚೆ ಸೀರೆಯುಟ್ಟು ಭರ್ಜಿ ಹಿಡಿದು ಹೋರಾಟಕ್ಕೆ ಇಳಿದ ವೀರ ವನಿತೆಯಂತೆ ಕಾಣುತ್ತಾರೆ.

ಬೆಂಕಿ, ಸೈನಿಕರು ಕಾಡು ರಾತ್ರಿ ಎಲ್ಲವನ್ನೂ ನೋಡುತ್ತಿದ್ದರೆ ಇದು ಐತಿಹಾಸಿಕ ಚಿತ್ರದ ಕಥೆಯಾ ಎಂಬ ಅನುಮಾನವೂ ಬರುತ್ತದೆ. ಯಾವ ಸಿನಿಮಾ ಅಂತ ಊಹಿಸಿ. ಯಾರಾದರೂ ಒಬ್ಬರು ಗೆಸ್ ಮಾಡಿದರೆ ನಾನು ನಿಮ್ಮನ್ನು ಭೇಟಿಯಾಗುತ್ತೇನೆ ಎಂದು ಪ್ರಮಾಣ ಮಾಡುವುದಾಗಿ ಹೇಳಿದ್ದಾರೆ. ಸಿನಿಮಾದ ಶೀರ್ಷಿಕೆ ಹಾಗೂ ಇನ್ನಿತರ ಮಾಹಿತಿ ಜೂನ್ 27ರ ಬೆಳಗ್ಗೆ ರಿವೀಲ್ ಆಗುತ್ತೆ. ಆದರೆ ಅದಕ್ಕೂ ಮುನ್ನ ಊಹಿಸಿದವರಿಗೆ ರಶ್ಮಿಕಾ ಭೇಟಿಮಾಡುವ ಚಾನ್ಸ್ ಕೊಟ್ಟಿದ್ದಾರೆ. ಮೂಲಗಳ ಪ್ರಕಾರ ಇದು ರಶ್ಮಿಕಾ ಅಭಿನಯಿಸುತ್ತಿರುವ ಮಹಿಳಾ ಪ್ರಧಾನ ಕಥೆಯ ಚಿತ್ರವಾಗಿದ್ದು ಹೊಸ ತಂಡದ ಜೊತೆ ಕೈಜೋಡಿಸಿದ್ದಾರೆ ಎನ್ನಲಾಗುತ್ತಿದೆ. ಐತಿಹಾಸಿಕ ಕಥೆಯಾ ಅಥವಾ ಕಾಲ್ಪನಿಕ ಕಥೆಯ ಚಿತ್ರವಾ ಎಂಬೆಲ್ಲಾ ಕುತೂಹಲಕ್ಕೆ ಇದೇ 27 ರಂದು ಉತ್ತರ ಸಿಗಲಿದೆ.

# ಸ್ಮೋಕರ್ ಶಿವ ಚಿತ್ರಕ್ಕೆ ನೆನಪಿರಲಿ ಪ್ರೇಮ್ ಸಾಥ್

ಸಿಗರೇಟ್ ಸೇದುವ ಚಟದಿಂದ ಏನೇನೆಲ್ಲ ಅನಾಹುತಗಳಾಗಬಹುದು ಎಂಬುವುದನ್ನು ಇಟ್ಟುಕೊಂಡು ಕಥಾಹಂದರ ಹೆಣೆಯಲಾಗಿರುವ ಚಿತ್ರ ಸ್ಮೋಕರ್ ಶಿವ. ಶಾರದಾ ಫಿಲಂಸ್ ಅಡಿ ನಿರ್ಮಾಣವಾಗುತ್ತಿರುವ ಈ ಚಿತ್ರಕ್ಕೆ ಎಂ.ಶಿವ ಅವರು ಕಥೆ, ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳುತ್ತಿದ್ದಾರೆ.

ಇತ್ತೀಚೆಗೆ ಸ್ಮೋಕರ್ ಶಿವ ಚಿತ್ರದ ಮುಹೂರ್ತ ಸಮಾರಂಭ ನಡೆಯಿತು. ಈ ಹಿಂದೆ ಧ್ರುವ ಸರ್ಜಾ ಅವರು ಪೋಸ್ಟರ್ ರಿಲೀಸ್ ಮಾಡಿದ್ದರೆ, ಈಗ ನೆನಪಿರಲಿ ಪ್ರೇಮ್ ಅವರು ಮುಹೂರ್ತದಲ್ಲಿ ಕ್ಲ್ಯಾಪ್ ಮಾಡಿ ಶುಭ ಹಾರೈಸಿದರು. ಬಿಗ್ ಬಜೆಟ್‌ನಲ್ಲಿ ತಯಾರಾಗುತ್ತಿರುವ ಅದ್ದೂರಿ ಚಲನಚಿತ್ರ ಇದಾಗಿದೆ. ಅಭಯ್ ಹರಿ ಅವರು ಸ್ಮೋಕರ್ ಶಿವ ಚಿತ್ರದ ನಾಯಕನಾಗಿ ಕಾಣಿಸಿಕೊಂಡಿದ್ದಾರೆ. ಮುಂಬೈನಲ್ಲಿ ಆಕ್ಟಿಂಗ್ ಪಾಠ ಕಲಿತು, ಸುಮಾರು ವರ್ಷಗಳಿಂದ ಕಿರುತೆರೆ, ಸಿನಿಮಾಗಳಲ್ಲಿ ಸಣ್ಣಪುಟ್ಟ ಪಾತ್ರಗಳನ್ನು ಮಾಡಿಕೊಂಡು ಬಂದಿದ್ದ ಅಭಯ್ ಹರಿ ಅವರು ಇದೇ ಮೊದಲ ಬಾರಿಗೆ ನಾಯಕನಾಗಿ ಚಿತ್ರರಂಗಕ್ಕೆ ಕಾಲಿಟ್ಟಿದ್ದಾರೆ. ಉದಯಲೀಲಾ ಚಿತ್ರದ ಛಾಯಾಗ್ರಾಹಕರು. ಚಿತ್ರದಲ್ಲಿ ಮೂರು ಹಾಡುಗಳಿದ್ದು, ಇನ್ನೂ ಸಂಗೀತ ನಿರ್ದೇಶಕರು ಫೈನಲ್ ಆಗಿಲ್ಲ. ನಾಯಕ ಶಿವ ಒಂಥರಾ ಚೈನ್ ಸ್ಮೋಕರ್. ಅಂತವನ ಬಾಳಲ್ಲಿ ಒಂದು ಸಿಗರೇಟ್ ಏನೆಲ್ಲ ಆಟವಾಡಿತು, ಆತನನ್ನು ಎಂಥ ಕಷ್ಟಕ್ಕೆ ದೂಡಿತು ಎಂಬುದನ್ನು ನಿರ್ದೇಶಕ ಶಿವ ಅವರು ಈ ಚಿತ್ರದ ಮೂಲಕ ಹೇಳಿದ್ದಾರೆ. ಚಿತ್ರದಲ್ಲಿ ವಿಲನ್ ಪಾತ್ರವೂ ಹೀರೋಗೆ ಸಮನಾಗಿ ಬರುತ್ತದೆ.



## ಅಭಯ್ ಹರಿ ಸ್ಮೋಕರ್ ಶಿವ ನಾಯಕ

# ಟಾಲಿವುಡ್‌ನಲ್ಲಿ ಕಿಸ್ಸಿಕ್ ಬೆಡಗಿಗೆ ಕೈತಪ್ಪಿತು ಮತ್ತೊಂದು ಅವಕಾಶ

ಟಾಲಿವುಡ್‌ನ ಕಲಾವಿದರ ಕುಟುಂಬದಿಂದ ಬಂದ ನಟ ಅಖಿಲ್ ಅಕ್ಕಿನೇನಿ ಸಿನಿಮಾ ರಂಗದಲ್ಲಿ ಮಾತ್ರ ಹೇಳಿಕೊಳ್ಳುವ ಮಟ್ಟಿಗೆ ಸಕ್ಸಸ್ ಕಾಣುತ್ತಿಲ್ಲ. ಅಣ್ಣ ನಾಗಚೈತನ್ಯ ಕ್ಲಿಕ್ ಆಗಿದ್ದಾರೆ. ಆದರೆ ಅಖಿಲ್‌ಗೆ ಬ್ರೇಕ್ ಕೊಡುವ ಸಿನಿಮಾಗಳು ಸಿಗುತ್ತಿಲ್ಲ. 2023ರಲ್ಲಿ ತೆರೆಕಂಡ ಎಜೆಂಟ್ ಸಿನಿಮಾ ಭಾರೀ ಸೋಲು ಕಂಡಿತ್ತು. ಬಳಿಕ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದರು ಅಖಿಲ್.

2023ರಲ್ಲಿ ತೆರೆಕಂಡ ಎಜೆಂಟ್ ಸಿನಿಮಾ ಅಖಿಲ್ ಕೆರಿಯರ್‌ಗೆ ಭಾರೀ ಆಘಾತ ತಂದೊಡ್ಡಿತ್ತು. ಬಳಿಕ ಇದೇ ವರ್ಷ ಜೂನ್ 6ರಂದು ಮುಂಬೈ ಮೂಲದ ನಟಿ ಝೈನಬ್ ರಾವ್ಡ್ಜೀ ಜೊತೆ ಹಸೆಮಣೆ ಏರಿದ್ದರು. ವೈವಾಹಕ ಜೀವನಕ್ಕೆ ಕಾಲಿಟ್ಟ ಬಳಿಕ ಲೆನಿನ್ ಸಿನಿಮಾದ ಕೆಲಸಗಳಲ್ಲಿ ತೊಡಗಿಕೊಳ್ಳಲು ಪ್ಲ್ಯಾನ್ ನಡೆಸಿದ್ದಾರೆ. ಈ ಸಿನಿಮಾದ ನಾಯಕಿಯಾಗಿ ಮೊದಲಿಗೆ ನಟಿ ಶ್ರೀಲೀಲಾ ಅವರನ್ನು ಆಯ್ಕೆ ಮಾಡಲಾಗಿತ್ತು ಚಿತ್ರತಂಡ. ಇದೀಗ ಈ ಸಿನಿಮಾದಿಂದ ಶ್ರೀಲೀಲಾಗೆ ಗೇಟ್‌ಪಾಸ್ ಕೊಡಲಾಗಿದೆಯಂತೆ. ಶ್ರೀಲೀಲಾ ಜಾಗಕ್ಕೆ ನಟಿ ಭಾಗ್ಯ ಶ್ರೀ ಬೋರ್ಸೆ ಅವರನ್ನು ಆಯ್ಕೆ ಮಾಡಲಾಗಿದೆ. ಈ ಮೊದಲು ಭಾಗ್ಯ ಶ್ರೀ ಯಾರಿಯಾನ್-2, ಚಂದು ಚಾಂಪಿಯನ್ ಚಿತ್ರದಲ್ಲಿ ನಟಿಸಿದ್ದಾರೆ. ಭಾಗ್ಯ ಶ್ರೀ ಬೋರ್ಸೆ ಸದ್ಯ ವಿಜಯ್ ದೇವರಕೊಂಡ ಅವರ ಕಿಂಗ್‌ಡಮ್ ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಇದೀಗ ಮತ್ತೆ ಟಾಲಿವುಡ್‌ನಲ್ಲಿ ಮತ್ತೊಂದು ಅವಕಾಶ ಗಿಟ್ಟಿಸಿಕೊಂಡಿದ್ದಾರೆ. ಈ ಮೂಲಕ ಕಿಸ್ಸಿಕ್ ಬೆಡಗಿಗೆ ಮತ್ತೊಂದು ಅವಕಾಶ ಕೈತಪ್ಪಿದೆ.


# ಪಂತ್ ಸೆಂಚುರಿ ಸಿಡಿಸಿದರೆ ಟೀಮ್ ಇಂಡಿಯಾಗೆ ಸೋಲು ಕಟ್ಟಿಟ್ಟ ಬುತ್ತಿ..!

ಲೀಡ್ಸ್‌ನ ಹೆಡಿಂಗ್ಲೆ ಮೈದಾನದಲ್ಲಿ ನಡೆದ ಇಂಗ್ಲೆಂಡ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ ರಿಷಭ್ ಪಂತ್ ಭರ್ಜರಿ ಪ್ರದರ್ಶನ ನೀಡಿದ್ದರು. ಈ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ 134 ರನ್ ಬಾರಿಸಿದ್ದ ರಿಷಬ್ ಪಂತ್, ನಂತರ ದ್ವಿತೀಯ ಇನಿಂಗ್ಸ್‌ನಲ್ಲಿ 118 ರನ್ ಕಲೆಹಾಕಿದ್ದರು.

ಈ ಮೂಲಕ ಟೆಸ್ಟ್ ಕ್ರಿಕೆಟ್‌ನಲ್ಲಿ ಬ್ಯಾಕ್ ಟು ಬ್ಯಾಕ್ ಶತಕ ಸಿಡಿಸಿದ ವಿಶ್ವದ 2ನೇ ವಿಕೆಟ್ ಕೀಪರ್ ಎಂಬ ವಿಶ್ವದಾಖಲೆ ನಿರ್ಮಿಸಿದ್ದರು. ಟೀಮ್ ಇಂಡಿಯಾ ವಿಕೆಟ್ ಕೀಪರ್ ಬ್ಯಾಟರ್ ರಿಷಭ್ ಪಂತ್ ವಿದೇಶದಲ್ಲಿ ಸೆಂಚುರಿ ಸಿಡಿಸಿದರೆ ಭಾರತಕ್ಕೆ ಸೋಲು ಕಟ್ಟಿಟ್ಟ ಬುತ್ತಿ..! ಇಂತಹದೊಂದು ವಿತಂಡ ವಾದ ಮುನ್ನಲೆಗೆ ಬರಲು ಮುಖ್ಯ ಕಾರಣ ಪಂತ್ ಶತಕ ಬಾರಿಸಿದಾಗ ಭಾರತ ತಂಡ ಈವರೆಗೆ ಗೆಲ್ಲದಿರುವುದು. ಅಂದರೆ ರಿಷಭ್ ಪಂತ್ ವಿದೇಶದಲ್ಲಿ ಟೆಸ್ಟ್ ಸೆಂಚುರಿ ಸಿಡಿಸಿದಾಗ ಟೀಮ್ ಇಂಡಿಯಾ ಒಮ್ಮೆಯೂ ಗೆದ್ದಿಲ್ಲ. ಪಂತ್ ಬ್ಯಾಟ್‌ನಿಂದ ಮೊದಲ ವಿದೇಶಿ ಟೆಸ್ಟ್ ಶತಕ ಮೂಡಿಬಂದಿದ್ದು 2018 ರಲ್ಲಿ. ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆದ ಇಂಗ್ಲೆಂಡ್ ವಿರುದ್ಧದ ಈ ಪಂದ್ಯದಲ್ಲಿ ಪಂತ್ 114 ರನ್ ಬಾರಿಸಿದರೂ ಭಾರತ ತಂಡ ಪಂದ್ಯ ಗೆದ್ದಿರಲಿಲ್ಲ. ಇದಾದ ಬಳಿಕ 2019 ರಲ್ಲಿ ಆಸ್ಟ್ರೇಲಿಯಾ ವಿರುದ್ಧ ಸಿಡ್ನಿಯಲ್ಲಿ ಅಜೇಯ 159 ರನ್ ಬಾರಿಸಿದ್ದರು. ಈ ಪಂದ್ಯವು ಡ್ರಾನಲ್ಲಿ ಅಂತ್ಯಗೊಂಡಿತ್ತು. ಇನ್ನು 2022 ರಲ್ಲಿ ಸೌತ್ ಆಫ್ರಿಕಾ ವಿರುದ್ಧ ನ್ಯೂಲಾಂಡ್ಸ್ ಮೈದಾನದಲ್ಲಿ ರಿಷಭ್ ಪಂತ್ ಅಜೇಯ ಶತಕ ಸಿಡಿಸಿದ್ದರು. ಈ ಮ್ಯಾಚ್‌ನಲ್ಲೂ ಟೀಮ್ ಇಂಡಿಯಾ ಸೋಲನುಭವಿಸಿತ್ತು. ಇನ್ನು 2022 ರಲ್ಲಿ ಎಡ್ಜ್‌ಬಾಸ್ಟನ್‌ನಲ್ಲಿ ನಡೆದ ಇಂಗ್ಲೆಂಡ್ ವಿರುದ್ಧ ಪಂತ್ 146 ರನ್‌ಗಳ ಇನಿಂಗ್ಸ್ ಆಡಿದ್ದರು. ಈ ವೇಳೆಯೂ ಭಾರತ ತಂಡಕ್ಕೆ ಗೆಲುವು ದಕ್ಕಿರಲಿಲ್ಲ. ಇದೀಗ ಇಂಗ್ಲೆಂಡ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ ರಿಷಭ್ ಪಂತ್ ಬ್ಯಾಕ್ ಟು ಬ್ಯಾಕ್ ಶತಕ ಸಿಡಿಸಿದ್ದಾರೆ. ಹೆಡಿಂಗ್ಲೆ ಮೈದಾನದಲ್ಲಿ ನಡೆದ ಈ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ 134 ರನ್ ಬಾರಿಸಿದ್ದ ಪಂತ್, ದ್ವಿತೀಯ ಇನಿಂಗ್ಸ್‌ನಲ್ಲಿ 118 ರನ್ ಕಲೆಹಾಕಿದ್ದರು. ಹೀಗೆ ಎರಡು ಶತಕಗಳನ್ನು ಬಾರಿಸಿದರೂ ಈ ಪಂದ್ಯದಲ್ಲಿ ಟೀಮ್ ಇಂಡಿಯಾ ವಿಜಯ ಸಾಧಿಸಿಲ್ಲ. ಅಂದರೆ ವಿದೇಶದಲ್ಲಿ ರಿಷಭ್ ಪಂತ್ ಬಾರಿಸಿದ 6 ಟೆಸ್ಟ್ ಶತಕಗಳಲ್ಲಿ 5 ವ್ಯರ್ಥವಾಗಿದೆ. ಏಕೆಂದರೆ ಆ ಐದು ಮ್ಯಾಚ್‌ಗಳಲ್ಲಿ ಟೀಮ್ ಇಂಡಿಯಾ ಸೋಲನುಭವಿಸಿದೆ. ಇನ್ನು ಪಂತ್ ಬಾರಿಸಿದ ಒಂದು ಶತಕದ ನೆರವಿನೊಂದಿಗೆ ಭಾರತ ತಂಡವು ಪಂದ್ಯವೊಂದನ್ನು ಡ್ರಾ ಮಾಡಿಕೊಂಡಿದೆ. ಅಂದರೆ ಇಲ್ಲಿ ರಿಷಭ್ ಪಂತ್ ವಿದೇಶದಲ್ಲಿ ಟೆಸ್ಟ್ ಸೆಂಚುರಿ ಸಿಡಿಸಿದಾಗ ಟೀಮ್ ಇಂಡಿಯಾ ಒಮ್ಮೆಯೂ ಗೆಲುವು ದಾಖಲಿಸಿಲ್ಲ. ಹೀಗಾಗಿಯೇ ಪಂತ್ ಸೆಂಚುರಿ ಸಿಡಿಸಿದರೆ ಭಾರತಕ್ಕೆ ಸೋಲು ಕಟ್ಟಿಟ್ಟ ಬುತ್ತಿ ಎಂಬ ವಾದವನ್ನು ಮುಂದಿಡಲಾಗುತ್ತಿದೆ.

## ಟೆಸ್ಟ್‌ನಲ್ಲಿ ಅತ್ಯಧಿಕ ಶತಕ ವ್ಯರ್ಥ

ಇನ್ನು ಟೆಸ್ಟ್‌ನಲ್ಲಿ ಅತ್ಯಧಿಕ ಶತಕ ವ್ಯರ್ಥವಾಗಿದ್ದು ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್ ಅವರದ್ದು. ಟೀಮ್ ಇಂಡಿಯಾ ಸೋತ 56 ಪಂದ್ಯಗಳಲ್ಲಿ ಸಚಿನ್ 11 ಶತಕಗಳನ್ನು ಬಾರಿಸಿದ್ದರು. ಈ ಪಟ್ಟಿಯಲ್ಲಿ ದ್ವಿತೀಯ ಸ್ಥಾನದಲ್ಲಿರುವುದು ವಿರಾಟ್ ಕೊಹ್ಲಿ. ಟೀಮ್ ಇಂಡಿಯಾ ಸೋತಿರುವ 39 ಮ್ಯಾಚ್‌ಗಳಲ್ಲಿ ಕೊಹ್ಲಿ 7 ಸೆಂಚುರಿ ಸಿಡಿಸಿದ್ದರು. ಇದೀಗ ಭಾರತ ತಂಡ ಸೋತ 18 ಟೆಸ್ಟ್ ಪಂದ್ಯಗಳಲ್ಲಿ ರಿಷಭ್ ಪಂತ್ 5 ಸೆಂಚುರಿ ಸಿಡಿಸಿ ಈ ಪಟ್ಟಿಯಲ್ಲಿ ನಾಲ್ಕನೇ ಸ್ಥಾನಕ್ಕೇರಿದ್ದಾರೆ.



# 4 ವರ್ಷಗಳ ಬಳಿಕ ಕಣಕ್ಕಿಳಿದ ಜೋಫ್ರಾ ಆರ್ಚರ್

ಭಾರತ ಮತ್ತು ಇಂಗ್ಲೆಂಡ್ ನಡುವಣ 5 ಪಂದ್ಯಗಳ ಟೆಸ್ಟ್ ಸರಣಿಯ ಮೊದಲ ಮ್ಯಾಚ್‌ನಲ್ಲಿ ಟೀಮ್ ಇಂಡಿಯಾ 5 ವಿಕೆಟ್‌ಗಳ ಸೋಲನುಭವಿಸಿದೆ. ಇನ್ನು ಉಭಯ ತಂಡಗಳ ನಡುವಣ ಎರಡನೇ ಪಂದ್ಯವು ಜುಲೈ 2 ರಿಂದ ಶುರುವಾಗಲಿದ್ದು, ಈ ಪಂದ್ಯಕ್ಕೆ ಎಡ್ಜ್ ಬಾಸ್ಟನ್ ಸ್ಟೇಡಿಯಂ ಆತಿಥ್ಯವಹಿಸಲಿದೆ.


ಇಂಗ್ಲೆಂಡ್ ತಂಡದ ಪ್ರಮುಖ ವೇಗಿ ಜೋಫ್ರಾ ಆರ್ಚರ್ ಫಸ್ಟ್ ಕ್ಲಾಸ್ ಕ್ರಿಕೆಟ್‌ಗೆ ಮತ್ತೆ ಮರಳಿದ್ದಾರೆ. ಅದು ಕೂಡ ಬರೋಬ್ಬರಿ 4 ವರ್ಷಗಳ ಬಳಿಕ. ಫಿಟ್‌ನೆಸ್ ಸಮಸ್ಯೆಯ ಕಾರಣ ವರ್ಷಗಳ ಕಾಲ ಇಂಗ್ಲೆಂಡ್ ತಂಡದಿಂದ ಹೊರಗುಳಿದಿದ್ದ ಆರ್ಚರ್ ಇತ್ತೀಚೆಗಷ್ಟೇ ಸೀಮಿತ ಓವರ್‌ಗಳ ಸರಣಿಗಳಲ್ಲಿ ಕಾಣಿಸಿಕೊಂಡಿದ್ದರು. ಇದಾಗ್ಯೂ ಅವರು ದೀರ್ಘಾವಧಿಯ ಕ್ರಿಕೆಟ್‌ನಿಂದ ದೂರ ಉಳಿದಿದ್ದರು. ಇದೀಗ ವರ್ಷಗಳ ಬಳಿಕ ಆರ್ಚರ್ ರೆಡ್ ಬಾಲ್ ಕ್ರಿಕೆಟ್‌ಗೆ ಮರಳಿದ್ದಾರೆ.

ಇಂಗ್ಲೆಂಡ್‌ನಲ್ಲಿ ನಡೆಯುತ್ತಿರುವ ಕೌಂಟಿ ಚಾಂಪಿಯನ್‌ಶಿಪ್ ಟೆಸ್ಟ್ ಟೂರ್ನಿಯಲ್ಲಿ ಜೋಫ್ರಾ ಆರ್ಚರ್ ಸಸೆಕ್ಸ್ ತಂಡದ ಪರ ಕಣಕ್ಕಿಳಿದಿದ್ದಾರೆ. ಚೆಸ್ಟರ್-ಲೆ-ಸ್ಟ್ರೀಟ್‌ನ ರಿವರ್ ಸೈಡ್ ಮೈದಾನದಲ್ಲಿ ನಡೆದ ಡರ್ಹ್ಯಾಮ್ ವಿರುದ್ಧದ ಪಂದ್ಯದಲ್ಲಿ ಕಣಕ್ಕಿಳಿದ ಆರ್ಚರ್ ಮೊದಲ ಇನಿಂಗ್ಸ್‌ನಲ್ಲಿ 18 ಓವರ್‌ಗಳನ್ನು ಬೌಲಿಂಗ್ ಮಾಡಿದ್ದಾರೆ. ಈ ವೇಳೆ ಕೇವಲ 32 ರನ್ ನೀಡಿ ಒಂದು ವಿಕೆಟ್ ಪಡೆದಿದ್ದಾರೆ. ಈ ಮೂಲಕ ಜೋಫ್ರಾ ಆರ್ಚರ್ ತಮ್ಮ ಫಿಟ್‌ನೆಸ್ ಅನ್ನು ಸಾಬೀತುಪಡಿಸಿದ್ದಾರೆ.

## ಟೀಮ್ ಇಂಡಿಯಾಗೆ ಎಚ್ಚರಿಕೆ

ಇತ್ತ ಕೌಂಟಿ ಕ್ರಿಕೆಟ್‌ನಲ್ಲಿ ಆರ್ಚರ್ 18 ಓವರ್‌ಗಳನ್ನು ಎಸೆಯಲು ಯಶಸ್ವಿಯಾಗಿರುವ ಕಾರಣ ಅವರನ್ನು ಭಾರತದ ವಿರುದ್ಧದ ಸರಣಿಗೆ ಆಯ್ಕೆ ಮಾಡುವ ಸಾಧ್ಯತೆಯನ್ನು ತಳ್ಳಿ ಹಾಕುವಂತಿಲ್ಲ. ಏಕೆಂದರೆ ಇಂಗ್ಲೆಂಡ್ ಟೆಸ್ಟ್ ತಂಡಕ್ಕೆ ಮರಳುವ ಸಲುವಾಗಿಯೇ ಆರ್ಚರ್ ಮತ್ತೆ ರೆಡ್ ಬಾಲ್ ಕ್ರಿಕೆಟ್‌ನಲ್ಲಿ ಕಣಕ್ಕಿಳಿದಿದ್ದಾರೆ.

ಅದರಲ್ಲೂ ಭಾರತ ಮತ್ತು ಇಂಗ್ಲೆಂಡ್ ನಡುವೆ 5 ಪಂದ್ಯಗಳ ಟೆಸ್ಟ್ ಸರಣಿ ನಡೆಯುತ್ತಿದೆ. ಈ ಸರಣಿಯ ಮೊದಲ ಪಂದ್ಯ ಮುಗಿದರೂ ಇನ್ನೂ 4 ಮ್ಯಾಚ್‌ಗಳು ಬಾಕಿಯಿವೆ. ಹೀಗಾಗಿ ಈ ಸರಣಿಯ ಮೂಲಕವೇ ಕಂಬ್ಯಾಕ್ ಮಾಡಲು ಜೋಫ್ರಾ ಆರ್ಚರ್ ಪ್ಲ್ಯಾನ್ ರೂಪಿಸಿದ್ದಾರೆ. ಅದರಂತೆ ಭಾರತದ ವಿರುದ್ಧದ ಎರಡನೇ ಅಥವಾ ಮೂರನೇ ಟೆಸ್ಟ್ ಪಂದ್ಯದ ವೇಳೆ ಜೋಫ್ರಾ ಆರ್ಚರ್ ಇಂಗ್ಲೆಂಡ್ ಟೆಸ್ಟ್ ತಂಡವನ್ನು ಕೂಡಿಕೊಳ್ಳುವ ಸಾಧ್ಯತೆಯಿದೆ.



ಒಂದು ವೇಳೆ ಎಡ್ಜ್‌ಬಾಸ್ಟನ್‌ನಲ್ಲಿ ನಡೆಯಲಿರುವ ದ್ವಿತೀಯ ಟೆಸ್ಟ್ ಪಂದ್ಯದ ವೇಳೆ ಜೋಫ್ರಾ ಆರ್ಚರ್ ಇಂಗ್ಲೆಂಡ್ ತಂಡವನ್ನು ಸೇರಿಕೊಂಡರೆ ಆಂಗ್ಲರ ಬೌಲಿಂಗ್ ಲೈನಪ್ ಮತ್ತಷ್ಟು ಬಲಿಷ್ಠವಾಗಲಿದೆ.

ಅದರಲ್ಲೂ ಮಾರಕ ಬೌನ್ಸರ್‌ಗೆ ಹೆಸರುವಾಸಿಯಾಗಿರುವ ಆರ್ಚರ್ ಎದುರಿಸುವುದು ಅಂದುಕೊಂಡಷ್ಟು ಸುಲಭವಲ್ಲ. ಹೀಗಾಗಿ ಜೋಫ್ರಾ ಎಂಟ್ರಿಗೂ ಮುನ್ನ ಟೀಮ್ ಇಂಡಿಯಾ ಬ್ಯಾಟರ್‌ಗಳು ಘಾತಕ ಎಸೆತಗಳನ್ನು ಎದುರಿಸಲು ಸಜ್ಜಾಬೇಕಿರುವುದು ಅನಿವಾರ್ಯ.

# ಕನ್ನಡಿಗನ ಹೆಸರಿಗೆ ಅತ್ಯಂತ ಕಳಪೆ ದಾಖಲೆ

ಭಾರತ ತಂಡವು ಟೆಸ್ಟ್ ಕ್ರಿಕೆಟ್ ಆಡಲು ಶುರುವಾಗಿ 93 ವರ್ಷಗಳಾಗಿವೆ. ಈ 93 ವರ್ಷಗಳಲ್ಲಿ ಟೀಮ್ ಇಂಡಿಯಾ ಬರೋಬ್ಬರಿ 589 ಟೆಸ್ಟ್ ಪಂದ್ಯಗಳನ್ನಾಡಿದೆ. ಈ ವೇಳೆ ಯಾವುದೇ ಬೌಲರ್ ಕನಿಷ್ಠ 20 ಓವರ್‌ಗಳನ್ನು ಎಸೆದು 6.28ರ ಸರಾಸರಿಯಲ್ಲಿ ರನ್ ನೀಡಿರಲಿಲ್ಲ. ಆದರೀಗ ಅಂತಹದೊಂದು ದುಬಾರಿ ಸ್ಪೆಲ್ ಎಸೆಯುವ ಮೂಲಕ ಕನ್ನಡಿಗ ಪ್ರಸಿದ್ಧ್ ಕೃಷ್ಣ ಅತ್ಯಂತ ಕಳಪೆ ದಾಖಲೆ ನಿರ್ಮಿಸಿದ್ದಾರೆ.

ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲೇ ಟೀಮ್ ಇಂಡಿಯಾ ವೇಗಿ ಪ್ರಸಿದ್ಧ್ ಕೃಷ್ಣ ಅತ್ಯಂತ ಕಳಪೆ ದಾಖಲೆ ಬರೆದಿದ್ದಾರೆ. ಅದು ಕೂಡ ಬರೋಬ್ಬರಿ 220 ರನ್‌ಗಳನ್ನು ನೀಡುವ ಮೂಲಕ. ಲೀಡ್ಸ್‌ನ ಹೆಡಿಂಗ್ಲೆ ಮೈದಾನದಲ್ಲಿ ನಡೆದ ಇಂಗ್ಲೆಂಡ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ ಕಣಕ್ಕಿಲಿದ ಪ್ರಸಿದ್ಧ್ ಅತ್ಯಂತ ದುಬಾರಿ ಓವರ್‌ಗಳನ್ನು ಎಸೆದಿದ್ದರು.

ಈ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ 20 ಓವರ್‌ಗಳನ್ನು ಎಸೆದಿದ್ದ ಪ್ರಸಿದ್ಧ್ ಕೃಷ್ಣ ನೀಡಿದ್ದು ಬರೋಬ್ಬರಿ 128 ರನ್‌ಗಳು. ಅಂದರೆ ಪ್ರತಿ ಓವರ್‌ಗೆ 6.40 ರ ಸರಾಸರಿಯಲ್ಲಿ ರನ್ ಬಿಟ್ಟು ಕೊಟ್ಟಿದ್ದರು. ಇನ್ನು ದ್ವಿತೀಯ ಇನಿಂಗ್ಸ್‌ನಲ್ಲಿ 15 ಓವರ್ ಎಸೆದಿದ್ದ ಪ್ರಸಿದ್ಧ್ 92 ರನ್‌ಗಳನನ್ನು ನೀಡಿದ್ದರು. ಅಂದರೆ 2 ಇನಿಂಗ್ಸ್‌ಗಳ ಮೂಲಕ ಟೀಮ್ ಇಂಡಿಯಾ ವೇಗಿ ನೀಡಿದ್ದು ಬರೋಬ್ಬರಿ 220 ರನ್‌ಗಳು. ಇದು ಭಾರತ ಟೆಸ್ಟ್ ತಂಡದ ಪರ ಅತ್ಯಂತ ದುಬಾರಿ ಸ್ಪೆಲ್ ಎಂಬುದು ವಿಶೇಷ.

## ವಿಶ್ವಕ್ರಿಕೆಟ್ ಟೆಸ್ಟ್‌ನಲ್ಲಿ ಅತೀ ದುಬಾರಿ ಸ್ಪೆಲ್

ಅಂದರೆ ಟೆಸ್ಟ್ ಪಂದ್ಯವೊಂದರಲ್ಲಿ ಕನಿಷ್ಠ 20 ಓವರ್‌ಗಳನ್ನು ಎಸೆದು ಅತ್ಯಧಿಕ ಎಕಾನಮಿ ರೇಟ್ ರನ್ ನೀಡಿದ ಭಾರತೀಯ ಬೌಲರ್‌ಗಳ ಪಟ್ಟಿಯಲ್ಲಿ ಪ್ರಸಿದ್ಧ್ ಕೃಷ್ಣ ಅಗ್ರಸ್ಥಾನಕ್ಕೇರಿದ್ದಾರೆ. ಅದು ಕೂಡ 35 ಓವರ್‌ಗಳಲ್ಲಿ 6.28ರ ಸರಾಸರಿಯಲ್ಲಿ ರನ್ ಚಚ್ಚಿಸಿಕೊಳ್ಳುವ ಮೂಲಕ ಎಂಬುದೇ ಅಚ್ಚರಿ. ಅಂದರೆ ಮೊದಲ ಟೆಸ್ಟ್ ಪಂದ್ಯದಲ್ಲಿ ಪ್ರಸಿದ್ಧ್ ಕೃಷ್ಣ ಪ್ರತಿ ಓವರ್‌ನಲ್ಲಿ 6.28 ಸರಾಸರಿಯಲ್ಲಿ ರನ್ ಬಿಟ್ಟು ಕೊಟ್ಟಿದ್ದಾರೆ. ಈ ಮೂಲಕ 93 ವರ್ಷಗಳ ಭಾರತದ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲಿ ಅತೀ ಹೆಚ್ಚು ಎಕಾನಮಿ ರೇಟ್‌ನಲ್ಲಿ (ಕನಿಷ್ಠ 20 ಓವರ್) ರನ್ ನೀಡಿದ ಬೌಲರ್ ಎನಿಸಿಕೊಂಡಿದ್ದಾರೆ.





# ಹಿಸ್ಟರಿನೇ ಇಲ್ಲ 2ನೇ ಪಂದ್ಯ ಗೆಲ್ಲೋದು ಡೌಟ್

ಭಾರತ ಮತ್ತು ಇಂಗ್ಲೆಂಡ್ ಎಡ್ಜ್‌ಬಾಸ್ಟನ್ ಮೈದಾನದಲ್ಲಿ ಮೊದಲ ಬಾರಿ ಮುಖಾಮುಖಿಯಾಗಿದ್ದು 1967 ರಲ್ಲಿ. ಅಲ್ಲಿಂದ ಶುರುವಾದ ಉಭಯ ತಂಡಗಳ ಪೈಪೋಟಿಯಲ್ಲಿ ಟೀಮ್ ಇಂಡಿಯಾ ಒಮ್ಮೆಯೂ ಗೆದ್ದಿಲ್ಲ ಎಂದರೆ ನಂಬಲೇಬೇಕು. ಅಂದರೆ ಬರ್ಮಿಂಗ್‌ಹ್ಯಾಮ್‌ನಲ್ಲಿ ಟೆಸ್ಟ್ ಪಂದ್ಯ ಗೆಲ್ಲೋದು ಟೀಮ್ ಇಂಡಿಯಾ ಪಾಲಿಗೆ ಕನಸಾಗಿಯೇ ಉಳಿದಿದೆ.

ಭಾರತ ಮತ್ತು ಇಂಗ್ಲೆಂಡ್ ನಡುವಣ ದ್ವಿತೀಯ ಟೆಸ್ಟ್ ಪಂದ್ಯವು ಜುಲೈ 2 ರಿಂದ ಶುರುವಾಗಲಿದೆ. ಬರ್ಮಿಂಗ್‌ಹ್ಯಾಮ್‌ನ ಎಡ್ಜ್‌ಬಾಸ್ಟನ್ ಸ್ಟೇಡಿಯಂನಲ್ಲಿ ನಡೆಯಲಿರುವ ಈ ಪಂದ್ಯದ ಮೂಲಕ ಕಂಬ್ಯಾಕ್ ಮಾಡುವ ವಿಶ್ವಾಸದಲ್ಲಿದೆ ಟೀಮ್ ಇಂಡಿಯಾ.

ಏಕೆಂದರೆ ಹೆಡಿಂಗ್ಲೆ ಮೈದಾನದಲ್ಲಿ ನಡೆದ ಮೊದಲ ಪಂದ್ಯದಲ್ಲಿ ಸೋತಿರುವ ಟೀಮ್ ಇಂಡಿಯಾ ಸರಣಿಯಲ್ಲಿ 1-0 ಅಂತರದಿಂದ ಹಿನ್ನಡೆ ಹೊಂದಿದ್ದು, ಇದೀಗ ಸರಣಿಯಲ್ಲಿ ಸಮಬಲ ಸಾಧಿಸಲು ಎಡ್ಜ್‌ಬಾಸ್ಟನ್‌ನಲ್ಲಿ ಗೆಲುವು ಅನಿವಾರ್ಯ. ಆದರೆ ಬರ್ಮಿಂಗ್‌ಹ್ಯಾಮ್‌ನಲ್ಲಿ ಭಾರತ ತಂಡಕ್ಕೆ ಗೆಲುವು ಅಂದುಕೊಂಡಷ್ಟು ಸುಲಭವಲ್ಲ. ಏಕೆಂದರೆ ಬರ್ಮಿಂಗ್‌ಹ್ಯಾಮ್‌ನ ಎಡ್ಜ್‌ಬಾಸ್ಟನ್‌ನಲ್ಲಿ ಟೀಮ್ ಇಂಡಿಯಾ ಈವರೆಗೆ ಒಂದೇ ಒಂದು ಟೆಸ್ಟ್ ಪಂದ್ಯ ಗೆದ್ದಿಲ್ಲ. ಕಳೆದ 58 ವರ್ಷಗಳಲ್ಲಿ ಈ ಮೈದಾನದಲ್ಲಿ ಟೀಮ್ ಇಂಡಿಯಾದ ಅತಿರಥ ಮಹಾರಥರು ಕಣಕ್ಕಿಳಿದರೂ ಒಂದೇ ಒಂದು ಪಂದ್ಯದಲ್ಲಿ ಗೆಲುವು ದಕ್ಕಿಸಿಕೊಳ್ಳಲು ಸಾಧ್ಯವಾಗಿಲ್ಲ. ಹೀಗಾಗಿ ಎಡ್ಜ್‌ಬಾಸ್ಟನ್ ಮೈದಾನದಲ್ಲೂ ಇಂಗ್ಲೆಂಡ್ ತಂಡ ಗೆಲ್ಲುವ ಫೇವರೇಟ್ ಆಗಿ ಗುರುತಿಸಿಕೊಂಡಿದೆ.

ಈ ಮೈದಾನದಲ್ಲಿ ಭಾರತ ಮತ್ತು ಇಂಗ್ಲೆಂಡ್ ಈವರೆಗೆ 8 ಟೆಸ್ಟ್ ಪಂದ್ಯಗಳನ್ನಾಡಿದೆ. ಈ ವೇಳೆ ಒಂದು ಡ್ರಾ ಸಾಧಿಸಿರುವುದೇ ಟೀಮ್ ಇಂಡಿಯಾದ ಶ್ರೇಷ್ಠ ಸಾಧನೆ. ಇನ್ನುಳಿದ 7 ಮ್ಯಾಚ್‌ಗಳಲ್ಲೂ ಭಾರತ ತಂಡ ಹೀನಾಯವಾಗಿ ಸೋತಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966